ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 6 ಬುಧವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 199 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*



ಮೈಸೂರು ವಿವಿ ಅಂತರ ಕಾಲೇಜುಗಳ ಅಥ್ಲೆಟಿಕ್ಸ್ ಕೂಟಕ್ಕೆ ಚಾಲನೆ



ಮೈಸೂರು ವಿವಿ ಅಂತರ ಕಾಲೇಜುಗಳ ಅಥ್ಲೆಟಿಕ್ ಕ್ರೀಡಾಕೂಟವನ್ನು ಮೈಸೂರು ವಿವಿ ಕುಲಸಚಿವೆ ಶ್ರೀಮತಿ ವಿ.ಆರ್.ಶೈಲಜಾ ಉದ್ಘಾಟಿಸಿದರು.

ಮೈಸೂರು,ನ.5–ಮೈಸೂರು ವಿಶ್ವವಿದ್ಯಾನಿಲಯದ 95ನೇ ವಾರ್ಷಿಕ ವಿಶ್ವವಿದ್ಯಾನಿಲಯದ ಅಂತರ ಕಾಲೇಜು ಅಥ್ಲೆಟಿಕ್ಸ್ (ಪುರುಷರು, ಮಹಿಳೆಯರು) ಕೂಟ ಹಾಗೂ ವಿಶ್ವವಿದ್ಯಾನಿಲಯದ ಅಥ್ಲೆಟಿಕ್ಸ್ ತಂಡಗಳ (ಪುರುಷರು, ಮಹಿಳೆಯರು) ಆಯ್ಕೆ ಸ್ಪರ್ಧೆಗಳನ್ನು ನ.5ರಿಂದ 7ರವರೆಗೆ ವಿಶ್ವವಿದ್ಯಾನಿಲಯದ ಅಥ್ಲೆಟಿಕ್ಸ್ ಮೈದಾನ (ಓವಲ್ ಮೈದಾನ)ದಲ್ಲಿ ಏರ್ಪಡಿಸಲಾಗಿದೆ. ಕೂಟದಲ್ಲಿ ವಿಶ್ವವಿದ್ಯಾನಿಲಯದ ವ್ಯಾಪ್ತಿಯ 54 ಕಾಲೇಜುಗಳಿಂದ 940 ಪುರುಷ ಮತ್ತು ಮಹಿಳಾ ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ.

ಕ್ರೀಡಾಕೂಟವನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ಶ್ರೀಮತಿ ವಿ.ಆರ್.ಶೈಲಜಾ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಪ್ರೊ.ನಾಗರಾಜ್, ಕುಲಸಚಿವ (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ ಮತ್ತು ಶ್ರೀಮತಿ ಶಿಲ್ಪ.ಜೆ, ಸಿಂಡಿಕೇಟ್ ಸದಸ್ಯರು, ಮೈಸೂರು ವಿಶ್ವವಿದ್ಯಾನಿಲಯ, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಸಿ. ವೆಂಕಟೇಶ ಮತ್ತು ಉಪನಿರ್ದೇಶಕ ಡಾ.ಕೃಷ್ಣಯ್ಯ ಇತರರು ಉಪಸ್ಥಿತರಿದ್ದರು.

ಶ್ರೀ ಶಿವರಾತ್ರಿ ರಾಜೇಂದ್ರ ಸಭಾಂಗಣದಲ್ಲಿ ವಧು–ವರರ ಸಮಾವೇಶ



ಶ್ರೀ ಶಿವರಾತ್ರಿ ರಾಜೇಂದ್ರ ಸಭಾಂಗಣದಲ್ಲಿ ವಧು–ವರರ ಸಮಾವೇಶ ನಡೆಯಿತು.

ಮೈಸೂರು,ನ.5–ಜೆಎಸ್ಎಸ್ ವಿವಾಹ ವೇದಿಕೆಯಿಂದ ಮೈಸೂರಿನ ಶ್ರೀ ಶಿವರಾತ್ರಿ ರಾಜೇಂದ್ರ ಸಭಾಂಗಣದಲ್ಲಿ ವಧು–ವರರ ಸಮಾವೇಶ ಏರ್ಪಡಿಸಲಾಗಿತ್ತು.

ವಧು–ವರರು ಹಾಗೂ ಅವರ ಪೋಷಕರು ಈ ಸಮಾವೇಶದಲ್ಲಿ ಭಾಗವಹಿಸಿ, ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಡಾ.ಎನ್.ಮಲ್ಲಿಕಾ ಮತ್ತು ಪಿ.ಆಶಾ ಭವಾನಿ ವಧುವರರನ್ನು ಆಹ್ವಾನಿಸಿದರು. ಪ್ರೊಜೆಕ್ಟರ್ ಮೂಲಕ ವಧು–ವರರ ಮಾಹಿತಿ ಮತ್ತು ಭಾವಚಿತ್ರಗಳನ್ನು ಪರಿಚಯ ಮಾಡಿಕೊಡಲಾಯಿತು. ವಧು–ವರರ ಸಮಾವೇಶದಲ್ಲಿ ವಧು–ವರರು ಹಾಗೂ ಅವರ ಪೋಷಕರು ಪಾಲ್ಗೊಂಡಿದ್ದರು.

ವಸ್ತುಪ್ರದರ್ಶನ ಸಾಂಸ್ಕೃತಿಕ ಸಮಿತಿ ಅಧ್ಯಕ್ಷರಿಗೆ ಅಭಿನಂದನೆ



ಮೈಸೂರು ದಸರಾ ವಸ್ತುಪ್ರದರ್ಶನ ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ರಘುರಾಜೇ ಅರಸ್ ಅವರನ್ನು ಕೆಎಂಪಿಕೆ ಟ್ರಸ್ಟ್ ಪದಾಧಿಕಾರಿಗಳು ಚಾಮರಾಜಪುರಂನಲ್ಲಿ ಅಭಿನಂದಿಸಿದರು. ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ನಿರೂಪಕ ಅಜಯ್ ಶಾಸ್ತ್ರಿ, ರಂಗಸ್ವಾಮಿ, ಮಂಜುನಾಥ್, ಶಫೀ, ರಾಜೇಶ್‌ನಾಯ್ಡು, ರಾಕೇಶ್, ಮಹಾನ್, ರವಿ, ಶಿವು ಇನ್ನಿತರರಿದ್ದರು.

ಪಿಯುಸಿಎಲ್ ಘಟಕದ ಪದಾಧಿಕಾರಿಗಳ ಆಯ್ಕೆ



ಮೈಸೂರು ಪಿಯುಸಿಎಲ್ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಮೈಸೂರು,ನ.5–ಮೈಸೂರು ಪಿಯುಸಿಎಲ್ ಘಟಕದ ಅಧ್ಯಕ್ಷ ಕಾಳಚನ್ನೇಗೌಡ ಅವರ ಅಧ್ಯಕ್ಷತೆಯಲ್ಲಿ ಸರ್ವ ಸದಸ್ಯರ ಸಭೆಯನ್ನು ಗೋಕುಲಂನಲ್ಲಿರುವ ಶ್ಯಾಗಲೆ ಹೌಸ್‌ನಲ್ಲಿ ನಡೆಸಲಾಯಿತು.

ಕಾರ್ಯದರ್ಶಿ ವಿ.ಪುರುಷೋತ್ತಮ್ ಕಳೆದ 2023ರ ಫೆಬ್ರವರಿಯಿಂದ 2024ರ ಅಕ್ಟೋಬರ್ ಅಂತ್ಯದವರೆಗೆ ಪಿಯುಸಿಎಲ್ ಆಯೋಜಿಸಿದ್ದ, ಭಾಗವಹಿಸಿದ್ದ ಕಾರ್ಯಕ್ರಮಗಳ ವಿವರಗಳನ್ನು ಮಂಡಿಸಿದರು. ಖಜಾಂಚಿ ಡಾ.ಇ. ರತಿರಾವ್ ಅವರು ಈ ಅವಧಿಯ ಲೆಕ್ಕಪತ್ರಗಳನ್ನು ಮಂಡಿಸಿದರು. ಹಾಲಿ ಅಧ್ಯಕ್ಷ ಕಾಳಚನ್ನೇಗೌಡ ಅಧ್ಯಕ್ಷೀಯ ಮಾತುಗಳನ್ನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ 2024ರ ಸಾಲಿನ ಸುವರ್ಣ ಕರ್ನಾಟಕ ಪ್ರಶಸ್ತಿಗೆ ಭಾಜನರಾದ ಡಾ.ಇ.ರತಿರಾವ್, ಮೈಸೂರು ಜಿಲ್ಲಾ ಸುವರ್ಣ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನವಾದ ಸಮತಾ ವೇದಿಕೆಯನ್ನೂ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ 2024–26ರ 2 ವರ್ಷದ ಅವಧಿಗೆ ಪಿಯುಸಿಎಲ್ ಮೈಸೂರು ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಕಮಲ್ ಗೋಪಿನಾಥ್, ಉಪಾಧ್ಯಕ್ಷರಾಗಿ ಪ್ರೊ. ಲತಾ ಕೆ ಬಿಡ್ಡಪ್ಪ, ಮೊಹಮ್ಮದ್ ಫಯಾಜ್ ಕಲೀಂ, ಪ್ರಧಾನ ಕಾರ್ಯದರ್ಶಿಯಾಗಿ ವಿ. ಪುರುಷೋತ್ತಮ್, ಸಹ ಕಾರ್ಯದರ್ಶಿಗಳಾಗಿ ಬೂಕನಕೆರೆ ವಿಜೇಂದ್ರ, ಕುಮಾರಸ್ವಾಮಿ ಕೂಡ್ಲಾಪುರ, ಖಜಾಂಚಿಯಾಗಿ ಡಾ.ಇ. ರತಿರಾವ್, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಮನ್ಸೂರ್ ಅಹಮದ್, ಡಾ.ವೆಂಕಟರಾಮ್, ಪುರುಷೋತ್ತಮ, ಪ್ರೊ.ಶ್ರೀದೇವಿ, ಮಹಾಲಿಂಗಪ್ಪ ಆಯ್ಕೆಯಾಗಿದ್ದಾರೆ.

ನ.24, ರಾಜ್ಯಮಟ್ಟದ ಜಾನಪದ ಕಲೋತ್ಸವ

ಮೈಸೂರು, ನ.5(ಜಿಎ)–ಶ್ರೀರಂಗಪಟ್ಟಣ ತಾಲೂಕು ಪಾಲಹಳ್ಳಿಯ ದಾರಿದೀಪ ಫೌಂಡೇಷನ್ ವತಿಯಿಂದ ನ.24 ರಂದು ಬೆಳಗ್ಗೆ 9 ಗಂಟೆಯಿಂದ ರಾತ್ರಿ 9ರವರೆಗೆ ಮೈಸೂರಿನ ಪುರಭವನದಲ್ಲಿ ಪರಂಪರೆ ಶೀರ್ಷಿಕೆ ಅಡಿಯಲ್ಲಿ ರಾಜ್ಯ ಮಟ್ಟದ ಜಾನಪದ ಕಲೋತ್ಸವ ಸ್ಪರ್ಧೆ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಸಂಸ್ಥಾಪಕ ರವಿಶಂಕರ್ ಈ ವಿಷಯ ತಿಳಿಸಿ, ಶಿವಮೊಗ್ಗ, ಧಾರವಾಡ, ಹುಬ್ಬಳ್ಳಿ ಮೊದಲಾದ ಕಡೆಗಳಿಂದ ಸುಮಾರು 20 ತಂಡಗಳು ಈಗಾಗಲೇ ನೋಂದಣಿ ಮಾಡಿಕೊಂಡಿವೆ. ಪ್ರಥಮ ಬಹುಮಾನ 20 ಸಾವಿರ, ದ್ವಿತೀಯ 15 ಹಾಗೂ ತೃತೀಯ ಬಹುಮಾನವಾಗಿ 10 ಸಾವಿರ ನೀಡಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ದೇವಾನಂದ ವರಪ್ರಸಾದ್, ಡಾ.ಮಹದೇವಮೂರ್ತಿ, ನಳಿನಿ, ಎಂ.ರವಿ ಇದ್ದರು.

ನ.10, ಮೈಸೂರು ಕಿಡ್ಡಥಾನ್

ಮೈಸೂರು, ನ.5(ಜಿಎ)–ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಮೈಸೂರು ಎಲೈಟ್ಸ್ ಲೇಡೀಸ್ ಸರ್ಕಲ್ ವತಿಯಿಂದ ನ.10ರಂದು ಬೆಳಗ್ಗೆ 5.30ಕ್ಕೆ ಮೈಸೂರು ವಿವಿ ಓವಲ್ ಮೈದಾನದಲ್ಲಿ ಮಕ್ಕಳಿಗಾಗಿ 'ಮೈಸೂರು ಕಿಡ್ಡಥಾನ್' ಎಂಬ ಓಟದ ಸ್ಪರ್ಧೆ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಘಟಕದ ಅಧ್ಯಕ್ಷೆ ಕೆ.ಆರ್.ಶ್ರೀದೇವಿ ಈ ವಿಷಯ ತಿಳಿಸಿ, ಸ್ಪರ್ಧೆಯಲ್ಲಿ 2ರಿಂದ 16 ವರ್ಷದೊಳಗಿನ ಮಕ್ಕಳು ಪಾಲ್ಗೊಳ್ಳಬಹುದಾಗಿದ್ದು, ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗೆ ದೂ. 96116 83119 ಅನ್ನು ಸಂಪರ್ಕಿಸಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಪ್ರಿಯಾಂಕ ರವಿಕುಮಾರ್, ಸುನೀಲ್‌ಕುಮಾರ್, ಶಿವ ಸ್ವರೂಪ್ ಉಪಸ್ಥಿತರಿದ್ದರು.

ಮೈಸೂರಲ್ಲಿ ಶೀಘ್ರವೇ ಟ್ರೈನ್ ಕಾಫಿ ಕೆಫೆ

ಬೋಗಿಯಲ್ಲಿ ಹೋಟೆಲ್ ಮಾದರಿ ಕಾಫಿ, ತಿಂಡಿ–ತಿನಿಸುಗಳ ಸವಿಯಲು ಅವಕಾಶ



ಮೈಸೂರಿನ ಒಂಟಿಕೊಪ್ಪಲ್ ಜಂಕ್ಷನ್ ಬಳಿಯಿರುವ ವಿವೇಕಾನಂದ ರೈಲ್ವೇ ಉದ್ಯಾನವನದ ಆವರಣದಲ್ಲಿ ರೈಲ್ವೇ ಇಲಾಖೆಯಿಂದ ರೈಲು ಹಳಿ ಅಳವಡಿಸಿರುವುದನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ನ.5(ಜಿಎ)–ಮೈಸೂರಿನಲ್ಲಿ ಟ್ರೈನ್ ಕಾಫಿ ಕೆಫೆ(ಬೋಗಿ ಕೆಫೆ) ಕೆಲವೇ ದಿನಗಳಲ್ಲಿ ಆರಂಭವಾಗಲಿದ್ದು, ರೈಲ್ವೇ ಇಲಾಖೆ ಈಗಾಗಲೇ ಸ್ಥಳ ನಿಗದಿಪಡಿಸಿ, ಟೆಂಡರ್ ಪ್ರಕ್ರಿಯೆ ಆರಂಭಿಸಲು ಸಿದ್ಧತೆ ಮಾಡಿಕೊಂಡಿದೆ.

ನಗರದ ಒಂಟಿಕೊಪ್ಪಲ್ ಜಂಕ್ಷನ್ (ಬಿ.ಎಸ್.ಚಿಕ್ಕಣ್ಣ ದಾಸ, ಬಿ.ಸಿ.ಲಿಂಗಯ್ಯ ವೃತ್ತ)ನ ಬಳಿಯಿರುವ ವಿವೇಕಾನಂದ ರೈಲ್ವೇ ಉದ್ಯಾನವನದ ಆವರಣದಲ್ಲಿ ಟ್ರೈನ್ ಕಾಫಿ ಕೆಫೆ ಆರಂಭಿಸಲು ರೈಲ್ವೇ ಇಲಾಖೆ ನಿರ್ಧರಿಸಿದ್ದು, ನ.13ರಿಂದ ಟೆಂಡರ್ ಪ್ರಕ್ರಿಯೆ ಆರಂಭಿಸಲಿದೆ.

ಮೈಸೂರಿನ ರೈಲ್ವೇ ಸಂಗ್ರಹಾಲಯದ ಆವರಣದಲ್ಲಿ ಈಗಾಗಲೇ ಪ್ರವಾಸಿಗರ ಗಮನಸೆಳೆಯಲು ಬೋಗಿಯಲ್ಲಿ ಕುಳಿತು ಚಹಾ, ಕಾಫಿ, ತಿಂಡಿ–ತಿನಿಸು ಸೇವಿಸಲು ಒಂದು ಬೋಗಿಯಲ್ಲಿ ಹೋಟೆಲ್ ವಿನ್ಯಾಸ ಮಾಡಿದ್ದು, ರೈಲ್ವೇ ಸಂಗ್ರಹಾಲಯಕ್ಕೆ ಭೇಟಿ ನೀಡುವ ಪ್ರತಿಯೊಬ್ಬ ಈ ಅನುಭವ ಪಡೆದುಕೊಳ್ಳುತ್ತಿದ್ದಾರೆ. ಈ ಬೋಗಿಯನ್ನು ನೋಡಲು ಕುಳಿತುಕೊಂಡು ಕಾಫಿ ಸವಿಯಲು ಬೆಳಗ್ಗೆ 10 ಗಂಟೆಯಿಂದ 5ರವರೆಗೆ ಅವಕಾಶವಿದೆ.

ಈಗ ವಿವೇಕಾನಂದ ರೈಲ್ವೇ ಉದ್ಯಾನವನದ ಆವರಣದಲ್ಲಿ ಟ್ರೈನ್ ಕಾಫಿ ಕೆಫೆಯನ್ನು ನಿರ್ಮಿಸಿ, ಮೈಸೂರಿನ ಎಲ್ಲಾ ಹೋಟೆಲ್‌ಗಳು ವಹಿವಾಟು ನಡೆಸುವಂತೆ ಈ ಕೆಫೆ ನಿರ್ವಹಿಸಲಿದೆ. ಇದಕ್ಕಾಗಿ ಈಗಾಗಲೇ ಉದ್ಯಾನವನದ ಆವರಣದಲ್ಲಿ ರೈಲು ಹಳಿಗಳನ್ನು ಅವಳಡಿಸಲಾಗಿದೆ. ಕೆಫೆಗೆ ಸಂಚಾರಕ್ಕೆ ಯೋಗ್ಯವಿಲ್ಲದ ಹಳೆಯ ಒಂದು ದೊಡ್ಡ ಬೋಗಿಯನ್ನು ಈ ಸ್ಥಳದಲ್ಲಿ ಇರಿಸಲಿದ್ದಾರೆ.

ನ.13ರಿಂದ ಆನ್‌ಲೈನ್‌ನಲ್ಲಿ ಟೆಂಡರ್ ಪ್ರಕ್ರಿಯೆ ಆರಂಭವಾಗಲಿದ್ದು, ಅತೀ ಹೆಚ್ಚು ಬಿಡ್ ಮಾಡಿದವರಿಗೆ ಕೆಫೆ ನಿರ್ವಹಿಸಲು ಅವಕಾಶ ದೊರೆಯಲಿದೆ ಎಂದು ಮೈಸೂರು ನೈರುತ್ಯ ರೈಲ್ವೆ ವಿಭಾಗೀಯ ವಾಣಿಜ್ಯ ಪ್ರಬಂಧಕ ಗಿರೀಶ್ ಧರ್ಮರಾಜ ಕಲಗೊಂಡ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಟೆಂಡರ್ ಪಡೆದುಕೊಂಡವರಿಗೆ ರೈಲ್ವೇ ಇಲಾಖೆಯಿಂದ ಸ್ಥಳ ಮತ್ತು ಒಂದು ಹಳೆಯ ದೊಡ್ಡ ಬೋಗಿ ನೀಡಲಾಗುತ್ತದೆ. ಮುಂದೆ ಅವರು ಬೋಗಿಯನ್ನು ನವೀಕರಿಸಿ, ಹೋಟೆಲ್ ಮಾದರಿ ವಿನ್ಯಾಸ ಮಾಡಿಕೊಳ್ಳಬೇಕು. ಇದು ಮೈಸೂರಿಗೆ ಮತ್ತೊಂದು ಆಕರ್ಷಣೆಯಾಗಲಿದ್ದು, ಇಲ್ಲಿ ಕೆಫೆ ನಿರ್ಮಾಣ ಮಾಡುವುದರಿಂದ ಯಾವುದೇ ಟ್ರಾಫಿಕ್ ಜಾಮ್ ಆಗುವುದಿಲ್ಲ. ಈ ಎಲ್ಲವನ್ನು ಸೂಕ್ಷ್ಮವಾಗಿ ಆಲೋಚಿಸಲಾಗಿದೆ. ಕೆಫೆಗೆ ಉತ್ತಮ ಸ್ಪಂದನೆ ದೊರೆತರೆ, ಮುಂದಿನ ದಿನಗಳಲ್ಲಿ ಮತ್ತಷ್ಟು ಕೆಫೆಗಳನ್ನು ಮಾಡಲು ಚಿಂತಿಸಲಾಗುತ್ತದೆ ಎಂದರು.

ನ.25ರಿಂದ ಉಚಿತ ಸಲಹೆ, ಚಿಕಿತ್ಸಾ ಶಿಬಿರ

ಮೈಸೂರು: ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವತಿಯಿಂದ 9ನೇ ಆಯುರ್ವೇದ ದಿನದ ಪ್ರಯುಕ್ತ ಹೊರರೋಗಿ ವಿಭಾಗದ ಸಂಖ್ಯೆ 11ರಲ್ಲಿ ನವೆಂಬರ್ 25ರಿಂದ ಡಿಸೆಂಬರ್ 25ರವರೆಗೆ ಮುಟ್ಟಿನ ತೊಂದರೆಗಳ ಕುರಿತು ಉಚಿತ ಸಲಹೆ ಮತ್ತು ಚಿಕಿತ್ಸೆ ಶಿಬಿರವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸಹ ಪ್ರಾಧ್ಯಾಪಕಿ, ಪ್ರಸೂತಿ ತಂತ್ರ ಮತ್ತು ಸ್ತ್ರೀ ರೋಗ ವಿಭಾಗದ ಮುಖ್ಯಸ್ಥೆ ಡಾ.ಸುನಿತಾ ಸಿದ್ದೇಶ್, ವೈದ್ಯಾಧಿಕಾರಿ ಡಾ.ಶೈಲಜಾ, ಕನ್ಸಲ್ಟೆಂಟ್ ಸಹಾಯಕ ಪ್ರಾಧ್ಯಾಪಕಿ ಡಾ.ನೂರ್ ಫಾತಿಮಾ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ

ಮೈಸೂರು, ನ. 5– ಮಕ್ಕಳ ದಿನಾಚರಣೆ ಅಂಗವಾಗಿ ನ.10ರಂದು ಬೆಳಗ್ಗೆ 9.30 ಗಂಟೆಗೆ ಕಾಮಾಕ್ಷಿ ಆಸ್ಪತ್ರೆ ಎದುರಿನಲ್ಲಿರುವ ವಿಜಯ ವಿಠಲ ವಿದ್ಯಾ ಸಂಸ್ಥೆಯಲ್ಲಿ ಮಕ್ಕಳಿಗೆ ಚಿತ್ರಕಲೆ, ಅಂದದ ಬರವಣಿಗೆ ಹಾಗೂ ಕನ್ನಡದಲ್ಲಿ ಒಂದು ನಿಮಿಷ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಎಲ್‌ಕೆಜಿಯಿಂದ 10ನೇ ತರಗತಿ ವರೆಗಿನ ಮಕ್ಕಳಿಗೆ ನಾಲ್ಕು ವಿಭಾಗಗಳಲ್ಲಿ ಸ್ಪರ್ಧೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 94818 31434 ಸಂಪರ್ಕಿಸಲು ಕೋರಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ನ.8, 9ರಂದು ಬಿ.ಎಸ್.ಪಂಡಿತ್ ಸ್ಮರಣಾರ್ಥ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ 'ಸರಸ್ವತಿ'



ಪ್ರೊ.ಬಿ.ಎಸ್.ಪಂಡಿತ್



ಸುಜಾತ | ರಾಜೇಶ್ ಲೆಂಕಾ | ಸೌಮ್ಯರಂಜನ್ | ಜ್ಯೋತಿ ಪ್ರಕಾಶ್ | ಏಕಲವ್ಯ



ಗಂಗಾ ಶಶಿಧರನ್ | ಅನುರೂಪ್ | ಜಯಕೃಷ್ಣನ್ | ಶ್ರೀಕುಮಾರ್ | ಶ್ರೀಜಿತ್

ಮೈಸೂರು,ನ.5–ಮೈಸೂರಿನ ಪ್ರಮುಖ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಗೀತಾ ಶಿಶು ಶಿಕ್ಷಣ ಸಂಘದ (ಜಿಎಸ್ಎಸ್ಎಸ್) ಸಂಸ್ಥಾಪಕರು, ಮಹಾನ್ ಶಿಕ್ಷಣ ತಜ್ಞರು, ದಾರ್ಶನಿಕರು, ಸಂಘದ ಸಂಸ್ಥಾಪಕ ಕಾರ್ಯದರ್ಶಿಗಳಾದ ದಿವಂಗತ ಪ್ರೊ. ಬಿ.ಎಸ್. ಪಂಡಿತ್ ಅವರ ಸ್ಮರಣಾರ್ಥ ಮೈಸೂರಿನ ಕೆ.ಆರ್.ಎಸ್. ರಸ್ತೆಯಲ್ಲಿರುವ ಜಿಎಸ್ಎಸ್ಎಸ್ ಮಹಿಳಾ ತಾಂತ್ರಿಕ ಮಹಾವಿದ್ಯಾಲಯದ ಎಂ.ಗೋವಿಂದರಾವ್ ಸ್ಮಾರಕ ಸಭಾಂಗಣದಲ್ಲಿ ನ.8 ಮತ್ತು 9ರಂದು ಶಾಸ್ತ್ರೀಯ ಸಂಗೀತ ಕಾರ್ಯಕ್ರಮ 'ಸರಸ್ವತಿ' ಯನ್ನು ಆಯೋಜಿಸಲಾಗಿದೆ.

ನ.8ರಂದು ಸಂಜೆ 6.30ಕ್ಕೆ ಪ್ರಖ್ಯಾತ ಒಡಿಸ್ಸಿ ನೃತ್ಯ ಕಲಾವಿದೆ ವಿದುಷಿ ಸುಜಾತಾ ಮೊಹಾಪಾತ್ರ ಅವರಿಂದ ಒಡಿಸ್ಸಿ ನೃತ್ಯ ಪ್ರದರ್ಶನವಿದೆ. ಶ್ರೀಯುತರು ಒಡಿಶಾ ರಾಜ್ಯದ ಭುವನೇಶ್ವರದಲ್ಲಿ ಸ್ಥಾಪಿತವಾಗಿರುವ ಒಡಿಸ್ಸಿ ನೃತ್ಯಕ್ಕೆ ಹೆಸರುವಾಸಿಯಾದ ಸೃಜನ ಸಂಸ್ಥೆಯ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ವಿದುಷಿ ಸುಜಾತಾ ಮೊಹಾಪಾತ್ರ ಅವರ ನೃತ್ಯಕ್ಕೆ ಗಾಯಕರಾಗಿ ರಾಜೇಶ್ ಕುಮಾರ್ ಲೆಂಕಾ, ಕೊಳಲು ವಾದಕರಾಗಿ ಸೌಮ್ಯ ರಂಜನ್ ಜೋಶಿ ಮತ್ತು ಒಡಿಸ್ಸಿ ಮರ್ದಾಳ ವಾದಕರಾಗಿ ಏಕಲವ್ಯ ಮುದಳಿ ಸಹಕಾರ ನೀಡಲಿದ್ದಾರೆ. ನ.9ರಂದು ಬೆಳಗ್ಗೆ 10.30ರಿಂದ ಮಧ್ಯಾಹ್ನ 12.30ರವರೆಗೆ ಕು. ಗಂಗಾ ಶಶಿಧರನ್ ಅವರು ತಮ್ಮ ಗುರು ಸಿ.ಎಸ್.ಅನುರೂಪ್ ಅವರೊಂದಿಗೆ ವೀಣಾ ಜುಗಲ್‌ಬಂದಿ ನಡೆಸಿಕೊಡಲಿದ್ದಾರೆ.

ಪಕ್ಕವಾದ್ಯದಲ್ಲಿ ಡಾ.ಕೆ. ಜಯಕೃಷ್ಣನ್–ಮೃದಂಗವಾದನ, ಶ್ರೀಕುಮಾರ್–ಥಾವಿಲ್ ವಾದನ ಮತ್ತು ಶ್ರೀಜಿತ್–ಘಟಂ ವಾದನದಲ್ಲಿ ಸಹಕಾರ ನೀಡಲಿದ್ದಾರೆ.

ಮೈಸೂರಿನ ವಿವಿಧ ಭಾಗಗಳಿಂದ ಬಸ್ ಸೌಲಭ್ಯ: ಬಸ್ ಮಾರ್ಗಗಳು: ಕೃಷ್ಣಧಾಮ, ಟಿ.ಕೆ. ಲೇಔಟ್, ಗಾನಭಾರತಿ, ಕುವೆಂಪುನಗರ, ಶ್ರೀನಾದಬ್ರಹ್ಮ ಸಂಗೀತ ಸಭಾ, ಲಕ್ಷ್ಮೀಪುರಂ, ಜವರೇಗೌಡ ಪಾರ್ಕ್, ಸರಸ್ವತಿಪುರಂ, ಆಟೋ ಸ್ಟ್ಯಾಂಡ್, ರಾಮಸ್ವಾಮಿ ಸರ್ಕಲ್, ಒಂಟಿ ಕೊಪ್ಪಲ್, ವೆಂಕಟೇಶ್ವರ ದೇವಸ್ಥಾನದ ಹತ್ತಿರ, ಜಿಎಸ್ಎಸ್ಎಸ್ ಶಾಲೆ, ಸಿದ್ಧಾರ್ಥ ನಗರ ಮತ್ತು 8ನೇ ಕ್ರಾಸ್ ವಿ.ವಿ. ಮೊಹಲ್ಲಾ.

ನ.8ರಂದು ಸಂಜೆ 4.30ಕ್ಕೆ ಮತ್ತು ಕಾರ್ಯಕ್ರಮ ಮುಗಿದ ನಂತರ ಬಸ್‌ಗಳು ಸುಮಾರು ರಾತ್ರಿ 9 ಗಂಟೆಗೆ ಹೊರಡಲಿದೆ. ನ.9ರಂದು ಬೆಳಗ್ಗೆ 9 ಗಂಟೆಗೆ ಮತ್ತು ಕಾರ್ಯಕ್ರಮ ಮುಗಿದ ನಂತರ ಬಸ್‌ಗಳು ಮಧ್ಯಾಹ್ನ 1 ಗಂಟೆಗೆ ಹೊರಡಲಿದೆ. ಆಸಕ್ತರು ಹೆಚ್ಚಿನ ವಿವರಗಳಿಗೆ ಎಸ್.ನವೀನ್‌ಕುಮಾರ್, ಮೊ. 96119 59996 ಸಂಪರ್ಕಿಸಬಹುದು.

ನ.9ರಂದು ರಾಜ್ಯ ಮಟ್ಟದ ಹ್ಯಾಕಥಾನ್

ಮೈಸೂರು, ನ.5–ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು ವಿದ್ಯುತ್ ಮತ್ತು ವಿದ್ಯುನ್ಮಾನ ವಿಭಾಗದಿಂದ ಕಾಲೇಜಿನ ಎಚ್.ಕೆಂಪೇಗೌಡ ಒಳ ಕ್ರೀಡಾಂಗಣ ಸಂಕೀರ್ಣದಲ್ಲಿ ರಾಜ್ಯ ಮಟ್ಟದ ಹ್ಯಾಕಥಾನ್ ಆಯೋಜಿಸಲಾಗಿದೆ.

ರಾಜ್ಯದ ವಿವಿಧ ಇಂಜಿನಿಯರಿಂಗ್ ಕಾಲೇಜುಗಳಿಂದ ಒಟ್ಟು 50 ತಂಡಗಳು ಭಾಗವಹಿಸಲಿವೆ. ನ.9ರಂದು ಬೆಳಗ್ಗೆ 9.30 ಗಂಟೆಗೆ ಹ್ಯಾಕಥಾನ್ ಆರಂಭವಾಗಲಿದ್ದು, ಸುಸ್ಥಿರ ಅಭಿವೃದ್ಧಿ ಕುರಿತು ನವೀನ ಪರಿಹಾರಗಳನ್ನು ನೀಡುವಲ್ಲಿ ಕಾರ್ಯನಿರ್ವಹಿಸಲಿವೆ. ವಿಜೇತ ತಂಡಗಳಿಗೆ ನಗದು ಬಹುಮಾನಗಳನ್ನು ನೀಡಲಾಗುವುದು. ನಗರಪಾಲಿಕೆ ಹಿರಿಯ ಅಭಿಯಂತರ ಎ.ಇ.ದೀಪಕ್ ಕಾರ್ಯಕ್ರಮ ಉದ್ಘಾಟಿಸುವರು. ಸಂಸ್ಥೆಯ ಗೌರವಾಧ್ಯಕ್ಷ ಗುಂಡಪ್ಪಗೌಡ ಅಧ್ಯಕ್ಷತೆ ವಹಿಸುವರು. ಗೌರವ ಕಾರ್ಯದರ್ಶಿ ಪಿ.ವಿಶ್ವನಾಥ್, ಕೋಶಾಧ್ಯಕ್ಷ ಶ್ರೀಶೈಲ ರಾಮಣ್ಣ, ಪ್ರಾಂಶುಪಾಲ ಡಾ. ಬಿ.ಸದಾಶಿವಗೌಡ ಹಾಗೂ ವಿದ್ಯುತ್ ವಿಭಾಗದ ಮುಖ್ಯಸ್ಥ ಡಾ.ಗೋಪಾಲರೆಡ್ಡಿ, ವಿದ್ಯುತ್ ವಿಭಾಗದ ಸಂಯೋಜಕ ಪ್ರೊ.ಸವ್ಯಸಾಚಿ, ಪ್ರೊ.ಅವಿನಾಶ್, ಪ್ರೊ.ಕಾರ್ತಿಕ್ ಹಾಗೂ ಬೂಷಿತ್ ಭಾಗವಹಿಸಲಿದ್ದಾರೆ.


ನ.10, ಮೈಸೂರಲ್ಲಿ ನಾಟ್ಯ ನೈವೇದ್ಯ

ಮೈಸೂರು, ನ.5(ಜಿಎ)–ನಾಟ್ಯ ಪ್ರದರ್ಶಕ ಕಲೆಗಳ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದ 3ನೇ ವಾರ್ಷಿಕೋತ್ಸವದ ಅಂಗವಾಗಿ ನ.10ರಂದು ಸಂಜೆ 6 ಗಂಟೆಗೆ ಪುರಭವನದಲ್ಲಿ ನಾಟ್ಯ ನೈವೇದ್ಯ ಶೀರ್ಷಿಕೆಯ ನೃತ್ಯ, ಸಂಗೀತ, ಅಭಿನಯಗಳ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಮುಖ್ಯಸ್ಥ ಸಂತೋಷ್ ಕಲಾವಿದ ಈ ವಿಷಯ ತಿಳಿಸಿ, ಕಾರ್ಯಕ್ರಮಕ್ಕೆ ರಾಜ್ಯ ಪ್ರಶಸ್ತಿ ಪುರಸ್ಕೃತ ಚಲನಚಿತ್ರ ಕಲಾವಿದ ಪ್ರವೀಣ್ ಕೃಪಾಕರ್, ಶಿಶಿರಂಜನ್, ಪಂಕಜ ರಾಮಕೃಷ್ಣ, ದ್ವಾರಕಾನಾಥ್, ಎಂ.ದಿನೇಶ್, ಬಿ.ಆನಂದ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಎನ್.ಪವಿತ್ರ ಅಧ್ಯಕ್ಷತೆ ವಹಿಸುವರು, ಕಾರ್ಯಕ್ರಮದಲ್ಲಿ ಭರತನಾಟ್ಯ ಪ್ರದರ್ಶನವಿದೆ. ಅಮ್ಮ ರಾಮಚಂದ್ರ ಗೀತ ಗಾಯನ ನಡೆಸಿ ಕೊಡುವರು, ಹಿರಿಯ ರಂಗ ಕಲಾವಿದರಾದ ರಂಗಸ್ವಾಮಿ ಪ್ರಸಂಗ ಅಭಿನಯ ಪ್ರಸ್ತುತಪಡಿಸುವರು ಎಂದರು. ಗೋಷ್ಠಿಯಲ್ಲಿ ಕೀರ್ತಿ, ಉಷಾರಾಣಿ ಇದ್ದರು.

ನ.9ರಂದು ಎರಡು ನಕ್ಷತ್ರ ರಸಸಂಜೆ

ಮೈಸೂರು, ನ.5–ಕನ್ನಡ ರಾಜ್ಯೋತ್ಸವದ ಅಂಗವಾಗಿ ಮಧುರಗಾನ ಕಲಾವೃಂದ ವತಿಯಿಂದ ನ.9ರಂದು ಸಂಜೆ 5.30ಕ್ಕೆ ನಾದಬ್ರಹ್ಮ ಸಂಗೀತ ಸಭಾದಲ್ಲಿ ಕನ್ನಡ ಚಿತ್ರರಂಗದ ಎರಡು ನಕ್ಷತ್ರಗಳಾದ ಡಾ.ರಾಜ್‌ಕುಮಾರ್, ಸಂಗೀತ ನಿರ್ದೇಶಕ ಉಪೇಂದ್ರ ಕುಮಾರ್ ಅವರ ನೆನಪಿನಾರ್ಥ ಎರಡು ನಕ್ಷತ್ರ ರಸಸಂಜೆ ಆಯೋಜಿಸಲಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

6.11.2024 ಬುಧವಾರ, ಮಳೆ ನಕ್ಷತ್ರ: ವಿಶಾಖ, 06.11.2024 ರಿಂದ 18.11.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಮೂಲ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ವಾದ್ಯ ವೈಭವ–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್., 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ನಿತಿನ್ ರಾಜಾರಾಂಶಾಸ್ತ್ರಿ, ಶಾಂತಲಾ ವಟ್ಟಂ, ವ್ಯಾಖ್ಯಾನ –ಡಾ.ಜಿ.ಆರ್.ತಿಪ್ಪೇಸ್ವಾಮಿ, 6.50 ರೈತರಿಗೆ ಸಲಹೆ, 7.15 ವಾತ್ಸಲ್ಯ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, 8.30 ಚಿತ್ರಗೀತೆಗಳು, 9.00 ನಂದನ–ಮನೋನಂದನ, ಪ್ರಾಯೋಜಿತ ಆರೋಗ್ಯ ಕಾರ್ಯಕ್ರಮ, ಪ್ರಾಯೋಜಕರು : ಪ್ರೇರಣಾ ಆಸ್ಪತ್ರೆ ಮತ್ತು ಪ್ರೇರಣಾ ಫರ್ಟಿಲಿಟಿ, ಮೈಸೂರು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಅರವಿಂದ್ ಪರಿಖ್–ಸಿತಾರ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ.ಎಸ್. ಬೈಂದೂರು, ಪರಿಕಲ್ಪನೆ: ಅಬ್ದುಲ್ ರಶೀದ್, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಪಿ. ಸುಬ್ರಹ್ಮಣ್ಯಂ–ಕ್ಲಾರಿಯೋನೆಟ್ ವಾದನ, 4.00 ಮಹಿಳಾರಂಗ–ರಾಜ್ಯೋತ್ಸವ ತಿಂಗಳ ವಿಶೇಷ–ಸಾಧಕರೊಂದಿಗೆ ಸಂವಾದ, 4.45 ಹಿಂದಿ ಪಾಠ–ಡಾ. ಸ್ಮಿತಾ ಚಿಪ್ಳೂಣ್‌ಕರ್, 6.50 ಕೃಷಿರಂಗ –ಕೃಷಿ ದೀವಿಗೆ 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ಮೌಲ್ಯವರ್ಧನೆ ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಸಹಪ್ರಾಧ್ಯಾಪಕರಾದ ಡಾ. ಚಂದ್ರಕಲಾ ಹಣಗಿ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

■ **ಜ್ಞಾನೋದಯ ಪದವಿಪೂರ್ವ ಕಾಲೇಜು :** ಬೆಳಗ್ಗೆ 9ಕ್ಕೆ ವಿಜ್ಞಾನ, ಕಲಾ, ಕ್ರೀಡಾ ಉತ್ಸವ; ಮಧ್ಯಾಹ್ನ 2ಕ್ಕೆ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ಡಾ. ಉಮಾ ಉಲ್ಲಾಸ್ ಪ್ರಧಾನ್, ಹಿರಿಯ ಪತ್ರಕರ್ತ ರವೀಂದ್ರ ಜೋಷಿ, ಧರ್ಮೇಶ್ ಗೌಡ ವಿ., ಸ್ಥಳ: ಶ್ರೀ ವಿದ್ಯಾತೀರ್ಥ ಸಭಾಂಗಣ, ಜ್ಞಾನೋದಯ ಪದವಿಪೂರ್ವ ಕಾಲೇಜು.

■ **ಜೆಎಸ್ಎಸ್ ಆಯುರ್ವೇದ ಆಸ್ಪತ್ರೆ :** ಪ್ಯಾರಾಲಿಸಿಸ್ ಮತ್ತು ಮಧುಮೇಹದ ಗಾಯಗಳ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ನವಕರ್ನಾಟಕ ಪಬ್ಲಿಕೇಷನ್ಸ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಮಾರಾಟ, ಸ್ಥಳ: ನವಕರ್ನಾಟಕ ಪಬ್ಲಿಕೇಷನ್ಸ್ ಪ್ರೈವೇಟ್ ಲಿಮಿಟೆಡ್, ರಾಮಸ್ವಾಮಿ ವೃತ್ತ, ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.

■ **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ)** : ಆಗಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮಗಳು, ಸ್ಥಳ: ಶ್ರೀ ಸುತ್ತೂರು ಶ್ರೀ ಕ್ಷೇತ್ರ, ಮೈಸೂರು ಜಿಲ್ಲೆ, ಬೆಳಗ್ಗೆಯಿಂದ.

■ **ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** 47ನೇ ವರ್ಷದ ಕಾರ್ತಿಕ ಮಾಸದ ಶ್ರೀ ಮಲೆ ಮಹದೇಶ್ವರಸ್ವಾಮಿ ಪೂಜಾ ಮಹೋತ್ಸವ, 26ನೇ ವರ್ಷದ ಮಹಾಕುಂಭಾಭಿಷೇಕ, 10ನೇ ವರ್ಷದ ಹಾಲರವಿ ಸೇವೆ, ಶಿವರಾಂಪೇಟೆ ಶ್ರೀ ಹರಿವಾಯು ಭಜನಾ ಮಂಡಳಿಯಿಂದ ಭಜನೆ, ಸ್ಥಳ: ದೇವಸ್ಥಾನದ ಪ್ರಾಂಗಣ, ಗರಡಿಕೇರಿ, ಲಷ್ಕರ್ ಮೊಹಲ್ಲಾ.

■ **ಜೆಎಸ್ಎಸ್ ಪಬ್ಲಿಕ್ ಶಾಲೆ :** ಕನ್ನಡ ನುಡಿ ಹಬ್ಬ–69, ಅಧ್ಯಕ್ಷತೆ : ಜೆಎಸ್ಎಸ್ ಮಹಾವಿದ್ಯಾಪೀಠ ಕಾರ್ಯದರ್ಶಿ ಎಸ್.ಪಿ. ಮಂಜುನಾಥ್, ಮುಖ್ಯ ಅತಿಥಿಗಳು : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ಶಾಲಾ ಆವರಣ, ಬೆಳಗ್ಗೆ 10ಕ್ಕೆ.

■ **ಶ್ರೀ ನಟರಾಜ ವಸತಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಶ್ರೀ ನಟರಾಜ ಸ್ನಾತಕೋತ್ತರ ಕೇಂದ್ರ :** ಫ್ರೆಶರ್ಸ್ ಡೇ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು : ಮೈಸೂರು ವಿವಿ ಕುಲಸಚಿವ ಪ್ರೊ. ಎನ್. ನಾಗರಾಜ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷ ಅಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಎಂ. ಶಾರದಾ, ಸ್ಥಳ: ಶ್ರೀ ನಟರಾಜ ಸೆಮಿನಾರ್ ಹಾಲ್, ಬೆಳಗ್ಗೆ 10.45ಕ್ಕೆ.

■ **ಸಮದೃಷ್ಟಿ, ಕ್ಷಮತಾವಿಕಾಸ ಮತ್ತು ಅನುಸಂಧಾನ ಮಂಡಲ, ಸಕ್ಷಮ, ವಿಶೇಷಚೇತನರ ಸಬಲೀಕರಣಕ್ಕಾಗಿ ಸಮರ್ಪಿತ ರಾಷ್ಟ್ರೀಯ ಸಂಘಟನೆ, ದಿವ್ಯಾಂಗ ಸೇವಾ ಕೇಂದ್ರ :** ಉದ್ಘಾಟನಾ ಸಮಾರಂಭ, ಉದ್ಘಾಟನೆ: ಶ್ರೀಮತಿ ಸೋಫಿಯಾ ಮತ್ತು ಸಿದ್ ಮುಖರ್ಜಿ ಫೌಂಡೇಷನ್, ಮುಖ್ಯ ಅತಿಥಿಗಳು : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್. ಶ್ರೀವತ್ಸ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶಂಕರ್‌ಗೌಡ ಪಾಟೀಲ್, ವಿಶೇಷಚೇತನರ ಸಬಲೀಕರಣ ಇಲಾಖೆ ಮಾಜಿ ಆಯುಕ್ತ ಕೆ.ವಿ. ರಾಜಣ್ಣ, ವಿಶೇಷ ಅತಿಥಿಗಳು : ಎಬಿವಿಪಿ ನಗರ ಸಮಿತಿ ಅಧ್ಯಕ್ಷ ಅಮೃತರಾವ್, ಸಕ್ಷಮ ಅಧ್ಯಕ್ಷ ಕೇಶವಕುಮಾರ, ಅಧ್ಯಕ್ಷತೆ : ಸಕ್ಷಮ ಮೈಸೂರು ಜಿಲ್ಲಾ ಘಟಕ ಅಧ್ಯಕ್ಷ ಬಿ.ಎನ್. ಜಯರಾಮ, ಸ್ಥಳ:ಸಂಸ್ಕೃತಿ, ನಂ. 909, ಸುಣ್ಣದಕೇರಿ, ನಾರಾಯಣಶಾಸ್ತ್ರ ರಸ್ತೆ, ಬೆಳಗ್ಗೆ 11ಕ್ಕೆ.

■ **ಮೈಸೂರು ಲೇಡೀಸ್ ಅಸೋಸಿಯೇಷನ್ :** ಕನ್ನಡ ರಾಜ್ಯೋತ್ಸವ ಆಚರಣೆ, ಮುಖ್ಯ ಅತಿಥಿಗಳು: ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯುಕ್ತರಾದ ಶ್ರೀಮತಿ ತೇಜಸ್ವಿನಿ ರಾಜೇಶ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ಹೋಟೆಲ್ ದಾಸಪ್ರಕಾಶ್ ಪ್ಯಾರಡೈಸ್, ಮಧ್ಯಾಹ್ನ 1ಕ್ಕೆ.

■ **ಶರಣು ವಿಶ್ವವಚನ ಫೌಂಡೇಷನ್ :** ಕನ್ನಡ ರಾಜ್ಯೋತ್ಸವ ಮತ್ತು ಅಕ್ಕ ಎಂ.ಎ. ನೀಲಾಂಬಿಕಾ ಅವರ ವಚನ ಕಥಾಲೋಕ ಮತ್ತು ನುಡಿ ದೀಪ್ತಿ ಕೃತಿಗಳ ಲೋಕಾರ್ಪಣೆ, ಸಾನ್ನಿಧ್ಯ : ಶ್ರೀ ಹೊಸಮಠದ ಮಠಾಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಸಮ್ಮುಖ : ಶ್ರೀ ನೀಲಕಂಠಸ್ವಾಮಿ ಮಠದ ಶ್ರೀ ವಿದ್ವಾನ್ ಸಿದ್ಧಮಲ್ಲ ಸ್ವಾಮಿಗಳು, ಕೃತಿ ಬಿಡುಗಡೆ : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕೃತಿ ಕುರಿತು : ಹಿರಿಯ ಸಾಹಿತಿ, ವಿಶೇಷಾಧಿಕಾರಿ ಡಾ. ಎಸ್. ಶಿವರಾಜಪ್ಪ, ಉಪಸ್ಥಿತರು : ಹಿರಿಯ ಸಾಹಿತಿ ಅಕ್ಕ ಎಂ.ಎ. ನೀಲಾಂಬಿಕಾ, ಅಧ್ಯಕ್ಷತೆ : ಫೌಂಡೇಷನ್ ಸಂಸ್ಥಾಪಕ ವಚನ ಕುಮಾರಸ್ವಾಮಿ, ಪ್ರಾಸ್ತಾವಿಕ ನುಡಿ : ಶ್ರೀಮತಿ ರೂಪ ಕುಮಾರಸ್ವಾಮಿ, ಉಪಸ್ಥಿತರು : ಫೌಂಡೇಷನ್ ಅಧ್ಯಕ್ಷ ಅನಿಲ್ ಕುಮಾರ್ ವಾಜಂತ್ರಿ, ಸ್ಥಳ: ಶ್ರೀ ನಟರಾಜ ಸಭಾ ಭವನ, ಸಂಜೆ 5ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ನವೆಂಬರ್ 6 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸಂಪುಟ: 45 | ಸಂಚಿಕೆ: 199 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೆಬಿಜಿಯವರ

ಭೂಮಂತ್ರ...



ವಿಶ್ವ ಕೈಗಾರಿಕೋದ್ಯಮಿಗಳ ನಡುವೆ ಒಂದು ರತ್ನ

ರತನ್ ನೇವಲ್ ಟಾಟಾ ಅವರಿಗೆ ನನ್ನ ಕೊನೆಯ ಸಲಾಂ

■ ಪುಟ–4

ಮುಡಾ ಪ್ರಕರಣ ಸಿಬಿಐಗೆ ವಹಿಸಲು ಕೋರಿದ ಅರ್ಜಿ ವಿಚಾರಣೆ

ಸಿಎಂ ಸಿದ್ದರಾಮಯ್ಯ, ಪತ್ನಿ ಶ್ರೀಮತಿ ಪಾರ್ವತಿ, ಇತರರಿಗೆ

ಹೈಕೋರ್ಟ್ ನೋಟಿಸ್ ಜಾರಿ

ಪ್ರಕರಣ ನ. 26ಕ್ಕೆ ಮುಂದೂಡಿಕೆ, ತನಿಖೆ ವಿವರ ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚನೆ



ಬೆಂಗಳೂರು, ನ. 5–ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಬಿಎಂ ಪಾರ್ವತಿ ಸೇರಿದಂತೆ ಹಲವರಿಗೆ ನೋಟಿಸ್ ಜಾರಿ ಮಾಡಿದೆ.

ಸಿಎಂ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಮಾತ್ರವಲ್ಲದೇ ಅವರ ಭಾವ ಮಲ್ಲಿಕಾರ್ಜುನ ಸ್ವಾಮಿ, ಕೇಂದ್ರ ಸರ್ಕಾರ, ಕೇಂದ್ರ ತನಿಖಾ ದಳ (ಸಿಬಿಐ), ರಾಜ್ಯ ಸರ್ಕಾರ, ರಾಜ್ಯ ಪೊಲೀಸ್ ಮುಖ್ಯಸ್ಥರು, ಲೋಕಾಯುಕ್ತ ಪೊಲೀಸರು ಮತ್ತು ಇತರರಿಗೆ ಕರ್ನಾಟಕ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಹಗರಣದ ಸ್ವತಂತ್ರ, ನ್ಯಾಯಸಮ್ಮತ, ಪಾರದರ್ಶಕ ಮತ್ತು ನಿಷ್ಪಕ್ಷಪಾತ ತನಿಖೆಗಾಗಿ ಲೋಕಾಯುಕ್ತ ಪೊಲೀಸರಿಂದ ಪ್ರಕರಣವನ್ನು ಸಿಬಿಐಗೆ ವರ್ಗಾಯಿಸಲು ನಿರ್ದೇಶನ ನೀಡುವಂತೆ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ ಅರ್ಜಿಯ ಆಧಾರದ ಮೇಲೆ ಹೈಕೋರ್ಟ್ ಈ ನೋಟಿಸ್ ಜಾರಿ ಮಾಡಿದೆ

ಸದ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಬಿಎಂ ಅವರಿಗೆ ಮುಡಾದಿಂದ 14 ಪರಿಹಾರ ನಿವೇಶನಗಳನ್ನು ಅಕ್ರಮವಾಗಿ ಹಂಚಿಕೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಹಾಗೂ ಇತರರ ವಿರುದ್ಧ ಲೋಕಾಯುಕ್ತ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಅರ್ಜಿದಾರರ ಪರ ವಕೀಲರ ವಾದ ಆಲಿಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ನೋಟಿಸ್ ಜಾರಿ ಮಾಡಿ ಆದೇಶ




ಹೊರಡಿಸಿದ್ದಾರೆ. ಅಲ್ಲದೆ, ಆಕ್ಷೇಪಣೆಗಳಿದ್ದರೆ ಸಲ್ಲಿಸುವಂತೆ ಎಲ್ಲಾ ಪ್ರತಿವಾದಿಗಳಿಗೆ ಸೂಚಿಸಿದ ನ್ಯಾಯಾಲಯ, ಮುಂದಿನ ವಿಚಾರಣೆಯ ದಿನಾಂಕವಾದ ನವೆಂಬರ್ 26 ರೊಳಗೆ ತನಿಖೆಯ ವಿವರಗಳನ್ನು ಸಲ್ಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚಿಸಿದೆ. ಮುಖ್ಯಮಂತ್ರಿಗಳು ರಾಜ್ಯದ ಇಲಾಖೆಗಳ ಮೇಲೆ, ವಿಶೇಷವಾಗಿ ರಾಜ್ಯದ ತನಿಖಾ ಸಂಸ್ಥೆಗಳಾದ ಪೊಲೀಸ್ ಅಧಿಕಾರಿಗಳು ಮತ್ತು ಲೋಕಾಯುಕ್ತ ಪೊಲೀಸರ ಮೇಲೆ ಅಪಾರ ಅಧಿಕಾರ ಮತ್ತು ಪ್ರಭಾವ ಬೀರಿದ್ದಾರೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಹೀಗಿರುವಾಗ, ಮುಖ್ಯಮಂತ್ರಿ ವಿರುದ್ಧ ■ 6ನೇ ಪುಟಕ್ಕೆ

ಇಂದು ಸಿಎಂ ಸಿದ್ದರಾಮಯ್ಯ ಲೋಕಾಯುಕ್ತ ಎಸ್ಪಿ ಮುಂದೆ

ವಿಚಾರಣೆಗೆ ಹಾಜರು

ಬಂದೋಬಸ್ತ್ ಸಂಬಂಧ ನಗರ ಪೊಲೀಸ್ ಆಯುಕ್ತರಿಂದ ಪರಿಶೀಲನೆ



ಮೈಸೂರು, ನ. 5(ಬಿಎಲ್‌ಯು)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ಶೇ.50:50ರ ಅನುಪಾತದಡಿ ಅಕ್ರಮವಾಗಿ ನಿವೇಶನ ಪಡೆದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ (ನ. 6) ಬೆಳಗ್ಗೆ 10.30ಕ್ಕೆ ಮೈಸೂರಿನ ಲೋಕಾಯುಕ್ತ ಕಚೇರಿಯಲ್ಲಿ ಎಸ್ಪಿ ಟಿ.ಜೆ. ಉದೇಶ್ ಮುಂದೆ ವಿಚಾರಣೆಗೆ ಹಾಜರಾಗಲಿದ್ದಾರೆ.

ಮೈಸೂರಿನ ಕೆಸರೆ ಸರ್ವೆ ನಂಬರ್ 464ರ 3.16 ಎಕರೆ ಭೂಮಿಯನ್ನು ಭೂಸ್ವಾಧೀನಪಡಿಸಿಕೊಳ್ಳದೇ ಮುಡಾ ಅಭಿವೃದ್ಧಿಪಡಿಸಿದೆ ಎಂದು ಸಿದ್ದರಾಮಯ್ಯರ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ ಶೇ. 50:50ರ ಅನುಪಾತದಡಿ ವಿಜಯನಗರ ಬಡಾವಣೆಯಲ್ಲಿ 14 ನಿವೇಶನಗಳನ್ನು ಮುಡಾ ಮಂಜೂರು ಮಾಡಿದ ಪ್ರಕರಣದಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶದ ಮೇರೆಗೆ ಲೋಕಾಯುಕ್ತ ಪೊಲೀಸರು ದಾಖಲಿಸಿರುವ ಪ್ರಕರಣದಲ್ಲಿ ವಿಚಾರಣೆಗಾಗಿ ಸಿದ್ದರಾಮಯ್ಯ ಹಾಜರಾಗುತ್ತಿದ್ದಾರೆ. ಮೈಸೂರಿನ ಲೋಕಾಯುಕ್ತ ಕಚೇರಿಯಲ್ಲಿ ನಾಳೆ ವಿಚಾರಣೆಗೆ ಹಾಜರಾಗಲಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದೂ ಕೂಡ ಪುನರುಚ್ಚರಿಸಿದರು. ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ. ಉದೇಶ್ ನೇತೃತ್ವದ ತಂಡ ಸಿದ್ದರಾಮಯ್ಯನವರ ವಿಚಾರಣೆಗಾಗಿ ಪ್ರಶ್ನೆಗಳ ಪಟ್ಟಿ ಸಿದ್ಧಪಡಿಸಿಕೊಂಡಿದೆ ಎಂದು ಹೇಳಲಾಗುತ್ತಿದೆ.

ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯ ಅಧಿಕಾರಿ ಕೆ.ಚಿರಂಜೀವಿ ಪ್ರಕಟಿಸಿರುವ ಮುಖ್ಯಮಂತ್ರಿಗಳ ■ 6ನೇ ಪುಟಕ್ಕೆ

ಇನ್ಮುಂದೆ ಮಕ್ಕಳನ್ನು ಬೈಕ್‌ಗಳಲ್ಲಿ ಕರೆದೊಯ್ಯುವಾಗ ಸೇಫ್ಟಿ ಬೆಲ್ಟ್ ಕಡ್ಡಾಯ

ನಿಯಮ ಉಲ್ಲಂಘಿಸಿದ್ರೆ 1,000 ರೂ. ದಂಡ



ಬೆಂಗಳೂರು, ನ.5– ರಾಜ್ಯದಲ್ಲಿ ದಿನದಿಂದ ದಿನಕ್ಕೆ ಬೈಕ್ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ. ವಾಹನ ಸವಾರರ ಸುರಕ್ಷತೆಗಾಗಿ ಸರ್ಕಾರ ಹಾಗೂ ಸಾರಿಗೆ ಇಲಾಖೆ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುತ್ತಿದೆ. ಇತ್ತೀಚೆಗೆ 4 ವರ್ಷದ ಒಳಗಿನ ಮಕ್ಕಳನ್ನು ಶಾಲೆ ಅಥವಾ ಇತರೆ ಕೆಲಸಗಳಿಗೆ ಹಿಂದೆ, ಮುಂದೆ ಕೂರಿಸಿಕೊಂಡು ಬೈಕ್ ಚಲಾವಣೆ ಮಾಡುವ ವಾಹನ ಸವಾರರಿಗೆ ಬಿಸಿ ಮುಟ್ಟಿಸಲು ಸಾರಿಗೆ ಇಲಾಖೆ ಮುಂದಾಗಿದೆ.

4 ವರ್ಷ ಒಳಗಿನ ಮಕ್ಕಳನ್ನು ಬೈಕ್‌ಗಳಲ್ಲಿ ಕರೆದುಕೊಂಡು ಹೋಗುವಾಗ ಶಿಶು ಕವಚ ಹಾಕದಿದ್ದರೆ ಕೇಸ್ ಹಾಗೂ ದಂಡವನ್ನು ಸಾರಿಗೆ ಇಲಾಖೆ ಹಾಕುತ್ತಿದೆ. ಮಕ್ಕಳಿಗೆ ಸೇಫ್ಟಿ ಬೆಲ್ಟ್ ಹಾಕದ ಪೋಷಕರಿಗೆ 1,000 ರೂ. ದಂಡ ಹಾಕುತ್ತಿದೆ. ಕೇಂದ್ರ ಮೋಟಾರು ವಾಹನ ಕಾಯ್ದೆ 2019ರ ಅನ್ವಯ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುವ ಮಕ್ಕಳು ಸೇಫ್ಟಿ ಬೆಲ್ಟ್ ಧಾರಣೆ ಮಾಡು ವುದು ಕಡ್ಡಾಯ. ಈ ಬಗ್ಗೆ ಸಾರಿಗೆ ಇಲಾಖೆ ಎಲ್ಲಾ ಜಿಲ್ಲಾ ಕೇಂದ್ರ ಹಾಗೂ ಆರ್‌ಟಿಒಗಳಲ್ಲಿ ಜಾಗೃತಿ ಮೂಡಿಸಿದ್ದಾರೆ. ಈ ಹಿಂದೆಯೂ ಈ ಕಾಯ್ದೆ ಜಾರಿಯಲ್ಲಿತ್ತು. ಆದರೆ ಸಮರ್ಪಕವಾಗಿ ಜಾರಿಯಾಗದ ಹಿನ್ನೆಲೆ, ಹೈಕೋರ್ಟ್‌ಗೆ ಪಿಐಎಲ್ ಸಲ್ಲಿಕೆಯಾದಾಗ ಕೇಂದ್ರ ಸರ್ಕಾರ ಅಧಿಸೂಚನೆಯಂತೆ ರಾಜ್ಯದಲ್ಲಿ ಈ ಯೋಜನೆ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸಾರಿಗೆ ಇಲಾಖೆಗೆ ಸೂಚಿಸಿದೆ.

ಅಬಕಾರಿ ಇಲಾಖೆಯಲ್ಲಿ ಭಾರಿ ಭ್ರಷ್ಟಾಚಾರ; ಬಾರ್‌ಗಳಿಂದ 15 ಕೋಟಿ ಲಂಚ ವಸೂಲಿ

● ಮದ್ಯ ಮಾರಾಟಗಾರರ ಸಂಘದಿಂದ ರಾಜ್ಯಪಾಲ, ಸಿಎಂಗೆ ಪತ್ರ ● ಅಬಕಾರಿ ಸಚಿವ ತಿಮ್ಮಾಪುರ್ ಖಾತೆ ಬದಲಾವಣೆಗೆ ಒತ್ತಾಯ ● ನ.20ಕ್ಕೆ ಮದ್ಯ ಮಾರಾಟ ಬಂದ್



ಬೆಂಗಳೂರು, ನ.5– ವಾಲ್ಮೀಕಿ ನಿಗಮ ಹಗರಣ, ಮುಡಾ ಹಗರಣ, ವಕ್ಫ್ ಆಸ್ತಿ ವಿವಾದಗಳಿಂದ ಕಂಗೆಟ್ಟಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರಕ್ಕೆ ಮತ್ತೊಂದು ಸಂಕಷ್ಟ ಎದುರಾಗಿದೆ. ಅಬಕಾರಿ ಇಲಾಖೆಯು ಮದ್ಯದಂಗಡಿಗಳಿಂದ 'ಮಂಥ್ಲಿ ಮನಿ' ಹೆಸರಿನಲ್ಲಿ ಲಂಚ ಪಡೆಯುತ್ತಿದೆ ಎಂಬ ಆರೋಪ ಕೇಳಿಬಂದಿದೆ

ಅಬಕಾರಿ ಇಲಾಖೆ ಅಧಿಕಾರಿಗಳು ಮದ್ಯ ಮಾರಾಟ ವ್ಯಾಪಾರಿಗಳಿಂದ ಮಾಸಿಕ ಹಣ ವಸೂಲಿ ಮಾಡುತ್ತಿದ್ದಾರೆ ಎಂದು ಕರ್ನಾಟಕ ವೈನ್ ಮರ್ಚೆಂಟ್ ಅಸೋಸಿಯೇಷನ್ ಆರೋಪಿಸಿದ್ದು, ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ವಿರುದ್ಧ ನ.20ರಂದು ರಾಜ್ಯಾದ್ಯಂತ ಮದ್ಯದಂಗಡಿಗಳನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಲಿದೆ. ರಾಜ್ಯಪಾಲ / ಥಾವರಚಂದ್ ಗೆಹ್ಲೋಟ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಪತ್ರದಲ್ಲಿ ಅಬಕಾರಿ ಸಚಿವ ಆರ್.ಬಿ ತಿಮ್ಮಾಪುರ್ ವಿರುದ್ಧವೂ ಆರೋಪಿಸಲಾಗಿದೆ. ತಿಮ್ಮಾಪುರ ಅವರ ಖಾತೆ ಬದಲಾವಣೆ ಮಾಡುವಂತೆ ಸಿಎಂಗೆ ಒತ್ತಾಯಿಸಲಾಗಿದೆ. ಅಬಕಾರಿ ಸಚಿವರ ಕಚೇರಿ ಬೆಂಗಳೂರಿನ ಸಿಬ್ಬಂದಿ, ಅಧಿಕಾರಿಗಳನ್ನು ವರ್ಗಾವಣೆ ಮಾಡಲು ಲಂಚ ಸಂಗ್ರಹಿಸುತ್ತಿದೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ನಿರೀಕ್ಷಕರಿಂದ ತಲಾ 40 ಲಕ್ಷ ಹಾಗೂ ಬೆಂಗಳೂರಿನಿಂದ ಹೊರಗೆ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಅಧೀಕ್ಷಕರಿಂದ 25 ಲಕ್ಷ ರೂಪಾಯಿ ವಸೂಲಿ ಮಾಡುತ್ತಿದ್ದಾರೆ ಎಂದು ವ್ಯಾಪಾರಿಗಳು ಆರೋಪಿಸಿದ್ದಾರೆ. ಅಧಿಕಾರಿಗಳು 18 ಕೋಟಿ ವಸೂಲಿ ಮಾಡಿದ್ದು, ಅದರಲ್ಲಿ 13 ಕೋಟಿ ರೂ.ಗಳನ್ನು ಸಚಿವ ತಿಮ್ಮಾಪುರ್ ಅವರಿಗೆ ನೀಡಲಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಅಬಕಾರಿ ಇಲಾಖೆ ಭ್ರಷ್ಟಾಚಾರದ ಮೂಲಪುರುಷ ಸಚಿವ ತಿಮ್ಮಾಪುರ್


ಮದ್ಯ ಮಾರಾಟಗಾರರ ಸಂಘದ ಅಧ್ಯಕ್ಷ ಗುರುಸ್ವಾಮಿ ಆರೋಪ



ತಿಮ್ಮಾಪುರ್

ಮೈಸೂರು, ನ.5–ಅಬಕಾರಿ ಇಲಾಖೆಯಲ್ಲಿ ಕೇವಲ 18–20 ಕೋಟಿ ಅವ್ಯವಹಾರ ನಡೆದಿಲ್ಲ. ಇಲ್ಲಿ ನೂರಾರು ಕೋಟಿ ರೂ. ಮೌಲ್ಯದ ಅವ್ಯವಹಾರ ನಡೆದಿದೆ. ಅಬಕಾರಿ ಇಲಾಖೆ ಬ್ರಹ್ಮಾಂಡ ಭ್ರಷ್ಟಾಚಾರದ ಮೂಲ ಪುರುಷ ಸಚಿವ ಆರ್.ಬಿ.ತಿಮ್ಮಾಪುರ್ ಎಂದು ಕರ್ನಾಟಕದ ರಾಜ್ಯ ಮದ್ಯ ಮಾರಾಟಗಾರರ ಸಂಘದ ಅಧ್ಯಕ್ಷ ಗುರುಸ್ವಾಮಿ ಹೇಳಿದ್ದಾರೆ. ಖಾಸಗಿ ಸುದ್ದಿ ವಾಹಿನಿಯೊಂದಿಗೆ ಮಾತನಾಡಿದ ಅವರು, ಇಲಾಖೆ ಅಧಿಕಾರಿಗಳೇ ಸಚಿವರಿಗೆ ಲಂಚಕೊಟ್ಟು ಬಂದಿದ್ದೇವೆ ಎಂದು ನೇರವಾಗಿ ಹೇಳುತ್ತಿದ್ದಾರೆ. ಸಚಿವರಿಗೆ, ಆಯುಕ್ತರಿಗೆ, ಸೂಪರಿಂಟೆಂಡೆಂಟ್, ಸ್ಕ್ವಾಡ್, ಸಿಬ್ಬಂದಿಗೆ ಇಂತಿಷ್ಟು ಎಂದರೆ ಅವರೇ ಫಿಕ್ಸ್ ಮಾಡಿಕೊಂಡಿದ್ದಾರೆ. ಇದೆಲ್ಲದರ ಪರಿಣಾಮ ಲೈಸೆನ್ಸ್‌ದಾರನಿಗೆ ತೊಂದರೆ ಎದುರಾಗಿದೆ. ಇಷ್ಟೆಲ್ಲ ಆದರೂ ಸಿದ್ದರಾಮಯ್ಯ ಗಮನಕ್ಕೆ ಬಂದಿಲ್ಲವೇ? ಈ ವಿಚಾರ ಅವರಿಗೆ ಗೊತ್ತಿಲ್ಲ ಅಂದರೆ ನಮ್ಮನ್ನು ಹುಚ್ಚರು ಎನ್ನುತ್ತಾರೆ ಎಂದರು.

ಕೆಲವು ಪ್ರಕರಣಗಳಲ್ಲಿ ಸಚಿವರು ಸರ್ಕಾರಿ ಅಧಿಕಾರಿಗಳ ವರ್ಗಾವಣೆ ತಪ್ಪಿಸಿದ್ದಾರೆ. ಅಬಕಾರಿ ಹಗರಣದಲ್ಲಿ ಸಚಿವರ ಪಿಎ, ಪಿಎಸ್‌ಗಳು ಇದ್ದಾರೆ. ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರ ಆಪ್ತ ಸಹಾಯಕರು ಹಾಗೂ ಆಪ್ತ ಕಾರ್ಯದರ್ಶಿಗಳೂ ಎಲ್ಲರೂ ಒಂದೇ ಕಡೆ ಸೇರಿಕೊಂಡು ಇದನ್ನು ನಡೆಸುತ್ತಿದ್ದಾರೆ. ಈಗಾಗಲೇ ಅಬಕಾರಿ ಇಲಾಖೆ ಭ್ರಷ್ಟಾಚಾರದ ಬಗ್ಗೆ ಅಜಿತ್ ಎಂಬುವರಿಗೆ ದೊಡ್ಡ ಮಟ್ಟದ ನೋವಾಗಿರುವ ಹಿನ್ನೆಲೆಯಲ್ಲಿಯೇ ಬೇಸತ್ತು ಅವರು ರಾಜ್ಯಪಾಲರಿಗೆ ದೂರು ನೀಡಿದ್ದಾರೆ ಎಂದು ತಿಳಿಸಿದರು.



ಗುರುಸ್ವಾಮಿ

ರಾಜ್ಯದಲ್ಲಿ ನಡೆದಿರುವ ಅಬಕಾರಿ ಇಲಾಖೆಯ ನೂರಾರು ಕೋಟಿ ರೂ. ಮೌಲ್ಯದ ಭ್ರಷ್ಟಾಚಾರದ ಮೂಲಪುರುಷ ಸಚಿವರೇ ಆಗಿದ್ದಾರೆ. ಅವರು ಲಂಚ ಪಡೆದ ಪರಿಣಾಮ ಅಧಿಕಾರಿಗಳು ನೇರವಾಗಿ ಅವರ ಹೆಸರು ಹೇಳಿಕೊಂಡು ಲಂಚ ಪಡೆಯುತ್ತಿದ್ದಾರೆ. ಇದನ್ನು ಪ್ರಶ್ನೆ ಮಾಡಿದರೆ ಲೈಸೆನ್ಸ್ ವಿಚಾರದಲ್ಲಿ, ಸ್ಟಾಕ್ ವಿಚಾರದಲ್ಲಿ ತೊಂದರೆ ನೀಡುತ್ತಾರೆ. ಇದು ಸರಿಯಾಗದಿದ್ದರೆ, ಮದ್ಯ ಮಾರಾಟಗಾರರ ಸಂಘವೂ ಕೂಡ ಮುಂದಿನ ದಿನಗಳಲ್ಲಿ ರಾಜ್ಯಪಾಲರು ಹಾಗೂ ಸಿಬಿಐಗೆ ದೂರು ನೀಡಲಾಗುತ್ತದೆ ಎಂದು ತಿಳಿಸಿದರು.

ಚನ್ನಪಟ್ಟಣದಲ್ಲಿ ಪ್ರಚಾರ ಅಖಾಡಕ್ಕಿಳಿದ ದೇವೇಗೌಡರು

ಮೊಮ್ಮಗ ನಿಖಿಲ್ ಕುಮಾರಸ್ವಾಮಿ ಪರ ಮತಬೇಟೆ



ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡರು, ಮೊಮ್ಮಗ ನಿಖಿಲ್ ಕುಮಾರಸ್ವಾಮಿ ಪರ ಮತಯಾಚನೆ ಮಾಡಿದರು.

ಚನ್ನಪಟ್ಟಣ, ನ.5–ಚನ್ನಪಟ್ಟಣ ಕ್ಷೇತ್ರದಲ್ಲಿ ಉಪ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡರು ಇಂದಿನಿಂದ ಕ್ಷೇತ್ರದಲ್ಲಿ ಪ್ರಚಾರ ನಡೆಸುತ್ತಿದ್ದು, ಮೊಮ್ಮಗ ನಿಖಿಲ್ ಕುಮಾರಸ್ವಾಮಿ ಪರ ಮತಬೇಟೆ ನಡೆಸಿದರು.

ಚನ್ನಪಟ್ಟಣ ಕ್ಷೇತ್ರದ ವಿರುಪಾಕ್ಷಿಪುರ ಗ್ರಾಮದಲ್ಲಿ ನಡೆದ ಪ್ರಚಾರ ಕಾರ್ಯಕ್ರಮದಲ್ಲಿ ಇಂದು ದೇವೇಗೌಡರು ಭಾಗವಹಿಸಿದ್ದರು. ಈ ವೇಳೆ ಅವರಿಗೆ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಮತ್ತು ಜೆಡಿಎಸ್ ನಾಯಕರು ಹಾಗೂ ಪ್ರತಿಪಕ್ಷ ನಾಯಕ ಆರ್. ಅಶೋಕ್ ಸಾಥ್ ನೀಡಿದರು.

ಈ ವೇಳೆ ಮಾತನಾಡಿದ ದೇವೇಗೌಡರು, ತಮ್ಮ ಆರೋಗ್ಯ ಹಾಗೂ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರ ಕಣ್ಣೀರಿನ ಬಗ್ಗೆ ಲಘುವಾಗಿ ಮಾತನಾಡಿರುವ ಕಾಂಗ್ರೆಸ್ ನಾಯಕರ ವಿರುದ್ಧ ಗುಡುಗಿದರು. ಕಟುಕರಿಗೆ ಕಣ್ಣೀರು ಬರುವುದಿಲ್ಲ, ಹೃದಯವಿರುವ ಭಾವುಕ ಜೀವಿಗಳಿಗೆ ಮಾತ್ರ ಕಣ್ಣೀರು ಬರುತ್ತದೆ ಎಂದು ತಿರುಗೇಟು ನೀಡಿದರು.

ನಾನು ಆಂಬುಲೆನ್ಸ್‌ನಲ್ಲೂ ಬಂದಿಲ್ಲ: ನನ್ನ ಆರೋಗ್ಯ ಚೆನ್ನಾಗಿದೆ. ನಾನು ಆಂಬುಲೆನ್ಸ್‌ನಲ್ಲೂ ಬಂದಿಲ್ಲ, ವೀಲ್ ಚೇರ್ ಮೇಲೆ ಬಂದಿಲ್ಲ. ನಾನು ನಿಮ್ಮೆಲ್ಲರ ಆಶೀರ್ವಾದದಿಂದ ಚೆನ್ನಾಗಿದ್ದೇನೆ. ಆರೋಗ್ಯವಾಗಿದ್ದೇನೆ. ಅದನ್ನು ತೋರಿಸಲು ಇಲ್ಲಿಗೆ ಬಂದಿದ್ದೇನೆ. ನೀವೇ ನನ್ನನ್ನು ನೋಡುತ್ತಿದ್ದೀರಿ, ಹೇಗೆ ಇದ್ದೇನೆ ಎಂದು ಗಮನಿಸುತ್ತಿದ್ದೀರಿ ಅಲ್ಲವೇ? ಎಂದು ದೇವೇಗೌಡ ಕೇಳಿದರು.

ಕಾಂಗ್ರೆಸ್ ನಾಯಕರು ನನ್ನನ್ನು ಹೊರಗಿನವರು ಎನ್ನುತ್ತಿದ್ದಾರೆ. ನಾನು ಅವರಿಗೆ ಹೊರಗಿನವನು ಎಂದು ಈಗ ಅನ್ನಿಸುತ್ತಿದೆ. ಆದರೆ, ನಾನು ಈ ತಾಲೂಕಿಗೆ ಶಾಶ್ವತ ನೀರಾವರಿ ಒದಗಿಸಲು ಇಗ್ಗಲೂರು ಬ್ಯಾರೇಜ್ ಕಟ್ಟಿಸಿದಾಗ ಹಾಗೆಂದು ಅನಿಸಲಿಲ್ಲವೇ? ರಾಜಕೀಯಕ್ಕಾಗಿ ಕಾಂಗ್ರೆಸ್ ನಾಯಕರು ಜನರಿಗೆ ಬರೀ ಸುಳ್ಳನ್ನೇ ಹೇಳುತ್ತಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ನನಗೆ ಮಂಡಿ ನೋವು, ನಿಂತುಕೊಂಡು ಮಾತಾಡೋಕೆ ಆಗಲ್ಲ. ನನಗೀಗ 92 ವರ್ಷ, ಎಸ್.ಎಂ.ಕೃಷ್ಣ ಮತ್ತು ನಾನು ಒಂದೇ ವಯಸ್ಸಿನವರು. ಆದರೆ ನಾವು ಈಗಲೂ ಕೆಲಸ ಮಾಡುತ್ತಿದ್ದೇವೆ. ದೇಹಕ್ಕೆ ವಯಸ್ಸಾಗುತ್ತದೆ, ಇಚ್ಛಾಶಕ್ತಿಗೆ ಅಲ್ಲ ಎಂದು ಮಾಜಿ ಪ್ರಧಾನಿ ಹೇಳಿದರು. ಮುದ್ದೆ ಸೊಪ್ಪಿನ ಸಾಂಬಾರು ಹಾಕಿ ಅಡುಗೆ ಮಾಡಿ ಬಡಿಸಿದ ತಾಯಂದಿರು ಇಲ್ಲಿದ್ದೀರಿ. ನಿಮ್ಮನ್ನು ಎಂದಿಗೂ ಮರೆಯೋಕೆ ಸಾಧ್ಯವಿಲ್ಲ. ನಿಮ್ಮ ಪಾದಕ್ಕೆ ನಾನು ನಮಸ್ಕಾರ ಮಾಡ್ತೀನಿ. ನಾನು ಈ ತಾಲೂಕಿಗೆ ಏನೇನು ಮಾಡಿದ್ದೇನೆ, ಹೇಗೆಲ್ಲಾ ಶ್ರಮಪಟ್ಟು ಇಗ್ಗಲೂರು ಅಣೆಕಟ್ಟು ಕಟ್ಟಿದ್ದೇನೆ, ಆ ಬಗ್ಗೆ ನಾನು ಚರ್ಚೆ ಮಾಡಲ್ಲ, ಆದರೆ ಇಗ್ಗಲೂರು ಅಣೆಕಟ್ಟು ನಿಮ್ಮ ಮುಂದೆ ಇದೆ ಎಂದು ದೇವೇಗೌಡ ಹೇಳಿದರು. ■ 6ನೇ ಪುಟಕ್ಕೆ

ತಹಸೀಲ್ದಾರ್ ಕಚೇರಿಯಲ್ಲಿ ಕ್ಲರ್ಕ್ ಆತ್ಮಹತ್ಯೆ

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸಹಾಯಕ ಸೇರಿ ಮೂವರ ವಿರುದ್ಧ ಎಫ್‌ಐಆರ್

ಬೆಳಗಾವಿ, ನ.5– ಬೆಳಗಾವಿಯ ತಹಸೀಲ್ದಾರ್ ಕಚೇರಿಯಲ್ಲೇ ದ್ವಿತೀಯ ದರ್ಜೆ ಸಹಾಯಕ ರುದ್ರಣ್ಣ ಯಡವಣ್ಣವರ (35) ಎಂಬವರು ಆತ್ಮಹತ್ಯೆ ಮಾಡಿಕೊಂಡಿದ್ದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸಹಾಯಕ ಸೋಮು ಸೇರಿದಂತೆ ಮೂವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ರುದ್ರಣ್ಣ ಯಡವಣ್ಣವರ

ಮೃತನ ಪತ್ನಿ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡಿದ್ದು, ಮುಂದಿನ ತನಿಖೆ ಕೈಗೊಳ್ಳಲಾಗಿದೆ ಎಲ್ಲ ಆರೋಪಗಳನ್ನು ಪರಿಶೀಲಿಸಲಾಗುವುದು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ನ.4ರ ರಾತ್ರಿ 7.30ರ ಸುಮಾರಿಗೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ತನ್ನ ಪತಿ ತಹಸೀಲ್ದಾರ್ ಕಚೇರಿ ಸಿಬ್ಬಂದಿಯ ವಾಟ್ಸಾಪ್ ಗ್ರೂಪ್‌ನಲ್ಲಿ ಪೋಸ್ಟ್ ಮಾಡಿದ್ದ ಸಂದೇಶವನ್ನು ಪತ್ನಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ. ನನ್ನ ಸಾವಿಗೆ ತಹಸೀಲ್ದಾರ್ ಬಸವರಾಜ್ ನಾಗರಾಳ್, ಕಚೇರಿ ಸಿಬ್ಬಂದಿ ಅಶೋಕ್ ಕಬ್ಬಲಿಗಾರ್ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಆಪ್ತ ಸಹಾಯಕ ಸೋಮು ನೇರ ಕಾರಣ ಎಂದು ಮೃತ ರುದ್ರಣ್ಣ ಯಡವಣ್ಣನವರ ಉಲ್ಲೇಖಿಸಿರುವುದಾಗಿ ಅವರು ಮಾಹಿತಿ ನೀಡಿದ್ದಾರೆ.

ದೂರಿನಲ್ಲಿ ಮಾಡಲಾದ ಎಲ್ಲಾ ಆರೋಪಗಳನ್ನು ತನಿಖೆ ಮಾಡುತ್ತಿದ್ದೇವೆ, ಅವುಗಳು ಎಫ್‌ಐಆರ್‌ನ ಭಾಗವಾಗಿವೆ. ತನಿಖೆಯ ಭಾಗವಾಗಿ ತಹಸೀಲ್ದಾರ್ ಕಚೇರಿ ಆವರಣದಲ್ಲಿರುವ ಸಿಸಿಟಿವಿ ದೃಶ್ಯಗಳನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಆತ್ಮಹತ್ಯೆ ಮಾಡಿಕೊಂಡ ಸ್ಥಳದಲ್ಲಿ ಯಾವುದೇ ಡೆತ್‌ನೋಟ್ ಪತ್ತೆಯಾಗಿಲ್ಲ. ತಹಸೀಲ್ದಾರ್ ಅವರ ಕೊಠಡಿಯಲ್ಲಿ ವ್ಯಕ್ತಿಯೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ಇಂದು ಬೆಳಗ್ಗೆ ನಮ್ಮ ಇನ್ಸ್‌ಪೆಕ್ಟರ್‌ಗೆ ಮಾಹಿತಿ ಲಭಿಸಿದ ನಂತರ ಸ್ಥಳಕ್ಕೆ ಭೇಟಿ ನೀಡಿದ್ದೇವೆ. ಪ್ರಾಥಮಿಕ ಪರೀಕ್ಷೆಯಲ್ಲಿ ಆತ ಮುಸುಕು ಹಾಕಿಕೊಂಡು ನೇಣು ಬಿಗಿದುಕೊಂಡಿರುವುದು ಕಂಡುಬಂದಿದೆ. ಆತ್ಮಹತ್ಯೆಗೆ ಕಾರಣ ಏನು ಎಂಬುದು ತನಿಖೆಯಿಂದ ತಿಳಿದುಬರಬೇಕಾಗಿದೆ ಎಂದು ಅವರು ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಅಜ್ಜಿ : ಗುಂಡ ನಿಮ್ಮ ಟೀಚರ್ ಬರ್ತಾ ಇದ್ದಾರೆ ಬಚ್ಚಿಟ್ಕೊ.
ಗುಂಡ : ಮೊದಲು ನೀನು ಬಚ್ಚಿಟ್ಕೊ ಅಜ್ಜಿ...
ಅಜ್ಜಿ : ಯಾಕೊ?
ಗುಂಡ : ನೀನು ಸತ್ತೋಗಿದ್ದೀಯಾ ಅಂತ ನಾನು ರಜೆ ಹಾಕಿದ್ದೆ.

ಮೈಸೂರು ಮಿತ್ರ

ಬುಧವಾರ, 6 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಎಣಿಸಲಾಗದಷ್ಟು, ಗುಣಿಸಲಾಗದಷ್ಟು ಕಾವ್ಯಗಳನ್ನು
ಸೃಷ್ಟಿಸುವ ಕಾರ್ಖಾನೆ ಹೆಣ್ಣೆ ಅದು ನಿನ್ನ ಕಣ್ಣೆ... – ಶ್ರೀಧರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಾಯಿಯು ನಮ್ಮನ್ನು ಕಚ್ಚಿದರೆ ನಾಯಿಯನ್ನು ಕಚ್ಚಲು ನಮ್ಮಿಂದ ಆಗುವುದೇ?

ನಿಮ್ಮ ಪತ್ರಗಳು

■ ಸಮಸ್ಯೆಗಳ ಪಟ್ಟಿಗೆ ಮತ್ತೊಂದು ಸೇರ್ಪಡೆ

ಮಾನ್ಯರೆ,

ಕುಬೇರನ ಮೂಲೆಯಲ್ಲಿರುವ ಮೈಸೂರಿನ ದಟ್ಟಗಳ್ಳಿಯ ಸೋಮನಾಥನಗರದ ಸಮಸ್ಯೆಗಳ ಪಟ್ಟಿಗೆ ಕಸದ ಸಮಸ್ಯೆಯು ಸೇರ್ಪಡೆಯಾಗಿರುವುದು ವಿಷಾದನೀಯ. ಸೋಮನಾಥ ನಗರವು ಇತ್ತೀಚೆಗಷ್ಟೇ ಪಟ್ಟಣ ಪಂಚಾಯಿತಿಯ ವ್ಯಾಪ್ತಿಗೆ ಸೇರಿದೆ. ಪಟ್ಟಣ ಪಂಚಾಯಿತಿಗೆ ಸೇರುವ ಮುನ್ನ ಪೌರಕಾರ್ಮಿಕರು ಕಸದ ಗಾಡಿಗಳನ್ನು ತಂದು ಕಸವನ್ನು ಪ್ರತಿ ಮನೆಯಲ್ಲೂ ಕೇಳಿ ಪಡೆದುಕೊಳ್ಳುತ್ತಿದ್ದರು. ಪಟ್ಟಣ ಪಂಚಾಯಿತಿಗೆ ಸೇರಿದ ನಂತರ ಅವರು ಬರುತ್ತಿಲ್ಲ. ಕಾರ್ಪೊರೇಷನ್ ವಾಹನವು ವಾರಕ್ಕೆ ಎರಡು ದಿನ ಬರುತ್ತಿರುವುದು ಸರಿಯಷ್ಟೇ. ಅವರು ಕಸವನ್ನು ಕೇಳಿ ಪಡೆಯುವುದಿಲ್ಲ. ವೇಗವಾಗಿ ಬಂದು ವೇಗವಾಗಿ ಹೊರಟು ಹೋಗುತ್ತಾರೆ. ಕಸವನ್ನು ಆಚೆ ಇಟ್ಟಿದ್ದರೂ ತೆಗೆದುಕೊಳ್ಳುತ್ತಿಲ್ಲ. ಎಲ್ಲಾ ಕಡೆ ಪ್ರತಿ ಮನೆಗೂ ಕಸದ ಬುಟ್ಟಿಗಳನ್ನು ಪಟ್ಟಣ ಪಂಚಾಯಿತಿ ಕೊಟ್ಟಿರುತ್ತಾರೆ. ನಾವು ಕಸದ ಚೀಲಗಳನ್ನೇ ಕೊಡಬೇಕು. ಕಸವನ್ನು ಚೀಲಗಳಲ್ಲಿ ಶೇಖರಣೆ ಮಾಡುವ ಪರಿಸ್ಥಿತಿ ನಮ್ಮದಾಗಿದೆ. ಎಷ್ಟು ದಿನ ಅಂತ ಮನೆಗಳಲ್ಲಿ ಕಸವನ್ನು ಇಡಲು ಸಾಧ್ಯ. ವಾಸನೆ ಬರುತ್ತದೆ. ಕಸವನ್ನು ಆಚೆ ಹಾಕಿದರೆ ನಮ್ಮ ಬಡಾವಣೆಯ ಸ್ವಚ್ಛತೆಯನ್ನು ನಾವೇ ಮಾಲಿನ್ಯಗೊಳಿಸಿದಂತಾಗುತ್ತದೆ. ಕಸವನ್ನು ಏನು ಮಾಡಬೇಕು ಎಂದು ತಿಳಿಯುತ್ತಿಲ್ಲ. ಇದಕ್ಕೆ ಯಾರಾದರೂ ಪರಿಹಾರ ತಿಳಿಸುವಿರಾ. ಸೋಮನಾಥನಗರದ ಸಮಸ್ಯೆಗಳ ಪರಿಹಾರಕ್ಕೆ ಕುಬೇರ ಯಾವಾಗ ಒಲಿಯುತ್ತಾನೆ ಎಂದು ಕಾದು ನೋಡಬೇಕಾಗಿದೆ. ಶಾಸಕರು ಮತ್ತು ಉಸ್ತುವಾರಿ ಸಚಿವರ ಗಮನಕ್ಕೆ ಇದನ್ನು ತಂದಿದ್ದರೂ ಏನೂ ಪ್ರಯೋಜನವಾಗಿಲ್ಲ.

–ರೂಪ. ಎಂ., ಸೋಮನಾಥನಗರ, ದಟ್ಟಗಳ್ಳಿ ಮೈಸೂರು.

■ ಡಾ. ರಂಗನಾಥರ ಒಳ್ಳೆಯ ಲೇಖನ

ಮಾನ್ಯರೆ,

ಡಾ.ವಿ.ರಂಗನಾಥ್ ಅವರು ಬರೆದ ಲೇಖನ 'ನಿಮ್ಮ ವೃತ್ತಿಯ ನೀವು ಇಷ್ಟಪಡುವಿರಾ?' ಚೆನ್ನಾಗಿದೆ. ಎರಡು ಮೂರು ಉದಾಹರಣೆಗಳೊಂದಿಗೆ ಲೇಖನದಲ್ಲಿ ಬರೆದಂತೆ ನಾವು ಮಾಡುವ ಯಾವುದೇ ಕೆಲಸವಿರಲಿ ಅದನ್ನು ಪ್ರೀತಿಯಿಂದ, ಶ್ರದ್ಧೆಯಿಂದ ಮಾಡಿದರೆ ಖಂಡಿತಾ ಆ ಕೆಲಸ ಕಷ್ಟ ಅಥವಾ ಬೇಸರ ಎನಿಸುವುದಿಲ್ಲ. ಬದಲಿಗೆ ಖುಷಿ ಕೊಡುತ್ತದೆ ಮತ್ತು ಹಾಗೆ ಮಾಡುವ ಕೆಲಸದಿಂದ ಮಾಡಿದ ವ್ಯಕ್ತಿಗೆ ಮತ್ತು ಆ ಸಂಸ್ಥೆಗೂ ಹೆಚ್ಚಿನ ಲಾಭವಿರುತ್ತದೆ. ಇನ್ನೊಬ್ಬರ ಕೆಲಸ ಮತ್ತು ಇನ್ನೊಬ್ಬರ ಆದಾಯಕ್ಕೆ ತುಲನೆ ಮಾಡಿಕೊಂಡು ಕೊರಗುತ್ತಾ ಕೆಲಸ ಮಾಡುವುದರ ಬದಲಿಗೆ ಶ್ರದ್ಧೆ ಮತ್ತು ಪ್ರೀತಿಯಿಂದ ತಮಗೆ ಸಿಕ್ಕ ಕೆಲಸ ಮಾಡಿದರೆ ಮಾಡುವ ಕೆಲಸ ಬಂದ ಆದಾಯವೇ ಸಾಕಷ್ಟು ನೆಮ್ಮದಿಯನ್ನು ಕೊಡುತ್ತದೆ.

–ರಾಘವೇಂದ್ರ ಜೋಯಿಸ್, ಮೈಸೂರು

■ ಜಯನಗರ ರೈಲ್ವೆ ಮೇಲ್ಸೇತುವೆ ಗಿಡಗಂಟಿ ತೆರವುಗೊಳಿಸಿ



ಮಾನ್ಯರೆ,

ಮೈಸೂರು ವಿದ್ಯಾರಣ್ಯಪುರಂನಿಂದ ಕುವೆಂಪುನಗರಕ್ಕೆ ಸಂಪರ್ಕ ಕಲ್ಪಿಸುವ ಜಯನಗರ ರೈಲ್ವೆ ಮೇಲ್ಸೇತುವೆ ಮೇಲೆ ಹಾಗೂ ಎರಡೂ ಬದಿಯ ತಡೆ ಗೋಡೆಗಳ ಮೇಲೆ ಉದ್ದಕ್ಕೂ ಗಿಡಗಂಟಿಗಳು ಬೆಳೆದಿದ್ದು, ಅವುಗಳು ಇನ್ನೂ ಬೆಳೆದು ತಡೆಗೋಡೆಗೆ ಹಾನಿಯಾಗುವ ಸಂಭವವಿದೆ. ಅಲ್ಲದೆ ಈ ತಡೆಗೋಡೆ ನಿರ್ಮಿಸಿ ಹಲವು ವರ್ಷಗಳಾಗಿದ್ದು, ನಿರ್ವಹಣೆ ಇಲ್ಲದೆ ಅಲ್ಲಲ್ಲಿ ಗೋಡೆ ಬಿರುಕುಗಳೂ ಕಾಣುತ್ತಿವೆ. ಆದ್ದರಿಂದ ಯಾವುದೇ ದುರಂತ ಸಂಭವಿಸುವ ಮೊದಲು ಸಂಬಂಧಪಟ್ಟ ಪಾಲಿಕೆ ಅಥವಾ ರೈಲ್ವೆ ಇಲಾಖೆ ಈ ಬಗ್ಗೆ ಗಮನ ಹರಿಸಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ಉದ್ಯಾನವನಗಳಲ್ಲಿ ಆರೋಗ್ಯ ಪಥ ಅಗತ್ಯ


ಮಾನ್ಯರೆ,

ನಗರಗಳಲ್ಲಿ ಈಗ್ಗೆ ಸಾರ್ವಜನಿಕ ಉದ್ಯಾನಗಳಲ್ಲಿ ಎಂಥೆಂಥದೋ ವ್ಯಾಯಾಮ ಪರಿಕರಗಳನ್ನು ಸ್ಥಾಪಿಸುತ್ತಿದ್ದಾರೆ. ಬಿರುನಡೆ, ಮೆಲು ಓಟ, ಜಾಗಿಂಗ್, ಸ್ಕಿಪ್ಪಿಂಗ್ (ಯೋಗ್)ಆಸನಗಳಲ್ಲಿ ಜನಸಾಮಾನ್ಯರು ಉತ್ಸಾಹದಿಂದ ತೊಡಗಿರುವುದನ್ನು ನೋಡುತ್ತಿದ್ದೇವೆ.

ಅಂತೆಯೇ, ಸಮತಟ್ಟು ನೆಲವಲ್ಲದೆ, ಏರುತಗ್ಗು, ತಿರುವು, ತಗ್ಗು ತೆವರುಗಳೂ ಇರುವಂತಹ ರಸ್ತೆಗಳನ್ನು ವಿಶೇಷವಾಗಿ, ಕೃತಕವಾಗಿ ನಿರ್ಮಿಸಿ ಜನಸಾಮಾನ್ಯರ ಸರಳ ಓಟ, ವ್ಯಾಯಾಮಗಳಿಗೆ ನಗರಪಾಲಿಕೆಗಳು ಸ್ವಾಸ್ಥ್ಯದ ನಿಟ್ಟಿನಲ್ಲಿ ಸಿದ್ಧಪಡಿಸಬಹುದಾಗಿದೆ. ಇದರಿಂದ, ಸಹಜವಾಗಿಯೇ ಬಳಕೆದಾರರಲ್ಲಿ ಶಾರೀರಿಕ ದಣಿವು ಹೆಚ್ಚಾಗುತ್ತದೆ. ಇದಕ್ಕೆ ಸಾಧನ, ಪರಿಕರಗಳು ಇದಕ್ಕಾಗಿ ಬೇಕಿರುವುದಿಲ್ಲ.

ಇಂತಹ ಉದ್ಯಾನ–ಪಥಗಳನ್ನು ಸಿದ್ಧಪಡಿಸಲು ಕೆಲವು ಇಂಜಿನಿಯರುಗಳು ಬೇಕಾದರೂ ಅದಕ್ಕಿಂತಲೂ ಹೆಚ್ಚಾಗಿ ವೈದ್ಯಕೀಯ ಬಳಗದ ಸಲಹೆ, ಸೂಚನೆಗಳು ಅತ್ಯಗತ್ಯ. Pulmonologist, ಹೃದಯ–ಆರೋಗ್ಯ ವೈದ್ಯರು, sports-medicine, orthopedic, geriatric – ಇಂತಹ ವಿಶೇಷತಜ್ಞರ ಒಂದು ತಂಡ ಅಗತ್ಯವಾಗಬಹುದು.

–ಡಿ.ವಿ.ಎಂ. ಪ್ರಕಾಶ್, ಗೋಕುಲ ರಸ್ತೆ, ಮೈಸೂರು




ಕೆಬಿಜೆಯವರ

ಭೂಮಂತ್ರ... ಭೂಮಂತ್ರ... ಭೂಮಂತ್ರ...

ವಿಶ್ವ ಕೈಗಾರಿಕೋದ್ಯಮಿಗಳ ನಡುವೆ ಒಂದು ರತ್ನ

ರತನ್ ನೇವಲ್ ಟಾಟಾ ಅವರಿಗೆ ನನ್ನ ಕೊನೆಯ ಸಲಾಂ



ರತನ್ ನೇವಲ್ ಟಾಟಾ [28.12.1937– 9.10.2024]

ಭಾರತವು ಸಮಾಜವಾದಿ ಮಾರ್ಗವನ್ನು ತೆಗೆದುಕೊಳ್ಳದೆ, ನಿಜವಾದ ಮುಕ್ತ–ಮಾರುಕಟ್ಟೆ ನೀತಿಯನ್ನು ಅನುಸರಿಸಿದ್ದರೆ, ಏಕಸ್ವಾಮ್ಯ ಮತ್ತು ನಿರ್ಬಂಧಿತ ವ್ಯಾಪಾರ ಪದ್ಧತಿ (ಎಂಆರ್‌ಟಿಪಿ) ಕಾಯಿದೆ ಇಲ್ಲದೆ, ಟಾಟಾ ಉದ್ಯಮ–ಕೈಗಾರಿಕೆ ಈಗ ಇರುವುದಕ್ಕಿಂತ ಇನ್ನೂ ತುಂಬಾ ಹೆಚ್ಚು ಎತ್ತರದಲ್ಲಿರುತ್ತಿತ್ತು ಎಂದು ತಾವು ಭಾವಿಸುತ್ತಿರುವುದಾಗಿ ರತನ್ ಹೇಳಿದ್ದರು. ಅವರು, ಟಾಟಾ ಕೈಗಾರಿಕಾ ಸಂಸ್ಥಾಪಕ ಜೆಮ್‌ಶೆಟ್‌ಜೀ ಟಾಟಾ ಮತ್ತು ಅವರ ಹಿಂದಿನ ಜೆಆರ್‌ಡಿ ಟಾಟಾ ಬಗ್ಗೆ ಬರೆದ ಲೇಖನದಲ್ಲಿ ಈ ರೀತಿ ಬರೆದಿದ್ದರು.

ಎಷ್ಟು ನಿಜ.

ದೇಶದ ಕೈಗಾರಿಕಾ ಅಭಿವೃದ್ಧಿಯು ಸ್ವಾತಂತ್ರ್ಯದ ಮೊದಲ ವರ್ಷಗಳಲ್ಲಿ ತುಂಬಾ ಕುಂಠಿತವಾಗಿತ್ತು. ಅದಕ್ಕೆ ಕಾರಣ ನೆಹರೂ ಅವರ ಸಮಾಜವಾದಿ ಆರ್ಥಿಕ ನೀತಿ. ಇದನ್ನು ಭಾರತದ ಕೊನೆಯ ಗವರ್ನರ್ ಜನರಲ್ ಮತ್ತು ಭಾರತ ರತ್ನ **ಸಿ. ರಾಜಗೋಪಾಲಚಾರಿ** ಅವರು **'ಪರವಾನಗಿ ಮತ್ತು ಪರ್ಮಿಟ್ ರಾಜ್' (Licence and Permit Raj)** ಎಂದು ಕರೆದಿದ್ದರು. ನೆಹರು ಅವರ ಈ ಸಮಾಜವಾದಿ ನೀತಿಗಳನ್ನು ವಿರೋಧಿಸಲು ರಾಜಗೋಪಾಲಚಾರಿಯವರು **'ಸ್ವತಂತ್ರ ಪಕ್ಷ'**ವನ್ನು 1959ರಲ್ಲಿ ಸ್ಥಾಪಿಸಿದರು. ಆ ದಿನಗಳಲ್ಲಿ ದೈತ್ಯ ಆಲದಮರದ ಕೆಳಗೆ ಏನೂ ಬೆಳೆಯುವುದಿಲ್ಲ ಎಂಬ ಸಾಮಾನ್ಯ ನಂಬಿಕೆ ಇತ್ತು. ಅದೇ ರೀತಿ ರಾಜಕೀಯದಲ್ಲಿ ನೆಹರೂ ಒಂದು ಆಲದಮರವಾಗಿದ್ದು, ಬೇರೆ ಯಾರನ್ನೂ ರಾಜಕೀಯದಲ್ಲಿ ಬೆಳೆಯಲು ಬಿಡುತ್ತಿರಲಿಲ್ಲ. ಸ್ವಾಭಾವಿಕವಾಗಿ, 'ಸ್ವತಂತ್ರ ಪಕ್ಷ'ವು ವಿಫಲವಾಯಿತು ಮತ್ತು ಶೀಘ್ರದಲ್ಲೇ ನಿರ್ಗಮಿಸಿತು.

ಅದೇನೇ ಇರಲಿ, ನಮಗೆ ತಿಳಿದಿರುವಂತೆ, ಆ ದಿನಗಳ ದೊಡ್ಡ ಕೈಗಾರಿಕಾ ಸಂಸ್ಥೆಗಳಲ್ಲಿ ಅಂಬಾನಿಗಳು ಮತ್ತು ಅದಾನಿಗಳು ಕಾಣಿಸಿಕೊಳ್ಳುವ ಮೊದಲು, ಭಾರತದ ಕೈಗಾರಿಕಾ ನಕ್ಷೆಯಲ್ಲಿ ಕೇವಲ ಎರಡು ಹೆಸರುಗಳು ಕೇಳಿ ಬರುತ್ತಿತ್ತು. ಬಿರ್ಲಾ ಮತ್ತು ಟಾಟಾ. ಅಂಬಾನಿ ಮತ್ತು ಅದಾನಿ ಅವರದು–ಹೊಸ ಪ್ರವೇಶ. ಆದರೆ ಬಿರ್ಲಾ ಮತ್ತು ಟಾಟಾ ಇಬ್ಬರೂ ಇನ್ನೂ ಹೊಳೆಯುತ್ತಿರುವ ತಾರೆಗಳು.

2017ರವರೆಗೆ ಈ ಟಾಟಾ ವ್ಯಾಪಾರ ಮತ್ತು ಕೈಗಾರಿಕಾ ಸಂಸ್ಥೆಯ ಮುಖ್ಯಸ್ಥರಾಗಿದ್ದ **ರತನ್ ನೇವಲ್ ಟಾಟಾ** ಅವರು ಅಕ್ಟೋಬರ್ 9, 2024ರಂದು ಮುಂಬೈನಲ್ಲಿ ನಿಧನರಾದರು. ಅವರಿಗೆ 86 ವರ್ಷ. ಸಹಜವಾಗಿಯೇ ರತನ್ ಟಾಟಾ ಅವರು ಪ್ರಮುಖ ಟಾಟಾ ಟ್ರಸ್ಟ್‌ನ ಮುಖ್ಯಸ್ಥರಾಗಿದ್ದರು. ಈಗ ಅದನ್ನು ಮತ್ತೊಬ್ಬ ಟಾಟಾ ಅವರ ಮಲಸಹೋದರ ನೋಯೆಲ್ ಟಾಟಾಗೆ ಹಸ್ತಾಂತರಿಸಲಾಗಿದೆ.

ಏಕೆಂದು ನನಗೆ ಗೊತ್ತಿಲ್ಲ, ಆದರೆ ನಾನು ರತನ್ ಟಾಟಾ ಅವರ ಬುದ್ಧಿವಂತಿಕೆ, ಸಾಮಾಜಿಕ ಕಳಕಳಿ ಮತ್ತು ಪ್ರಾಣಿಗಳ ಬಗ್ಗೆ ಅವರಿಗಿರುವ ಸಹಾನುಭೂತಿ ('ಗೋವಾ' ಎಂಬ ಹೆಸರಿನ ಅವರ ಮುದ್ದಿನ ನಾಯಿಯೊಂದಿಗಿನ ಅವರ ಬಾಂಧವ್ಯವು ಈಗಾಗಲೇ ನಾವೆಲ್ಲಾ ಕೇಳಿದ್ದೀವಿ) ಮತ್ತು ನಿರ್ಧಾರಗಳನ್ನು ತೆಗೆದುಕೊಳ್ಳುವಲ್ಲಿ ಅವರ ಅಂತಃಪ್ರಜ್ಞೆಯ ಬಗ್ಗೆ ಓದಿದಾಗಲೆಲ್ಲಾ ನಾನು ಅಶೋಕ ಚಕ್ರವರ್ತಿ ಮತ್ತು ಮೊಘಲ್‌ರ ಅಕ್ಬರನ ಆಸ್ಥಾನಗಳನ್ನು ಅಲಂಕರಿಸಿದ ನವರತ್ನಗಳ ಬಗ್ಗೆ ನೆನಪಿಸುತ್ತೇನೆ. ಈ ಇಬ್ಬರು ಚಕ್ರವರ್ತಿಗಳು ಯಾವಾಗಲೂ ಆಡಳಿತ, ನ್ಯಾಯಾಂಗದ ವ್ಯವಸ್ಥೆ, ಯುದ್ಧ ಮತ್ತು ಶಾಂತಿಯ ವಿಷಯಗಳ ಬಗ್ಗೆ ಸಲಹೆಗಾಗಿ ಈ ಬುದ್ಧಿವಂತ ಒಂಬತ್ತು ಆಸ್ಥಾನಿಕ ಮಂತ್ರಿಗಳ ಅಭಿಪ್ರಾಯಗಳನ್ನು ಕೇಳುತ್ತಿದ್ದರು. ರತನ್ (ರತ್ನ), ಎಂಬ ನಾಮ ಸೂಚಕ ಹೆಸರಿರುವ ರತನ್ ಟಾಟಾ ಅವರು ಪ್ರಧಾನ ಮಂತ್ರಿಯ ಸಲಹೆಗಾರರ ಗುಂಪಿನಲ್ಲಿ ಇದ್ದಿದ್ದರೆ ಈ ನಮ್ಮ ದೇಶದ ಅಭಿವೃದ್ಧಿ ಮತ್ತು ಆಡಳಿತಕ್ಕೆ ಒಳಿತಾಗಬಹುದೆನಿಸುತ್ತದೆ.

ಅವರ 21 ವರ್ಷಗಳ ನಾಯಕತ್ವದಲ್ಲಿ ರತನ್ ಟಾಟಾ ಅವರು ಏನು ಸಾಧಿಸಿದ್ದಾರೆ ಎಂಬುದು ಎಲ್ಲರಿಗೂ ತಿಳಿದಿರುವ ವಿಷಯ. ವೈಯಕ್ತಿಕ ಜೀವನದಲ್ಲಿ, ಅವರು ಅವರ ನೈಜ ಸ್ವಭಾವವನ್ನು ಪ್ರತಿಬಿಂಬಿಸಿದರು. ಅವರು ತನ್ನ ಜೀವನದುದ್ದಕ್ಕೂ ಬ್ರಹ್ಮಚಾರಿಯಾಗಿಯೇ ಉಳಿದುಬಿಟ್ಟರು. ನಮ್ಮ ಜೀವನ ಸಂಗಾತಿಯನ್ನು ಸ್ವರ್ಗದಲ್ಲಿ ನಿರ್ಣಯಿಸಲಾಗುತ್ತದೆ ಎಂಬ ಮಾತಿದೆ. ಆದರೆ ರತನ್ ಟಾಟಾ ಅವರ ವಿಷಯದಲ್ಲಿ ಸ್ವರ್ಗವೂ ಅವರಿಗೆ ಸೂಕ್ತ ಜೋಡಿಯನ್ನು ಹುಡುಕುವಲ್ಲಿ ವಿಫಲವಾದಂತಿದೆ!

ಭಾರತದ ಕೈಗಾರಿಕಾ ಕ್ಷೇತ್ರದಲ್ಲಿ ಟಾಟಾ ಅವರು ಹೆಸರು ಮಹಾನ್. ವಾಸ್ತವವಾಗಿ, ಮುಂಬೈನಲ್ಲಿ (ಹಿಂದಿನ ಬಾಂಬೆ), ಜನರ ದೈನಂದಿನ ಜೀವನವನ್ನು ಟಾಟಾ ಸಂಪೂರ್ಣವಾಗಿ ಆವರಿಸಿಬಿಟ್ಟಿದೆ. ಈ ವಿಷಯ ನಮ್ಮ ಸ್ನೇಹಿತರ ನಡುವಿನ ಸಾಮಾನ್ಯ ಸಂಭಾಷಣೆಯ ಭಾಗವಾಗಿತ್ತು. ವಾಸಿಸುವ ಮನೆಗೆ ಟಾಟಾ ಸ್ಟೀಲ್ ಮತ್ತು ಸಿಮೆಂಟ್, ಬೆಳಕಿಗೆ ಟಾಟಾ ವಿದ್ಯುತ್, ಟಾಟಾ ಗ್ಯಾಸ್ (ಬಾಂಬೆಯಲ್ಲಿ ಇದನ್ನು ನೀರಿನಂತೆ ಪೈಪ್ ಮೂಲಕ ನೀಡಲಾಗುತ್ತಿತ್ತು), ಟಾಟಾ ನೀರು (ವಿತರಣೆ), ಟಾಟಾ ಟೀ, ಟಾಟಾ ಟೂತ್–ಪೇಸ್ಟ್, ಸೋಪು, ಶಾಂಪೂ, ಹೇರ್ ಆಯಿಲ್, ಪೌಡರ್, ಸುಗಂಧ ದ್ರವ್ಯ, ಟಾಟಾ ಬಟ್ಟೆ (ಜವಳಿ), ಚರ್ಮದ ಚೀಲಗಳು ಮತ್ತು ಬೂಟುಗಳು, ಟಾಟಾ ಸಿಟಿ ಬಸ್ ಸೇವೆ (ಬಾಂಬೆ ಎಲೆಕ್ಟ್ರಿಕ್ ಸಪ್ಲೈ & ಟ್ರಾನ್ಸ್‌ಪೋರ್ಟ್ ಬೆಸ್ಟ್–BEST), ತಾಜ್ ಹೋಟೆಲ್ ಕೊನೆಯಿಲ್ಲ. ಈಗ ಈ ಸನ್ನಿವೇಶವು ಬದಲಾಗಿರಬಹುದು. ಆದರೆ ಆ ಕಾಲದಲ್ಲಿ ಬೊಂಬಾಯಿಯ ಪ್ರತಿಯೊಬ್ಬರ ಜೀವನವನ್ನು ಸ್ಪರ್ಶಿಸಿದ ಪ್ರಬಲವಾದ ಕೈಗಾರಿಕಾ ಮತ್ತು ವ್ಯಾಪಾರ ಸಂಸ್ಥೆ ಅಂದರೆ ಟಾಟಾ.

ಈ ಭಾರತ–ಕೇಂದ್ರಿತ ಟಾಟಾ ವ್ಯಾಪಾರ ಮತ್ತು ಉದ್ಯಮವನ್ನು ಜಾಗತಿಕ ಉದ್ಯಮವಾಗಿ ಪರಿವರ್ತಿಸಲು ಜಾಗತಿಕವಾಗಿ ಯೋಚಿಸುವ ಸಾಮರ್ಥ್ಯವನ್ನು ರತನ್ ಟಾಟಾ ಹೊಂದಿದ್ದರು ಎಂದು ನಾವು ನೆನಪಿಸಿಕೊಳ್ಳಬೇಕು. ಅವರು ಟಾಟಾ ಟೀಗಾಗಿ ಟೆಟ್ಲಿಯನ್ನು ಸ್ವಾಧೀನಪಡಿಸಿಕೊಂಡರು, ಅವರು ಟಾಟಾ ಮೋಟಾರ್ಸ್‌ಗಾಗಿ ಜಾಗ್ವಾರ್ ಮತ್ತು ಲ್ಯಾಂಡ್ ರೋವರ್ ಅನ್ನು ಸ್ವಾಧೀನಪಡಿಸಿಕೊಂಡರು ಮತ್ತು ಅವರು ಟಾಟಾ ಸ್ಟೀಲ್‌ಗಾಗಿ ಕೋರಸ್ ಅನ್ನು ಸ್ವಾಧೀನಪಡಿಸಿಕೊಂಡರು. ಇದರಿಂದಾಗಿ ಟಾಟಾ ಒಂದು ಜಾಗತಿಕ ಉದ್ಯಮವಾಗಿ ಪರಿವರ್ತನೆಗೊಂಡಿತು. ಭಾರತದಲ್ಲಿ ಬೇರೂರಿಸಿದ ಒಂದು ಸಣ್ಣ ಹೆಜ್ಜೆಯಿಂದ ಜಾಗತಿಕ ರಂಗಕ್ಕೆ ನಿಜಕ್ಕೂ ದೈತ್ಯ ಜಿಗಿತ. ಟಾಟಾ ಜಾಗತಿಕ ಉದ್ಯಮಿಯಾಗುತ್ತಾರೆ. ಮೋದಿ ಸರ್ಕಾರವು ವಿಶ್ವ ಗುರುವಾಗಲು ಯೋಗವನ್ನು ಮಾತ್ರ ಕಲಿಸುತ್ತಿದ್ದವರು, ಇದೀಗ ಕೈಗಾರಿಕಾ ಉತ್ಪಾದನೆಯಲ್ಲಿಯೂ ವಿಶ್ವಗುರುವಾಗಲು ಯೋಚಿಸುತ್ತಿದೆ.

ಕಾರು ಓಡಿಸುವವನು ಸ್ಕೂಟರ್ ಓಡಿಸುವ ಒಬ್ಬ ಬಡವನನ್ನು ನೆನಪಿಸಿಕೊಳ್ಳುತ್ತಾನೆಯೇ? ಆದರೆ ರತನ್ ಟಾಟಾ ಅವನನ್ನು ನೆನಪಿಸಿಕೊಳ್ಳುತ್ತಿದ್ದರು. ಕೈಗೆಟಕುವ ಬೆಲೆಯಲ್ಲಿ ನಾಲ್ಕು ಚಕ್ರಗಳ ನ್ಯಾನೋ ಕಾರನ್ನು ತಯಾರಿಸಲು ನಿರ್ಧರಿಸಿದರು. ಸ್ಕೂಟರ್‌ವಾಲಾಗೆ ಒಮ್ಮೆಗೆ 1 ಲಕ್ಷ ಬೆಲೆಯ ಕಾರು ಬರೀ ಕನಸಾಗಿತ್ತು. ಆತನ ಕನಸು ನನಸು ಮಾಡಿದವರು ರತನ್ ನೇವಲ್ ಟಾಟಾ ಅವರು.

ಏನೇ ಇರಲಿ, ರತನ್ ಟಾಟಾ ಅವರು ಒಂದು ಶ್ರೀಮಂತ ಪರಂಪರೆಯನ್ನು ಬಿಟ್ಟು ಹೋಗಿದ್ದಾರೆ. ಮತ್ತು ಭಾರತವನ್ನು ಜಾಗತಿಕ ಕೈಗಾರಿಕಾ ಕ್ಷೇತ್ರದ ಧ್ರುವತಾರೆಯಾಗಿ ಮಾಡಿದ ಪ್ರವರ್ತಕರಾಗಿದ್ದಾರೆ.

ಅವರು ಇಷ್ಟಪಟ್ಟಿದ್ದರೆ, ಟಾಟಾ ಗ್ರೂಪ್ ಮತ್ತು ಟಾಟಾ ಸನ್ಸ್‌ನ ಆಜೀವ ಸಿಇಓ ಮತ್ತು ಅಧ್ಯಕ್ಷರಾಗಿ ಉಳಿಯಬಹುದಿತ್ತು. ಆದರೆ ಅವರು ಅಂತಹ ಪ್ರಲೋಭನೆಗಳಿಗಿಂತ ಮೇಲಿದ್ದವರು. 75 ವರ್ಷ ವಯಸ್ಸನ್ನು ತಲುಪಿದ ತಕ್ಷಣ ಟಾಟಾ ಗ್ರೂಪ್‌ನ ಸಿಇಓ ಹುದ್ದೆಗೆ ರಾಜೀನಾಮೆ ನೀಡಿ ಬೇರೊಬ್ಬರಿಗೆ ಅಧಿಕಾರ ಬಿಟ್ಟುಕೊಟ್ಟರು.

ಟಾಟಾ ಸನ್ಸ್‌ನಲ್ಲಿನ ನಾಯಕತ್ವದ ಬಿಕ್ಕಟ್ಟು ಮತ್ತು ನ್ಯಾಯಾಲಯದ ಮೊಕದ್ದಮೆಯು ಅವರು ಹಂಗಾಮಿ ಅಧ್ಯಕ್ಷರಾಗಿ ಮುಂದುವರಿಯಲು ಕಾರಣವಾಯಿತು. ಆದಾಗ್ಯೂ, ಅವರು 2017ರಲ್ಲಿ ಅಧಿಕಾರ ಬಿಟ್ಟುಕೊಟ್ಟರು. ವೈದಿಕ ಋಷಿಯಂತೆ ಅಂತಿಮವಾಗಿ **ನಟರಾಜನ್ ಚಂದ್ರಶೇಖರನ್** ಅವರನ್ನು ಟಾಟಾ ಸನ್ಸ್‌ನ ಅಧ್ಯಕ್ಷರನ್ನಾಗಿ ಹೆಸರಿಸಿದರು. ಅವರನ್ನು ತ್ಯಾಗಿ ಅಥವಾ ಒಬ್ಬ ಕರ್ಮಯೋಗಿ ಎನ್ನಬಹುದೇ?

ಅವರ ಜೀವನ ಪಯಣ ನಮ್ಮ ಯುವಕರ ಭವಿಷ್ಯಕ್ಕೆ ದಾರಿದೀಪವಾಗಲು ಯೋಗ್ಯವಾಗಿದೆ. ಇದರಿಂದ ಅವರು ಜೀವನದಲ್ಲಿ ಸಾಧಕರಾಗಲು ಅನೇಕ ಪಾಠಗಳನ್ನು ಕಲಿಯಬಹುದು.

ಇದೆಲ್ಲದರ ಜೊತೆಗೆ ರತನ್ ಟಾಟಾ ಅವರು, ಹಿರಿಯ ನಾಗರಿಕರಿಗಾಗಿ ಕಂಪ್ಯಾನಿಯನ್ಶಿಪ್ ಸ್ಟಾರ್ಟ್–ಅಪ್ ಅನ್ನು ಪ್ರಾರಂಭಿಸಿದರು ಎಂಬುದನ್ನು ನಾನು ಇಲ್ಲಿ ದಾಖಲಿಸಬೇಕು. ಅದರ ಹೆಸರು –ಗುಡ್‌ಫೆಲೋಸ್ (GOOD FELLOWS). ಇದು ಪ್ರಾಥಮಿಕವಾಗಿ ಅಂತರ್–ಪೀಳಿಗೆಯ ಸ್ನೇಹವನ್ನು ಉತ್ತೇಜಿಸಲು ವಿನ್ಯಾಸಗೊಳಿಸಲಾಗಿದೆ. ಅದರ ಅರ್ಥ ನನಗೆ ಗೊತ್ತಿಲ್ಲ. ಗುಡ್‌ಫೆಲೋಸ್ ಅದು ಕ್ಲಬ್ ಅಥವಾ ಹೋಮ್ ಆಗಿರಲಿ. ನನಗೆ ಅದರ ಪ್ರವೇಶ ಪಡೆಯುವ ಸಮಯ.

ಓಂ ಶಾಂತಿ ರತನ್ ನೇವಲ್ ಟಾಟಾ ಅವರಿಗೆ ಶ್ರದ್ಧಾಂಜಲಿ.

(ಮೂಲ ಇಂಗ್ಲಿಷ್ ಲೇಖನದ ಕನ್ನಡ ಅನುವಾದ)

email: voice@starofmysore.com

ಎರಡು ತಿಂಗಳ ಇಂಗ್ಲಿಷ್ ತರಬೇತಿ ಶಿಬಿರ ಉದ್ಘಾಟನೆ...



ವಿ.ಶ್ರೀನಿವಾಸ ಪ್ರಸಾದ್ ಅಭಿಮಾನಿ ಬಳಗ ಹಾಗೂ ಸಮಾನತೆ ಪ್ರಕಾಶನದ ವತಿಯಿಂದ ಮೈಸೂರಿನ ಅಶೋಕಪುರಂನ ಸರ್ಕಾರಿ ಶಾಲೆಯಲ್ಲಿ ಎರಡು ತಿಂಗಳ ಇಂಗ್ಲಿಷ್ ತರಬೇತಿ ಶಿಬಿರವನ್ನು ಉದ್ಘಾಟಿಸಲಾಯಿತು. ಈ ವೇಳೆ ಶ್ರೀಮತಿ ಪ್ರತಿಮಾ ಪ್ರಸಾದ್, ಪ್ರೊ.ನೀಲಗಿರಿ ತಳವಾರ, ಡಾ.ಕಲ್ಯಾಣಸಿರಿ ಬಂತೇಜಿ, ಮಾಜಿ ಮೇಯರ್ ಪುರುಷೋತ್ತಮ್, ಪ್ರಕಾಶಕ ಭರತ್ ರಾಮಸ್ವಾಮಿ, ಮುಖಂಡರಾದ ವಿ.ರಾಮಸ್ವಾಮಿ, ಪಲ್ಲವಿ ಬೇಗಂ, ವಿ.ಶ್ರೀನಿವಾಸ ಪ್ರಸಾದ್ ಅಭಿಮಾನಿ ಬಳಗದ ಅಧ್ಯಕ್ಷ ಪಿ.ನಂದಕುಮಾರ್, ಕಾರ್ಯದರ್ಶಿ ಡಿ.ವೆಂಕಟರಾಜು, ಎನ್.ಭಾಸ್ಕರ್ ಆರ್.ಸಿ.ಮಹೇಶ್, ಹೆಚ್.ಜಿ.ರಮೇಶ್, ಎಚ್.ಕೆ.ಅನಂತ, ಡಾ.ಮುಳ್ಳೂರು ನಂಜುಂಡಸ್ವಾಮಿ, ಸಿ.ಜಿ.ಶಿವಕುಮಾರ್, ಶಾಂತರಾಮ್ ಶೆಟ್ಟಿ, ವಕೀಲ ಕಾಂತರಾಜು, ತಿಮ್ಮಯ್ಯ ಮತ್ತಿತರರು ಹಾಜರಿದ್ದರು.

ಇದ್ದಕ್ಕಿದ್ದಂತೆ ದೇವಾಲಯಗಳು ವಕ್ಫ್ ಆಸ್ತಿಯಾಗಿದ್ದು ಹೇಗೆ?: ಪೇಜಾವರ ಶ್ರೀ

ದೇವಾಲಯಗಳನ್ನು ದೇವರ ಹೆಸರಿಗೆ ನೋಂದಣಿ ಮಾಡಬೇಕು



ದಾವಣಗೆರೆ, ನ.5– ಇದ್ದಕ್ಕಿದ್ದಂತೆ ದೇವಾಲಯಗಳು ವಕ್ಫ್ ಆಸ್ತಿಯಾಗಿದ್ದು ಹೇಗೆ ಎಂದು ಪೇಜಾವರ ಶ್ರೀಗಳು ಸರ್ಕಾರಕ್ಕೆ ಪ್ರಶ್ನಿಸಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ದೇವಾಲಯಗಳು ಇದ್ದಕ್ಕಿದ್ದಂತೆ ವಕ್ಫ್ ಆಸ್ತಿಯಾಗುತ್ತಿವೆ. ಜನರಿಗೆ ಇಷ್ಟು ಭಯ ಹಾಗೂ ಗೊಂದಲ ಉಂಟುಮಾಡುವ ಕೆಲಸ ಮಾಡಬಾರದು. ಆದಷ್ಟು ಒಳ್ಳೆಯ ಕೆಲಸಗಳನ್ನು ಮಾಡಬೇಕು ಎಂದು ಸರ್ಕಾರಕ್ಕೆ ಕಿವಿಮಾತು ಹೇಳಿದ್ದಾರೆ.

ರೈತರ ಜಮೀನು, ಮಠಗಳ ಆಸ್ತಿಯಲ್ಲಿ ವಕ್ಫ್ ಹೆಸರು ಕಾಣಿಸಿಕೊಳ್ಳುತ್ತಿದೆ. ನಮ್ಮಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಅಡಿ ಅನೇಕ ದೇವಾಲಯಗಳಿವೆ. ಮೊದಲು ಅವುಗಳ ಆಸ್ತಿ ರಕ್ಷಣೆಗೆ ಮುಂದಾಗಬೇಕು. ದೇವಸ್ಥಾನದ ಆಸ್ತಿಗಳನ್ನು ದೇವರ ಹೆಸರಿನಲ್ಲಿ ನೋಂದಣಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ನಾವು ನಮ್ಮ ದೇಶ ಎಂದು ತಿಳಿದು ಸಹ ಇಷ್ಟು ದಿನ ಸುಮ್ಮನೇ ಇದ್ದೇವೆ. ಆದ್ದರಿಂದ ಹಂತಹಂತವಾಗಿ ಆಸ್ತಿ ಪರಭಾರೆಯಾಗುತ್ತಿದೆ. ಹಾಸನದಲ್ಲಿ ಈಗ ದೇವಸ್ಥಾನದ ಆಸ್ತಿಯನ್ನು ದೇವರ ಹೆಸರಿಗೆ ಮಾಡಿಕೊಳ್ಳಲು ಮುಂದಾಗಿದ್ದಾರೆ. ಅದೇ ರೀತಿ ಎಲ್ಲಾ ಕಡೆ ಮಾಡಬೇಕು. ಪರಭಾರೆ ಮಾಡಿ ಕೊಡುವ ಕೆಲಸ ಯಾರು ಮಾಡಿದ್ದು, ಏಕೆ ಮಾಡಿದ್ದು ಎಂದು ತಿಳಿಯಬೇಕು. ಈ ವಿಚಾರದಲ್ಲಿ ತಪ್ಪು ಮಾಡಿದವರಿಗೆ ಕಾನೂನಾತ್ಮಕವಾಗಿ ಶಿಕ್ಷೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ವಕ್ಫ್ ವಿವಾದದ ವಿಚಾರವಾಗಿ, ಕೇಂದ್ರ ಸರ್ಕಾರದ ತಂಡ ರಾಜ್ಯಕ್ಕೆ ಭೇಟಿ ನೀಡಿರುವುದು ತುಂಬಾ ಒಳ್ಳೆಯ ಕೆಲಸ. ಇನ್ನು ಜಾತಿಗಣತಿ ಬಗ್ಗೆ ನಾವೇನು ಹೇಳಲು ಹೋಗುವುದಿಲ್ಲ ಎಂದಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಬಿಜೆಪಿ ಓಬಿಸಿ ಮೋರ್ಚಾದಿಂದ ಬಿ.ವೈ.ವಿಜಯೇಂದ್ರ ಜನ್ಮದಿನಾಚರಣೆ



ಮೈಸೂರಿನ ಕೆ.ಸಿ. ಬಡಾವಣೆಯಲ್ಲಿರುವ ಉದ್ಯಾನವನದಲ್ಲಿ ಗಿಡಗಳನ್ನು ನೆಟ್ಟು ನೀರೆರೆಯುವ ಮೂಲಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮೈಸೂರು, ನ.5(ಪಿಎಂ)– ರಾಜ್ಯ ಬಿಜೆಪಿ ಅಧ್ಯಕ್ಷರೂ ಆದ ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ.ವಿಜಯೇಂದ್ರ ಅವರ ಜನ್ಮದಿನದ ಪ್ರಯುಕ್ತ ಮೈಸೂರು ನಗರದ ಹಿಂದುಳಿದ ವರ್ಗಗಳ ಮೋರ್ಚಾ ವತಿಯಿಂದ ನೂರಾರು ಗಿಡಗಳನ್ನು ನೆಡಲಾಯಿತು.

ನಗರದ ಕೆ.ಸಿ. ಬಡಾವಣೆಯಲ್ಲಿರುವ ಉದ್ಯಾನವನದಲ್ಲಿ ಪರಿಸರ ಉಳಿಸುವ ನಿಟ್ಟಿನಲ್ಲಿ ಬೇವು, ಹೊಂಗೆ ಮತ್ತು ಮಾವು ಸೇರಿದಂತೆ ವಿವಿಧ ತಳಿಯ ಇನ್ನಿತರ ಗಿಡಗಳನ್ನು ನೆಟ್ಟು ನೀರೆರೆಯುವ ಮೂಲಕ ಬಿ.ವೈ.ವಿಜಯೇಂದ್ರ ಅವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಇದೇ ವೇಳೆ ಮಾತನಾಡಿದ ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾದ ಅಧ್ಯಕ್ಷ ರಘು ಕೌಟಿಲ್ಯ, ಬಿ.ವೈ. ವಿಜಯೇಂದ್ರ ಅವರ ಆಶಯದಂತೆ ಯಾವುದೇ ಆಡಂಬರ ವಿಲ್ಲದೆ ಪರಿಸರ ಉಳಿಸುವ ನಿಟ್ಟಿನಲ್ಲಿ ಗಿಡಗಳನ್ನು ನೆಟ್ಟು ಅವರ ಜನ್ಮದಿನ ಆಚರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇದೇ ರೀತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದ್ದು, ಸುಮಾರು 60 ಸಾವಿರ ಗಿಡಗಳನ್ನು ನೆಡುಸುವ ಮೂಲಕ ಹಿಂದುಳಿದ ವರ್ಗಗಳ ಮೋರ್ಚಾ ಸಮಾಜಕ್ಕೆ ಒಳ್ಳೆಯ ಸಂದೇಶ ಕೊಡುತ್ತಿದೆ. ಈ ರೀತಿಯ ಸಾಮಾಜಿಕ ಕಳಕಳಿ ಪ್ರಸ್ತುತಕ್ಕೆ ಮಾತ್ರವಲ್ಲದೆ, ಮುಂದಿನ ಪೀಳಿಗೆಗೂ ಅನುಕೂಲವಾಗಲಿದೆ ಎಂದರು.

ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ನಗರಾಧ್ಯಕ್ಷ ಮೈ.ಪು.ರಾಜೇಶ್, ನಗರ ಪ್ರಧಾನ ಕಾರ್ಯದರ್ಶಿ ಗಿರಿಧರ್, ಕೆ.ಆರ್. ಕ್ಷೇತ್ರದ ಅಧ್ಯಕ್ಷ ರಘು ಅರಸ್, ನಗರ ಪಾಲಿಕೆ ಮಾಜಿ ಸದಸ್ಯೆ ಛಾಯಾದೇವಿ, ಬಿಜೆಪಿ ಮುಖಂಡರಾದ ಹರೀಶ್, ಕೆ.ಜೆ.ರಮೇಶ್, ಬಾಬಣ್ಣ ಪ್ರಸನ್ನ, ಉಪೇಂದ್ರ, ಗಿರೀಶ್, ಸತೀಶ್, ಗೋಕುಲ್ ಗೋವರ್ಧನ್, ಚಂದ್ರು, ನಂದಾ ಸಿಂಗ್, ರವಿಶಂಕರ್, ಕೃಷ್ಣ, ಜಗದೀಶ್ ಮತ್ತಿತರರು ಹಾಜರಿದ್ದರು.

ಎಚ್‌ಡಿ ಕುಮಾರಸ್ವಾಮಿ, ನಿಖಿಲ್ ವಿರುದ್ಧ ಎಫ್‌ಐಆರ್

ಬೆಂಗಳೂರು, ಟಿ. 5– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಮೂವರ ವಿರುದ್ಧ ಸಂಜಯನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.



ಲೋಕಾಯುಕ್ತ ಎಸ್‌ಐಟಿ ವಿಭಾಗದ ಮುಖ್ಯಸ್ಥ, ಎಡಿಜಿಪಿ ಚಂದ್ರಶೇಖರ್ ಅವರು ನೀಡಿದ ದೂರು ಆಧರಿಸಿ ಎಫ್‌ಐಆರ್ ದಾಖಲಾಗಿದೆ. ಈ ಹಿಂದೆ ಚಂದ್ರಶೇಖರ್ ನೀಡಿದ ದೂರು ಆಧರಿಸಿ ಎನ್‌ಸಿಆರ್ ದಾಖಲಿಸಿಕೊಂಡಿದ್ದ ಪೊಲೀಸರು, ಈಗ 42ನೇ ಎಸಿಎಂಎಂ ನ್ಯಾಯಾಲಯದ ಆದೇಶದ ಮೇರೆಗೆ ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ.


ಕುಮಾರಸ್ವಾಮಿ ಅವರು ಈ ಹಿಂದೆ ಪತ್ರಿಕಾಗೋಷ್ಠಿ ನಡೆಸಿ, ನನ್ನ ವಿರುದ್ಧ ಸುಳ್ಳು ಹಾಗೂ ದುರುದ್ದೇಶಪೂರಿತ ಆರೋಪ ಮಾಡಿದ್ದರು. ಬೆದರಿಕೆ ಹಾಕಿದ್ದರು. ಕರ್ನಾಟಕ ರಾಜ್ಯ ಕೇಡರ್‌ನಿಂದ ಬೇರೆ ರಾಜ್ಯಕ್ಕೆ ಕಳುಹಿಸುವುದಾಗಿ ಬೆದರಿಸಿದ್ದರು. ನನ್ನ ಕುಟುಂಬದ ವಿರುದ್ಧವೂ ಸುಳ್ಳು ಆಪಾದನೆ ಮಾಡಿದ್ದರು ಎಂದು ಚಂದ್ರಶೇಖರ್ ದೂರು ನೀಡಿದ್ದರು. ಅದನ್ನು ಆಧರಿಸಿ ಕುಮಾರಸ್ವಾಮಿ, ನಿಖಿಲ್ ಹಾಗೂ ಅವರ ಆಪ್ತ ಸುರೇಶ್ ಬಾಬು ವಿರುದ್ಧ ಎಫ್‌ಐಆರ್ ದಾಖಲು ಮಾಡಿಕೊಳ್ಳಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಎಫ್‌ಐಆರ್ ಹಾಸ್ಯಾಸ್ಪದ: ಐಪಿಎಸ್ ಅಧಿಕಾರಿಯೊಬ್ಬರ ದೂರಿನ ಮೇರೆಗೆ ನನ್ನ ವಿರುದ್ಧ ಪೊಲೀಸರು ದಾಖಲು ಮಾಡಿರುವ ಎಫ್‌ಐಆರ್ ಹಾಸ್ಯಾಸ್ಪದ, ದುರುದ್ದೇಶಪೂರಿತ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ಎಫ್‌ಐಆರ್ ಪ್ರತಿಯಲ್ಲಿರುವ ದೂರಿನ ಸಾರಾಂಶ ಓದಿದ್ದು, ದೂರು ಸಂಪೂರ್ಣ ಹಾಸ್ಯಾಸ್ಪದ ಹಾಗೂ ದುರುದ್ದೇಶಪೂರಿತವಾಗಿದೆ, ದೂರುದಾರರೇ ಹೇಳಿಕೊಂಡಿರುವಂತೆ, ಕುಮಾರಸ್ವಾಮಿ ಅವರು ಮಾಧ್ಯಮ ಗೋಷ್ಠಿ ಮಾಡಿ ನನ್ನ ವಿರುದ್ಧ ಆರೋಪ ಮಾಡಿದ್ದು ಕ್ರಮ ಕೈಗೊಳ್ಳಿ ಎಂದಿದ್ದಾರೆ. ನಾನು ಅವರ ಬಗ್ಗೆ ತಪ್ಪು ಮಾಹಿತಿ ನೀಡಿದ್ದೇನೆ ಎಂಬುದಾಗಿ ಆರೋಪಿಸಿದ್ದಾರೆ, ಬೇಕಿದ್ದರೆ ನನ್ನ ಮಾಧ್ಯಮ ಗೋಷ್ಠಿಯ ವಿಡಿಯೊ ನೋಡಿಕೊಳ್ಳಲಿ ಎಂದರು.

ನಾಳೆ ಹುಬ್ಬಳ್ಳಿ, ವಿಜಯಪುರಕ್ಕೆ ಜೆಪಿಸಿ ಅಧ್ಯಕ್ಷ ಜಗದಾಂಬಿಕಾ ಪಾಲ್ ಭೇಟಿ, ರೈತರೊಂದಿಗೆ ಸಂವಾದ

ಬೆಂಗಳೂರು, ನ.5– ವಕ್ಫ್(ತಿದ್ದುಪಡಿ) ಮಸೂದೆ 2024ರ ಜಂಟಿ ಸಂಸದೀಯ ಸಮಿತಿ ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರು ನವೆಂಬರ್ 7 ರಂದು ಹುಬ್ಬಳ್ಳಿ ಮತ್ತು ವಿಜಯಪುರಕ್ಕೆ ಭೇಟಿ ನೀಡಿ, ರೈತರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಮಂಗಳವಾರ ತಿಳಿಸಿದ್ದಾರೆ.

ವಕ್ಫ್ ಭೂ ವಿವಾದ ಸಂಬಂಧ ವಿಜಯಪುರ ಜಿಲ್ಲೆಯ ರೈತರನ್ನು ಭೇಟಿ ಮಾಡಿ, ಚರ್ಚಿಸುವಂತೆ ತೇಜಸ್ವಿ ಸೂರ್ಯ ಅವರು ಪಾಲ್ ಅವರಿಗೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಅವರು ಹುಬ್ಬಳ್ಳಿ ಮತ್ತು ವಿಜಯಪುರಕ್ಕೆ ಭೇಟಿ ನೀಡುತ್ತಿದ್ದಾರೆ. ವಕ್ಫ್ ಅತಿಕ್ರಮಣದಿಂದ ಸಂತ್ರಸ್ತರಾದ ರೈತರೊಂದಿಗೆ ಸಂವಾದ



ನಡೆಸಲು ನ.7 ರಂದು ಹುಬ್ಬಳ್ಳಿ ಮತ್ತು ವಿಜಯಪುರಕ್ಕೆ ಭೇಟಿ ನೀಡುವಂತೆ ನಾನು ಮಾಡಿದ್ದ ಮನವಿಗೆ ಜೆಪಿಸಿ ಅಧ್ಯಕ್ಷರು ಒಪ್ಪಿಗೆ ನೀಡಿದ್ದಾರೆ ಎಂದರು.

ಜೆಪಿಸಿ ಅಧ್ಯಕ್ಷರು ರೈತ ಸಂಘಟನೆಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಮಠಾಧೀಶರು ಮತ್ತು ಇತರರು ನೀಡಿದ ಮನವಿಗಳನ್ನು ಜೆಪಿಸಿ ಮುಂದೆ ಇಡಲಾಗುವುದು ಎಂದು ಸಂಸದ ತೇಜಸ್ವಿ ಸೂರ್ಯ ಹೇಳಿದ್ದಾರೆ.

ರೈತರು ಸುಮಾರು ಒಂದು ಶತಮಾನದಿಂದ ತಮ್ಮ ಜಮೀನುಗಳನ್ನು ಸಾಗುವಳಿ ಮಾಡುತ್ತಿದ್ದಾರೆ. ಆದರೆ ಇತ್ತೀಚಿನ ತಿಂಗಳುಗಳಲ್ಲಿ ಅವರಲ್ಲಿ ಹಲವರಿಗೆ ಯಾವುದೇ ದಾಖಲೆ ಅಥವಾ ವಿವರಣೆಯಿಲ್ಲದೆ ಅವರ ಭೂಮಿಯನ್ನು ವಕ್ಫ್ ಆಸ್ತಿ ಎಂದು ಘೋಷಿಸಲು ನೋಟಿಸ್ ನೀಡಲಾಗಿದೆ ಎಂದು ಬಿಜೆಪಿ ಸಂಸದ ದೂರಿದ್ದಾರೆ. ವಕ್ಫ್ ಅತಿಕ್ರಮಣ ಮಾಡಿದ ಆಸ್ತಿಯ ಪ್ರಮಾಣವು ಗಣನೀಯವಾಗಿದೆ. ಸುಮಾರು 1,500 ಎಕರೆ ಆಸ್ತಿಯನ್ನು ಅವರ ಹಳ್ಳಿಯಲ್ಲಿಯೇ ವಕ್ಫ್ ಆಸ್ತಿ ಎಂದು ಗೊತ್ತುಪಡಿಸಲಾಗಿದೆ" ಎಂದು ಪಾಲ್‌ಗೆ ಬರೆದ ಪತ್ರದಲ್ಲಿ ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ.

ಅಮೃತಾಕ್ಷಿಗೆ ಪಿಹೆಚ್.ಡಿ

ಮೈಸೂರು, ನ.5–ಡಾ. ಎನ್.ಎಂ. ತಳವಾರ ಅವರ ಮಾರ್ಗದರ್ಶನದಲ್ಲಿ ಜಿ. ಅಮೃತಾಕ್ಷಿ ಅವರು ಕನ್ನಡ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ದೇವಾಲಯಕ್ಕೆ ಬಂದು ಕ್ಷಮೆಯಾಚಿಸು, ಇಲ್ಲವೇ 5 ಕೋಟಿ ರೂ. ಪಾವತಿಸು

ನಟ ಸಲ್ಮಾನ್ ಖಾನ್‌ಗೆ ಲಾರೆನ್ಸ್ ಬಿಷ್ಣೋಯ್ ಸಹೋದರನಿಂದ ಬೆದರಿಕೆ

ಮುಂಬೈ: ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್‌ನಿಂದ ಕೊಲೆ ಬೆದರಿಕೆಗಳನ್ನು ಎದುರಿಸುತ್ತಿರುವ ಬಾಲಿವುಡ್ ನಟ ಸಲ್ಮಾನ್ ಖಾನ್ ಅವರಿಗೆ ಇದೀಗ ಲಾರೆನ್ಸ್ ಬಿಷ್ಣೋಯ್ ಸಹೋದರ ಕೂಡ ಬೆದರಿಕೆ ಹಾಕಿದ್ದಾನೆ. ಸೋಮವಾರ ತಡರಾತ್ರಿ ವರ್ಲಿ ಪ್ರದೇಶದಲ್ಲಿರುವ ಮುಂಬೈ ಸಂಚಾರ ಪೊಲೀಸ್ ನಿಯಂತ್ರಣ ಕೊಠಡಿಗೆ ಕರೆ ಬಂದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಸಲ್ಮಾನ್ ಖಾನ್ ದೇವ ಸ್ಥಾನಕ್ಕೆ ಹೋಗಿ ತಪ್ಪಾಯ್ತು ಎಂದು ಕ್ಷಮೆ ಕೇಳಬೇಕು ಅಥವಾ 5 ಕೋಟಿ ರೂ. ಕೊಡಬೇಕು. ಈ ರೀತಿ ಮಾಡದಿದ್ದರೆ ನಾವು ಅವರನ್ನು ಕೊಲೆ ಮಾಡುತ್ತೇವೆ, ನಮ್ಮ ಗ್ಯಾಂಗ್ ಇನ್ನೂ ಸಕ್ರಿಯವಾಗಿದೆ ಎಂದು ತಿಳಿಸಲಾಗಿದೆ ಎಂದು ತಿಳಿಸಿದ್ದಾರೆ. ಬೆದರಿಕೆ ಹಾಕಿರುವ ವ್ಯಕ್ತಿ ಲಾರೆನ್ಸ್ ಬಿಷ್ಣೋಯ್ ಸಹೋದರ ಎಂದು ಹೇಳಿಕೊಂಡಿದ್ದಾನೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಬೆದರಿಕೆ ಸಂಬಂಧ ಅಧಿಕಾರಿಗಳು ಅಪರಿಚಿತ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.



ಅ.30ರಂದು ಅಪರಿಚಿತ ವ್ಯಕ್ತಿಯೋರ್ವ ಮುಂಬೈ ಟ್ರಾಫಿಕ್ ಪೊಲೀಸರಿಗೆ ಕರೆ ಮಾಡಿ 2 ಕೋಟಿ ರೂ. ಕೊಡದಿದ್ದರೆ ಸಲ್ಮಾನ್ ಖಾನ್‌ರನ್ನು ಕೊಲೆ ಮಾಡುತ್ತೇವೆ ಎಂದು ಬೆದರಿಕೆ ಹಾಕಿದ್ದರು. ಬೆದರಿಕೆ ಸಂದೇಶ ಬಂದ ನಂತರ ಮುಂಬೈನ ವರ್ಲಿ ಜಿಲ್ಲೆಯ ಪೊಲೀಸರು ಅಪರಿಚಿತ ವ್ಯಕ್ತಿ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದರು.

ಎಲ್ಲಾ ಖಾಸಗಿ ಆಸ್ತಿಗಳನ್ನು ಸ್ವಾಧೀನಪಡಿಸಿಕೊಳ್ಳಲು ರಾಜ್ಯಗಳಿಗೆ ಅಧಿಕಾರವಿಲ್ಲ ಸುಪ್ರೀಂಕೋರ್ಟ್ ಆದೇಶ

ನವದೆಹಲಿ,ನ.5– ಖಾಸಗಿ ಆಸ್ತಿಗಳ ಸ್ವಾಧೀನಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಂಗಳವಾರ ಮಹತ್ವದ ಆದೇಶ ನೀಡಿದ್ದು, ಎಲ್ಲಾ ಖಾಸಗಿ ಆಸ್ತಿಗಳನ್ನು ಸಮುದಾಯದ ಭೌತಿಕ ಸಂಪನ್ಮೂಲ ಎಂದು ಸರ್ಕಾರ ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದೆ. ಖಾಸಗಿ ಆಸ್ತಿಯು ಸಮುದಾಯದ ಭೌತಿಕ ಸಂಪನ್ಮೂಲಗಳ ಭಾಗವಾಗಿರಬಹುದು. ಆದರೆ ವ್ಯಕ್ತಿಯ ಒಡೆತನದ ಪ್ರತಿಯೊಂದು ಸಂಪನ್ಮೂಲವು ಸಮುದಾಯದ ಭೌತಿಕ ಸಂಪನ್ಮೂಲಗಳ ಭಾಗವಾಗಿರುವುದು ಅನಿವಾರ್ಯವಲ್ಲ.



ಸಮುದಾಯದ ಒಳಿತಿಗಾಗಿ ಕೆಲವು ಖಾಸಗಿ ಆಸ್ತಿಗಳನ್ನು ಸರ್ಕಾರ ಸ್ವಾಧೀನಪಡಿಸಿಕೊಳ್ಳಬಹುದಾದರೂ, ವ್ಯಕ್ತಿಯ ಒಡೆತನದ ಆಸ್ತಿಯನ್ನು ಸಾರ್ವಜನಿಕ ಆಸ್ತಿ ಎಂದು ಪರಿಗಣಿಸಲಾಗುವುದಿಲ್ಲ. ಯಾವುದೇ ಸರ್ಕಾರ ಖಾಸಗಿ ಆಸ್ತಿಯನ್ನು ಬಲವಂತವಾಗಿ ತೆಗೆದುಕೊಳ್ಳಲು ಬರಲ್ಲ. ಕೆಲವು ಖಾಸಗಿ ಆಸ್ತಿಗಳು ಸಮುದಾಯದ ಆಸ್ತಿಯಾಗಿರಬಹುದು. ಅದನ್ನು ಸಮಾಜದ ಒಳಿತಿಗಾಗಿ ಸರ್ಕಾರವು ಸ್ವಾಧೀನಪಡಿಸಿಕೊಳ್ಳಬಹುದು ಎಂದು ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ಒಂಬತ್ತು ನ್ಯಾಯಾಧೀಶರ ಪೀಠವು ಮಂಗಳವಾರ ತೀರ್ಪು ನೀಡಿದ್ದು, ಇದರ ಜೊತೆಯಲ್ಲಿಯೇ ಸಂವಿಧಾನದ 39 ಬಿ ವಿಧಿಯ ಅಡಿಯಲ್ಲಿ ವ್ಯಕ್ತಿಯ ಒಡೆತನದ ಖಾಸಗಿ ಆಸ್ತಿಯನ್ನು ಸಾರ್ವಜನಿಕ ಆಸ್ತಿ ಎಂದು ಪರಿಗಣಿಸಲಾಗುವುದಿಲ್ಲ ಎಂದು ಒಂಬತ್ತು ನ್ಯಾಯಾಧೀಶರ ಪೀಠ ಹೇಳಿದೆ.

ಮೈಸೂರು ಮಿತ್ರ

ಬುಧವಾರ 6 ನವೆಂಬರ್ 2024

ಸಾಲ ಬಾಧೆ ತಾಳಲಾರದೆ ನೇಣಿಗೆ ಶರಣಾದ ರೈತ



ಪಾಂಡವಪುರ: ಸಾಲದ ಬಾಧೆ ತಾಳಲಾರದೆ ರೈತ ನೋರ್ವ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಾಲೂಕಿನ ಸುಂಕಾತೊಣ್ಣೂರು ಗ್ರಾಮದಲ್ಲಿ ಬೆಳಿಗ್ಗೆ ನಡೆದಿದೆ.

ಗ್ರಾಮದ ವಾಸಿ ರೈತ ಸೋಮಶೇಖರ್ (35) ಮೃತ ನತದೃಷ್ಟ, ಮೃತ ರೈತ ಸೋಮಶೇಖರ್ ಅವರ ತಂದೆ ನಿಂಗೇಗೌಡ ಅವರಿಗೆ ಐವರು ಗಂಡುಮಕ್ಕಳಿದ್ದು ಇವರ ಹೆಸರಿನಯಲ್ಲಿ 30ಗುಂಟೆ ಜಮೀನಿದೆ. ಮೃತ ಸೋಮಶೇಖರ್ ಕೊನೆಯ ಮಗನಾಗಿದ್ದು ಅವಿವಾಹಿತನಾಗಿದ್ದ, ಕೃಷಿ ಬೇಸಾಯಕ್ಕಾಗಿ ಕೃಷಿಪತ್ತಿನ ಸಹಕಾರ ಸಂಘ ಸೇರಿದಂತೆ ವಿವಿಧ ಬ್ಯಾಂಕ್‌ಗಳಲ್ಲಿ ಲಕ್ಷಾಂತರ ರೂ. ಸಾಲ ಸೇರಿದಂತೆ ಸಾಕಷ್ಟು ಕೈಸಾಲ ಮಾಡಿಕೊಂಡಿದ್ದರು ಎನ್ನಲಾಗಿದೆ. ಅಲ್ಲದೆ ಖಾಸಗಿ ಕಂಪನಿಯಿಂದ ಸಾಲದ ಮೇಲೆ ಟ್ರ್ಯಾಕ್ಟರ್ ಸಹ ಖರೀದಿಸಿದ್ದರು.

ಕೃಷಿಯ ಜತೆಗೆ ಟ್ರ್ಯಾಕ್ಟರ್ ಕೆಲಸ ಮಾಡಿಕೊಂಡು ಜೀವನ ನಿರ್ವಹಣೆ ಮಾಡುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಸಾಲಗಾರರ ಒತ್ತಡ ಹೆಚ್ಚಾದ ಹಿನ್ನೆಲೆಯಲ್ಲಿ ಒತ್ತಡ ತಾಳಲಾರದೆ ಮಂಗಳವಾರ ಬೆಳಿಗ್ಗೆ ಗ್ರಾಮದ ಹೊರವಲಯದ ಜಮೀನಿ ಬಳಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಅಕ್ಕಪಕ್ಕದ ಜಮೀನಿನವರು ನೋಡಿ ಕುಟುಂಬಸ್ಥರಿಗೆ ಮಾಹಿತಿ ಮುಟ್ಟಿಸಿದ್ದಾರೆ.

ವಿಷಯ ತಿಳಿದ ಮೇಲುಕೋಟೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ, ಮೃತ ದೇಹವನ್ನು ಪಾಂಡವಪುರ ಪಟ್ಟಣದ ಶವಾಗಾರಕ್ಕೆ ರವಾನಿಸಿ ಶವಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಿದರು. ವಿಷಯ ತಿಳಿದ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಜಿಪಂ ಮಾಜಿ ಸದಸ್ಯ ಸಿ.ಅಶೋಕ್ ಅವರು ಆಸ್ಪತ್ರೆಯ ಶವಾಗಾರದ ಬಳಿಗೆ ಆಗಮಿಸಿ ಅಂತಿಮ ದರ್ಶನ ಪಡೆದು ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಬಳಿಕ ಗ್ರಾಮದ ಹೊರವಲಯದ ಜಮೀನಿನಲ್ಲಿ ಅಂತ್ಯಸಂಸ್ಕಾರ ನೆರವೇರಿಸಲಾಯಿತು. ಘಟನೆ ಸಂಬಂಧ ಮೃತ ಸೋದರ ರಮೇಶ್ ಅವರು ನೀಡಿದ ದೂರಿನ ಮೇರೆಗೆ ಮೇಲುಕೋಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಸಿ.ಪಿ.ಯೋಗೇಶ್ವರ್ ಗೆಲುವು ನಿಶ್ಚಿತ

ಮೆಣಸಗೆರೆ ಸರ್ಕಾರಿ ಶಾಲೆಯ ಕೊಠಡಿಗಳ ಅಭಿವೃದ್ಧಿ ಕಾಮಗಾರಿಗೆ ಮಧು ಜಿ.ಮಾದೇಗೌಡ ಗುದ್ದಲಿ ಪೂಜೆ

ಭಾರತೀನಗರ, ನ.5– ಚನ್ನಪಟ್ಟಣದ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಗೆಲುವು ನಿಶ್ಚಿತವಾಗಿದ್ದು, ಜನತೆ ಅವರಿಗೆ ಈ ಬಾರಿ ಆಶೀರ್ವಾದ ಮಾಡಲಿದ್ದಾರೆ ಎಂದು ಶಾಸಕ ಮಧು ಜಿ.ಮಾದೇಗೌಡ ತಿಳಿಸಿದರು.

ಇಲ್ಲಿಗೆ ಸಮೀಪದ ಮೆಣಸಗೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕೊಠಡಿಗಳ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ನಮ್ಮ ಮದ್ದೂರಿನ ಪಕ್ಕದ ಕ್ಷೇತ್ರವಾಗಿರುವ ಚನ್ನಪಟ್ಟಣಕ್ಕೆ ಮದ್ದೂರು ಕ್ಷೇತ್ರದಿಂದ ಬಹಳಷ್ಟು ಸಂಬಂಧಗಳು ಬೆಳೆದಿವೆ. ಜೊತೆಗೆ ನಮ್ಮ ವಿದ್ಯಾಸಂಸ್ಥೆಯಲ್ಲಿ ಬಹಳಷ್ಟು ವಿದ್ಯಾರ್ಥಿಗಳು ಚನ್ನಪಟ್ಟಣ ಕ್ಷೇತ್ರದಿಂದ ಬಂದು ವಿದ್ಯಾಭ್ಯಾಸವನ್ನು ಪಡೆದುಕೊಂಡಿದ್ದಾರೆ. ಹಾಗಾಗಿ ಅಂತಹವರನ್ನು ಈಗಾಗಲೇ ನಮ್ಮ ಕಾರ್ಯಕರ್ತರು ಸಂಪರ್ಕಿಸಿದ್ದಾರೆ. ಸಿ.ಎಂ.ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವಾರು ಕಾಂಗ್ರೆಸ್ ಪಕ್ಷದ ವರಿಷ್ಠರುಗಳು ಸಿ.ಪಿ.ಯೋಗೇಶ್ವರ್ ಅವರ ಗೆಲುವಿಗಾಗಿ ಶ್ರಮಿಸುತ್ತಿದ್ದಾರೆ. ಹಾಗಾಗಿ ಅವರ ಗೆಲುವು ನಿಶ್ಚಿತ ಎಂದು ತಿಳಿಸಿದರು.

ನಮ್ಮ ಕುಟುಂಬದಿಂದ ಈ ಗ್ರಾಮಕ್ಕೆ ವಿಶೇಷ ಗೌರವ: ಈ ಗ್ರಾಮದ ಶಾಲೆಯ ಅಭಿವೃದ್ಧಿಗಾಗಿ ನನ್ನ ಅನುದಾನದಲ್ಲಿ 4 ಲಕ್ಷ ಹಣ ನೀಡಿದ್ದೇನೆ. ಗ್ರಾಮದಲ್ಲಿ ಉತ್ತಮ ಶಾಲೆಯಾಗಿ ಕಳೆದ 40 ವರ್ಷಗಳಿಂದ ಹೊರಹೊಮ್ಮಿದೆ. ಹಾಗಾಗಿ ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದರು.



ಮೆಣಸಗೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕೊಠಡಿಗಳ ಅಭಿವೃದ್ಧಿ ಕಾಮಗಾರಿಗೆ ಶಾಸಕ ಮಧು ಜಿ.ಮಾದೇಗೌಡ ಗುದ್ದಲಿಪೂಜೆ ನೆರವೇರಿಸಿದರು.

ಈ ಹಿಂದೆಯೂ ಸಹ ಮೆಣಸಗೆರೆ ಗ್ರಾಮದ ಅಭಿವೃದ್ಧಿಗಾಗಿ ಸಾಕಷ್ಟು ಅನುದಾನವನ್ನು ನೀಡಿದ್ದೇನೆ. ನಮ್ಮ ತಂದೆ ಜಿ.ಮಾದೇಗೌಡರು ಈ ಗ್ರಾಮಕ್ಕೆ ಬಹಳ ವಿಶೇಷ ಗೌರವವನ್ನು ನೀಡುತ್ತಿದ್ದರು. ನನ್ನ ಪುತ್ರ ಆಶಯ್‌ಮಧು ಅವರು ಸಹ ಈ ಶಾಲೆಗೆ ಕೈಲಾದ ಸಹಾಯ ಮಾಡಿದ್ದಾರೆ. ಇದಕ್ಕೆ ನಿಮ್ಮ ಪ್ರೀತಿ ವಿಶ್ವಾಸವೇ ಕಾರಣವಾಗಿತ್ತು. ಮುಂದೆಯೂ ಸಹ ಇದೇ ಪ್ರೀತಿ ವಿಶ್ವಾಸ ಇರಲಿ ಎಂದು ಕೋರಿದರು.

ಇದೇ ವೇಳೆ ಗ್ರಾಮದ ವತಿಯಿಂದ ಶಾಸಕ ಮಧು ಜಿ.ಮಾದೇಗೌಡ ಅವರನ್ನು ಶಾಲುಹೊದಿಸಿ, ಭಾರಿ ಗಾತ್ರದ ಹೂವಿನ ಹಾರ ಹಾಕಿ ಅಭಿನಂದಿಸಿ, ಗೌರವಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಕಾರ್ಯಪಾಲಕ ಅಭಿಯಂತರ ಬಿ.ಬಸವರಾಜೇಗೌಡ, ತಾಪಂ ಮಾಜಿ ಸದಸ್ಯ ಬಿ.ಗಿರೀಶ್, ಭರತೇಶ್, ಮುಖಂಡರಾದ ಮಣಿಗೆರೆ ಕಬ್ಬಾಳಯ್ಯ, ಎಸ್‌ಡಿಎಂಸಿ ಅಧ್ಯಕ್ಷ ಸೋಮು, ಮುಖ್ಯಶಿಕ್ಷಕಿ ಎಂ.ಎಸ್. ಮಮತ, ರಾಜು, ಶ್ರೀನಿವಾಸ್, ಮಧುಸೂಧನ್, ರವೀಂದ್ರ ಜಯರಾಮು, ಆಲೂರಯ್ಯ, ನಂಜುಂಡಸ್ವಾಮಿ, ಸತೀಶ್, ರಾಜೇಗೌಡ, ಜೈಕೃಷ್ಣ, ಮುನಿಯ, ಬಸವರಾಜು ಇತರರಿದ್ದರು.

ಹೊಳೆ ಆಂಜನೇಯ ದೇಗುಲದಲ್ಲಿ ಒಂದು ಕಾಲು ರೂ. ಹರಕೆ ಹೊತ್ತ ಯೋಗೇಶ್ವರ್

ಮದ್ದೂರು: ನೆರೆಯ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಸಿ.ಪಿ.ಯೋಗೇಶ್ವರ್ ಸೋಮವಾರ ಪ್ರಾತಃಕಾಲ ಮದ್ದೂರು ಪಟ್ಟಣದ ಹೊರವಲಯದ ಶಿಂಷಾ ನದಿ ದಡದ ಐತಿಹಾಸಿಕ ಹೊಳೆ ಆಂಜನೇಯ ದೇವಾಲಯಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸುವ ಜತೆಗೆ ಒಂದುಕಾಲು ರೂ.ಗಳ ಹರಕೆ ಹೊತ್ತರು.

ಸೋಮವಾರ ಬೆಳ್ಳಂಬೆಳಿಗ್ಗೆ 6.45ಕ್ಕೆ ಹೊಳೆ ಆಂಜನೇಯ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದ ಸಿ.ಪಿ.ಯೋಗೇಶ್ವರ್ ಅಭಿಷೇಕ ಪುಷ್ಪಾಲಂಕಾರ, ಮಹಾಮಂಗಳಾರತಿ ಬಳಿಕ ತೀರ್ಥಪ್ರಸಾದ ಸ್ವೀಕರಿಸಿ ಪ್ರಸ್ತುತ ಚುನಾವಣೆ ವೇಳೆ ಗೆಲುವಿಗಾಗಿ ಪ್ರಾರ್ಥಿಸಿ ಕ್ಷೇತ್ರದ ಸಂಪ್ರದಾಯದಂತೆ ಒಂದುಕಾಲು ರೂ.ಗಳ ಹರಕೆ ಹೊತ್ತರು.

ಪತ್ನಿ ಸಲಹೆ ಮೇರೆಗೆ ಕ್ಷೇತ್ರಕ್ಕೆ ಭೇಟಿ: ಬಹುದಿನಗಳಿಂದ ಹೊಳೆ ಆಂಜನೇಯ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಬೇಕೆಂಬ ಮಹಾದಾಸೆ ಇತ್ತಾದರೂ ಅದು ಸಾಧ್ಯವಾಗಿರಲಿಲ್ಲ. ತಮ್ಮ ಪತ್ನಿ ಒಮ್ಮೆ ಭೇಟಿ ನೀಡುವಂತೆ ನೀಡಿದ ಸಲಹೆ ಮೇರೆಗೆ ಇಂದು ದರ್ಶನ ಪಡೆದಿರುವುದಾಗಿ ಹೇಳಿದರು.



ಚುನಾವಣೆ ಜಂಜಾಟದಲ್ಲಿ ಜನರ ಮಧ್ಯೆ ಇದ್ದ ತಾವು ಹೊಳೆ ಆಂಜನೇಯಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ದರ್ಶನ ಪಡೆದ ಬಳಿಕ ಮಾನಸಿಕವಾಗಿ ಶಕ್ತಿ ವೃದ್ಧಿಯಾದ ಅನುಭವವಾಗಿದೆ. ಚುನಾವಣೆ ಮುಗಿದ ಬಳಿಕವೂ ಕ್ಷೇತ್ರಕ್ಕೆ ಭೇಟಿ ನೀಡುವುದಾಗಿ ತಿಳಿಸಿದರು.

ಕಳೆದ ಒಂದು ವಾರದ ಹಿಂದೆ ಮದ್ದೂರು ಶಾಸಕ ಕೆಎಂ.ಉದಯ್ ಅವರ ಪತ್ನಿ ವಿನುತಾ ಮತ್ತು ಚನ್ನಪಟ್ಟಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಅವರ ಪತ್ನಿ ಶೀಲಾ ಯೋಗೇಶ್ವರ್ ಜೊತೆಗೂಡಿ ಹೊಳೆ ಆಂಜನೇಯ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದನ್ನು ಸ್ಮರಿಸಬಹುದು.

ನ.7,8ರಂದು ಮಂಚಮ್ಮ ದೇವಿ ದೇವಸ್ಥಾನ ಲೋಕಾರ್ಪಣೆ

10 ಸಾವಿರ ಮಂದಿಗೆ ಅನ್ನಸಂತರ್ಪಣೆ, ದೇವಾಲಯ ಲೋಕಾರ್ಪಣೆಗೆ ಚುಂಚಶ್ರೀ, ಸುತ್ತೂರುಶ್ರೀ ಆಗಮನ

ಮಂಡ್ಯ,ನ.5– ನಗರದ ಕಲ್ಲಹಳ್ಳಿ ಹಾಗೂ ವಿ.ವಿ.ನಗರ ನಿವಾಸಿಗಳ ಆರಾಧ್ಯದೇವತೆ ಶ್ರೀ ಮಂಚಮ್ಮ ದೇವಿಯ ನೂತನ ದೇವಾಲಯದ ಲೋಕಾರ್ಪಣೆ ಸಮಾರಂಭ ನ.7 ಮತ್ತು 8ರಂದು ನಡೆಯಲಿದೆ ಎಂದು ದೇವಸ್ಥಾನ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಕೆ.ಎಸ್.ಆನಂದ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು 80 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಾಣವಾಗಿರುವ ದೇವಾಲಯಕ್ಕೆ ಧರ್ಮಸ್ಥಳದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಡೆ ಅವರು ಎರಡೂವರೆ ಲಕ್ಷ ರೂ.ಗಳ ಅನುದಾನ ನೀಡಿದ್ದು, ಗ್ರಾಮಸ್ಥರು ಹಾಗೂ ಜನಪ್ರತಿನಿಧಿಗಳ ಸಹಕಾರದಿಂದ ನೂತನ ದೇವಾಲಯ ನಿರ್ಮಾಣವಾಗಿದೆ ಎಂದು ಹೇಳಿದರು.

ನ.7ರಂದು ಬೆಳಿಗ್ಗೆ 7.30ಕ್ಕೆ ಗ್ರಾಮದ ಕೊಡಮಕ್ಕಳು ಹಾಗೂ ಮುತ್ತೈದೆಯರು ಗಂಗಾ ಪೂಜೆ ನೆರವೇರಿಸಿ, ಮೀಸಲು ನೀರು ತಂದು ಗೋಪೂಜೆ ಹಾಗೂ ವೀರಭದ್ರ ಕುಣಿತ ಸಮೇತ ಮಂಗಳವಾದ್ಯದೊಂದಿಗೆ ಧಾರ್ಮಿಕ ವಿಧಿ–ವಿಧಾನಗಳು ಮತ್ತು ಪೂಜಾ ಕೈಂಕರ್ಯಗಳು ಆರಂಭವಾಗಲಿದ್ದು, ಸಂಜೆ 6.30ಕ್ಕೆ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಸುತ್ತೂರು ಸಮೀಪದ ತುಮ್ಮನೇರಳೆ ಗ್ರಾಮದ ಶ್ರೀ ನಾಗಲಿಂಗೇಶ್ವರಸ್ವಾಮಿ, ಕಲ್ಲಹಳ್ಳಿ ಗ್ರಾಮದ ಶ್ರೀ ಮಾರಮ್ಮದೇವಿ ಹಾಗೂ ವಿ.ವಿ.ನಗರದ ಶ್ರೀ ಆದಿಶಕ್ತಿ ಮಾರಮ್ಮ ದೇವರುಗಳ ಹೂ–ಹೊಂಬಾಳೆ ನೆರವೇರಿಸಿ, ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಲಿದ್ದು, ರಾತ್ರಿ 9 ಗಂಟೆ ನಂತರ ದೇವಸ್ಥಾನದಲ್ಲಿ ಮಂಡಲ ದರ್ಶನ, ಅಷ್ಟಾವಧಾನ, ಮಹಾಮಂಗಳಾರತಿ ಮತ್ತು ತೀರ್ಥ ಪ್ರಸಾದ ವಿನಿಯೋಗವಾಗಲಿದೆ ಎಂದು ವಿವರಿಸಿದರು.


ನ.8ರಂದು ಪ್ರಾತಃಕಾಲದ ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ಮಂಚಮ್ಮ ದೇವರ ಗದ್ದುಗೆಗೆ ಪ್ರಾಣ ಪ್ರತಿಷ್ಠೆ ಮತ್ತು ನ್ಯಾಸಗಳು, ಕಲಾಹೋಮ ನೆರವೇರಲಿದ್ದು, ಬೆಳಿಗ್ಗೆ 9.30ರಿಂದ ಮಠಾಧೀಶರಿಂದ ವಿವಿಧ ಧಾರ್ಮಿಕ ಕಾರ್ಯಗಳು ಹಾಗೂ ಮಹಾಮಂಗಳಾರತಿ ನೆರವೇರಲಿದ್ದು, ಆಚಾರ್ಯ ಎನ್.ಎಸ್. ನವೀನ್ ಅವರು ಧಾರ್ಮಿಕ ಕಾರ್ಯದ ಉಸ್ತುವಾರಿ ವಹಿಸಲಿದ್ದಾರೆ ಎಂದರು.

ಪಾಂಡವಪುರದ ನಾಗಲಿಂಗೇಗೌಡ ಮತ್ತು ತಂಡದಿಂದ ಭಕ್ತನಮನ ಕಾರ್ಯಕ್ರಮ ಹಾಗೂ ಮಧ್ಯಾಹ್ನ 12.30ರಿಂದ ಅನ್ನಸಂತರ್ಪಣೆ ನೆರವೇರಲಿದೆ ಎಂದು ತಿಳಿಸಿದರು.

8ರಂದು ನಡೆಯಲಿರುವ ಧಾರ್ಮಿಕ ಕಾರ್ಯದ ಸಾನ್ನಿಧ್ಯವನ್ನು ಆದಿಚುಂಚನಗಿರಿ ಕ್ಷೇತ್ರದ ಡಾ.ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶ್ರೀ ಪುರುಷೋತ್ತಮಾನಂದನಾಥ ಸ್ವಾಮೀಜಿ ವಹಿಸಲಿದ್ದು, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಉಪಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಧಾರ್ಮಿಕ ಸಭೆಯನ್ನು ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಪಿ.ರವಿಕುಮಾರ್ ಗಣಿಗ, ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಸ್ಟಾರ್ ಚಂದ್ರು, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಅಶೋಕ್ ಜಯರಾಮ್, ಪಿಇಟಿ ಅಧ್ಯಕ್ಷ ಕೆ.ಎಸ್.ವಿಜಯ್ ಆನಂದ್, ಜಿಲ್ಲಾ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಬಿ.ಆರ್. ರಾಮಚಂದ್ರ, ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಸಿ.ಅಶ್ವತ್ಥ, ಬಿಜೆಪಿ ಮುಖಂಡ ಎಸ್.ಸಚ್ಚಿದಾನಂದ ಭಾಗವಹಿಸಲಿದ್ದಾರೆ ಎಂದರು.

ವಿಶೇಷ ಆಹ್ವಾನಿತರಾಗಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕಿ ಎಂ.ಚೇತನ, ಟಿ.ಎನ್.ಶರತ್, ಪಾಲಹಳ್ಳಿ ಅರವಿಂದ್ ಭಾಗವಹಿಸಲಿದ್ದಾರೆ.



ಶ್ರೀ ಮಂಚಮ್ಮ ದೇವಿಯ ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳು ಮಾತನಾಡುತ್ತಿರುವುದು.

ಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆಗೆ 110ಕ್ಕೂ ಹೆಚ್ಚು ವಿಷಯಗಳ ಲೇಖನಗಳು

ಮಂಡ್ಯ,ನ.5– 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆಗೆ ಸುಮಾರು 110 ವಿಷಯಗಳನ್ನು ನೀಡಿ ಲೇಖನಗಳನ್ನು ಬರೆಯುವಂತೆ ಲೇಖಕರಿಗೆ ಮನವಿ ಸಲ್ಲಿಸಲಾಗಿತ್ತು, ಈಗಾಗಲೇ ಸುಮಾರು 40 ಲೇಖನಗಳು ಬಂದಿರುತ್ತಿವೆ ಎಂದು ಎಡಿಸಿ ಡಾ.ಹೆಚ್.ಎಲ್.ನಾಗರಾಜು ತಿಳಿಸಿದರು.


ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸ್ಮರಣ ಸಂಚಿಕೆ ಸಭೆ ನಡೆಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯ ಭೌಗೋಳಿಕತೆ, ನೈಸರ್ಗಿಕತೆ, ಪ್ರಾದೇಶಿಕತೆ, ಮಂಡ್ಯ ಜಿಲ್ಲೆಯ ಪುರಾತತ್ವ ನೆಲೆಗಳು, ಮಂಡ್ಯ ಜಿಲ್ಲೆಯ ಜನಸಮುದಾಯಗಳು, ಮಂಡ್ಯದಲ್ಲಿ ರೈತ ಸಂಘಟನೆ ಸ್ವರೂಪ ಹೋರಾಟ ವ್ಯಾಪ್ತಿ ಸೇರಿದಂತೆ 110ಕ್ಕೂ ಹೆಚ್ಚು ವಿಷಯಗಳನ್ನು ರಚಿಸಲಾಗಿದೆ ಎಂದರು.

ಸ್ಮರಣ ಸಂಚಿಕೆಯನ್ನು 5 ಭಾಗವಾಗಿ ವಿಂಗಡಿಸಿ ಸಂಚಿಕೆಯ ಆಯಾ ಭಾಗದ ಲೇಖನಗಳನ್ನು ಪಡೆದು ಚರ್ಚಿಸಿ ಅಂತಿಮಗೊಳಿಸುವ ಜವಾಬ್ದಾರಿ ಹೊಂದಿರುತ್ತಾರೆ. ಉತ್ತಮವಾಗಿ ಕೆಲಸ ನಿರ್ವಹಿಸಿ ಮೌಲ್ಯಯುತವಾಗಿ ಸ್ಮರಣ ಸಂಚಿಕೆ ಮೂಡಿ ಬರಲಿ ಎಂದರು.

ಛಾಯಾಚಿತ್ರ ಆಹ್ವಾನ ಸ್ಮರಣ ಸಂಚಿಕೆಯಲ್ಲಿ ಮಂಡ್ಯ ಜಿಲ್ಲೆಗೆ ಮಹಾತ್ಮ ಗಾಂಧೀಜಿ, ಕುವೆಂಪು ಅವರ ಭೇಟಿ, ಕೆ.ಆರ್.ಎಸ್. ನಿರ್ಮಾಣ, ಶಿವಪುರ ಸತ್ಯಾಗ್ರಹದಲ್ಲಿ ಹೋರಾಟಗಾರರು ಸೇರಿದಂತೆ ಇನ್ನಿತರೆ ಅಪರೂಪದ ಛಾಯಾಚಿತ್ರಗಳನ್ನು ಸ್ಮರಣ ಸಂಚಿಕೆಗೆ ಕಳುಹಿಸಿಕೊಡಬಹುದು. ಸಮಿತಿಯು ಪರಿಶೀಲಿಸಿ ಛಾಯಾಚಿತ್ರಗಳನ್ನು ಆಯ್ಕೆ ಮಾಡಲಿದೆ. ಆಸಕ್ತರು ಜಿಲ್ಲಾ ಗ್ರಂಥಾಲಯದ ಸ್ಮರಣ ಸಂಚಿಕೆ ಕಚೇರಿಗೆ ಸಲ್ಲಿಸಬೇಕು. ಆಹ್ವಾನ ಸ್ಮರಣ ಸಂಚಿಕೆಗೆ ಸೂಕ್ತ ಶೀರ್ಷಿಕೆ ನೀಡಲು ಶೀರ್ಷಿಕೆಯನ್ನು ಆಹ್ವಾನಿಸಲಾಗಿದೆ. ಮುಚ್ಚಿದ ಲಕೋಟೆಯಲ್ಲಿ ಆಸಕ್ತರು ಶೀರ್ಷಿಕೆಯನ್ನು ನವೆಂಬರ್ 20 ರೊಳಗಾಗಿ ಜಿಲ್ಲಾ ಕೇಂದ್ರ ಗ್ರಂಥಾಲಯ ಮಂಡ್ಯ ಇಲ್ಲಿಗೆ ಸಲ್ಲಿಸುವುದು. ಆಯ್ಕೆಯಾದ ಶೀರ್ಷಿಕೆಗೆ ನಗದು ಬಹುಮಾನ ನೀಡಿ, ಗೌರವಿಸಲಾಗುವುದು ಎಂದರು. ನೆನಪಿನ ಸಂಪುಟಕ್ಕೆ ಗಣ್ಯರು ಹಾಗೂ ಜನಪ್ರತಿನಿಧಿಗಳಿಂದ ಸಂದೇಶ ಪಡೆಯಲು ಪತ್ರ ಮೂಲಕ ಮನವಿ ಮಾಡುವ ಬಗ್ಗೆ, ಸಂಪುಟದ ಮುಖಪುಟ ವಿನ್ಯಾಸ ಮಾಡುವ ಬಗ್ಗೆ ಸಮಿತಿಯ ಸದಸ್ಯರಿಂದ ಅಭಿಪ್ರಾಯ ಪಡೆಯಲಾಯಿತು. ಸಭೆಯಲ್ಲಿ ಹಿರಿಯ ಸಾಹಿತಿ ತೈಲೂರು ವೆಂಕಟಕೃಷ್ಣ ಕನ್ನಡ ಸಾಹಿತ್ಯ ಸಮ್ಮೇಳನದ ಸಂಚಾಲಕ ಮೀರಾಶಿವಲಿಂಗಯ್ಯ, ಗ್ರಂಥಾಲಯ ಅಧಿಕಾರಿ ಕೃಷ್ಣಮೂರ್ತಿ, ವಾರ್ತಾಧಿಕಾರಿ ನಿರ್ಮಲ ಸೇರಿದಂತೆ ಇತರರಿದ್ದರು.

ರಾಮನಕೊಪ್ಪಲು ಡೇರಿಗೆ ಅಧ್ಯಕ್ಷರ ಆಯ್ಕೆ

ಕೆ.ಆರ್.ಪೇಟೆ,ನ.5– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿಯ ರಾಮನಕೊಪ್ಪಲು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಮಂಜೇಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ಈ ಹಿಂದಿನ ಅಧ್ಯಕ್ಷ ಆರ್.ರುದ್ರೇಶ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಇಂದು ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನ ಬಯಸಿ ಮಂಜೇಗೌಡ ಅವರನ್ನು ಹೊರತುಪಡಿಸಿ ಬೇರೆ ಯಾರೂ ಸಹ ನಾಮಪತ್ರ ಸಲ್ಲಿಸದೇ ಇರುವ ಕಾರಣ ನೂತನ ಅಧ್ಯಕ್ಷರಾಗಿ ಮಂಜೇಗೌಡ ಅವರ ಅವಿರೋಧ ಆಯ್ಕೆಯಾದರು.

ನೂತನ ಅಧ್ಯಕ್ಷರಾದ ಮಂಜೇಗೌಡ ಅವರನ್ನು ಸಂಘದ ಉಪಾಧ್ಯಕ್ಷೆ ಶಶಿಕಲಾಸುರೇಶ್, ನಿರ್ದೇಶಕರಾದ ದಯಾನಂದ್, ಆರ್.ಸಿ. ಮಂಜೇಗೌಡ, ನಾಗರಾಜು, ಕುಮಾರ್, ಸರಸ್ವತಿ, ಲೀಲಾವತಿ, ಮಂಜೇಗೌಡ.ಆರ್. ಸಂಘದ ಸಿಇಓ ಲೋಕೇಶ್, ಪ್ರದೀಪ್ ಸೇರಿದಂತೆ ಗ್ರಾಮದ ಮುಖಂಡರು ಅಭಿನಂದಿಸಿದ್ದಾರೆ.

ಮೂರನೇ ಪುಟದಿಂದ

ಹೈಕೋರ್ಟ್ ನೋಟಿಸ್ ಜಾರಿ

ಮಾಡಿರುವ ಆರೋಪಗಳ ಬಗ್ಗೆ ಎರಡೂ ಸಂಸ್ಥೆಗಳು ಕೈಗೊಂಡ ಯಾವುದೇ ತನಿಖೆ ನಿಷ್ಪಕ್ಷಪಾತ ತನಿಖೆಯಾಗುವುದಿಲ್ಲ. ತನಿಖಾಧಿಕಾರಿಗಳ ಮೇಲೆ ಅಂತಹ ಪ್ರಭಾವ ಬೀರಿದಾಗ, ತನಿಖೆಯ ಫಲಿತಾಂಶವು ನ್ಯಾಯಯುತ ಮತ್ತು ನಿಷ್ಪಕ್ಷಪಾತವಾದ ಫಲಿತಾಂಶವಾಗುವುದಿಲ್ಲ ಎಂಬುದು ಮೇಲ್ನೋಟಕ್ಕೆ ಕಂಡುಬರುತ್ತದೆ ಎಂದು ಅರ್ಜಿದಾರ ಸ್ನೇಹಮಯಿ ಕೃಷ್ಣ ತಮ್ಮ ಅರ್ಜಿಯಲ್ಲಿ ಆರೋಪಿಸಿದ್ದಾರೆ.

ಸ್ನೇಹಮಯಿ ಕೃಷ್ಣ ಅವರ ದೂರಿನ ಅನ್ವಯ ಹಾಲಿ ಹಾಗೂ ಮಾಜಿ ಸಂಸದರು/ಶಾಸಕರ ವಿರುದ್ಧದ ಪ್ರಕರಣಗಳ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಲಯವು ಐಪಿಸಿ, ಭ್ರಷ್ಟಾಚಾರ ತಡೆ ಕಾಯ್ದೆ, ಬೇನಾಮಿ ಆಸ್ತಿ ವಹಿವಾಟು ತಡೆ ಕಾಯ್ದೆ ಹಾಗೂ ಕರ್ನಾಟಕ ಭೂಕಬಳಿಕೆ ನಿಷೇಧ ಕಾಯ್ದೆಯಡಿ ದೂರು ದಾಖಲಿಸಿಕೊಳ್ಳುವಂತೆ ಮೈಸೂರಿನ ಲೋಕಾಯುಕ್ತ ಪೊಲೀಸರಿಗೆ ಆದೇಶಿಸಿದೆ. ಮೂರು ತಿಂಗಳೊಳಗೆ ಕ್ರಮವಹಿಸಿ ವರದಿ ಸಲ್ಲಿಸಬೇಕು ಎಂದು ಹೇಳಿದೆ. ರಾಜ್ಯಪಾಲರು ನೀಡಿದ ಅನುಮೋದನೆ ವಿರುದ್ಧ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿರುವ ಹೈಕೋರ್ಟ್ ಇತ್ತೀಚೆಗೆ ನೀಡಿರುವ ಆದೇಶದಲ್ಲಿ ಉಲ್ಲೇಖಿಸಿರುವಂತೆ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಸೇರಿದಂತೆ ಆರೋಪಿಗಳ ವಿರುದ್ಧದ ಪ್ರಾಥಮಿಕ ಪ್ರಕರಣವನ್ನು ಪರಿಗಣಿಸಿ ಸಿಬಿಐ ಅಥವಾ ಇತರ ಯಾವುದೇ ಸಂಸ್ಥೆಯಿಂದ ತನಿಖೆ ಅನಿವಾರ್ಯವಾಗಿದೆ.

ಈ ಪ್ರಕರಣದಲ್ಲಿ ಇಡೀ ರಾಜಕೀಯ ಪಕ್ಷ, ಅವರ ಪಕ್ಷದ ಹೈಕಮಾಂಡ್, ರಾಜ್ಯ ಸರ್ಕಾರ, ಸಚಿವ ಸಂಪುಟ ಮತ್ತು ಇಡೀ ವ್ಯವಸ್ಥೆ ನನಗೆ ಬೆಂಬಲ ನೀಡುತ್ತಿದೆ ಎಂದು ಸಿದ್ದರಾಮಯ್ಯ ಅವರು ಮಾಧ್ಯಮಗಳಿಗೆ ಬಹಿರಂಗವಾಗಿ ಹಲವಾರು ಹೇಳಿಕೆಗಳನ್ನು ನೀಡಿದ್ದಾರೆ ಎಂದು ಅರ್ಜಿದಾರರು ಹೇಳಿದ್ದಾರೆ. ಹೀಗಾಗಿ ಪ್ರಕರಣವನ್ನು ಸಿಬಿಐಗೆ ವರ್ಗಾಯಿಸಬೇಕು ಎಂದು ನ್ಯಾಯಾಲಯಕ್ಕೆ ಮನವಿ ಮಾಡಿದ್ದಾರೆ.

ವಿಚಾರಣೆಗೆ ಹಾಜರು

ಪ್ರವಾಸ ಕಾರ್ಯಕ್ರಮದಲ್ಲಿ ನಾಳೆ ಬೆಳಗ್ಗೆ 9.30ರಿಂದ 12 ಗಂಟೆವರೆಗೆ ಸಮಯವನ್ನು ಕಾಯ್ದಿರಿಸಲಾಗಿದೆ. ಈ ಸಮಯದಲ್ಲೇ ಸಿದ್ದರಾಮಯ್ಯ ಲೋಕಾಯುಕ್ತ ವಿಚಾರಣೆಗೆ ಒಳಪಡಲಿದ್ದಾರೆ ಎಂದು ಹೇಳಲಾಗಿದೆ. ಅವರ ವಿರುದ್ಧ ದಾಖಲಾಗಿರುವ ಪ್ರಕರಣದ ವೈಯಕ್ತಿಕವಾಗಿರುವ ಕಾರಣದಿಂದ ಅಧಿಕೃತ ಪ್ರವಾಸ ಪಟ್ಟಿಯಲ್ಲಿ ಈ ವಿಚಾರವನ್ನು ಉಲ್ಲೇಖಿಸಿಲ್ಲ. ಮಧ್ಯಾಹ್ನ 12 ಗಂಟೆ ನಂತರ ರಸ್ತೆ ಮೂಲಕ ಚನ್ನಪಟ್ಟಣಕ್ಕೆ ಹೊರಡುವ ಸಿದ್ದರಾಮಯ್ಯ ಅವರು ಉಪ ಚುನಾವಣೆ ಪ್ರಚಾರದಲ್ಲಿ ಭಾಗವಹಿಸಲಿದ್ದಾರೆ.


ಪೊಲೀಸ್ ಆಯುಕ್ತರಿಂದ ಪರಿಶೀಲನೆ: ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನ ಲೋಕಾಯುಕ್ತ ಕಚೇರಿಗೆ ವಿಚಾರಣೆಗಾಗಿ ಆಗಮಿಸಲಿರುವ ಹಿನ್ನೆಲೆಯಲ್ಲಿ ಇಂದು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಅವರು ಲೋಕಾಯುಕ್ತ ಕಚೇರಿ ಬಳಿ ತೆರಳಿ ಬಂದೋಬಸ್ತ್ ಮಾಡುವ ಬಗ್ಗೆ ಪರಿಶೀಲನೆ ನಡೆಸಿದರು. ಸಿದ್ದರಾಮಯ್ಯ ಆಗಮಿಸುವ ವೇಳೆ ಅವರ ಬೆಂಬಲಿಗರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸುವ ಸಾಧ್ಯತೆ ಇರುವುದರಿಂದ ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಪೊಲೀಸ್ ಆಯುಕ್ತರ ಪರಿಶೀಲನೆ ವೇಳೆ ಡಿಸಿಪಿಗಳಾದ ಮುತ್ತುರಾಜ್, ಜಾಹ್ನವಿ ಮತ್ತಿತರರು ಉಪಸ್ಥಿತರಿದ್ದರು.

ಚನ್ನಪಟ್ಟಣದಲ್ಲಿ ಪ್ರಚಾರ ಅಖಾಡಕ್ಕಿಳಿದ ದೇವೇಗೌಡರು

ನಿಮ್ಮ ಆಶೀರ್ವಾದ ಇದ್ದರೆ ನೂರು ವರ್ಷ ಬದುಕುತ್ತೇನೆ: ನನಗೆ ನಿಮ್ಮ ಆಶೀರ್ವಾದ ಇದೆ. ನಾನು ಶತಾಯು ಆಗುತ್ತೇನೆಯೋ ಇಲ್ಲವೋ ಗೊತ್ತಿಲ್ಲ. ಆದರೆ, ಬದುಕಿರುತ್ತೇನೆ ಎನ್ನುವ ಭರವಸೆ ಹೊಂದಿದ್ದೇನೆ. ದೇವರ, ನಿಮ್ಮೆಲ್ಲರ ಆಶೀರ್ವಾದ ಇದ್ದರೆ ನೂರು ವರ್ಷ ಬದುಕುತ್ತೇನೆ. ಆದರೆ, ಕಾಂಗ್ರೆಸ್ ನಾಯಕರಿಗೆ ನನ್ನ ಆರೋಗ್ಯದ ಬಗ್ಗೆಯೇ ಚಿಂತೆಯಾಗಿದೆ ಎಂದು ಅವರು ನೋವು ವ್ಯಕ್ತಪಡಿಸಿದರು. ನನ್ನ ಮೊಮ್ಮಗ ಈ ಕ್ಷೇತ್ರವನ್ನು ಅಭಿವೃದ್ಧಿ ಮಾಡುತ್ತಾನೆ. ಅವರ ತಂದೆ ಕುಮಾರಸ್ವಾಮಿ ಕೇಂದ್ರದಲ್ಲಿ ಮಂತ್ರಿ ಆಗಿದ್ದಾರೆ. ನನ್ನ ಅರವತ್ತು ವರ್ಷದ ರಾಜಕಾರಣದಲ್ಲಿ ಇಂತಹ ಕೆಟ್ಟ ರಾಜಕಾರಣವನ್ನು ನಾನು ನೋಡಿಲ್ಲ ಎಂದು ಕಳವಳ ವ್ಯಕ್ತಪಡಿಸಿದ ದೇವೇಗೌಡ, ಇಂತಹ ಕೆಟ್ಟ ರಾಜಕಾರಣ ಮತ್ತೆ ಈ ರಾಜ್ಯದಲ್ಲಿ ಇರಬಾರದು. ನಾನು ಇದನ್ನು ಅಸೂಯೆ ದ್ವೇಷದಿಂದ ಹೇಳುತ್ತಿಲ್ಲ ಎಂದು ತಿಳಿಸಿದರು. ವೈಯಕ್ತಿಕವಾಗಿ ನಾನು ಯಾರ ಬಗ್ಗೆಯೂ ಮಾತಾಡಲ್ಲ ಎಂದ ಅವರು, ನಾನು 11ನೇ ತಾರೀಕಿನವರೆಗೂ ಬರುತ್ತೇನೆ. ಮೊಮ್ಮಗನ ಗೆಲ್ಲಿಸೋಕೆ ಬರುತ್ತಿಲ್ಲ. ನನಗೆ ಜೀವನದಲ್ಲಿ ಒಂದೇ ಒಂದು ಗುರಿ ಇದೆ. ಋಣಾನುಬಂಧವೋ ಏನೋ, ಈಗ ಯಾರ ಮನೆ ಅನ್ನ ತಿನ್ನುತ್ತೇನೆಯೋ ಗೊತ್ತಿಲ್ಲ. ಅನ್ನದ ಋಣ ಯಾರ ಮನೆಗೆ ಕರೆದುಕೊಂಡು ಹೋಗುತ್ತದೊ ಗೊತ್ತಿಲ್ಲ ಎಂದು ಭಾವುಕವಾಗಿ ನುಡಿದರು. ಮಾಧ್ಯಮದವರು ದೇವೇಗೌಡರು ಮಾತಾಡ್ತಾರಾ ಎಂದು ಕೇಳುತ್ತಿದ್ದರು. ದೇವೇಗೌಡ್ರು ಏನು ಇಂಟರ್ ನ್ಯಾಶನಲ್ ಅಪರಾಧಿ ಆಗಿದ್ನಾ? ಮೂರು ತಿಂಗಳು ನನ್ನ ಮನೆ ಮುಂದೆ ಇದ್ದರಲ್ಲ. ಇವತ್ತು ನಿಮ್ಮ ಮುಂದೆ ಎದೆ ಚಾಚಿ ಮಾತನಾಡುತ್ತಿದ್ದೇನೆ. ಇನ್ನೂ ನಾಲ್ಕಾರು ವರ್ಷ ನಿಮ್ಮ ಆಶೀರ್ವಾದದಿಂದ ಇರುತ್ತೇನೆ. ನನ್ನ ಕೊನೆ ಉಸಿರು ಇರೋ ತನಕ ನನ್ನ ಶರೀರ ಇರೋ ತನಕ ಜನರ ಪರವಾಗಿ ಕೆಲಸ ಮಾಡುತ್ತೇನೆ ಎನ್ನುವ ಮೂಲಕ ದೇವೇಗೌಡರು ಆಂಬುಲೆನ್ಸ್‌ನಲ್ಲಿ ಬಂದು ಪ್ರಚಾರ ಮಾಡುತ್ತಾರೆ ಎಂದಿದ್ದ ಡಿ.ಕೆ.ಸುರೇಶ್ ಮಾತಿಗೆ ತಿರುಗೇಟು ಕೊಟ್ಟರು.

ಅಮೆರಿಕ ಅಧ್ಯಕ್ಷೀಯ ಚುನಾವಣೆ: ಮೊದಲ ಫಲಿತಾಂಶ ಪ್ರಕಟ

ಕಮಲಾ ಹ್ಯಾರಿಸ್, ಡೊನಾಲ್ಡ್ ಟ್ರಂಪ್ ಸಮಬಲ



ನ್ಯೂ ಹ್ಯಾಂಪ್ ಶೈರ್, ನ.5– ಜಗತ್ತಿನಾದ್ಯಂತ ತೀವ್ರ ಕುತೂಹಲ ಕೆರಳಿಸಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಮೊದಲ ಫಲಿತಾಂಶ ಪ್ರಕಟವಾಗಿದೆ. ಅಮೆರಿಕದ ನ್ಯೂ ಹ್ಯಾಂಪ್‌ಶೈರ್ ರಾಜ್ಯದ ಒಂದು ಸಣ್ಣ ಪಟ್ಟಣವಾದ ಡಿಕ್ಸ್‌ವಿಲ್ಲೆ ನಾಚ್‌ನ ಮತದಾನ ಮುಗಿದಿದ್ದು, ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಮತ್ತು ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ತಲಾ ಮೂರು ಮತಗಳನ್ನು ಪಡೆದಿದ್ದಾರೆ.

ಡಿಕ್ಸ್‌ವಿಲ್ಲೆ ನಾಚ್‌ನಲ್ಲಿ ಆರು ನೋಂದಾಯಿತ ಮತದಾರರು ಮಧ್ಯರಾತ್ರಿಯಲ್ಲಿ ಮತದಾನ ಮಾಡಿದರು. ಇಲ್ಲಿ ಈ ಸಂಪ್ರದಾಯ 1960ಕ್ಕೂ ಹಿಂದಿನಿಂದಲೂ ಮುಂದುವರೆದುಕೊಂಡು ಬಂದಿದೆ.


ಈ ವಿಶಿಷ್ಟ ಮತದಾನದಲ್ಲಿ ಕಮಲಾ ಹ್ಯಾರಿಸ್ ಮತ್ತು ಡೊನಾಲ್ಡ್ ಟ್ರಂಪ್ ಇಬ್ಬರೂ ತಲಾ ಮೂರು ಮತಗಳನ್ನು ಪಡೆದಿದ್ದರಿಂದ ಶ್ವೇತಭವನದ ರೇಸ್‌ನಲ್ಲಿ ಉಭಯ ನಾಯಕರಲ್ಲಿ ಪೈಪೋಟಿ ಕಂಡುಬರುತ್ತಿರುವುದನ್ನು ಈ ಮತದಾನ ಪ್ರತಿಬಿಂಬಿಸಿತು. 100ಕ್ಕಿಂತ ಕಡಿಮೆ ನಿವಾಸಿಗಳನ್ನು ಹೊಂದಿರುವ ಮುನ್ಸಿಪಾಲಿಟಿಗಳಲ್ಲಿ ಮಧ್ಯರಾತ್ರಿಯಲ್ಲಿ ಮತದಾನ ಕೇಂದ್ರಗಳನ್ನು ತೆರೆಯಲು ಮತ್ತು ಎಲ್ಲಾ ನೋಂದಾಯಿತ ಮತದಾರರು ಮತದಾನ ಮಾಡಿದ ಅವುಗಳನ್ನು ಮುಚ್ಚಲು ನ್ಯೂ ಹ್ಯಾಂಪ್‌ಶೈರ್‌ನ ಚುನಾವಣಾ ಕಾನೂನುಗಳು ಅನುವು ಮಾಡಿಕೊಡುತ್ತದೆ. ಡಿಕ್ಸ್‌ವಿಲ್ಲೆ ನಾಚ್‌ನ ನಿವಾಸಿಗಳು 2020ರ ಚುನಾವಣೆಯಲ್ಲಿ ಜೋ ಬೈಡನ್‌ಗೆ ಸರ್ವಾನುಮತದಿಂದ ಮತ ಹಾಕಿದ್ದರು. ಈ ಮೂಲಕ ಬೈಡನ್ ಸಂಪ್ರದಾಯ ಪ್ರಾರಂಭವಾದಾಗಿನಿಂದ ಎಲ್ಲಾ ಮತಗಳನ್ನು ಪಡೆದ ಎರಡನೇ ಅಭ್ಯರ್ಥಿಯಾಗಿ ಇತಿಹಾಸ ನಿರ್ಮಿಸಿದ್ದರು.

ತಿರುಪತಿ ಲಾಡು ಕಲಬೆರಕೆ: ತನಿಖೆಗೆ ಎಸ್‌ಐಟಿ ರಚಿಸಿದ ಸಿಬಿಐ

ಅಮರಾವತಿ, ನ.5– ತಿರುಪತಿ ಲಾಡು ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಬಳಸಲಾಗಿದೆ ಎಂಬ ಆರೋಪದ ಕುರಿತ ತನಿಖೆಗೆ ಸುಪ್ರೀಂಕೋರ್ಟ್ ನಿರ್ದೇಶನದ ಮೇರೆಗೆ ಸಿಬಿಐ ಸ್ವತಂತ್ರ ಎಸ್‌ಐಟಿ ರಚಿಸಿದೆ.

ಕೇಂದ್ರೀಯ ಸಂಸ್ಥೆಯ ಇಬ್ಬರು, ಆಂಧ್ರ ಪ್ರದೇಶ ಪೊಲೀಸ್ ಇಲಾಖೆಯ ಇಬ್ಬರು ಮತ್ತು ಎಫ್‌ಎಸ್‌ಎಸ್‌ಎಐನಿಂದ ಒಬ್ಬರು ಸೇರಿ ಐವರು ಅಧಿಕಾರಿಗಳನ್ನು ಎಸ್‌ಐಟಿ ತಂಡವು ಒಳಗೊಂಡಿದೆ.

ಸಿಬಿಐ ನಿರ್ದೇಶಕರ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಲಿರುವ ಎಸ್‌ಐಟಿ ತಂಡಕ್ಕೆ ರಾಜ್ಯ ಸರ್ಕಾರವು ಹಿರಿಯ ಐಪಿಎಸ್ ಅಧಿಕಾರಿಗಳಾದ ಸರ್ವಶ್ರೇಷ್ಠ ತ್ರಿಪಾಠಿ ಮತ್ತು ಗೋಪಿನಾಥ್ ಜೆಟ್ಟಿ ಅವರ ಹೆಸರುಗಳನ್ನು ನೀಡಿದೆ ಎಂದು ಆಂಧ್ರ ಪ್ರದೇಶದ ಪೊಲೀಸ್ ಮಹಾನಿರ್ದೇಶಕ ಸಿ.ಎಚ್. ದ್ವಾರಕಾ ತಿರುಮಲ ರಾವ್ ಹೇಳಿದ್ದಾರೆ. ನಾವು ಹೆಸರುಗಳನ್ನು ಕಳುಹಿಸಿದ ನಂತರ, ಸಿಬಿಐ ನಿರ್ದೇಶಕರು ಐದು ಸದಸ್ಯರ ಸಮಿತಿಯನ್ನು ರಚಿಸಿದ್ದಾರೆ. ರಾಜ್ಯ ಸರ್ಕಾರದಿಂದ ಅನುಮೋದನೆ ಪಡೆದುಕೊಂಡು, ತ್ರಿಪಾಠಿ ಮತ್ತು ಗೋಪಿನಾಥ್ ಜೆಟ್ಟಿ ಹೆಸರನ್ನು ಎಸ್‌ಐಟಿಗೆ ಸೇರಿಸಲು ಸಿಬಿಐಗೆ ಕಳುಹಿಸಿದ್ದೇವೆ ಎಂದು ಅವರು ಸುದ್ದಿಸಂಸ್ಥೆಗೆ ತಿಳಿಸಿದರು. ತ್ರಿಪಾಠಿ ಮತ್ತು ಗೋಪಿನಾಥ್ ಜೆಟ್ಟಿ ಅವರು, ರಾಜ್ಯ ಸರ್ಕಾರವು ಲಾಡು ಕಲಬೆರಕೆ ಆರೋಪಗಳನ್ನು ಪರಿಶೀಲಿಸಲು ಈ ಹಿಂದೆ ರಚಿಸಿದ್ದ ಎಸ್‌ಐಟಿಯ ಭಾಗವಾಗಿದ್ದರು. ಆದರೆ, ಸುಪ್ರೀಂ ಕೋರ್ಟ್‌ನ ಆದೇಶದ ನಂತರ ಈ ಸಮಿತಿ ನಿಷ್ಕ್ರಿಯಗೊಂಡಿತ್ತು. ತಿರುಪತಿ ಪೂರ್ವ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ಆಧರಿಸಿ ಎಸ್‌ಐಟಿ ತನಿಖೆ ಆರಂಭಿಸಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.



ಬಿ.ವೈ.ವಿಜಯೇಂದ್ರರಿಗೆ ಜನ್ಮದಿನದ ಶುಭಾಶಯ...



ಮಂಗಳವಾರ ರಾಜ್ಯ ಬಿಜೆಪಿ ಅಧ್ಯಕ್ಷರೂ ಆದ ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ.ವಿಜಯೇಂದ್ರ ಅವರಿಗೆ ಜನ್ಮದಿನದ ಶುಭಾಶಯ ಕೋರಲಾಯಿತು. ಬೆಂಗಳೂರಿನ ಅವರ ನಿವಾಸದಲ್ಲಿ ಮೈಸೂರು ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಯುವ ಮುಖಂಡ ಲಕ್ಷ್ಮಣ್ ವಿಜಯ್ ಕುಮಾರ್, ಜಿಪಂ ಮಾಜಿ ಸದಸ್ಯ ಗುರುಸ್ವಾಮಿ, ಮುಖಂಡರಾದ ವಾಸು, ವರುಣ ಮಹದೇವಸ್ವಾಮಿ ಅವರು ಶುಭ ಹಾರೈಸಿ, ಲಕ್ಷ್ಮೀದೇವರ ಬೆಳ್ಳಿ ಫೋಟೋ ಉಡುಗೊರೆ ನೀಡಿ ಗೌರವಿಸಿದರು.

ಬಿ.ವೈ.ವಿಜಯೇಂದ್ರರಿಗೆ ಅಭಿನಂದನೆ



ಬೆಂಗಳೂರಿನಲ್ಲಿ ಮಂಗಳವಾರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರನ್ನು ಹುಟ್ಟುಹಬ್ಬದ ಅಂಗವಾಗಿ ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ, ರಾಜ್ಯ ಕಾರ್ಯಕಾರಿಣಿ ಸದಸ್ಯ ಎ.ಎಸ್.ವೆಂಕಟೇಶ್ ಅಭಿನಂದಿಸಿದರು.

ಕ್ರಿಮಿನಲ್ ಪ್ರಕರಣಗಳಲ್ಲಿ ಶಿಕ್ಷೆ ನೀಡುವ ನಿಯಮ ಪರಿಷ್ಕರಿಸಲು ಕೇಂದ್ರ ಚಿಂತನೆ

ನವದೆಹಲಿ, ನ.5– ಅನೇಕ ಪ್ರಕರಣಗಳಲ್ಲಿ ನ್ಯಾಯಾಧೀಶರು ಸಮರ್ಪಕ ವಿಚಾರಣೆ ನಡೆಸುವುದಿಲ್ಲ ಹಾಗೂ ಮನಸ್ಸಿಗೆ ತೋಚಿದಂತೆ ಶಿಕ್ಷೆ ಪ್ರಕಟಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿಬಂದ ಕಾರಣ, ಕ್ರಿಮಿನಲ್ ಪ್ರಕರಣಗಳಲ್ಲಿ ಶಿಕ್ಷೆ ನೀಡುವ ನಿಯಮಗಳನ್ನು ಪರಿಷ್ಕರಿಸಲು ಕೇಂದ್ರ ಸರ್ಕಾರ ಮುಂದಾಗಿದೆ.


ಕಾನೂನು ಸಚಿವಾಲಯವು ಈ ಕುರಿತ ಯೋಜನೆಯನ್ನು ಸುಪ್ರೀಂಕೋರ್ಟ್‌ಗೆ ಡಿಸೆಂಬರ್ ವೇಳೆಗೆ ಸಲ್ಲಿಸಲಿದೆ ಎಂದು ಮೂಲಗಳು ಹೇಳಿವೆ. ನ್ಯಾಯಾಲಯ ವಿಧಿಸುವ ಶಿಕ್ಷೆ ಅಪರಾಧಕ್ಕೆ ತಕ್ಕಂತೆ ಇರಬೇಕು. ಇದನ್ನು ಖಾತ್ರಿಪಡಿಸಲು ಸೂಕ್ತ ವ್ಯವಸ್ಥೆಯೊಂದನ್ನು ರೂಪಿಸಲು ಸರ್ಕಾರ ಚಿಂತನೆ ನಡೆಸಿದೆ. ಅಲ್ಲದೇ, ಬ್ರಿಟನ್, ಕೆನಡಾ ಹಾಗೂ ನ್ಯೂಜಿಲೆಂಡ್‌ನಲ್ಲಿರುವ ನ್ಯಾಯಾಂಗ ವ್ಯವಸ್ಥೆಯನ್ನೇ ಹೋಲುವ ನ್ಯಾಯದಾನ ವ್ಯವಸ್ಥೆಯನ್ನು ಇಲ್ಲಿಯೂ ರೂಪಿಸಲು ಯೋಜಿಸಿದೆ ಎಂದು ಮೂಲಗಳು ಹೇಳಿವೆ. 2022ರಲ್ಲಿ ಅತ್ಯಾಚಾರ ಪ್ರಕರಣವೊಂದರ ವಿಚಾರಣೆ ನಡೆಸಿದ್ದ ಬಿಹಾರದ ನ್ಯಾಯಾಲಯವೊಂದು 30 ನಿಮಿಷದಲ್ಲಿಯೇ ವಿಚಾರಣೆ ಪೂರ್ಣಗೊಳಿಸಿ ವ್ಯಕ್ತಿಗೆ ಮರಣ ದಂಡನೆ ವಿಧಿಸಿತ್ತು. ಈ ಬಗ್ಗೆ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು.

ಇದಾದ ಬಳಿಕ, ತೀರ್ಪು ರದ್ದುಗೊಳಿಸಿದ್ದ ಬಿಹಾರ ಹೈಕೋರ್ಟ್, ಪ್ರಕರಣ ಕುರಿತು ಮರು ವಿಚಾರಣೆ ನಡೆಸುವಂತೆ ಆದೇಶಿಸಿತ್ತು. ವ್ಯಕ್ತಿಗೆ ತನ್ನ ಪರ ವಾದ ಮಂಡನೆಗೆ ಅವಕಾಶವನ್ನೇ ನೀಡಿಲ್ಲ. ಅಲ್ಲದೇ, ಈ ವಿಷಯದಲ್ಲಿ ನ್ಯಾಯಾಧೀಶರು ಬಹಳ ಅವಸರದಿಂದ ನಿರ್ಣಯ ಪ್ರಕಟಿಸಿದ್ದಾರೆ ಎಂದು ಹೈಕೋರ್ಟ್ ಹೇಳಿತ್ತು. ಈ ಘಟನೆ ನಂತರ, ಶಿಕ್ಷೆ ಪ್ರಕಟಿಸುವ ನಿಯಮಗಳ ಪರಿಷ್ಕರಣೆಗೆ ಸಂಬಂಧಿಸಿ ಸಮಗ್ರ ನೀತಿ ರೂಪಿಸುವಂತೆ ಕೇಂದ್ರಕ್ಕೆ ಸುಪ್ರೀಂ ಕೋರ್ಟ್ ಸೂಚಿಸಿತ್ತು.

ಮೈಸೂರು ಮಿತ್ರ

ನ.8ರಿಂದ ಜೆಎಸ್‌ಎಸ್ ಅರ್ಬನ್‌ಹಾತ್‌ನಲ್ಲಿ 'ಹಾಥ್ ಕರ್ಘ ಉತ್ಸವ'

ಕೈಮಗ್ಗ ವಸ್ತುಗಳ ಪ್ರದರ್ಶನ, ಮಾರಾಟ



ಮೈಸೂರು, ನ.5(ಜಿಎ)–ಕೇಂದ್ರ ಜವಳಿ ಸಚಿವಾಲಯ, ಜೆಎಸ್‌ಎಸ್ ಅರ್ಬನ್ ಹಾತ್ ಹಾಗೂ ಕಾವೇರಿ ಹ್ಯಾಂಡ್ ಲೂಮ್ಸ್ ಸಂಯುಕ್ತಾಶ್ರಯದಲ್ಲಿ ನ.8 ರಿಂದ 21ರವರೆಗೆ ಮೈಸೂರಿನ ರಿಂಗ್ ರಸ್ತೆಯಲ್ಲಿರುವ ಅರ್ಬನ್ ಹಾತ್‌ನಲ್ಲಿ ರಾಜ್ಯ ಕೈಮಗ್ಗ ವಸ್ತುಪ್ರದರ್ಶನ ಮತ್ತು ಮಾರಾಟ ಮೇಳ 'ಹಾಥ್ ಕರ್ಘ ಉತ್ಸವ್' ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕಾವೇರಿ ಹ್ಯಾಂಡ್‌ಲೂಮ್ಸ್ ವ್ಯವಸ್ಥಾಪಕ ನಿರ್ದೇಶಕ ಜಿ.ಪಿ.ಶ್ರೀನಿವಾಸಮೂರ್ತಿ ಈ ವಿಷಯ ತಿಳಿಸಿ, ನ.8ರಂದು ಸಂಜೆ 4 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮೇಳ ಉದ್ಘಾಟಿಸುವರು. ಸೆಸ್ಕಾಂ ಅಧ್ಯಕ್ಷ ರಮೇಶ್ ಬಂಡಿ ಸಿದ್ದೇಗೌಡ, ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್, ಶಾಸಕ ಜಿ.ಟಿ. ದೇವೇಗೌಡ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್ ಸೇರಿದಂತೆ ಮತ್ತಿತರರು ಆಗಮಿಸಲಿದ್ದಾರೆ ಎಂದರು.

ಉತ್ಸವದಲ್ಲಿ ದೇಶದ 75ಕ್ಕೂ ಹೆಚ್ಚು ಕೈಮಗ್ಗ ನೇಕಾರರು ಹಾಗೂ ಕುಶಲ ಕರ್ಮಿಗಳು ಪಾಲ್ಗೊಳ್ಳಲಿದ್ದಾರೆ. ರಾಜ್ಯದ ಚಿತ್ರದುರ್ಗ, ಹಾವೇರಿ, ಚಾಮರಾಜ ನಗರ, ಮಂಡ್ಯ, ರಾಮನಗರ, ಬೆಂಗಳೂರು, ತುಮಕೂರು, ಮೈಸೂರು ಮೊದಲಾದ ಕಡೆಗಳಿಂದ ಆಗಮಿಸುವ ನೇಕಾರರು ತಾವು ತಯಾರಿಸುವ ಹತ್ತಿ, ಉಣ್ಣೆ ಹಾಗೂ ವಿವಿಧ ಮಿಶ್ರಿತ ನೂಲುಗಳಿಂದ ತಯಾರಿಸಿದ ಕೈಮಗ್ಗ ಉತ್ಪನ್ನ ಪ್ರದರ್ಶಿಸಿ ಮಾರಾಟ ಮಾಡಲಿದ್ದಾರೆ ಎಂದರು.

ಶೇ.20ರ ರಿಯಾಯಿತಿ ದರದ ಮಾರಾಟವಿದ್ದು, ರೇಷ್ಮೆ ಸೀರೆ, ಮೊಳಕಾಲ್ಮೂರು ಸೀರೆ, ಇಳಕಲ್ ಸೀರೆ, ಕಸೂತಿ ಸೀರೆ, ಕಾಟನ್ ಸೀರೆ, ನೆಲ ಹೊದಿಕೆ, ಬೆಡ್‌ಶೀಟ್ ತಮಿಳುನಾಡಿನ ಕಾಂಜಿವರಂ ಸೀರೆ, ಕೇರಳ ರಾಜ್ಯದ ಕೈಮಗ್ಗ ಉತ್ಪನ್ನ, ಬಿಹಾರ್ ಮತ್ತು ಜಾರ್ಖಂಡ್ ರಾಜ್ಯದ ಟಸ್ಸರ್ ಸೀರೆ, ಉತ್ತರ ಪ್ರದೇಶದ ಬನಾರಸ್ ಸೀರೆ ಮೊದಲಾದವು ಇಲ್ಲಿ ದೊರೆಯಲಿವೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕ ಕೆ. ರಂಗಸ್ವಾಮಿ, ಯೋಜನಾಧಿಕಾರಿ ಎಂ. ಶಿವನಂಜಸ್ವಾಮಿ, ಸಂಯೋಜನಾಧಿಕಾರಿ ರಾಕೇಶ್ ರೈ ಉಪಸ್ಥಿತರಿದ್ದರು.

ನಾನಾ ಸೇವಾ ಕಾರ್ಯದೊಂದಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹುಟ್ಟುಹಬ್ಬ ಆಚರಣೆ



ಮೈಸೂರಿನ ಜೀವಧಾರ ರಕ್ತನಿಧಿ ಕೇಂದ್ರದಲ್ಲಿ ಬಿ.ವೈ.ವಿಜಯೇಂದ್ರ ಅಭಿಮಾನಿ ಬಳಗ ಹಾಗೂ ಬಿಜೆಪಿ ವೈದ್ಯಕೀಯ ಪ್ರಕೋಷ್ಠ ವತಿಯಿಂದ ಸ್ವಯಂಪ್ರೇರಿತ ರಕ್ತದಾನ ಶಿಬಿರ ನಡೆಸುವ ಮೂಲಕ ವಿಜಯೇಂದ್ರ ಹುಟ್ಟುಹಬ್ಬ ಆಚರಿಸಿದರು.



ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ರಾಮಕೃಷ್ಣನಗರದ ಉದ್ಯಾನವನದಲ್ಲಿ ಸ್ವಚ್ಛತಾ ಕಾರ್ಯ ನಡೆಸಿ, ಗಿಡ ನೆಡಲಾಯಿತು.



ಮೈಸೂರು ನಗರ ಬಿಜೆಪಿ ಕಾರ್ಯದರ್ಶಿ ಕಿರಣ್‌ಗೌಡ ನೇತೃತ್ವದಲ್ಲಿ ಗಿಡ ನೆಡುವ ಮೂಲಕ ವಿಜಯೇಂದ್ರ ಹುಟ್ಟುಹಬ್ಬ ಆಚರಿಸಲಾಯಿತು. ಈ ವೇಳೆ ಬಿಜೆಪಿ ಎಸ್‌ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕಾರ್ತಿಕ್ ಮರಿಯಪ್ಪ, ನಗರ ಕಾರ್ಯದರ್ಶಿ ಕೃಷ್ಣಮೂರ್ತಿ ರಾವತ್, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಈರಪ್ಪ, ಕ್ಷೇತ್ರದ ಎಸ್‌ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಸುರೇಂದ್ರ ಇನ್ನಿತರರಿದ್ದಾರೆ.

ಮೈಸೂರು, ನ. 5–ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಹುಟ್ಟುಹಬ್ಬವನ್ನು ಅವರ ಅಭಿಮಾನಿಗಳು, ಬಿಜೆಪಿ ಮುಖಂಡರು, ಕಾರ್ಯಕರ್ತರು ನಾನಾ ಸೇವಾ ಕಾರ್ಯಗಳೊಂದಿಗೆ ಆಚರಿಸಿದರು.

ನಗರದ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜೀವಧಾರ ರಕ್ತನಿಧಿ ಕೇಂದ್ರದ ಆವರಣದಲ್ಲಿ ಬಿ.ವೈ.ವಿಜಯೇಂದ್ರ ಅಭಿಮಾನಿ ಬಳಗ ಹಾಗೂ ಬಿಜೆಪಿ ವೈದ್ಯಕೀಯ ಪ್ರಕೋಷ್ಠ ವತಿಯಿಂದ 49 ಕಾರ್ಯಕರ್ತರು ಸ್ವಯಂಪ್ರೇರಿತ ರಕ್ತದಾನ ಮಾಡುವ ಮೂಲಕ ಅರ್ಥಪೂರ್ಣವಾಗಿ ವಿಜಯೇಂದ್ರ ಅವರ ಜನ್ಮದಿನವನ್ನು ಆಚರಿಸಿದರು.

ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ವಿಜಯೇಂದ್ರ ಅವರಿಗೆ ದೇವರು ಒಳ್ಳೆಯ ಆರೋಗ್ಯ ಮತ್ತು ಹೆಚ್ಚಿನ ಸಾಮಾಜಿಕ, ರಾಜಕೀಯ ಸ್ಥಾನಮಾನ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇವೆ.

ಮುಂಬರುವ ದಿನಗಳಲ್ಲಿ ಬಿ.ವೈ. ವಿಜಯೇಂದ್ರಗೆ ಒಳ್ಳೆಯದಾಗಲಿ. ಅವರಿಗೆ ಉತ್ತಮ ರಾಜಕೀಯ ಭವಿಷ್ಯವಿದೆ. ಸಂಘಟನೆ ಕಲೆಗಳನ್ನು ಅರಿತಿರುವ ಅವರಿಗೆ ಇನ್ನೂ ಹೆಚ್ಚಿನ ಅಧಿಕಾರ ಸಿಗಲಿದೆ. ಈ ರಾಜ್ಯದಲ್ಲಿ ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎನ್ನುವ ಸಾಮಾಜಿಕ ಚಿಂತನೆ ಮಾಡಿ ಜನಮನ್ನಣೆ ಗಳಿಸಿರುವ ಬಿ.ಎಸ್. ಯಡಿಯೂರಪ್ಪ ಅವರಂತೆ ವಿಜಯೇಂದ್ರ ಅವರೂ ತಮ್ಮ ತಂದೆಯ ಹಾದಿಯಲ್ಲಿ ಸಾಗಿ ಜನಪ್ರಿಯತೆಯನ್ನು ಗಳಿಸುತ್ತಿದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ವಾಸುದೇವ್, ಮಾಜಿ ಮುಡಾ ಸದಸ್ಯ ನವೀನ್‌ಕುಮಾರ್, ಬಿಜೆಪಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಲೋಹಿತ್, ಸುಚೀಂದ್ರ, ಮನೋಹರ, ಸುರೇಶ್, ರೇವ್ ಜೀತ್, ಜಯಂತ್, ಶಾರದಾ, ಮಮತಾ, ಶಿವು, ಹಾಗೂ ಇನ್ನಿತರರು ಹಾಜರಿದ್ದರು.

ಚಾಮುಂಡೇಶ್ವರಿ ಕ್ಷೇತ್ರದ ನಗರ ಮಂಡಲದ ಯುವ ಮೋರ್ಚಾ ವತಿಯಿಂದ ಬೋಗಾದಿಯ ಶ್ರೀದೇವಿ ನರ್ಸಿಂಗ್ ಹೋಮ್‌ನಲ್ಲಿನ ಒಳರೋಗಿಗಳಿಗೆ ಹಣ್ಣು–ಹಂಪಲು ವಿತರಣೆ ಮಾಡಲಾಯಿತು. ಮಹಿಳಾ ಮೋರ್ಚಾ ವತಿಯಿಂದ ರಾಮಕೃಷ್ಣ ನಗರದ ಉದ್ಯಾನವನದಲ್ಲಿ ಸ್ವಚ್ಛತಾ ಕಾರ್ಯ ನಡೆಸಿ ಗಿಡ ನೆಡಲಾಯಿತು. ಈ ಸಂದರ್ಭದಲ್ಲಿ ನಗರ ಪ್ರಧಾನ ಕಾರ್ಯದರ್ಶಿ ಬಿ.ಎಂ. ರಘು, ಚಾಮುಂಡೇಶ್ವರಿ ನಗರ ಮಂಡಲದ ಅಧ್ಯಕ್ಷ ರಾಕೇಶ್ ಭಟ್, ನಗರ ಯುವ ಮೋರ್ಚಾ ಅಧ್ಯಕ್ಷ ರಾಕೇಶ್ ಗೌಡ, ಪ್ರಧಾನ ಕಾರ್ಯದರ್ಶಿ ಲೋಹಿತ್, ಯುವ ಮೋರ್ಚಾ ಪ್ರಭಾರಿ ರುದ್ರಮೂರ್ತಿ, ಮಂಡಲ ಉಪಾಧ್ಯಕ್ಷರಾದ ಹೆಚ್.ಜಿ.ರಾಜಮಣಿ, ಎಸ್‌ಸಿ ಮೋರ್ಚಾ ನಗರ ಉಪಾಧ್ಯಕ್ಷರಾದ ಎನ್.ಪ್ರತಾಪ್, ಯುವ ಮೋರ್ಚಾ ಅಧ್ಯಕ್ಷರಾದ ಮಧು ಸೋಮಶೇಖರ್, ಪ್ರಧಾನ ಕಾರ್ಯದರ್ಶಿಗಳಾದ ಚಂದನ್ ಗೌಡ ಮತ್ತು ಸಾಗರ್ ಸಿಂಗ್, ಉಪಾಧ್ಯಕ್ಷರಾದ ರಾಘವೇಂದ್ರ ಸಿ, ಸೂರ್ಯ ಪ್ರಕಾಶ್ ಪಿ, ಮಧು ಸಿ.ಎಸ್., ಶಿವು, ಮಹಿಳಾ ಮೋರ್ಚಾ ಅಧ್ಯಕ್ಷರಾದ ಲಕ್ಷ್ಮಿ ಜಯಶಂಕರ್, ಪ್ರಧಾನ ಕಾರ್ಯದರ್ಶಿಗಳಾದ ಪುಟ್ಟಮ್ಮಣ್ಣಿ, ಮಂಜುಳಾ, ಉಪಾಧ್ಯಕ್ಷರಾದ ರಮಾಭಾಯಿ, ರಾಧಾ ಮುತಾಲಿಕ್, ಮುಖಂಡರಾದ ಶುಭಶ್ರೀ, ಬಸವಣ್ಣ, ಸ್ವಾಮಿಗೌಡ, ಗಿರೀಶ್ ಹಾಗೂ ಆಸ್ಪತ್ರೆ ಸಿಬ್ಬಂದಿ ನಾಗರಾಜ್ ಭಾಗವಹಿಸಿದ್ದರು.

ಸೈನಿಕ ಅಕಾಡೆಮಿಯಿಂದ ರಾಜ್ಯೋತ್ಸವ ಆಚರಣೆ



ಬೆಳವಾಡಿ ಸಿಲಿಕಾನ್ ವ್ಯಾಲಿ ಬಡಾವಣೆಯಲ್ಲಿರುವ ಸೈನಿಕ ಅಕಾಡೆಮಿಯಿಂದ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಮೈಸೂರು,ನ.5–ಬೆಳವಾಡಿ ಸಿಲಿಕಾನ್ ವ್ಯಾಲಿ ಬಡಾವಣೆಯಲ್ಲಿರುವ ಸೈನಿಕ ಅಕಾಡೆಮಿ ಸಂಸ್ಥೆಯಿಂದ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಸೈನಿಕ ಅಕಾಡೆಮಿಯ ಸಂಸ್ಥಾಪಕ, ಕಮಾಂಡೋ ಸಿ.ಎಂ.ಶ್ರೀಧರ ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದಲ್ಲಿ, ಸಾಂಸ್ಕೃತಿಕ ಕಾರ್ಯಕ್ರಮಗಳು, ಕ್ರೀಡಾಪಟುಗಳಿಗೆ ಪದಕ ಮತ್ತು ಬಹುಮಾನ ವಿತರಣೆ ಮಾಡಿ ಭವಿಷ್ಯದ ಸೈನಿಕರಿಗೆ ಪ್ರೋತ್ಸಾಹಿಸಲಾಯಿತು. ಈ ಸಂದರ್ಭದಲ್ಲಿ ಸಹ ಸಂಸ್ಥಾಪಕಿ ಅನಿತಾ ಶ್ರೀಧರ, ಅಧ್ಯಾಪಕರಾದ ಸಂತೋಷಕುಮಾರ್, ಸ್ವಾಮಿಗೌಡ, ಸಹ ಸಿಬ್ಬಂದಿ, ಬಡಾವಣೆಯ ಸದಸ್ಯರಾದ ಬೋರೇಗೌಡ, ಪ್ರಭುದೇವ್, ದೀಪು, ಸೈನಿಕ ಅಕಾಡೆಮಿಯ ಅಭ್ಯರ್ಥಿಗಳು ಮತ್ತಿತರರು ಉಪಸ್ಥಿತರಿದ್ದರು.

ಸಿಎಂ ಸಿದ್ದರಾಮಯ್ಯ ವಿರುದ್ಧ ಷಡ್ಯಂತ್ರ ಖಂಡಿಸಿ ನಾಳೆ ದೆಹಲಿಯಲ್ಲಿ ಪ್ರತಿಭಟನಾ ಸಭೆ

ಮೈಸೂರು, ನ.5(ಜಿಎ)–ಕೇಂದ್ರ ಸರ್ಕಾರ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ಉಂಟು ಮಾಡಿ, ಸಿಎಂ ಸಿದ್ದರಾಮಯ್ಯನವರ ವಿರುದ್ಧ ಹುನ್ನಾರ ಮಾಡುತ್ತ ಕೇಂದ್ರ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿ ನ.7ರಂದು ಬೆಳಗ್ಗೆ ದೆಹಲಿಯ ಕರ್ನಾಟಕ ಸಂಘದಲ್ಲಿ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಹಾಗೂ ಅಹಿಂದ ಸಂಘಟನೆಗಳ ವತಿಯಿಂದ ಪ್ರತಿಭಟನಾ ಸಭೆ ಆಯೋಜಿಸಲಾಗಿದೆ.



ಕೆ.ಎಸ್.ಶಿವರಾಮು

ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಪ್ರತಿಭಟನಾ ಸಭೆಯಲ್ಲಿ ರಾಜ್ಯ ಸಭಾ ಮಾಜಿ ಸದಸ್ಯ ಎಲ್.ಹನುಮಂತಯ್ಯ, ಕನ್ನಡ ಹೋರಾಟಗಾರ ಜಾಣಗೆರೆ ವೆಂಕಟರಾಮಯ್ಯ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಪ್ರೊ.ಎಸ್.ಜಿ.ಸಿದ್ದರಾಮಯ್ಯ, ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಂಜಗೆರೆ ಜಯಪ್ರಕಾಶ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು.

ಸಭೆಯಲ್ಲಿ ಮೈಸೂರು, ಬೆಂಗಳೂರು, ಚಿಕ್ಕಮಗಳೂರು ವಿವಿಧೆಡೆಗಳಿಂದ ಸುಮಾರು 200 ಮಂದಿ ಪಾಲ್ಗೊಳ್ಳಲಿದ್ದಾರೆ. ಸಭೆ ನಂತರ ರಾಷ್ಟ್ರಪತಿಗಳಿಗೆ ಮಧ್ಯ ಪ್ರವೇಶಿಸುವಂತೆ ಕೋರಿ ಮನವಿ ಪತ್ರ ಸಲ್ಲಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಯೋಗೇಶ್ ಉಪ್ಪಾರ್, ಮೊಗಣ್ಣಚಾರ್, ರವಿ ನಂದನ್, ಲೋಕೇಶ್ ಮಾದಾಪುರ ಮತ್ತಿತರರು ಉಪಸ್ಥಿತರಿದ್ದರು.

ರಾಜ್ಯ ಮಟ್ಟದ ಅಂಧರ ಟಿ–20 ಕ್ರಿಕೆಟ್ ಪಂದ್ಯಾವಳಿ ಉದ್ಘಾಟನೆ



ರಾಜ್ಯ ಮಟ್ಟದ ಅಂಧರ ಟಿ–20 ಕ್ರಿಕೆಟ್ ಪಂದ್ಯಾವಳಿ ಉದ್ಘಾಟನಾ ಕಾರ್ಯಕ್ರಮ.

ಮೈಸೂರು, ನ. 5– ರಾಜ್ಯ ಮಟ್ಟದ ಅಂಧರ ಟಿ–20 ಕ್ರಿಕೆಟ್ ಪಂದ್ಯಾವಳಿ ಉದ್ಘಾಟನಾ ಕಾರ್ಯಕ್ರಮ ಮೈಸೂರಿನಲ್ಲಿ ಆಯೋಜಿಸಲಾಗಿತ್ತು.

ಉದ್ಘಾಟನೆಯನ್ನು ಎಸಿಪಿ ಸಂದೇಶ್ ಕುಮಾರ್, ರಾಜ್ಯ ಚೆಸ್ ಅಸೋಸಿಯೇಷನ್ ಅಧ್ಯಕ್ಷ ಮಧುಕರ್, ಸಮರ್ಥನಂ ಅಂಗವಿಕಲ ಸಂಸ್ಥೆಯ ವ್ಯವಸ್ಥಾಪಕ ಟ್ರಸ್ಟ್ ಮಹಾಂತೇಶ್ ಜಿ.ಕೆ, ಮೈಸೂರು ಕಲ್ಯಾಣ ಮಂಟಪ ಮಾಲೀಕರ ಸಂಘದ ಅಧ್ಯಕ್ಷ ಎಸ್.ಮೂರ್ತಿ, ಮೈಸೂರು ರೋಟರಿ ಪಶ್ಚಿಮ ಅಧ್ಯಕ್ಷ ನಾಗೇಶ್, ಲಯನ್ಸ್ ಕ್ಲಬ್ ಜಯಕುಮಾರ್, ಕೆ.ಎಸ್.ಸಿ. ಬಿ ಕಾರ್ಯದರ್ಶಿ ಚಂದ್ರಕಾಂತ್ ಸಿಂಗ್, ಶ್ರೀನಿವಾಸ, ಸಮರ್ಥನ ಅಂಗವಿಕಲರ ಸಂಸ್ಥೆ ಮೈಸೂರು ವಿಭಾಗ ಸಂಯೋಜಕ ಶಿವರಾಜ್ ಪಂದ್ಯಾವಳಿ ಟ್ರೋಫಿಯನ್ನು ಅನಾವರಣ ಮಾಡುವ ಮೂಲಕ ಉದ್ಘಾಟಿಸಿದರು. ಪ್ರಾಸ್ತಾವಿಕ ಭಾಷಣ ಮಾತನಾಡಿದ ಸಮರ್ಥನಂ ಸಂಸ್ಥೆಯ ವ್ಯವಸ್ಥಾಪಕ ಟ್ರಸ್ಟಿ ಡಾ.ಮಹಾಂತೇಶ್ ಜಿ.ಕೆ, ಈ ಪಂದ್ಯಾವಳಿಯು 7ನೇ ಆವೃತಿಯ ರಾಷ್ಟ್ರೀಯ ಮಟ್ಟದ ನಾಗೇಶ್ ಟ್ರೋಫಿ ಪಂದ್ಯಾವಳಿ ರಾಜ್ಯ ತಂಡಕ್ಕೆ ಆಯ್ಕೆ ಹಾಗೂ ಪಾಕಿಸ್ತಾನದಲ್ಲಿ ಅಂಧರ ಕ್ರಿಕೆಟ್ ವಿಶ್ವಕಪ್‌ಗೆ ತಯಾರಿ ನಡೆಸುತ್ತಿರುವ ರಾಷ್ಟ್ರೀಯ ಅಂಧರ ಕ್ರಿಕೆಟ್ ತಂಡಕ್ಕೆ ಆಯ್ಕೆ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಈ ಪಂದ್ಯಾವಳಿ ಸಹಕಾರಿ ಆಗಿದೆ ಎಂದರು.

ಕನ್ನಡ ರಾಜ್ಯೋತ್ಸವ ಕ್ರಿಕೆಟ್ ಪಂದ್ಯಾವಳಿ



ಮೈಸೂರಿನ ಕುರ್ಗಳ್ಳಿ ಬಿಇಎಂಎಲ್ ಕ್ರೀಡಾಂಗಣದಲ್ಲಿ ಕೆಎಚ್‌ಬಿ ಅಸೋಸಿಯೇಷನ್, ಕುರ್ಗಳ್ಳಿ ಕ್ರಿಕೆಟ್ ಕ್ಲಬ್‌ನಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕ್ರಿಕೆಟ್ ಪಂದ್ಯಾವಳಿಯಲ್ಲಿ ಬ್ರಹ್ಮಗಿರಿ ತಂಡವು ಮೊದಲನೇ ಬಹುಮಾನ ಪಡೆಯಿತು. ತಂಡದ ರನ್ನರ್ ಆಗಿ ಆದರ್ಶ, ಕ್ಯಾಪ್ಟನ್ ಆಗಿ ವೆಂಕಟೇಶ್, ಆಟಗಾರರಾಗಿ ರೇವಣ್ಣ, ಅರುಣ್, ಮೇಘರಾಜ್, ಪ್ರಸನ್ನ, ಮಂಜು, ಶಿವಕುಮಾರ್, ರೋಹಿತ್, ಕೇಶವಮೂರ್ತಿ, ಜಗದೀಶ್, ಶ್ರೇಯಸ್, ಮೋಹನ್ ಮತ್ತಿತರರು ಉಪಸ್ಥಿತರಿದ್ದರು.

ದತ್ತಮಾಲಾ ಅಭಿಯಾನ: 2 ದಿನ ಮುಳ್ಳಯ್ಯನಗಿರಿ, ದತ್ತಪೀಠ ಭಾಗಕ್ಕೆ ಪ್ರವಾಸಿಗರಿಗೆ ನಿಷೇಧ

ಚಿಕ್ಕಮಗಳೂರು: ಕಾಫಿನಾಡಿನ ಪ್ರಸಿದ್ಧ ಪ್ರವಾಸಿ ತಾಣ ಮುಳ್ಳಯ್ಯನಗಿರಿಗೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ. ಶ್ರೀರಾಮಸೇನೆಯ ದತ್ತಮಾಲಾ ಅಭಿಯಾನ ಹಿನ್ನೆಲೆಯಲ್ಲಿ ನ.9 ಹಾಗೂ 10ರಂದು 2 ದಿನ ಪ್ರವಾಸಿಗರಿಗೆ ನಿರ್ಬಂಧಿಸಲಾಗಿದೆ. ದತ್ತ ಮಾಲಾಧಾರಿಗಳಿಗೆ ಮಾತ್ರ ಅವಕಾಶ ನೀಡಲಾಗಿದೆ. ಮುಳ್ಳಯ್ಯನಗಿರಿ, ದತ್ತಪೀಠ, ದತ್ತಪೀಠ, ಗಾಳಿಕೆರೆ, ಸೀತಾಳಯ್ಯನಗಿರಿ, ಮಾಣಿಕ್ಯಾಧಾರ ತಾಣಗಗಳಿಗೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಿ ಡಿಸಿ ಮೀನಾ ನಾಗರಾಜ್ ಆದೇಶಿಸಿದ್ದಾರೆ. 21ನೇ ವರ್ಷದ ದತ್ತಮಾಲಾ ಅಭಿಯಾನಕ್ಕೆ ಚಾಲನೆ ದೊರೆತಿದೆ. ದತ್ತಮಾಲಾಧಾರಿಗಳು 7 ದಿನಗಳ ವ್ರತಾಚರಣೆಯಲ್ಲಿರಲಿದ್ದಾರೆ. ದತ್ತ ಮಾಲಾ ಅಭಿಯಾನದಲ್ಲಿ ಬಿಜೆಪಿ ನಾಯಕರು ಸಹ ಭಾಗವಹಿಸಲಿದ್ದಾರೆ. ಪೊಲೀಸರು ಬಿಗಿ ಬಂದೋಬಸ್ತ್ ಮಾಡಲಿದ್ದಾರೆ.

ಡಾ.ಮೂರ್ತಿ ಅವರಿಗೆ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರ



ಯೋಗ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮೈಸೂರಿನ ಗೋಕುಲಂನಲ್ಲಿರುವ ಚೈತನ್ಯ ಯೋಗ ಕೇಂದ್ರದ ಮುಖ್ಯಸ್ಥ ಡಾ.ಬಿ.ಪಿ.ಮೂರ್ತಿ ಅವರಿಗೆ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರ ನೀಡಲಾಯಿತು. ಈ ವೇಳೆ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ತನ್ವೀರ್ ಸೇಠ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಇನ್ನಿತರರಿದ್ದರು.

ಎರಡನೇ ಹಂತದಲ್ಲಿ ಭಾರತ್ ಅಕ್ಕಿ, ಗೋಧಿ ಹಿಟ್ಟು ಮಾರಾಟಕ್ಕೆ ಚಾಲನೆ

ನವದೆಹಲಿ,ನ.5–ಎರಡನೇ ಹಂತದಲ್ಲಿ ಭಾರತ್ ಅಕ್ಕಿ ಮತ್ತು ಗೋಧಿಯ ಚಿಲ್ಲರೆ ಮಾರಾಟದ ಸಂಚಾರಿ ವಾಹನಗಳಿಗೆ ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವ ಪ್ರಹ್ಲಾದ ಜೋಶಿ ಹಾಗೂ ರಾಜ್ಯ ಸಚಿವ ಬಿ.ಎಲ್.ವರ್ಮಾ ನವದೆಹಲಿಯಲ್ಲಿ ಚಾಲನೆ ನೀಡಿದರು.

ಈ ಕಾರ್ಯಕ್ರಮದಡಿ ಪ್ರತಿ ಕೆಜಿ ಭಾರತ್ ಅಕ್ಕಿಯ ಗರಿಷ್ಠ ಮಾರಾಟ ಬೆಲೆ ರೂ. 34 ಹಾಗೂ ಭಾರತ್ ಅಟ್ಟಾ (ಗೋಧಿ ಹಿಟ್ಟು)ಬೆಲೆ ರೂ. 30 ಆಗಿದೆ. ಈ ವೇಳೆ ಮಾಧ್ಯಮದವರೊಂದಿಗೆ ಸಂವಾದ ನಡೆಸಿದ ಪ್ರಹ್ಲಾದ ಜೋಶಿ, ಇದು ರಿಯಾಯಿತಿ ದರದಲ್ಲಿ ಗ್ರಾಹಕರಿಗೆ ಅಗತ್ಯ ಆಹಾರ ಪದಾರ್ಥಗಳ ಲಭ್ಯತೆಯನ್ನು ಖಾತ್ರಿಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಬದ್ಧತೆಯ ದೃಢೀಕರಣವಾಗಿದೆ ಎಂದು ಹೇಳಿದರು.

ಭಾರತ್ ಬ್ರಾಂಡ್ ಅಡಿಯಲ್ಲಿ ಅಕ್ಕಿ, ಗೋಧಿ ಹಿಟ್ಟು ಮತ್ತು ಬೇಳೆಗಳಂತಹ ಮೂಲ ಆಹಾರ ಪದಾರ್ಥಗಳ ಚಿಲ್ಲರೆ ಮಾರಾಟದ ಮೂಲಕ ನೇರ ಮಧ್ಯಸ್ಥಿಕೆ ಬೆಲೆಯಲ್ಲಿ ಸ್ಥಿರತೆ ಕಾಪಾಡಿಕೊಳ್ಳಲು ಸಹಾಯ ಮಾಡಿದೆ ಎಂದು ತಿಳಿಸಿದರು.



ಎರಡನೇ ಹಂತದಲ್ಲಿ ಭಾರತ್ ಅಕ್ಕಿ ಮತ್ತು ಗೋಧಿಯ ಚಿಲ್ಲರೆ ಮಾರಾಟದ ಸಂಚಾರಿ ವಾಹನಗಳಿಗೆ ಕೇಂದ್ರ ಆಹಾರ ಸಚಿವ ಪ್ರಹ್ಲಾದ ಜೋಶಿ ಹಾಗೂ ರಾಜ್ಯ ಸಚಿವ ಬಿ.ಎಲ್.ವರ್ಮಾ ನವದೆಹಲಿಯಲ್ಲಿ ಚಾಲನೆ ನೀಡಿದರು.

ಹಂತ–2ರ ಪ್ರಾರಂಭಿಕ ಹಂತದಲ್ಲಿ 3.69 ಎಲ್.ಎಂ.ಟಿ ಗೋಧಿ ಮತ್ತು 2.91 ಎಲ್.ಎಂ.ಟಿ ಅಕ್ಕಿಯನ್ನು ಚಿಲ್ಲರೆ ಮಾರಾಟಕ್ಕೆ ಲಭ್ಯವಾಗುವಂತೆ ಮಾಡಲಾಗಿದೆ. ಹಂತ–Iರಲ್ಲಿ ಸುಮಾರು 15.20 ಎಲ್.ಎಂ.ಟಿ ಭಾರತ್ ಗೋಧಿ ಹಿಟ್ಟು ಮತ್ತು 14.58 ಎಲ್.ಎಂ.ಟಿ ಭಾರತ್ ಅಕ್ಕಿಯನ್ನು ಸಾಮಾನ್ಯ ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗಿತ್ತು. ಹಂತ–2ರಲ್ಲಿ ಎನ್.ಸಿ.ಸಿ.ಎಫ್, ನಾಫೆಡ್ ಮತ್ತು ಕೇಂದ್ರೀಯ ಭಂಡಾರ್ ಮತ್ತು ಇ–ಕಾಮರ್ಸ್ ರಿಟೇಲರ್ ಅಂಗಡಿಗಳು ಮತ್ತು ಸಂಚಾರಿ ವಾಹನಗಳಲ್ಲಿ ಭಾರತ್ ಅಟ್ಟಾ (ಗೋಧಿ ಹಿಟ್ಟು) ಮತ್ತು ಭಾರತ್ ಅಕ್ಕಿ ಮಾರಾಟ ಮಾಡಲಾಗುತ್ತದೆ. ಗೋಧಿ ಹಿಟ್ಟು ಹಾಗೂ ಅಕ್ಕಿಯನ್ನು 5 ಕೆಜಿ ಮತ್ತು 10 ಕೆಜಿ ಚೀಲಗಳಲ್ಲಿ ಮಾರಾಟ ಮಾಡಲಾಗುತ್ತದೆ.

ದೇಶ – ವಿದೇಶ

ಖಲಿಸ್ತಾನಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಕೆನಡಾ ಪೊಲೀಸ್ ಅಮಾನತು

ಒಟ್ಟಾವ: ಕೆನಡಾದ ಬ್ರಾಂಪ್ಟನ್‌ನಲ್ಲಿ ಹಿಂದೂ ದೇವಾಲಯದ ಎದುರು ನಡೆದ ಖಲಿಸ್ತಾನಿ ಪರ ಪ್ರತಿಭಟನೆಯಲ್ಲಿ ಪಾಲ್ಗೊಂಡ ಆರೋಪದಲ್ಲಿ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರನ್ನು ಕೆನಡಾ ಸರ್ಕಾರ ಅಮಾನತು ಮಾಡಿದೆ. ಬ್ರಾಂಪ್ಟನ್‌ನಲ್ಲಿರುವ ಹಿಂದೂ ದೇವಾಲಯದ ಹೊರಗೆ ಪೊಲೀಸ್ ಅಧಿಕಾರಿ ಖಲಿಸ್ತಾನ್ ಪರ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಇದರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿತ್ತು. ಈ ಬೆನ್ನಲ್ಲೇ ಅಧಿಕಾರಿಯನ್ನು ಅಮಾನತುಗೊಳಿಸಲಾಗಿದೆ. ಅಮಾನತುಗೊಂಡ ಪೀಲ್ ಪ್ರಾದೇಶಿಕ ಪೊಲೀಸ್ ಅಧಿಕಾರಿಯನ್ನು ಹರೀಂದರ್ ಸೋಹಿ ಎಂದು ಗುರುತಿಸಲಾಗಿದೆ. ಸೋಹಿ ಖಲಿಸ್ತಾನ್ ಧ್ವಜವನ್ನು ಹಿಡಿದುಕೊಂಡಿರುವುದು ಮತ್ತು ಇತರರು ಭಾರತ ವಿರೋಧಿ ಘೋಷಣೆಗಳನ್ನು ಕೂಗುತ್ತಿರುವ ವಿಡಿಯೋ ವೈರಲ್ ಆಗಿತ್ತು. ಈ ಹಿನ್ನೆಲೆಯಲ್ಲಿ ಸಮುದಾಯದ ಸುರಕ್ಷತೆ ಮತ್ತು ಪೊಲೀಸ್ ಕಾಯಿದೆಯ ಪ್ರಕಾರ ಅಧಿಕಾರಿಯನ್ನು ಅಮಾನತುಗೊಳಿಸಲಾಗಿದೆ. ಈ ಘಟನಾವಳಿಗಳ ಬಗ್ಗೆ ತನಿಖೆ ನಡೆಸಲಾಗುತ್ತಿದ್ದು, ತನಿಖೆ ಪೂರ್ಣಗೊಳ್ಳುವವರೆಗೆ ಮಾಹಿತಿಗಳನ್ನು ನೀಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



ಮದರಸಾ ಶಿಕ್ಷಣ ಕಾಯ್ದೆಯ ಸಿಂಧುತ್ವ ಎತ್ತಿ ಹಿಡಿದ ಸುಪ್ರೀಂಕೋರ್ಟ್



ನವದೆಹಲಿ: ಮಹತ್ವದ ಬೆಳವಣಿಗೆಯಲ್ಲಿ ಉತ್ತರಪ್ರದೇಶ ಮದರಸಾ ಶಿಕ್ಷಣ ಕಾಯ್ದೆಯ ಮಹತ್ವವನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿದೆ.

ಉತ್ತರ ಪ್ರದೇಶದ ಮದರಸಾ ಕಾನೂನನ್ನು ಅಸಂವಿಧಾನಿಕ ಎಂದು ಘೋಷಿಸಿದ ಅಲಹಾಬಾದ್ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಮೇಲಿನ ತೀರ್ಪನ್ನು ಸುಪ್ರೀಂ ಕೋರ್ಟ್ ಮಂಗಳವಾರ ಪ್ರಕಟಿಸಿದೆ. ತನ್ನ ಆದೇಶದಲ್ಲಿ, ನ್ಯಾಯಾಲಯವು ಕಾನೂನನ್ನು ಸಾಂವಿಧಾನಿಕ ಎಂದು ಹೇಳಿದೆ.

ಆದಾಗ್ಯೂ, ಮದರಸಾ ಕಾಯಿದೆಯು ಫಜಿಲ್ ಮತ್ತು ಕಾಮಿಲ್ ಪದವಿಗಳಿಗೆ ಸಂಬಂಧಿಸಿದಂತೆ ಉನ್ನತ ಶಿಕ್ಷಣವನ್ನು ನಿಯಂತ್ರಿಸುವ ಮಟ್ಟಿಗೆ ವಿಶ್ವವಿದ್ಯಾನಿಲಯ ಧನಸಹಾಯ ಆಯೋಗದ ಕಾಯಿದೆಯೊಂದಿಗೆ ಸಂಘರ್ಷದಲ್ಲಿದೆ ಎಂದು ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿದೆ.

ಉತ್ತರಪ್ರದೇಶ ಬೋರ್ಡ್ ಆಫ್ ಮದರಸಾ ಎಜುಕೇಶನ್ ಆಕ್ಟ್ 2004ರ ಸಾಂವಿಧಾನಿಕ ಸಿಂಧುತ್ವವನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿದೆ. ಶಿಕ್ಷಣದ ಗುಣಮಟ್ಟವನ್ನು ನಿಗದಿಪಡಿಸುವುದು ಸರ್ಕಾರದ ಹಕ್ಕು ಎಂದೂ ನ್ಯಾಯಾಲಯ ಹೇಳಿದೆ. ಮಾರ್ಚ್ 22ರಂದು ಅಲಹಾಬಾದ್ ಹೈಕೋರ್ಟ್ ಈ ಕಾಯ್ದೆಯನ್ನು ಅಸಂವಿಧಾನಿಕ ಮತ್ತು ಜಾತ್ಯತೀತತೆಯ ತತ್ವದ ಉಲ್ಲಂಘನೆ ಎಂದು ಘೋಷಿಸಿತ್ತು.

ಕುಂಬಳಕಾಯಿ ದೋಣಿಯಲ್ಲಿ 73 ಕಿ.ಮೀ ನದಿಯಲ್ಲಿ ಪ್ರಯಾಣಿಸಿ ವಿಶ್ವ ದಾಖಲೆ

ವಾಷಿಂಗ್‌ಟನ್: ಅಮೆರಿಕದ ಗ್ಯಾರಿ ಕ್ರಿಸ್ಟೆನ್ಸೆನ್ ಕುಂಬಳಕಾಯಿ ದೋಣಿಯಲ್ಲಿ 73.50 ಕಿಮೀ ಪ್ರಯಾಣ ಮಾಡಿ ವಿಶ್ವ ದಾಖಲೆ ನಿರ್ಮಿಸಿದ್ದಾರೆ. 26 ಗಂಟೆಗಳ ಕಾಲ ಕೊಲಂಬಿಯಾ ನದಿಯಲ್ಲಿ ಪ್ರಯಾಣ ಮಾಡುವ ಮೂಲಕ ಈ ಸಾಧನೆ ಮಾಡಿದ್ದಾರೆ. 46 ವರ್ಷದ ವ್ಯಕ್ತಿ ತಮ್ಮ ಕೈಯಿಂದಲೇ ಕೆತ್ತಿದ ಪಂಕಿ ಲೋಫ್ಸ್ಟರ್ ಎನ್ನುವ ಹೆಸರಿನ ಹಡಗಿನಲ್ಲಿ ಪ್ರಯಾಣ ಮಾಡಿದರು. ಅ.12ರಿಂದ 13ರವರೆಗೆ 26 ಗಂಟೆಗಳ ಕಾಲ ನದಿಯಲ್ಲಿ ಕುಂಬಳಕಾಯಿ ದೋಣಿಯಲ್ಲಿ ಪ್ರಯಾಣ ಮಾಡಿ ವಿಶ್ವದಾಖಲೆ ಮಾಡಿದ್ದಾರೆ. ಗ್ಯಾರಿ ಅವರು 2011 ರಿಂದ ದೈತ್ಯ ಕುಂಬಳಕಾಯಿಗಳನ್ನು ಬೆಳೆಯುತ್ತಿದ್ದಾರೆ. 2013ರಲ್ಲಿ ಅವರು ವೆಸ್ಟ್ ಕೋಸ್ಟ್ ಜೈಂಟ್ ಕುಂಬಳಕಾಯಿ ರೆಗಟ್ಟಾದಲ್ಲಿ ಸ್ಪರ್ಧಿಸಲು ತಮ್ಮ ಮೊದಲ ದೋಣಿ ಗಾತ್ರದ ಕುಂಬಳಕಾಯಿಯನ್ನು ಕೆತ್ತಿದರು, ಈ ಇವೆಂಟ್‌ನಲ್ಲಿ ಕಳೆದ 4 ವರ್ಷಗಳಿಂದಲೂ ಇವರೇ ಗೆಲ್ಲುತ್ತಿದ್ದಾರೆ. ಒರೆಗಾನ್‌ನ ಹ್ಯಾಪಿ ವ್ಯಾಲಿ ಮೂಲದವರಾದ ಗ್ಯಾರಿ, ಈ ದಾಖಲೆ ಪ್ರಯತ್ನವು ನಾನು ದೀರ್ಘಕಾಲ ಪರಿಗಣಿಸಿದ್ದ ಸವಾಲಾಗಿತ್ತು, ಅಂತಿಮವಾಗಿ ಈ ವರ್ಷ ನಾನು ಪ್ರಯಾಣಕ್ಕೆ ಸೂಕ್ತವಾದ ಕುಂಬಳಕಾಯಿಯನ್ನು ಬೆಳೆಸಿದಾಗ ಅದನ್ನು ಮುಂದುವರಿಸಲು ನಿರ್ಧರಿಸಿದೆ ಎಂದಿದ್ದಾರೆ.



ಇನ್ನು ಮುಂದೆ ಯಾವುದೇ ಚುನಾವಣೆಗೂ ಸ್ಪರ್ಧಿಸಲ್ಲ



ಮುಂಬೈ: ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷ(ಎನ್‌ಸಿಪಿ)ದ ಮುಖ್ಯಸ್ಥ ಶರದ್ ಪವಾರ್ ಮಂಗಳವಾರ ಮಹತ್ವದ ಘೋಷಣೆ ಮಾಡಿದ್ದು, ತಮ್ಮ ರಾಜ್ಯಸಭಾ ಸದಸ್ಯತ್ವದ ಅವಧಿ ಮುಕ್ತಾಯಗೊಳ್ಳುತ್ತಿರುವ ಕಾರಣ ಮುಂದೆ ಯಾವುದೇ ಚುನಾವಣೆಯಲ್ಲೂ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದಾರೆ.

ನಾನು 14 ಬಾರಿ ಚುನಾವಣೆಗೆ ಸ್ಪರ್ಧಿಸಿದ್ದೇನೆ ಮತ್ತು ನನ್ನ ರಾಜ್ಯಸಭಾ ಅಧಿಕಾರಾವಧಿ ಪೂರ್ಣಗೊಂಡ ನಂತರ ನಾನು ನನ್ನ ಸಂಸದ ಸ್ಥಾನ ಉಳಿಸಿಕೊಳ್ಳಬೇಕೇ ಅಥವಾ ಬೇಡವೇ ಎಂಬ ಬಗ್ಗೆ ಯೋಚಿಸುತ್ತಿದ್ದೇನೆ ಎಂದು ತಿಳಿಸಿದ್ದಾರೆ. ಮೂರು ಬಾರಿ ಮುಖ್ಯಮಂತ್ರಿಯಾಗಿರುವ ಶರದ್ ಪವಾರ್ ಅವರು ಹೊಸ ಪೀಳಿಗೆಗೆ ಜವಾಬ್ದಾರಿಯನ್ನು ಹಸ್ತಾಂತರಿಸುವ ಅಗತ್ಯವನ್ನು ಒತ್ತಿ ಹೇಳಿದರು ಮತ್ತು ಜನರ ಸೇವೆಯನ್ನು ಮುಂದುವರಿಸಲು ಯಾವುದೇ ಚುನಾವಣೆಯಲ್ಲಿ ಗೆಲ್ಲುವ ಅಗತ್ಯವಿಲ್ಲ ಎಂದರು. ನಾನು ಇಲ್ಲಿವರೆಗೆ 14 ಚುನಾವಣೆಗಳಲ್ಲಿ ಸ್ಪರ್ಧಿಸಿದ್ದೇನೆ ಮತ್ತು ಯಾವುದೇ ಚುನಾವಣೆಯಲ್ಲೂ ನೀವು ನನ್ನನ್ನು ಮನೆಗೆ ಹೋಗಲು ಬಿಡಲಿಲ್ಲ. ಪ್ರತಿ ಬಾರಿ ನೀವು ನನ್ನನ್ನು ಗೆಲ್ಲಿಸಿದ್ದೀರಿ. ಆದರೆ ಈಗ ಹೊಸ ಪೀಳಿಗೆಗೆ ಅವಕಾಶ ನೀಡಬೇಕು. ನನಗೆ ಅಧಿಕಾರ ಬೇಡ. ಆದರೆ ನಾನು ಜನರ ಸೇವೆ ನಿಲ್ಲಿಸುವುದಿಲ್ಲ ಎಂದು ಹೇಳಿದ್ದಾರೆ.

ಹಿಂದೂ ದೇಗುಲದ ಮೇಲೆ ದಾಳಿ: ಖಲಿಸ್ತಾನಿಗಳ ವಿರುದ್ಧ ಸಾವಿರಾರು ಭಾರತೀಯರ ಪ್ರತಿಭಟನೆ



ಒಟ್ಟಾವ(ಕೆನಡಾ): ಕೆನಡಾದಲ್ಲಿ ಖಲಿಸ್ತಾನಿ ಪ್ರತ್ಯೇಕತಾವಾದಿಗಳು ದೇಗುಲದ ಹೊರಗೆ ನೆರೆದಿದ್ದ ಹಿಂದೂಗಳ ಮೇಲೆ ಹಲ್ಲೆ ನಡೆಸಿದ ಘಟನೆ ಖಂಡಿಸಿ ಸಾವಿರಾರು ಮಂದಿ ಹಿಂದೂಗಳು ಬ್ರಾಂಪ್ಟನ್ ಹಿಂದೂ ಸಭಾ ಮಂದಿರದ ಹೊರಭಾಗದಲ್ಲಿ ಸೋಮವಾರ ಸಂಜೆ ಬೃಹತ್ ಪ್ರತಿಭಟನೆ ನಡೆಸಿದರು. ಯಾವುದೇ ಕಾರಣಕ್ಕೂ ಕೆನಡಾದಲ್ಲಿರುವ ಖಲಿಸ್ತಾನಿ ಪ್ರತ್ಯೇಕತಾವಾದಿಗಳಿಗೆ ಕೆನಡಾ ರಾಜಕಾರಣಿಗಳು, ಕಾನೂನು ಇಲಾಖೆ ಬೆಂಬಲ ನೀಡಬಾರದೆಂದು ಹಿಂದೂ ಸಂಘಟನೆ ಆಗ್ರಹಿಸಿದೆ. ದೀಪಾವಳಿ ಸಂದರ್ಭದಲ್ಲಿ ಕೆನಡಾದಲ್ಲಿರುವ ಹಿಂದೂಗಳ ದೇವಾಲಯವನ್ನು ಗುರಿಯಾಗಿರಿಸಿಕೊಂಡು ದಾಳಿ ನಡೆಸಲಾಗಿದೆ. ಈ ಹಿಂದೂ ಫೋಬಿಯಾ ದೇಶದಲ್ಲಿ ನಿಲ್ಲಬೇಕು ಎಂದು Coalition Of Hindus of north America ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಾಕಿ ಒತ್ತಾಯಿಸಿದೆ. ಕೆನಡಾದ ಬ್ರಾಂಪ್ಟನ್‌ನಲ್ಲಿರುವ ಹಿಂದೂ ದೇವಾಲಯದ ಹೊರಗೆ ಹಿಂದೂಗಳ ಮೇಲೆ ನಡೆದ ಹಲ್ಲೆಯನ್ನು ಭಾರತದ ರಾಜತಾಂತ್ರಿಕರ ಮೇಲೆ ಕೆನಡಾ ಕೈಗೊಂಡ ದ್ವೇಷದ ಕ್ರಮಗಳನ್ನು, ಭಾರತದ ಪ್ರಧಾನಿ ನರೇಂದ್ರ ಮೋದಿ ಕಠೋರ ಶಬ್ದಗಳಲ್ಲಿ ಖಂಡಿಸಿ, ಇದು ಹೇಡಿತನದ ಕೃತ್ಯ ಎಂದು ವಾಗ್ದಾಳಿ ನಡೆಸಿದ್ದಾರೆ.

ಭೈರಪ್ಪನಗುಡಿಯಲ್ಲಿ ಅಕ್ರಮ ಮಣ್ಣು ಸಾಗಣೆ



ಭೈರಪ್ಪನಗುಡಿ ಗ್ರಾಮದಲ್ಲಿ ಅಕ್ರಮವಾಗಿ ಮಣ್ಣು ಸಾಗಿಸಿರುವುದು.

ಮಡಿಕೇರಿ, ನ.5–ಕೂಡಿಗೆ ಸಮೀಪದ ತೊರೆನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಾಣವಾರ ರಸ್ತೆಯ ಭೈರಪ್ಪನಗುಡಿ ಗ್ರಾಮದಲ್ಲಿ ಖಾಸಗಿ ವ್ಯಕ್ತಿಗಳು ಆಲದ ಮರ ಹಾಗೂ ಗಂಧದ ಮರಗಳನ್ನು ನಾಶಗೊಳಿಸಿ, ಅಕ್ರಮವಾಗಿ ಮಣ್ಣು ಸಾಗಿಸಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಗ್ರಾಮಸ್ಥರ ಒತ್ತಾಯಕ್ಕೆ ಮಣಿದು ಸ್ಥಳಕ್ಕೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು, ಕುಶಾಲನಗರ ತಹಸೀಲ್ದಾರ್ ಕಿರಣ್ ಜಿ.ಗೌರಯ್ಯ, ಅರಣ್ಯ ಇಲಾಖೆ ಸಿಬ್ಬಂದಿ, ತೊರೆನೂರು ಗ್ರಾಪಂ ಅಭಿವೃದ್ಧಿ ಅಧಿಕಾರಿ ಹಾಗೂ ಆಡಳಿತ ಮಂಡಳಿ ಸದಸ್ಯರು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಬಳಿಕ ಗುಡ್ಡಗಳನ್ನು ಕೊರೆದು ಮಣ್ಣು ತೆಗೆಯುತ್ತಿರುವುದನ್ನು ಸ್ಥಗಿತಗೊಳಿಸಲು ಅಧಿಕಾರಿಗಳು ಸೂಚಿಸಿದರು.

ತಹಸೀಲ್ದಾರ್ ಕಿರಣ್ ಗೌರಯ್ಯ, ಅರಣ್ಯ ಅಧಿಕಾರಿಗಳನ್ನು ದೂರವಾಣಿ ಮೂಲಕ ಸಂಪರ್ಕಿಸಿ ಸಂಬಂಧಪಟ್ಟ ಜಮೀನು ಮಾಲೀಕರ ಮೇಲೆ ಪ್ರಕರಣ ದಾಖಲಿಸುವಂತೆ ಸೂಚನೆ ನೀಡಿದರು. ದೊಡ್ಡ ಬೆಟ್ಟಗಳನ್ನು ಕೊರೆದು ಖಾಸಗಿ ವ್ಯಕ್ತಿಗಳಿಗೆ ಮಣ್ಣು ಮಾರಾಟ ಮಾಡುತ್ತಿರುವ ಬಗ್ಗೆ ನಮ್ಮ ಗಮನಕ್ಕೆ ಬಂದಿದೆ. ಮಣ್ಣು ತೆಗೆಯುವಾಗ ಇದಕ್ಕೆ ಸಂಬಂಧಪಟ್ಟ ಇಲಾಖೆಯಿಂದ ಅನುಮತಿ ಪಡೆದುಕೊಳ್ಳಬೇಕು. ಆದರೆ, ಸ್ಥಳೀಯ ಗ್ರಾಮ ಪಂಚಾಯಿತಿ, ಅರಣ್ಯ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಸಂಬಂಧಪಟ್ಟ ಇತರೆ ಇಲಾಖೆಗಳಿಂದ ಯಾವುದೇ ಅನುಮತಿ ಪಡೆಯದೆ ಹಗಲು ರಾತ್ರಿ ಮಣ್ಣು ತೆಗೆದು ಮಾರಾಟ ಮಾಡಲಾಗುತ್ತಿದೆ. ಹೀಗಾಗಿ ಜಮೀನು ಮಾಲೀಕರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಇದೇ ಸಂದರ್ಭ ಸಾರ್ವಜನಿಕರು ಆಗ್ರಹಿಸಿದರು.

ನ.20ರವರೆಗೆ ಕಾಲುಬಾಯಿ ರೋಗ ಲಸಿಕೆ

ವಿವಿಧ ಗ್ರಾಮಗಳಿಗೆ ಜಂಟಿ ನಿರ್ದೇಶಕ ಡಾ.ಪ್ರಸನ್ನ ಕುಮಾರ್ ಭೇಟಿ, ಪರಿಶೀಲನೆ



ವಿವಿಧ ಗ್ರಾಮಗಳಿಗೆ ಭೇಟಿ ನೀಡಿದ ಪಶುಪಾಲನಾ ಇಲಾಖೆ ಜಂಟಿ ನಿರ್ದೇಶಕ ಡಾ.ಪ್ರಸನ್ನ ಕುಮಾರ್, ಜಾನುವಾರುಗಳ ಕಾಲುಬಾಯಿ ರೋಗ ಲಸಿಕೆ ಪರಿಶೀಲಿಸಿದರು.

ಮಡಿಕೇರಿ, ನ.5–ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 6ನೇ ಸುತ್ತಿನ ಕಾಲುಬಾಯಿ ರೋಗ ಲಸಿಕೆ ಕಾರ್ಯಕ್ರಮ ನ.20 ರವರೆಗೆ ಕೊಡಗು ಜಿಲ್ಲೆಯಾದ್ಯಂತ ನಡೆಯುತ್ತಿದ್ದು, ಈ ಸಂಬಂಧ ಪಶುಪಾಲನಾ ಇಲಾಖೆ ಜಂಟಿ ನಿರ್ದೇಶಕ ಡಾ.ಪ್ರಸನ್ನ ಕುಮಾರ್ ಮಂಗಳವಾರ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ದನ ಮತ್ತು ಎಮ್ಮೆಗೆ ಕಾಲುಬಾಯಿ ರೋಗ ಕಾಣಿಸಿಕೊಳ್ಳಲಿದ್ದು, ಸರ್ಕಾರದ ನಿರ್ದೇಶನದಂತೆ ಜಾನುವಾರುಗಳಿಗೆ ಲಸಿಕೆ ಹಾಕಲಾಗುತ್ತದೆ. ಪ್ರತಿ 6 ತಿಂಗಳಿಗೊಮ್ಮೆ ಜಾನುವಾರುಗಳಿಗೆ ಲಸಿಕೆ ಕೊಡಿಸಿ ರೋಗ ಬರದಂತೆ ತಡೆಯುವುದು ಅತ್ಯಗತ್ಯವಾಗಿದೆ ಎಂದು ಡಾ.ಪ್ರಸನ್ನ ಕುಮಾರ್ ಹೇಳಿದ್ದಾರೆ.

ಪಶುಪಾಲನೆ ಇಲಾಖೆ ಉಪನಿರ್ದೇಶಕ ಲಿಂಗರಾಜು ದೊಡ್ಡಮನಿ ಮಾತನಾಡಿ, ಈಗಾಗಲೇ 57 ಸಾವಿರ ಲಸಿಕೆ ಪೂರ್ಣಗೊಂಡಿದೆ. 5ನೇ ಸುತ್ತಿನಲ್ಲಿ 2450 ಲಸಿಕೆ ಉಳಿದಿದ್ದು, ಒಟ್ಟು 59,450 ಲಸಿಕೆ ದಾಸ್ತಾನು ಇದೆ ಎಂದು ಮಾಹಿತಿ ನೀಡಿದರು. ಕೊಡಗು ಜಿಲ್ಲೆಯಲ್ಲಿ ಪಶುವೈದ್ಯಾಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ, ಜಾನುವಾರುಗಳಿಗೆ ಲಸಿಕೆ ನೀಡುತ್ತಿದ್ದು, ರೈತರು, ಜಾನುವಾರುಗಳ ಮಾಲೀಕರು ಸಹಕರಿಸುವಂತೆ ಮನವಿ ಮಾಡಿದರು.

ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿಯಂತೆ ದನ ಹಾಗೂ ಎಮ್ಮೆಗಳ ಸಂಖ್ಯೆ 76,920 ಇದ್ದು, ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಲಸಿಕೆ ಸಂಪೂರ್ಣವಾಗಿ ಉಚಿತವಾಗಿದ್ದು, ಯಾವುದೇ ಶುಲ್ಕವಿರುವುದಿಲ್ಲ. ಇದು ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಲಸಿಕಾದಾರರು ಜಾನುವಾರು ಮಾಲೀಕರ ಮನೆಗೆ ಬಂದಾಗ ಸಹಕಾರ ನೀಡಿ ನಾಲ್ಕು ತಿಂಗಳ ಮೇಲ್ಪಟ್ಟ ಎಲ್ಲಾ ದನ, ಎಮ್ಮೆಗಳಿಗೆ ಲಸಿಕೆ ಹಾಕಿಸುವಂತೆ ತಿಳಿಸಿದರು.

> "6ನೇ ಸುತ್ತಿನಲ್ಲಿ ಈಗಾಗಲೇ 70 ಸಾವಿರ ಸಿರಿಂಜ್ ಪೂರೈಕೆಯಾಗಿದೆ. ಕಾಲುಬಾಯಿ ಲಸಿಕೆ ಕಾರ್ಯಕ್ರಮ ಕೈಗೊಳ್ಳಲು ಜಿಲ್ಲೆಯಲ್ಲಿ 13 ತಾಂತ್ರಿಕ ಅಧಿಕಾರಿಗಳು, 31 ಅರೆ ತಾಂತ್ರಿಕ ಸಿಬ್ಬಂದಿ, 7 ಡಿ ದರ್ಜೆ ನೌಕರರು, 13 ಹೊರಗುತ್ತಿಗೆ ನೌಕರರು, 4 ಮೈತ್ರಿ ಸಿಬ್ಬಂದಿ, ಒಬ್ಬ ಕೆಎಂಎಫ್ ಸೇರಿ ಒಟ್ಟು 69 ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದುವರೆಗೆ ಶೇ.36ರಷ್ಟು ಪ್ರಗತಿ ಸಾಧಿಸಲಾಗಿದೆ.
> -ಲಿಂಗರಾಜು ದೊಡ್ಡಮನಿ, ಪಶುಪಾಲನೆ ಇಲಾಖೆ ಉಪನಿರ್ದೇಶಕ.

ಹಾಡಿಯಲ್ಲಿ ಕಾಡಾನೆಯಿಂದ ವ್ಯಾನ್ ಜಖಂ



ಯಡವನಾಡು ಸೂಳೆಬಾವಿ ಹಾಡಿಯಲ್ಲಿ ವ್ಯಾನ್ ಮೇಲೆ ಕಾಡಾನೆ ದಾಳಿ ನಡೆಸಿ ಜಖಂಗೊಳಿಸಿರುವುದು.

ಕುಶಾಲನಗರ, ನ.5–ಕಟಾವು ಮಾಡಿದ್ದ ಜೋಳದ ಫಸಲಿನ ಕಾವಲಿಗೆ ನಿಲ್ಲಿಸಿದ್ದ ವ್ಯಾನ್ ಮೇಲೆ ಕಾಡಾನೆ ದಾಳಿ ನಡೆಸಿ ಜಖಂಗೊಳಿಸಿರುವ ಘಟನೆ ಸಮೀಪದ ಯಡವನಾಡು ಸೂಳೆಬಾವಿ ಹಾಡಿಯಲ್ಲಿ ಮಂಗಳವಾರ ನಡೆದಿದೆ.

ಕೃಷಿಕ ಹರೀಶ್ ಹಾಗೂ ಅವರ ಪತ್ನಿ ಜ್ಯೋತಿ ಜೋಳದ ಗುಡ್ಡೆ ಪಕ್ಕದಲ್ಲಿ ವ್ಯಾನ್ ನಿಲ್ಲಿಸಿ ಅದರಲ್ಲೇ ಮಲಗಿದ್ದರು. ಬೆಳಗ್ಗೆ 6.30ರಲ್ಲಿ ಕಾಡಾನೆ ಸಮೀಪದಲ್ಲಿದ್ದ ಭತ್ತದ ಗದ್ದೆಗೆ ನುಸುಳಿ ಫಸಲು ತಿಂದು ನಾಶಪಡಿಸಿದೆ. ಬಳಿಕ ಹರೀಶ್ ಅವರ ವ್ಯಾನ್ ಮೇಲೆ ದಾಳಿ ನಡೆಸಿದೆ. ಈ ಸಂದರ್ಭ ವ್ಯಾನ್‌ನಲ್ಲಿ ಮಲಗಿದ್ದ ಹರೀಶ್ ಹಾಗೂ ಪತ್ನಿ ಜ್ಯೋತಿ ಅದೃಷ್ಟವಶಾತ್ ಆನೆಯಿಂದ ತಪ್ಪಿಸಿಕೊಂಡಿದ್ದಾರೆ.

ವ್ಯಾನ್ ಅನ್ನು ಒಂದು ಬದಿಗೆ ತಳ್ಳಿರುವ ಕಾಡಾನೆ ಡೋರ್ ಅನ್ನು ಹಾನಿಗೊಳಿಸಿದೆ. ಘಟನೆಯಲ್ಲಿ ಹರೀಶ್ ಅವರ ಕಾಲಿಗೆ ಗಾಯವಾಗಿದೆ. ಸ್ಥಳಕ್ಕೆ ಸೋಮವಾರಪೇಟೆ ವಲಯ ಅರಣ್ಯಾಧಿಕಾರಿ ಶೈಲೇಂದ್ರ ಕುಮಾರ್, ಚಂದ್ರೇಶ್ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಗಡಿಭಾಗದಲ್ಲಿ ಕನ್ನಡಪರ ಕಾರ್ಯಕ್ರಮ ನಡೆಯಬೇಕು



ವಿರಾಜಪೇಟೆ ಮಹಿಳಾ ಸಮಾಜ ಸಭಾಂಗಣದಲ್ಲಿ ನಡೆದ ತಾಲೂಕು ಮಟ್ಟದ ಸ್ಪರ್ಧಾ ಕಾರ್ಯಕ್ರಮವನ್ನು ಪುರಸಭೆ ಅಧ್ಯಕ್ಷೆ ಮನಿಯಪಂಡ ದೇಚಮ್ಮ ಕಾಳಪ್ಪ ಉದ್ಘಾಟಿಸಿದರು.

ವಿರಾಜಪೇಟೆ, ನ.5–ಕನ್ನಡ ನಾಡು–ನುಡಿ ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ಗಡಿ ಭಾಗದಲ್ಲಿ ಕನ್ನಡಪರ ಹೆಚ್ಚು ಕಾರ್ಯಕ್ರಮಗಳನ್ನು ನಡೆಸುವಂತಾಗಬೇಕು ಎಂದು ಪುರಸಭೆ ಅಧ್ಯಕ್ಷೆ ಮನಿಯಪಂಡ ದೇಚಮ್ಮ ಕಾಳಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಮಹಿಳಾ ಸಮಾಜದ ಸಭಾಂಗಣದಲ್ಲಿ ವಿರಾಜಪೇಟೆ ಕರ್ನಾಟಕ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಸ್ಪರ್ಧಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಗರಗಳಲ್ಲಿ ಇತರೆ ಭಾಷಿಕರಿಂದ ಕನ್ನಡ ಭಾಷೆ ಮೇಲೆ ದಬ್ಬಾಳಿಕೆ ಹೆಚ್ಚಾಗುತ್ತಿದೆ. ಕನ್ನಡಿಗರಿಗೆ ಉದ್ಯೋಗ ಅವಕಾಶ ಕಡಿಮೆಯಾಗುತ್ತಿದೆ. ಸರ್ಕಾರದ ನಿಯಮದಂತೆ ವಿರಾಜಪೇಟೆ ಎಲ್ಲಾ ಅಂಗಡಿ ಮುಂಗಟ್ಟುಗಳಲ್ಲಿ ಕನ್ನಡ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಬೇಕು. ಇದಕ್ಕೆ ಒಂದು ತಿಂಗಳು ಕಾಲಾವಕಾಶ ನೀಡಲಾಗಿದೆ ಎಂದರು.

ಕರ್ನಾಟಕ ಸಂಘದ ಅಧ್ಯಕ್ಷ ಮಾಳೇಟಿರ ಎಂ.ಬೆಲ್ಲು ಬೋಪಯ್ಯ ಮಾತನಾಡಿ, ಕನ್ನಡ ಭಾಷೆ ಉಳಿಸಿ ಬೆಳೆಸಲು ಪ್ರತಿಯೊಬ್ಬರು ಸಹಕಾರ ನೀಡುವಂತಾಗಬೇಕು. ಗಡಿ ಭಾಗವಾದ ವಿರಾಜಪೇಟೆಯಲ್ಲಿ ಸಂಘದಿಂದ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚು ಕನ್ನಡಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಕರ್ನಾಟಕ ಸಂಘದ ಉಪಾಧ್ಯಕ್ಷ ಚೇನಂಡ ಈ.ಗಿರೀಶ್ ಪೂಣಚ್ಚ, ಕಾರ್ಯದರ್ಶಿ ಮುಂಡ್ಯೋಳಂಡ ಕುಸುಮ ಸೋಮಣ್ಣ, ಖಜಾಂಚಿ ಕೋಟೆರ ಯು. ಗಣೇಶ್ ತಮ್ಮಯ್ಯ, ನಿರ್ದೇಶಕರಾದ ಸಿ.ಪಿ. ಕಾವೇರಪ್ಪ, ಸಿ.ಎಂ. ಸುರೇಶ್ ನಾಣಯ್ಯ, ಪಿ.ಎಸ್.ನಂದ, ಕೆಎಂ.ಮೊಣ್ಣಪ್ಪ (ಗಿಣಿ) ಬಿ.ಗಣೇಶ್ ಬಿದ್ದಪ್ಪ, ಎಂ.ರಾಣು ಮಂದಣ್ಣ, ಬಿ.ಎಂ.ಸುರೇಶ್, ಕಚೇರಿ ಕಾರ್ಯದರ್ಶಿ ಎಂ.ಪಿ.ರಾಧಾ ಉಪಸ್ಥಿತರಿದ್ದರು.

ಇದೇ ವೇಳೆ ಕ್ರೀಡಾ ಕ್ಷೇತ್ರದಿಂದ ಮಾಳೇಟಿರ ದಿಶ ಪೊನ್ನಮ್ಮ, ಸೇನಾ ಕ್ಷೇತ್ರದಿಂದ ಕಟ್ಟೆರ ಲೋಕೇಶ್, ಶಿಕ್ಷಣ ಕ್ಷೇತ್ರದಿಂದ ಕೆ.ಸಿ. ಗೀತಾಂಜಲಿ ಅವರನ್ನು ಸನ್ಮಾನಿಸಲಾಯಿತು. ಬಳಿಕ ಶಾಲಾ–ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಸ್ಪರ್ಧಾ ಕಾರ್ಯಕ್ರಮ ನಡೆಯಿತು. ವಿಜೇತರಿಗೆ ಅತಿಥಿಗಳು ಬಹುಮಾನ ವಿತರಿಸಿದರು. ತೀರ್ಪುಗಾರರಾಗಿ ಹಿರಿಯ ಕಲಾವಿದರಾದ ತಾತಂಡ ಪ್ರಭನಾಣಯ್ಯ, ಸಂಘದ ಸುರೇಶ್ ನಾಣಯ್ಯ, ಪುರಸಭೆ ಸದಸ್ಯೆ ಆಶಾ ಸುಬ್ಬಯ್ಯ ಇದ್ದರು.

ಶುದ್ಧೀಕರಣ ಘಟಕ ನಿರ್ಮಾಣಕ್ಕೆ 2.76 ಕೋಟಿ ಬಿಡುಗಡೆ



ಮನೆಯಪಂಡ ದೇಚಮ್ಮ ಕಾಳಪ್ಪ ಮಾತನಾಡಿದರು.

ಮಡಿಕೇರಿ, ನ.5– ವಿರಾಜಪೇಟೆ ಪುರಸಭೆ ವ್ಯಾಪ್ತಿಯಲ್ಲಿ ಕೊಳಚೆ ನೀರು ಶುದ್ಧೀಕರಣ ಘಟಕ ನಿರ್ಮಾಣಕ್ಕೆ ರಾಜ್ಯ ಸರ್ಕಾರದಿಂದ ಸುಮಾರು 2 ಕೋಟಿ 76 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ ಎಂದು ಪುರಸಭೆ ಅಧ್ಯಕ್ಷೆ ಮನೆಯಪಂಡ ದೇಚಮ್ಮ ಕಾಳಪ್ಪ ತಿಳಿಸಿದರು.

ವಿರಾಜಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿರಾಜಪೇಟೆ ಕ್ಷೇತ್ರದ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಅವರ ಪ್ರಯತ್ನದಿಂದ ಕೊಳಚೆ ನೀರು ಶುದ್ಧೀಕರಣ ಘಟಕ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ನದಿಗಳಿಗೆ ಕಲುಷಿತ ನೀರು ಸೇರುವುದನ್ನು ತಡೆಗಟ್ಟುವ ಸಲುವಾಗಿ ಪುರಸಭೆ ವ್ಯಾಪ್ತಿಯಲ್ಲಿ ನೀರು ಶುದ್ಧೀಕರಣ ಘಟಕ ನಿರ್ಮಿಸಬೇಕೆಂದು ಸ್ಥಳೀಯರ ಹಲವು ದಶಕಗಳ ಕನಸಾಗಿತ್ತು. ವಿರಾಜಪೇಟೆ ರಾಜಕಾಲುವೆ ಹಾಗೂ ಕೊಳಚೆ ನೀರು ಹರಿದು ಹೋಗುವ ಮಾರ್ಗದಲ್ಲಿ ಶುದ್ಧೀಕರಣ ಘಟಕ ಸ್ಥಾಪಿಸಲು ಪುರಸಭೆ ವ್ಯಾಪ್ತಿಯ 4 ಕಿ.ಮೀ. ವ್ಯಾಪ್ತಿಯಲ್ಲಿ ಸುಮಾರು 3 ಎಕರೆ ಭೂಮಿ ಅವಶ್ಯಕತೆ ಇದೆ. ಶೀಘ್ರದಲ್ಲೇ ಜಾಗ ಗುರುತಿಸಿ ಘಟಕ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಹೇಳಿದರು. ಈ ಸಂದರ್ಭ ಪುರಸಭೆ ಸದಸ್ಯರಾದ ಎಸ್.ಹೆಚ್.ಮತೀನ್, ಪಟ್ಟಡ ರಂಜಿ ಪೂಣಚ್ಚ, ಮಹಮ್ಮದ್ ರಾಫಿ, ಡಿ.ಪಿ.ರಾಜೇಶ್ ಉಪಸ್ಥಿತರಿದ್ದರು.

ಟಿಪ್ಪರ್ ಮಾಲೀಕರ ವಿರುದ್ಧ ರೈತರ ಪ್ರತಿಭಟನೆ



ಟಿಪ್ಪರ್ ಮತ್ತು ಲಾರಿಗಳ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ವೀರನಪುರ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ನ.5–ಅಧಿಕ ಭಾರ ಹೊತ್ತು ಸಂಚರಿಸುವ ಟಿಪ್ಪರ್ ಮತ್ತು ಕ್ರಷರ್ ಲಾರಿಗಳ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ಕಬ್ಬು ಬೆಳೆಗಾರರ ಸಂಘ ಜಿಲ್ಲಾ ಘಟಕ ಹಾಗೂ ಗ್ರಾಮಸ್ಥರು ತಾಲೂಕಿನ ವೀರನಪುರದಲ್ಲಿ ಪ್ರತಿಭಟನೆ ನಡೆಸಿದರು.

ವೀರನಪುರದಲ್ಲಿ ಅಧಿಕ ಭಾರ ಹೊತ್ತು ಸಂಚರಿಸುವ ಟಿಪ್ಪರ್ ಮತ್ತು ಕ್ರಷರ್ ಲಾರಿಗಳಿಂದ ಗ್ರಾಮದ ರಸ್ತೆಗಳು ಹಾಳಾಗುತ್ತಿವೆ. ಕುಡಿಯುವ ನೀರಿನ ಪೈಪ್ ಒಡೆದು ಕಲುಷಿತ ನೀರು ಮನೆಗಳಿಗೆ ಸರಬರಾಜಾಗುತ್ತಿದೆ. ರಸ್ತೆ ಬದಿಯ ಮನೆಗಳಿಗೆ ಧೂಳು ನುಗ್ಗುತ್ತಿದ್ದು, ಇದರಿಂದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ. ಗ್ರಾಮಸ್ಥರ ಹಿತದೃಷ್ಟಿಯಿಂದ ಭಾರ ಹೊತ್ತು ಸಂಚರಿಸುವ ಟಿಪ್ಪರ್ ಮತ್ತು ಲಾರಿಗಳ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕಬ್ಬು ಬೆಳೆಗಾರರ ಜಿಲ್ಲಾ ಕಾರ್ಯಾಧ್ಯಕ್ಷ ಉಡಿಗಾಲ ರೇವಣ್ಣ, ಉಪಾಧ್ಯಕ್ಷ ಪಟೇಲ್ ಶಿವಮೂರ್ತಿ, ಪ್ರಧಾನ ಕಾರ್ಯದರ್ಶಿ ಮೂಕಳ್ಳಿ ಮಹದೇವಸ್ವಾಮಿ, ತಾಲೂಕು ಅಧ್ಯಕ್ಷ ಸತೀಶ್, ಪ್ರಧಾನ ಕಾರ್ಯದರ್ಶಿ ಸಿ.ಸುಂದ್ರಪ್ಪ, ಉಪಾಧ್ಯಕ್ಷ ಶಿವಸ್ವಾಮಿ, ಗ್ರಾಮ ಘಟಕ ಅಧ್ಯಕ್ಷ ಲೋಕೇಶ್ ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

95 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆ



ಚಾಮರಾಜನಗರದ ರೋಟರಿ ಭವನದಲ್ಲಿ ನಡೆದ ಶಿಬಿರದಲ್ಲಿ ವೈದ್ಯರು ಕಣ್ಣಿನ ತಪಾಸಣೆ ನಡೆಸಿದರು.

ಚಾಮರಾಜನಗರ, ನ.5–ರೋಟರಿ ಸಂಸ್ಥೆ ವತಿಯಿಂದ ನಗರದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು.

ಬಿ.ರಾಚಯ್ಯ ಜೋಡಿರಸ್ತೆಯಲ್ಲಿರುವ ರೋಟರಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮ, ಅರವಿಂದ ಕಣ್ಣಿನ ಆಸ್ಪತ್ರೆ ಸಂಯುಕ್ತಾಶ್ರಯದಲ್ಲಿ ನಡೆದ ಕಣ್ಣಿನ ತಪಾಸಣೆ ಶಿಬಿರದಲ್ಲಿ 200 ಮಂದಿ ಭಾಗವಹಿಸಿದ್ದರು. ಇದರಲ್ಲಿ 95 ಮಂದಿ ಶಸ್ತ್ರಚಿಕಿತ್ಸೆಗೆ ಆಯ್ಕೆಯಾಗಿದ್ದಾರೆ.

ರೋಟರಿ ಸಂಸ್ಥೆ ಅಧ್ಯಕ್ಷ ರಾಮಸಮುದ್ರ ನಾಗರಾಜು ಮಾತನಾಡಿ, ರೋಟರಿ ಸಂಸ್ಥೆ ಪ್ರತಿ ತಿಂಗಳು ಮೊದಲನೆ ಭಾನುವಾರ ಉಚಿತ ನೇತ್ರ ತಪಾಸಣೆ ಶಿಬಿರ ಆಯೋಜಿಸುತ್ತಿದೆ. ಹೆಚ್ಚಿನ ಸಾರ್ವಜನಿಕರು ಶಿಬಿರದ ಪ್ರಯೋಜನ ಪಡೆಯುತ್ತಿರುವುದು ಸಂತಸವಾಗಿದ್ದು, ಮುಂದಿನ ಶಿಬಿರದಲ್ಲಿ ಇನ್ನು ಹೆಚ್ಚಿನ ಜನತೆ ಭಾಗವಹಿಬೇಕು ಎಂದು ಮನವಿ ಮಾಡಿದರು.

ರೋಟರಿ ಸಂಸ್ಥೆ ಕಾರ್ಯದರ್ಶಿ ಹೆಚ್.ಎಂ.ಗುರುಸ್ವಾಮಿ, ಸಂಸ್ಥಾಪಕ ಸದಸ್ಯ ಶ್ರೀನಿವಾಸಶೆಟ್ಟಿ, ಕಾಗಲವಾಡಿ ಚಂದ್ರು, ಉಪಾಧ್ಯಕ್ಷ ಅಬ್ದುಲ್ ಅಜೀಜ್ ದೀನಾ, ರೈಲ್ವೆ ಸಲಹಾ ಸಮಿತಿ ಸದಸ್ಯ ವಿ.ಪ್ರಭಾಕರ್, ವೆಂಕಟೇಶ, ಡಿ.ನಾಗರಾಜು, ಯೋಗರಾಜು, ಅಂಕಶೆಟ್ಟಿ, ಪಿಆರ್‌ಓ ವಿಜಯಕಾಂತ್ ಇತರರು ಹಾಜರಿದ್ದರು.

ವಕ್ಫ್ ನೋಟಿಸ್ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ

• ಸಚಿವ ಜಮೀರ್ ಅಹಮ್ಮದ್ ರಾಜೀನಾಮೆಗೆ ಆಗ್ರಹ • ಸರ್ಕಾರದ ವಿರುದ್ಧ ಚಾಮರಾಜನಗರದಲ್ಲಿ ಮೆರವಣಿಗೆ



ರಾಜ್ಯ ಸರ್ಕಾರದ ವಿರುದ್ಧ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ನ.5–ವಕ್ಫ್ ಹೆಸರಿನಲ್ಲಿ ರಾಜ್ಯ ಸರ್ಕಾರ ರೈತರ ಜಮೀನುಗಳಿಗೆ ನೋಟಿಸ್ ನೀಡುತ್ತಿರುವುದನ್ನು ಖಂಡಿಸಿ ಹಾಗೂ ವಕ್ಫ್ ಸಚಿವ ಜಮೀರ್ ಅಹಮ್ಮದ್ ರಾಜೀನಾಮೆ ನೀಡುವಂತೆ ಒತ್ತಾಯಿಸಿ ಜಿಲ್ಲಾ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಚಾಮರಾಜೇಶ್ವರ ದೇವಸ್ಥಾನ ಆವರಣದಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್ ಕುಮಾರ್ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತ ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಪ್ರತಿಭಟನೆ ನಡೆಸಿದರು. ನಂತರ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದಾ ಅವರಿಗೆ ಮನವಿ ಸಲ್ಲಿಸಿದರು.

ಮೆರವಣಿಗೆ ಯುದ್ದಕ್ಕೂ ಬಿಜೆಪಿ ಕಾರ್ಯಕರ್ತರು, ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಜಮೀರ್ ಅಹಮದ್ ವಿರುದ್ಧ ಘೋಷಣೆ ಕೂಗಿದರು. ಕಾಂಗ್ರೆಸ್ ತೊಲಗಲಿ, ರೈತರ ಜಮೀನು ಕಬಳಿಸಿದ ವಕ್ಫ್ ಗೂಂಡಾಗಿರಿಗೆ ಧಿಕ್ಕಾರ, ಕಾಂಗ್ರೆಸ್ ಲ್ಯಾಂಡ್ ಜಿಹಾದ್‌ಗೆ ಧಿಕ್ಕಾರ, ಪ್ರಾಣ ಕೊಟ್ಟೇವು ಭೂಮಿ ಬಿಡೆವು, ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ, ಕರ್ನಾಟಕವನ್ನು ಪಾಕಿಸ್ತಾನ ಮಾಡಲು ಹೊರಟ ಸಿದ್ದರಾಮಯ್ಯಗೆ ಧಿಕ್ಕಾರ ಎಂದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.


ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ, ವಿಜಯಪುರ ಜಿಲ್ಲೆಯ ಹೊನ್ನಾವಡದ ರೈತರ 1500 ಎಕರೆ ಜಮೀನನ್ನು ವಕ್ಫ್ ಆಸ್ತಿಯೆಂದು ಘೋಷಿಸಿ ತಹಸೀಲ್ದಾರ್‌ರಿಂದ ಪುಷ್ಟೀಕರಿಸಿ ನೋಟಿಸ್ ನೀಡಲಾಗಿದೆ. ಅಲ್ಲದೆ, ಹಾವೇರಿ ಜಿಲ್ಲೆಯಲ್ಲಿ 1649 ಆಸ್ತಿಗಳ ಹಕ್ಕಿಗಾಗಿ ವಕ್ಫ್ ಪ್ರತಿಪಾದಿಸುತ್ತಿದೆ. ಸವಣೂರು ತಾಲೂಕಿನ ಕಡಕೊಳ ಗ್ರಾಪಂ ವ್ಯಾಪ್ತಿಯ ಹನುಮಂತ ದೇವಸ್ಥಾನದ ಅತಿಕ್ರಮಣಕ್ಕೆ ವಕ್ಫ್ ಬೋರ್ಡ್ ಮುಂದಾಗಿದೆ. ಶ್ರೀರಂಗಪಟ್ಟಣ ತಾಲೂಕಿನ ಮಹದೇವಪುರ ಗ್ರಾಮದ ಚಿಕ್ಕದೇವಿ ದೇವಸ್ಥಾನಕ್ಕೆ ಸೇರಿದ 6 ಗುಂಟೆ ಜಮೀನು ವಕ್ಫ್ ಆಸ್ತಿ ಎಂದು ನಮೂದಾಗಿದೆ ಎಂದು ಆರೋಪಿಸಿದರು.

ವಿಜಯಪುರ ಜಿಲ್ಲೆಯ 1500 ವರ್ಷ ಇತಿಹಾಸವಿರುವ ಸಿಂಧಗಿಯ ವಿರಕ್ತ ಮಠ ವಕ್ಫ್ ಆಸ್ತಿ ಎಂದು ದಾಖಲೆ ಸೃಷ್ಟಿಸುತ್ತಿದ್ದಾರೆ. 2 ಸಾವಿರ ವರ್ಷ ಇತಿಹಾಸ ವಿರುವ ಸೋಮನಾಥೇಶ್ವರ ದೇವಸ್ಥಾನವೂ ವಕ್ಫ್ ಆಸ್ತಿ ಎಂಬ ಹಕ್ಕು ಪ್ರತಿಪಾದನೆ ವಕ್ಫ್ ಮಂಡಳಿಯಿಂದ ಬರುತ್ತಿದೆ. ಕಲಬುರ್ಗಿ ಜಿಲ್ಲೆಯ ಚಿಂಚೋಳಿ ಹಾಗೂ ಕಾಳಗಿ ತಾಲೂಕಿನ ಪೂರ್ವಜನರಿಂದ ಬಂದ ಜಮೀನುಗಳನ್ನು ಅನುಭವಿಸುತ್ತಿದ್ದ ರೈತರಿಗೆ ವಕ್ಫ್ ಆಸ್ತಿ ಎಂದು ತಹಸೀಲ್ದಾರ್‌ರಿಂದ ನೋಟಿಸ್ ನೀಡಲಾಗಿದೆ. ಈ ರೀತಿ ಗೊಂದಲಗಳು ರಾಜ್ಯದಲ್ಲಿ ಸಾಮರಸ್ಯ ಹದಗೆಡಲು ಕಾರಣವಾಗಿದೆ ಎಂದು ದೂರಿದರು.

ಸಚಿವ ಜಮೀರ್ ಅಹಮ್ಮದ್ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನರಲ್ಲಿ ಕ್ಷಮೆ ಕೇಳಬೇಕು ಹಾಗೂ ಸ್ಪಷ್ಟನೆ ನೀಡಬೇಕು. ಇನ್ನು ಮುಂದೆ ಯಾವುದೇ ವಕ್ಫ್ ಅದಾಲತ್ ನಡೆಸದಂತೆ ಸರ್ಕಾರ ಆದೇಶ ಹೊರಡಿಸಬೇಕು ಹಾಗೂ ಇದಕ್ಕೆ ಸಂಬಂಧಿಸಿದ ಗೆಜೆಟ್ ನೋಟಿಫಿಕೇಶನ್ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನಗರಸಭಾ ಅಧ್ಯಕ್ಷ ಸುರೇಶ್, ಉಪಾಧ್ಯಕ್ಷೆ ಮಮತಾ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ. ರಾಮಚಂದ್ರ, ಬಿಜೆಪಿ ಓಬಿಸಿ ಮೋರ್ಚಾ ರಾಷ್ಟ್ರೀಯ ಕಾರ್ಯಕಾರಣಿ ಸದಸ್ಯ ನೂರೊಂದು ಶೆಟ್ಟಿ, ಓಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ಜನಧ್ವನಿ ವೆಂಕಟೇಶ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಿ.ವೃಷಬೇಂದ್ರಪ್ಪ, ಮೂಡ್ನಾಕೂಡು ಪ್ರಕಾಶ್, ಹೊನ್ನೂರು ಮಹದೇವಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ಮಂಗಲ ಶಿವಕುಮಾರ್, ವಿರಾಟ್ ಶಿವು, ನಟರಾಜು, ವಕ್ತಾರ ಕಾಡಹಳ್ಳಿ ಕುಮಾರ್, ಚಾಮುಲ್ ಅಧ್ಯಕ್ಷ ನಾಗೇಂದ್ರ, ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷೆ ಮಲೆಯೂರು ಕಮಲಮ್ಮ, ಡಾ.ಎ.ಆರ್. ಬಾಬು, ನಗರ ಮಂಡಲಾಧ್ಯಕ್ಷ ಶಿವರಾಜ್, ಎಸ್‌ಟಿ ಮೋರ್ಚಾ ಜಿಲ್ಲಾಧ್ಯಕ್ಷ ಚಂದ್ರಶೇಖರ, ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ, ಮಲ್ಲೇಶ್, ಜೆ.ಡಿ.ಎಲ್ ಸುರೇಶ್, ನವೀನ್ ಮೌರ್ಯ, ಕಬ್ಬಹಳ್ಳಿ ರೇವಣ್ಣ, ವೀರಭದ್ರಸ್ವಾಮಿ, ಬಾಲಸುಬ್ರಹ್ಮಣ್ಯಂ, ಕೆ..ಆರ್. ಲೋಕೇಶ್, ಶಿವಣ್ಣ, ತಗಡಪುರ ರೇವಣ್ಣ, ಬುಲೆಟ್ ಚಂದ್ರು, ಮಲ್ಲಿಕಾರ್ಜುನ ಸ್ವಾಮಿ, ಎಪಿಎಂಸಿ ನಿರ್ದೇಶಕ ಮಹದೇವ ಪ್ರಸಾದ್, ರಾಮಸಮುದ್ರ ಶಿವಣ್ಣ, ಕೂಸಣ್ಣ, ಶಿವಪುರ ಮಂಜ, ಸೂರ್ಯ ಬಾಲರಾಜ್ ಇತರರು ಭಾಗವಹಿಸಿದ್ದರು.

ಸಾಮಾಜಿಕ ಜಾಲತಾಣದಲ್ಲಿ ವಕ್ಫ್ ಹಳೇ ನೋಟಿಸ್


ಜಿಲ್ಲಾ ವಕ್ಫ್ ಸಲಹಾ ಸಮಿತಿ, ಚಾಮರಾಜನಗರ

No. DWAC/6/CNR/Updating of R Rs/2021-22

Date: 21.07.2022

ಚಾಮರಾಜನಗರ, ನ.5– ಇತ್ತೀಚೆಗೆ ರಾಜ್ಯದಲ್ಲಿ ತೀವ್ರ ಚರ್ಚೆ ಉಂಟು ಮಾಡುತ್ತಿರುವ ವಕ್ಫ್ ಆಸ್ತಿ ವಿವಾದ ಜಿಲ್ಲೆಗೂ ವಕ್ಕರಿಸಿದೆ ಎಂಬ ಗಾಳಿ ಸುದ್ದಿಗೆ ಪುಷ್ಠಿ ನೀಡುವಂತ ವಕ್ಫ್ ಹಳೇ ನೋಟಿಸ್ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಜಿಲ್ಲೆಯಲ್ಲಿ ಹಲವು ಚರ್ಚೆಗೆ ಗ್ರಾಸವಾಗಿದೆ.

ಸದ್ಯ ವೈರಲ್ ಆಗಿರುವ ನೋಟಿಸ್ 2022ನೇ ಇಸವಿಯದ್ದು ಎನ್ನಲಾಗುತ್ತಿದೆ. ವಕ್ಫ್ ಮಂಡಳಿಯ ಜಿಲ್ಲಾ ಸಲಹಾ ಸಮಿತಿ 2022ರ ಜು.21ರಂದು ಚಾಮರಾಜನಗರ ತಹಸೀಲ್ದಾರ್ ಅವರಿಗೆ ಕಳುಹಿಸಿರುವ ಪತ್ರದಲ್ಲಿ ಜಿಲ್ಲೆಯಲ್ಲಿ ಕಂಡು ಬರುವಂತಹ ವಕ್ಫ್ ಆಸ್ತಿಗಳ ಖಾತೆ, ಪಹಣಿ, ಅಸಸ್ಮೆಂಟ್ ದಾಖಲೆಗಳನ್ನು ಸಂಬಂಧಿಸಿದ ವಕ್ಫ್ ಸಂಸ್ಥೆ ಹೆಸರಿಗೆ ತಿದ್ದುಪಡಿ ಮಾಡಿಕೊಡಬೇಕು ಎಂಬ ಪತ್ರವಾಗಿದೆ ಎಂದು ಹೇಳಲಾಗುತ್ತಿದೆ.

ಅದರಂತೆ ಚಾಮರಾಜನಗರ ತಾಲೂಕು ಬಂಡಿಗೆರೆ ಸರ್ವೇ ನಂ: 179/1ರಲ್ಲಿ 1.17 ಎಕರೆ ಹಾಗೂ 179/2ರಲ್ಲಿ 0.24 ಎಕರೆ ಹಾಗೂ 179/3ರಲ್ಲಿ 0.8 ಎಕರೆ ಆಸ್ತಿಯ ವಕ್ಫ್ ಆಸ್ತಿಯಾಗಿದ್ದು, ಇದನ್ನು ಹರದನಹಳ್ಳಿ ಜಾಮಿಯ ಮಸೀದಿ ವಕ್ಫ್ ಆಸ್ತಿಯೆಂದು ತಿದ್ದುಪಡಿ ಮಾಡಿಕೊಡಬೇಕು ಎಂದಿದೆ. ಅಲ್ಲದೆ, ಕಾಲಂ ನಂ. 11ರಲ್ಲಿ ವಕ್ ಆಸ್ತಿ ಪರಭಾರೆ ನಿಷೇಧಿಸಿದೆ ಎಂದು ನಮೂದಿಸಬೇಕು ಎಂದು ತಿಳಿಸಲಾಗಿದೆ. ಈ ವಿಚಾರಗಳು ಚರ್ಚೆಗೆ ಗ್ರಾಸವಾಗುತ್ತಿದೆ.

ರೈತರಿಗೆ ನೋಟಿಸ್ ಬಂದಿಲ್ಲ: ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿರುವ ನೋಟಿಸ್ ಸಂಬಂಧಿಸಿದಂತೆ ಪತ್ರದಲ್ಲಿ ಉಲ್ಲೇಖಿಸಲಾಗಿರುವ ಸರ್ವೇ ನಂಬರ್‌ನ ಜಮೀನಿನ ಮಾಲೀಕರನ್ನು ಸಂಪರ್ಕಿಸಿದಾಗ ಜಮೀನಿನ ಆರ್‌ಟಿಸಿಯಲ್ಲಿ ಈವರೆವಿಗೂ ವಕ್ಫ್ ಆಸ್ತಿಯೆಂದು ಯಾವುದೇ ಕಾಲಂನಲ್ಲಿ ನಮೂದಿಸಲಾಗಿಲ್ಲ. ಈ ಬಗ್ಗೆ ಆ ಜಮೀನು ಮಾಲೀಕರಿಗೂ ಯಾವುದೇ ನೋಟಿಸ್ ಬಂದಿಲ್ಲ ಎಂದು ತಿಳಿದು ಬಂದಿದೆ.

ಆದರೂ ಕೂಡ 2022ರಲ್ಲಿನ ಪತ್ರ ಈಗ ವೈರಲ್ ಆಗಿದ್ದು, ಆತಂಕಕ್ಕೆ ಒಳಗಾದ ರೈತರು ಹೊಸ ಆರ್‌ಟಿಸಿ ತೆಗೆಸಿ ಪರಿಶೀಲಿಸಿದ್ದಾರೆ. ಅದರಲ್ಲಿ ವಕ್ಫ್ ಆಸ್ತಿಯೆಂದು ನಮೂದಾಗಿಲ್ಲದಿರುವುದರಿಂದ ಈ ಸರ್ವೇ ನಂಬರ್‌ನ ಆಸ್ತಿ ಮಾಲೀಕರು ನಿಟ್ಟುಸಿರು ಬಿಟ್ಟಿದ್ದಾರೆ.

> "ವಕ್ಫ್ ಬೋರ್ಡ್‌ನಿಂದ ಬಂದಿರುವ ಪತ್ರದ ಬಗ್ಗೆ ನನಗೆ ಯಾವುದೇ ಮಾಹಿತಿಲ್ಲ. ಈ ಬಗ್ಗೆ ಪರಿಶೀಲಿಸಿದ ಬಳಿಕವಷ್ಟೇ ನಾನು ಪ್ರತಿಕ್ರಿಯೆ ನೀಡುತ್ತೇನೆ.
> -ಗಿರಿಜಮ್ಮ, ಚಾಮರಾಜನಗರ ತಹಸೀಲ್ದಾರ್

> "ನಮ್ಮ ಜಮೀನಿನ ಸರ್ವೇ ನಂಬರ್‌ಗೆ ಸಂಬಂಧಿಸಿದಂತೆ ವಕ್ಫ್ ಮಂಡಳಿಯದ್ದು ಎನ್ನಲಾದ ಪತ್ರವನ್ನು ನೋಡಿ ನಮಗೂ ಆಶ್ಚರ್ಯವಾಯಿತು. ನಾವು ತಕ್ಷಣ ಆರ್‌ಟಿಸಿ ತೆಗೆಸಿ ನೋಡಿದೆವು. ಅದರಲ್ಲಿ ಅಂತಹ ಯಾವುದೇ ಕಾಲಂನಲ್ಲೂ ವಕ್ಫ್ ಆಸ್ತಿ ಎಂದು ನಮೂದಾಗಿಲ್ಲ.
> -ಬಸವರಾಜಪ್ಪ, ರೈತರು, ವಿ.ಸಿ.ಹೊಸೂರು

ಮನೆಗಳ್ಳನ ಬಂಧನ; 20 ಸಾವಿರ ವಶ



ಕೊಳ್ಳೇಗಾಲ, ನ.5–ತಾಲೂಕಿನ ಸತ್ತೇಗಾಲ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಜಾಗೇರಿ ಆರ್.ಬಿ.ತಾಂಡ ಗ್ರಾಮದಲ್ಲಿ ಮನೆ ಬೀಗ ಮುರಿದು 50 ಸಾವಿರ ರೂ. ನಗದು ಕಳವು ಮಾಡಿದ್ದ ಕಳ್ಳನನ್ನು ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಆರ್.ಬಿ.ತಾಂಡ ಗ್ರಾಮದ ಅಭಿಷೇಕ್ ಬಂಧಿತ ಆರೋಪಿ. ಈತ ತನ್ನ ಚಿಕ್ಕಪ್ಪ ಶಿವಕುಮಾರ್ ಅವರು ಮನೆಯಲ್ಲಿ ಭಾನುವಾರ ಯಾರು ಇಲ್ಲದ ಸಮಯದಲ್ಲಿ ಬೀಗ ಮುರಿದು ಮನೆಯಲ್ಲಿದ್ದ 50 ಸಾವಿರ ರೂ. ನಗದನ್ನು ಕಳ್ಳತನ ಮಾಡಿದ್ದ.

ಈ ಸಂಬಂಧ ಶಿವಕುಮಾರ್ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಆರೋಪಿಯನ್ನು ಬಂಧಿಸಿರುವ ಪೊಲೀಸರು, 20 ಸಾವಿರ ರೂ. ಅನ್ನು ವಶಕ್ಕೆ ಪಡೆದು, ಆತನನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

ಮೈಸೂರು ಮಿತ್ರ

ವಸ್ತುಪ್ರದರ್ಶನದಲ್ಲಿ ಚಿತ್ರಕಲೆ-ಕಲಾಕೃತಿಗಳ ಪ್ರದರ್ಶನ ಉದ್ಘಾಟನೆ

ಬುದ್ಧನ ಭಾವಭಂಗಿಯ ಚಿತ್ತಾರ, ಶರಣರ ಅನುಭವ ಮಂಟಪ ಕಲಾಕೃತಿ ಅನಾವರಣ

ಮೈಸೂರು,ನ.5(ಪಿಎಂ)– ಶಾಂತಿ ಸಮಾನತೆ ಸಂದೇಶ ಸಾರಿದ ಬುದ್ಧನ ಬಗೆಬಗೆಯ ಭಾವ ಭಂಗಿಯ ಚಿತ್ತಾರ... ಅನುಭವ ಮಂಟಪದಲ್ಲಿ ಅಲ್ಲಮ ಪ್ರಭುಗಳು, ಬಸವಣ್ಣ, ಅಕ್ಕಮಹಾದೇವಿ ಸೇರಿದಂತೆ ಶರಣರು ಸಮಾವೇಶಗೊಂಡ ಕಲಾಕೃತಿ... ಒಟ್ಟು 58 ಪುಟ್ಟ ಪುಟ್ಟ ಚಿತ್ರಕಲೆಯಲ್ಲಿ ಅನಾವರಣಗೊಂಡ ರಾಮಾಯಣ ದರ್ಶನ... ಹೀಗೆ ವೈವಿಧ್ಯಮಯ ಕಲಾಲೋಕವು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ದಸರಾ ವಸ್ತುಪ್ರದರ್ಶನದ ಕನ್ನಡ ಕಾರಂಜಿ ಕಟ್ಟಡದ ಗ್ಯಾಲರಿಯಲ್ಲಿ ಕಣ್ಮನ ಸೆಳೆಯುತ್ತಿದೆ.

ಇಲ್ಲಿ ಮಹಿಳೆಯರು ಮತ್ತು ಮಕ್ಕಳು ರಚಿಸಿದ ಚಿತ್ರಕಲೆ ಮತ್ತು ಕಲಾಕೃತಿಗಳ ಪ್ರದರ್ಶನದಲ್ಲಿ ಇಂತಹ ಮನಮೋಹಕ ದೃಶ್ಯ ಕಳೆಗಟ್ಟಿದೆ. ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ 2024ರ ದಸರಾ ಮಹೋತ್ಸವದ ಮಹಿಳಾ ಮತ್ತು ಮಕ್ಕಳ ಉಪಸಮಿತಿ ವತಿಯಿಂದ ಹಮ್ಮಿಕೊಂಡಿರುವ ಪ್ರದರ್ಶನ ಇದಾಗಿದ್ದು, ಇಲ್ಲಿ ಬಗೆಬಗೆಯ ಚಿತ್ರಕಲೆ, ಕಲಾಕೃತಿ ಮೂಡಿಬಂದು ಮನಸೂರೆಗೊಂಡಿವೆ.

ಬುದ್ಧನ ಹಲವು ಚಿತ್ರಕಲೆಗಳು ಇಲ್ಲಿ ಬುದ್ಧನ ಉದಾತ್ತ ಚಿಂತನೆಯನ್ನು ಸಾರುತ್ತಿವೆ. ಅಲ್ಲದೆ, ಬಸವಣ್ಣನ ಭಾವಚಿತ್ರವೂ ಚಿತ್ರಕಲೆಯಲ್ಲಿ ಮೂಡಿಬಂದಿದ್ದು, ಇದರೊಂದಿಗೆ ಅನುಭವ ಮಂಟಪದ ಕಲಾಕೃತಿಯೂ 12ನೇ ಶತಮಾನದ ಶರಣರ ಮಹಾಮನೆಯನ್ನು ಕಣ್ಮುಂದೆ ತಂದಿದೆ. ಅಲ್ಲದೆ, ಆಧುನಿಕ ಮೈಸೂರು ನಿರ್ಮಾತೃ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರ ಸಹ ಕಪ್ಪುಬಿಳುಪಿನ ಹಿನ್ನೆಲೆಯಲ್ಲಿ ಮೂಡಿಬಂದಿದೆ.

ವಿವಿಧ ಅಳತೆಯ ಗಾಜಿನ ಬಾಟಲಿ ಸೇರಿದಂತೆ ಇನ್ನಿತರ ಸಾಮಗ್ರಿ ಬಳಸಿ ವಿವಿಧ ಬಣ್ಣಗಳ ಲೇಪನದೊಂದಿಗೆ ಮಾಡಿರುವ ಕಲಾಕೃತಿಗಳು ಬಣ್ಣದ ಓಕುಳಿಯನ್ನು ನೆನೆಪಿಸುತ್ತವೆ. ಪ್ರಕೃತಿ ಸೌಂದರ್ಯ, ವನ್ಯಜೀವಿ ಸಂಪತ್ತು ಸಹ ಚಿತ್ರಕಲೆಯಲ್ಲಿ ಮೂಡಿರುವುದು ವಿಶೇಷವಾಗಿದೆ. ಕಾಡು–ಮೇಡು, ಬೆಟ್ಟಗುಡ್ಡದ ಮರೆಯಲ್ಲಿ ಮೂಡುತ್ತಿರುವ ಸೂರ್ಯ, ನದಿ–ತೊರೆ, ಹಾವು–ಚೇಳು, ಗಿಳಿ, ಗೂಂಬೆ ಸೇರಿದಂತೆ ವಿವಿಧ ಜಾತಿಯ ಪಕ್ಷಿ ಸಂಕುಲವೂ ಇಲ್ಲಿ ಮೂಡಿ ಬಂದಿವೆ. ಅನೇಕ ಕಾನನದ ಚಿತ್ರಕಲೆಯಲ್ಲಿ ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರನ್ನು ಚಿತ್ರಿಸಿರುವುದು ಮತ್ತೊಂದು ವೈಶಿಷ್ಟ್ಯ. ಆನೆ, ಹುಲಿ, ಜಿಂಕೆ ಸೇರಿದಂತೆ ಮೊದಲಾದ ವನ್ಯಜೀವಿಗಳು ಇಲ್ಲಿ ಸ್ಥಾನ ಪಡೆದಿವೆ.



ಮೈಸೂರಿನ ದಸರಾ ವಸ್ತು ಪ್ರದರ್ಶನದ ಕನ್ನಡ ಕಾರಂಜಿ ಕಟ್ಟಡದ ಗ್ಯಾಲರಿಯಲ್ಲಿ ಹಮ್ಮಿಕೊಂಡಿರುವ ಚಿತ್ರಕಲೆ–ಕಲಾಕೃತಿ ಪ್ರದರ್ಶನಕ್ಕೆ ಗ್ಯಾರಂಟಿ ಯೋಜನೆಗಳ ರಾಜ್ಯ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಮಂಗಳವಾರ ಚಾಲನೆ ನೀಡಿದರು.





ಮೈಸೂರು ಅರಮನೆ, ಜಂಬೂಸವಾರಿ ಮೆರವಣಿಗೆ ಮತ್ತು ಅಂಬಾರಿ ಹೊತ್ತ ಆನೆಯ ಚಿತ್ರವೂ ಮೈಸೂರು ದಸರಾ ವೈಭವ ಕಟ್ಟಿಕೊಟ್ಟಿದೆ. ಚಾಮುಂಡಿಬೆಟ್ಟದ ಮೆಟ್ಟಿಲು ಮಾರ್ಗ ಸಹ ಇಲ್ಲಿ ಚಿತ್ತಾರವಾಗಿದೆ. ಬೆಣ್ಣೆ ಸವಿಯುತ್ತಿರುವ ಬಾಲಕೃಷ್ಣ, ಬಾಲ ಗಣೇಶ ಶ್ರೀರಾಮ ಸೇರಿದಂತೆ ದೇವಾನು ದೇವತೆಗಳು ಇಲ್ಲಿ ಚಿತ್ತಾರವಾಗಿ ದರ್ಶನ ನೀಡುತ್ತಿದ್ದಾರೆ. ಜೊತೆಗೆ ಹೊಂಗೆ ಬೀಜ ಸೇರಿದಂತೆ ಇನ್ನಿತರ ಸಾಮಗ್ರಿ ಬಳಸಿ ಸಿದ್ಧಪಡಿಸಿರುವ ಶಿವಲಿಂಗದ ಕಲಾಕೃತಿ ಸಹ ಆಕರ್ಷಕವಾಗಿ ಇಲ್ಲಿ ಗಮನ ಸೆಳೆಯುತ್ತಿದೆ.

'ಶ್ರೀಮದ್ ರಾಮಾಯಣ ದರ್ಶನ' ಶೀರ್ಷಿಕೆಯಡಿ 58 ಸಣ್ಣಸಣ್ಣ ಚಿತ್ರಗಳಲ್ಲಿ ರಾಮಾಯಣದ ಘಟನಾವಳಿಗಳನ್ನೂ ಇಲ್ಲಿ ಚಿತ್ರಿಸಲಾಗಿದೆ. ನಂಜನಗೂಡಿನ ಹುಲ್ಲಹಳ್ಳಿಯ ಸರ್ಕಾರಿ ಪ್ರೌಢ ಶಾಲೆಯ ಹಿಂದಿ ಭಾಷಾ ಶಿಕ್ಷಕಿ ಎಸ್.ಲತಾ ಮನೋಹರ್ ಅವರ ಕೈಚಳಕದಲ್ಲಿ ಇದು ಮೂಡಿ ಬಂದಿದೆ. ಶ್ರೀರಾಮನ ಜನನದ ಪೂರ್ವದ ಚಿತ್ರಾ ಮೊದಲುಗೊಂಡು ಶ್ರೀರಾಮನ ಪಟ್ಟಾಭಿಷೇಕದವರೆಗೆ ಚಿತ್ರಗಳನ್ನು ರಚಿಸಿ ದೊಡ್ಡ ಚೌಕಟ್ಟಿನಲ್ಲಿ ಒಟ್ಟುಗೂಡಿಸಿ ಪ್ರದರ್ಶನಕ್ಕೆ ಇಡಲಾಗಿದೆ. ರಾವಣನ ದರ್ಬಾರು, ಆಂಜನೇಯಸ್ವಾಮಿಯ ಬಂಧನ, ಶ್ರೀರಾಮ ಮತ್ತು ರಾವಣನ ನಡುವಿನ ಯುದ್ಧದ ಚಿತ್ರವೂ ಇಲ್ಲಿ ಅನಾವರಣಗೊಂಡಿವೆ. ಇನ್ನು ಅನೇಕ ವೈವಿಧ್ಯಮಯ ಚಿತ್ರಕಲೆ ಮತ್ತು ಕಲಾಕೃತಿಗಳು ಇಲ್ಲಿ ಗಮನ ಸೆಳೆಯುತ್ತಿವೆ.

ಉದ್ಘಾಟನೆ: ಮಹಿಳೆಯರು, 5ರಿಂದ 14




ವರ್ಷದೊಳಗಿನ ಮಕ್ಕಳು 2024ರ ನಂತರ ರಚಿಸಿದ ಚಿತ್ರಕಲೆ ಹಾಗೂ ಕಲಾಕೃತಿಗಳು ಇವಾಗಿವೆ. ಗ್ಯಾರಂಟಿ ಯೋಜನೆಗಳ ರಾಜ್ಯ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಈ ಪ್ರದರ್ಶನಕ್ಕೆ ಮಂಗಳವಾರ ಚಾಲನೆ ನೀಡಿದರು. ಇದಕ್ಕೂ ಮುನ್ನ 'ಮೈಸೂರು ಮಿತ್ರ'ನಿಗೆ ಸದರಿ ಪ್ರದರ್ಶನದ ಬಗ್ಗೆ ಮಾಹಿತಿ ನೀಡಿದ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಲೆಕ್ಕಾಧಿಕಾರಿ ಹಾಗೂ ಮಹಿಳಾ ಮತ್ತು ಮಕ್ಕಳ ಉಪಸಮಿತಿ ಸದಸ್ಯ ಕಾರ್ಯದರ್ಶಿ ಗಿರೀಜಾಂಬ, ಮಹಿಳೆಯರು ಮತ್ತು ಮಕ್ಕಳ ಕಲಾಕೌಶಲ ಪ್ರದರ್ಶನಕ್ಕೆ ಇದೊಂದು ವೇದಿಕೆಯಾಗಿದೆ. ಇಲ್ಲಿ ಉಚಿತವಾಗಿ ಅವರ ಕಲಾಕೃತಿ, ಚಿತ್ರಕಲೆ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ ದಸರಾ ಸಂದರ್ಭದಲ್ಲಿ ಪ್ರಕಟಣೆ ಮೂಲಕ ಈ ಬಗ್ಗೆ ಮಾಹಿತಿ ನೀಡಲಾಗಿತ್ತು ಎಂದು ತಿಳಿಸಿದರು.

ದಸರಾ ವಸ್ತುಪ್ರದರ್ಶನ ಮುಕ್ತಾಯಗೊಂಡ ನಂತರ ಚಿತ್ರಕಲೆ ಹಾಗೂ ಕಲಾಕೃತಿಗಳನ್ನು ಆಯ್ಕೆ ಮಾಡಿ ಉತ್ತಮವಾದವುಗಳಿಗೆ ಬಹುಮಾನ ಸಹ ನೀಡಲಾಗುತ್ತದೆ. ವಸ್ತುಪ್ರದರ್ಶನದ ಬಳಿಕ ಕಲಾವಿದರು ತಮ್ಮ ಕಲಾಕೃತಿ ಹಾಗೂ ಚಿತ್ರಕಲೆಗಳನ್ನು ಮರಳಿ ಪಡೆದುಕೊಳ್ಳಬಹುದು. 55 ಮಹಿಳೆಯರು, 75 ಮಕ್ಕಳು ಇಲ್ಲಿ ತಮ್ಮ ಕಲಾಲೋಕ ಅನಾವರಣಗೊಳಿಸಿದ್ದಾರೆ. ಹಲವರು ಒಂದಕ್ಕಿಂತಲೂ ಹೆಚ್ಚು ಚಿತ್ರಕಲೆ, ಕಲಾಕೃತಿಗಳನ್ನು ನೀಡಿದ್ದಾರೆ ಎಂದು ಹೇಳಿದರು.

ಈಗಲೂ ಚಿತ್ರಕಲೆ, ಕಲಾಕೃತಿ ನೀಡಬಹುದು: ಪ್ರತಿವರ್ಷ ಈ ಪ್ರದರ್ಶನಕ್ಕೆ ಉತ್ತಮ ಪ್ರಕ್ರಿಯೆ ವ್ಯಕ್ತವಾಗುತ್ತಿದೆ. ಈ ಬಾರಿ ತಮಿಳುನಾಡಿನ ಮಕ್ಕಳು ಸಹ ತಮ್ಮ ಕಲೆಗಳನ್ನು ಪ್ರದರ್ಶನಕ್ಕೆ ಇಟ್ಟಿದ್ದಾರೆ. ವಸ್ತುಪ್ರದರ್ಶನ ಪ್ರತಿದಿನ ಮಧ್ಯಾಹ್ನ 3ರಿಂದ ರಾತ್ರಿ 9ರವರೆಗೆ ತೆರೆದಿರಲಿದ್ದು, ಈ ಅವಧಿಯಲ್ಲಿ ವಸ್ತುಪ್ರದರ್ಶನಕ್ಕೆ ಭೇಟಿ ನೀಡುವವರು ಇಲ್ಲಿಗೆ ಬಂದು ಕಲಾಕೃತಿ ಚಿತ್ರಕಲೆಗಳನ್ನು ವೀಕ್ಷಣೆ ಮಾಡಬಹುದು. ಇಲ್ಲಿಗೆ ಪ್ರವೇಶ ಉಚಿತವಾಗಿದೆ. ವಸ್ತುಪ್ರದರ್ಶನ ಡಿ.31ರಂದು ಮುಕ್ತಾಯಗೊಳ್ಳಲಿದ್ದು, ಅಲ್ಲಿಯವರೆಗೂ ಈ ಪ್ರದರ್ಶನವೂ ಇರಲಿದೆ. ಜೊತೆಗೆ ಈಗಲೂ ಕಲಾಕೃತಿ ಮತ್ತು ಚಿತ್ರಕಲೆಗಳನ್ನು ಪ್ರದರ್ಶನಕ್ಕಾಗಿ ನೀಡಲು ಅವಕಾಶವಿದೆ. ಸದ್ಯಕ್ಕೆ ಕೊನೆ ದಿನಾಂಕ ಇಲ್ಲ ಎಂದು ಮಾಹಿತಿ ನೀಡಿದರು.





ರಂಗೋಲಿ ಸ್ಪರ್ಧೆ: ಇಲ್ಲಿ ಮಹಿಳೆಯರಿಗಾಗಿ ಮಂಗಳವಾರ ನಡೆದ ರಂಗೋಲಿ ಸ್ಪರ್ಧೆಯಲ್ಲಿ 20ಕ್ಕೂ ಹೆಚ್ಚು ಮಂದಿ ಪಾಲ್ಗೊಂಡಿದ್ದರು. ಈ ಪೈಕಿ ಪ್ರಥಮ ಸ್ಥಾನ ಪಡೆದ ವಾಸಂತಿ ಸುಭಾಷ್, ದ್ವಿತೀಯ ಸ್ಥಾನ ಪಡೆದ ನಂದಿನಿ ರವಿಚಂದ್ರ, ತೃತೀಯ ಸ್ಥಾನ ಪಡೆದ ಸೌಮ್ಯ ಲೋಹಿತ್, ಸಮಾಧಾನಕರ ಸ್ಥಾನ ಪಡೆದ ಸರಸ್ವತಿ ನರಸಿಂಹಲು, ಎಂ.ವಿ.ಚೈತ್ರಾ ಅವರಿಗೆ ಬಹುಮಾನ ವಿತರಣೆ ಮಾಡಲಾಯಿತು. ಅಂತೆಯೇ ಮಹಿಳೆಯರಿಗೆ ನಡೆದ ಮ್ಯೂಸಿಕಲ್ ಚೇರ್‌ನಲ್ಲಿ ಮೊದಲ ಸ್ಥಾನ ವೆಂಕಟಮ್ಮ, ದ್ವಿತೀಯ ಸ್ಥಾನ ಪಡೆದ ಕಲೈವಾಣಿ, ತೃತೀಯ ಸ್ಥಾನ ಪಡೆದ ಅರುಣ, ಸಮಾಧಾನಕರ ಸ್ಥಾನ ಪಡೆದ ಉಮಾ ಮತ್ತು ಪಾರ್ವತಮ್ಮ ಅವರಿಗೂ ಬಹುಮಾನ ನೀಡಲಾಯಿತು. ಉಪಸಮಿತಿ ಅಧ್ಯಕ್ಷೆ ಶಾರದಾ ಸಂಪತ್, ಮಾಜಿ ಮೇಯರ್‌ಗಳಾದ ಮೋದಾಮಣಿ, ಪುಷ್ಪಲತಾ ಚಿಕ್ಕಣ್ಣ, ಕಲಾ ಗ್ಯಾಲರಿ ಮೇಲ್ವಿಚಾರಕಿ ಅನುಸೂಯ ಮತ್ತಿತರರು ಹಾಜರಿದ್ದರು.

ನಕಲಿ ದಾಖಲೆ ಸೃಷ್ಟಿಸಿ ಶೇ. 50:50ರ ಅನುಪಾತದಡಿ ಕೋಟ್ಯಾಂತರ ರೂ. ಮೌಲ್ಯದ 16 ನಿವೇಶನ ಮಂಜೂರು

ಸಮಾಜ ರಕ್ಷಣಾ ಸೇನೆ ರಾಜ್ಯಾಧ್ಯಕ್ಷ ಕೆ.ಹೆಚ್.ಹನುಮಂತರಾಜು ಆರೋಪ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಸೇನೆ ರಾಜ್ಯಾಧ್ಯಕ್ಷ ಕೆ.ಹೆಚ್.ಹನುಮಂತರಾಜು ಮಾತನಾಡಿದರು.

ಮೈಸೂರು, ನ.5(ಜಿಎ)–ಮೈಸೂರಿನ ಕುರುಬಾರಹಳ್ಳಿ ಗ್ರಾಮದ ಸರ್ವೆ ನಂಬರ್ 4ರ 16/1 ರ ನಾಲ್ಕು ಎಕರೆ ಭೂಮಿಗೆ ಸಂಬಂಧಿಸಿದಂತೆ ನಕಲಿ ದಾಖಲೆ ಸೃಷ್ಟಿಸಿ, ಮೈಸೂರಿನ ವಿಜಯನಗರದಲ್ಲಿ 16 ನಿವೇಶನ ಮಂಜೂರು ಮಾಡಿಸಿಕೊಳ್ಳುವ ಮೂಲಕ ದೀಪು ರಾಜೇಂದ್ರ ಹಾಗೂ ಮುಡಾ ಅಧಿಕಾರಿಗಳು ಸರ್ಕಾರಕ್ಕೆ ಕೋಟ್ಯಾಂತರ ರೂ. ನಷ್ಟ ಮಾಡಿದ್ದಾರೆ ಎಂದು ಸಮಾಜ ರಕ್ಷಣಾ ಸೇನೆ ರಾಜ್ಯಾಧ್ಯಕ್ಷ ಕೆ.ಹೆಚ್. ಹನುಮಂತರಾಜು ಆರೋಪಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುರುಬಾರಹಳ್ಳಿ ಗ್ರಾಮದ ಸರ್ವೆ ನಂಬರ್ 4ರ 16/1 ರ ನಾಲ್ಕು ಎಕರೆ ಭೂಮಿಗೆ 1965ರಲ್ಲಿ ಅಂದಿನ ಸಿಟಿ ಇಂಪ್ರೂವ್‌ಮೆಂಟ್ ಟ್ರಸ್ಟ್ ಬೋರ್ಡ್(ಸಿಐಟಿಬಿ) ಮೂಲ ವಾರಸುದಾರಾದ ಕೊಳ್ಳೆಗಾಲದ ಜಿ.ವಿ.ಪರಶಿವಮೂರ್ತಿ ಅವರಿಗೆ 4 ಸಾವಿರ ರೂ. ಅವಾರ್ಡ್ ಮೊತ್ತ ನೀಡಿದೆ. ಆದರೂ 58 ವರ್ಷಗಳ ನಂತರ ನಕಲಿ ದಾಖಲೆ ಸೃಷ್ಟಿಸಿರುವ ದೀಪು ರಾಜೇಂದ್ರಗೆ 50:50 ಅನುಪಾತದಲ್ಲಿ 16 ನಿವೇಶನಗಳನ್ನು ಒಂದೇ ದಿನದಲ್ಲಿ ಅಧಿಕಾರಿಗಳು ಮಂಜೂರು ಮಾಡಿದ್ದಾರೆ ಎಂದರು.

ಈ ಹಿಂದೆಯೇ ಭೂಸ್ವಾಧೀನವಾಗಿರುವ ಜಾಗಕ್ಕೆ ಪರಿಹಾರ ನೀಡಿದ್ದು, 58 ವರ್ಷಗಳ ನಂತರ ವಿಲ್ ಮರಣ ಶಾಸನದ ಆಧಾರದ ಮೇಲೆ ಪೋಡಿಯಾಗದ ಜಾಗಕ್ಕೆ ನಿಖರವಾದ ಸ್ಥಳಕ್ಕೆ ಚೆಕ್ಕುಬಂದಿ ಗುರುತಿಸಿ ಸದೇ ಸ್ಕೆಚ್ ಕಾಪಿ ಸೇರಿದಂತೆ ಇತರೆ ದಾಖಲೆಗಳನ್ನು ನಕಲು ಮಾಡಿ ಮುಡಾದ ಹಿಂದಿನ ಆಯುಕ್ತ ಜಿ.ಟಿ.ದಿನೇಶ್, ಸರ್ವೆಯರ್ ಪಿ.ರಘು, ವ್ಯವಸ್ಥಾಪಕಿ ಬಿ.ಎಂ.ಶೃತಿ, ಪ್ರಥಮ ದರ್ಜೆ ಸಹಾಯಕ ದರ್ಶನ್ ಅವರುಗಳು ದೀಪು ರಾಜೇಂದ್ರ ಅವರಿಗೆ ಪೋಡಿಯಾಗದ ಜಾಗಕ್ಕೆ ಅಕ್ರಮವಾಗಿ 2023–24ರಲ್ಲಿ 16 ನಿವೇಶನವನ್ನು ಮಂಜೂರು ಮಾಡಿದ್ದಾರೆ ಎಂದು ಆರೋಪಿಸಿದರು.

ದೀಪು ರಾಜೇಂದ್ರ ಅವರಿಗೂ ಕುರುಬಾರಹಳ್ಳಿ ಗ್ರಾಮದ ಸರ್ವೆ ನಂಬರ್ 4ರ 16/1 ರ ನಾಲ್ಕು ಎಕರೆ ಭೂಮಿಯ ಮೂಲ ವಾರಸುದಾರಾದ ಕೊಳ್ಳೆಗಾಲದ ಜಿ.ವಿ. ಪರಶಿವಮೂರ್ತಿ ಯಾವುದೇ ಸಂಬಂಧವಿಲ್ಲದಿದ್ದರೂ ವಿಲ್ ಆಧಾರದ ಮೇಲೆ ನಿವೇಶನ ನೀಡಲಾಗಿದೆ ಎಂದು ಹೇಳುತ್ತಿದ್ದಾರೆ. ಆದರೆ, ಈ ನಿವೇಶನ ಮಂಜೂರಾತಿ ಕುರಿತು ಮುಡಾದಲ್ಲಿರುವ ವಿಲ್ ಅಥವಾ ಮರಣ ಶಾಸನ ಪತ್ರದ ನಕಲು ಹಾಗೂ ಸರ್ವೆ ನಂಬರ್ ಪೋಡಿ ಸಂಬಂಧಿಸಿದಂತೆ ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿ ಕೋರಿದಾಗ 'ನೀವು ಕೋರಿರುವಂತೆ ಸರ್ವೆ ನಂಬರ್ ಪೋಡಿಗೆ ಸಂಬಂಧಿಸಿದ ದಾಖಲಾತಿಗಳು ಕಚೇರಿಯಲ್ಲಿ ಲಭ್ಯವಿರುವುದಿಲ್ಲ. ಮುಂದುವರೆದು ನೀವು ಕೋರಿರುವ ವಿಲ್ ಯಾ ಮರಣ ಶಾಸನ ಪತ್ರವು ವೈಯಕ್ತಿಕ ದಾಖಲೆಯಾಗಿರುವುದರಿಂದ ಮಾಹಿತಿ ಹಕ್ಕು ಕಾಯ್ದೆ ಕಲಂ 8(1)(ಜೆ)ರಡಿ ನೀಡಲು ಅವಕಾಶವಿರುವುದಿಲ್ಲ ಆದ್ದರಿಂದ ನಿಮ್ಮ ಅರ್ಜಿಯನ್ನು ವಿಲೆ ಇಡಲಾಗಿದೆ ಎಂದು ಈ ಮೂಲಕ ತಿಳಿಯಪಡಿಸಿದೆ' ಎಂದು ಹಿಂಬರಹ ನೀಡಿದ್ದಾರೆ ಎಂದರು.

ಈ ಹಗರಣ ಸಂಬಂಧ ಇದರಲ್ಲಿ ಭಾಗಿಯಾಗಿರುವರಿಗೆ ವಕೀಲರ ಮೂಲಕ ನೋಟಿಸ್ ನೀಡಿದ್ದು, ಈ ಬಗ್ಗೆ ಯಾರೂ ಪ್ರತಿಕ್ರಿಯಿಸಿಲ್ಲ. ಆದ್ದರಿಂದ ವಕೀಲರ ಸಲಹೆಯಂತೆ ಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲಾಯಿತು. ಆದರೆ, ಪೊಲೀಸರು ನೀವು ಕೊಟ್ಟ ದೂರನ್ನು ನಾವು ಲೋಕಾಯುಕ್ತಕ್ಕೆ ತಲುಪಿಸುತ್ತೇವೆ. ಆದ್ದರಿಂದ ನೀವು ಅಲ್ಲಿ ದೂರು ನೀಡಿ ಎಂದು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸೇನೆ ವತಿಯಿಂದ ಲೋಕಯುಕ್ತ ಹಾಗೂ ಮುಡಾ ಹಗರಣ ತನಿಖೆ ಮಾಡುತ್ತಿರುವ ದೇಸಾಯಿ ಆಯೋಗಕ್ಕೆ ದೂರು ಸಲ್ಲಿಸಲು ನಿರ್ಧರಿಸಿದ್ದೇವೆ ಎಂದು ತಿಳಿಸಿದರು.

ಜಯಣ್ಣ, ರಂಗಸ್ವಾಮಿ, ಸ್ವಾಮಿ ನಾಯಕ್ ಹಾಗೂ ಷೇರ್ ಖಾದರ್ ಇದ್ದರು.

ಎಂಬಿಬಿಎಸ್ ವಿದ್ಯಾರ್ಥಿಗಳು ಕಲಾತ್ಮಕ ಶಿಕ್ಷಣದಲ್ಲಿ ತೊಡಗಿಸಿಕೊಂಡರೆ ವೈದ್ಯಕೀಯ ಸೇವೆಗೆ ಮಾನವೀಯ ಸ್ಪರ್ಶ ನೀಡಬಹುದು

ಹಿರಿಯ ಸಾಹಿತಿ ಡಾ.ಸುಜಾತ ಅಕ್ಕಿ ಅಭಿಮತ

ಮೈಸೂರು, ನ.5(ಎಸ್‌ಪಿಎನ್)– ಎಂಬಿಬಿಎಸ್ ಪಠ್ಯದ ಜೊತೆಗೆ ಕಲಾತ್ಮಕ ಶಿಕ್ಷಣ, ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ವೈದ್ಯಕೀಯ ಸೇವೆಗೆ ಮಾನವೀಯ ಸ್ಪರ್ಶ ನೀಡಲು ಅನುಕೂಲವಾಗಲಿದೆ ಎಂದು ಹಿರಿಯ ಸಾಹಿತಿ ಡಾ.ಸುಜಾತ ಅಕ್ಕಿ ಅಭಿಪ್ರಾಯಪಟ್ಟರು.

ಮೈಸೂರು ಎಂಎಂಸಿ ಕ್ರೀಡಾ ಮೈದಾನ (ಜೆ.ಕೆ.ಮೈದಾನ)ದ ಅಮೃತ ಮಹೋತ್ಸವ ಭವನದಲ್ಲಿ ಮೈಸೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಸಂಭ್ರಮ ಅಂಗವಾಗಿ 'ಧಮನಿ–24' ಶೀರ್ಷಿಕೆಯಡಿ ಡಾ.ಸುಜಾತ ಅಕ್ಕಿ ರಚಿತ, ರಂಗಕರ್ಮಿ ಜೀವನ್ ಕುಮಾರ್ ಬಿ. ಹೆಗ್ಗೋಡು ನಿರ್ದೇಶನದ, ಹೃದಯರಂಗ ತಂಡದ ಕಲಾವಿದರು ಅಭಿನಯಿಸಿರುವ 'ಚಾಮಚೆಲುವೆ' ನಾಟಕ ಪ್ರದರ್ಶನಕ್ಕೆ ಡೋಲು ಬಾರಿಸುವ ಮೂಲಕ ಉದ್ಘಾಟಿಸಿ, ಮಾತನಾಡಿದರು.

ಭರತನ ನಾಟ್ಯಶಾಸ್ತ್ರದಲ್ಲಿ ಉಲ್ಲೇಖಿಸಿರುವಂತೆ ವಾಸ್ತುಶಿಲ್ಪ, ಶಿಲ್ಪಕಲೆ, ಚಿತ್ರಕಲೆ, ಸಂಗೀತ, ನೃತ್ಯ ಅಥವಾ ನಾಟಕ ಸೇರಿದಂತೆ ಇತರೆ ಆಯಾಮಗಳಲ್ಲಿ ಕಲಿಕೆಗೆ ಅವಕಾಶವಿದೆ. ಹಾಗಾಗಿ ಎಂಬಿಬಿಎಸ್ ವಿದ್ಯಾರ್ಥಿಗಳು ನಾಟಕಗಳ ಪಾತ್ರ ನಿರ್ವಹಿಸುತ್ತಾರೆ ಎಂದರೆ, ಕೆಲ ಸಾರ್ವಜನಿಕರು ಮೂಗುಮುರಿದ ಪ್ರಸಂಗವನ್ನು ವಿವರಿಸಿದ ಅವರು, ಎಲ್ಲಾ ಬದಿಗೊತ್ತಿ ಎಂಎಂಸಿ ಕಾಲೇಜಿನ ವಿದ್ಯಾರ್ಥಿಗಳು ಚಾಮಚೆಲುವೆ ನಾಟಕ ಪ್ರದರ್ಶನಕ್ಕೆ ಮುಂದಾಗಿರುವುದು ಸಂತೋಷದ ಸಂಗತಿ ಎಂದರು.



'ಧಮನಿ–24' ಶೀರ್ಷಿಕೆಯಡಿ ಪ್ರದರ್ಶನಗೊಳ್ಳುತ್ತಿರುವ 'ಚಾಮಚೆಲುವೆ' ನಾಟಕ ಪ್ರದರ್ಶನವನ್ನು ಡೋಲು ಬಾರಿಸುವ ಮೂಲಕ ಉದ್ಘಾಟಿಸಲಾಯಿತು.

ಕ್ಯಾನ್ ಫಿಲ್ಮ್ ಫೆಸ್ಟಿವಲ್ ವಿಜೇತ, ಎಂಎಂಸಿ ಕಾಲೇಜಿನ ಹಳೆಯ ವಿದ್ಯಾರ್ಥಿ ಡಾ.ಚಿದಾನಂದ ಎಸ್.ನಾಯಕ್ ಮಾತನಾಡಿ, ನಾನು 2013ನೇ ಸಾಲಿನ ವಿದ್ಯಾರ್ಥಿ, ಕಿರುತೆರೆ, ವೈದ್ಯ ವೃತ್ತಿಯಲ್ಲಿ ಯಶಸ್ಸು ಕಾಣಲು ಇಲ್ಲಿನ ಪ್ರಾಧ್ಯಾಪಕರ ಸಹಕಾರವೇ ಕಾರಣ. ಹಾಗಾಗಿ ಪ್ರಸ್ತುತ ಎಂಬಿಬಿಎಸ್ ಅಧ್ಯಯನ ನಡೆಸುತ್ತಿರುವ ವಿದ್ಯಾರ್ಥಿಗಳು ಕಾಲೇಜಿನಲ್ಲಿ ನಡೆಯುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳಲು ಸಲಹೆ ನೀಡಿದರು.


"ಚಾಮಚೆಲುವೆ" ನಾಟಕ ಪಾತ್ರ ವರ್ಗದಲ್ಲಿ ದೇವತೆಗಳ ಪಾತ್ರದಲ್ಲಿ ಸುಮಿತ, ಶ.ಮೋಳಿ, ಶ್ರೇಯಾ, ತೇಜ, ಭಾಗ್ಯಶ್ರೀ, ಎಸ್.ಭವ್ಯಶ್ರೀ, ಮಹಿಷಾಸುರ ಪಾತ್ರದಲ್ಲಿ ಪಿ.ಸುಕೃತ್, ಪರಶಿವ: ಗಂಗಾ, ಹಿರಿಯಕ್ಕ: ವಿದ್ಯಾಶ್ರೀ, ಚಾಮುಂಡಿ(ಉಗ್ರ):ರಕ್ಷಾ ರಾಮಚಂದ್ರನ್, ಚಾಮುಂಡಿ: ಅನನ್ಯ ಯಶಸ್ವಿನಿ, ಮಹಿಷ ಸೈನಿಕರು: ಎಂ.ಪಿ.ಕಿರಣ್, ಶ್ರವಣ ಕುಮಾರ, ಉರುಕಾತಿ: ಎ.ಸ್ವಾತಿ, ನಂಜುಂಡ: ಭಾರ್ಗವ ಮೋಹನ್, ದುಂಡು ದೇವೇರಿ:ದೀಪಿಕಾ, ಪಟ್ಟದ ಪಾರ್ವತಿ: ಪಿ.ವಿದ್ಯಾ, ಬಸ್ವ: ಎಂ.ಬಿ.ಯುವರಾಜ್, ಸೇಸಾ: ಸುಮಿತ ಶ.ಮೋಳಿ, ಭಕ್ತೆ: ಭಾಗ್ಯಶ್ರೀ, ಕೊರವಂಜಿ: ಎಸ್.ಭವ್ಯಶ್ರೀ, ಶ್ರೀ ರಂಗನಾಥ: ಲಿಖಿತ್ ಆರ್.ಶೇಖರ್ ಅವರು ಅಮೋಘವಾಗಿ ಅಭಿನಯಿಸಿ ನಾಟಕಕ್ಕೆ ಮೆರುಗು ತಂದಿದರು.

ಚಾಮಚೆಲುವೆ' ನಾಟಕದ ನೇಪಥ್ಯದಲ್ಲಿ ಪರಿಕರ ಮತ್ತು ಪ್ರಸಾಧನ ಮಂಜು ಕಾಚಕ್ಕಿ ಹಾಗೂ ಶ್ರೀಕಾಂತ್, ಸಹಾಯ ಅಭಿಷೇಕ್, ವಸ್ತ್ರವಿನ್ಯಾಸ ಕವಿತಾ, ಸಂಗೀತ ಸಂಯೋಜನೆ ಚಂದ್ರಶೇಖರಾಚಾರ್ ಹೆಗ್ಗೊತರ, ಸಾಂಗತ್ಯ ಕೃಷ್ಣಚೈತನ್ಯ, ರಂಗನಿರ್ವಹಣೆ ಲಿಖಿತ್ ಆರ್ ಶೇಖರ್, ವಿನ್ಯಾಸ: ದೀಪಕ್ ಮೈಸೂರು, ನಿರ್ದೇಶನ ಜೀವನ್ ಕುಮಾರ್ ಬಿ. ಹೆಗ್ಗೋಡು ನಿರ್ವಹಿಸಿದ್ದಾರೆ.

ವೇದಿಕೆಯಲ್ಲಿ ಎಂಎಂಸಿ ಮತ್ತು ಆರ್‌ಐ ನಿರ್ದೇಶಕಿ ಮತ್ತು ಡೀನ್ ಡಾ.ಕೆ.ಆರ್. ದಾಕ್ಷಾಯಿಣಿ ಡಾ.ಯೋಗೇಶ್ ಸೇರಿದಂತೆ ಇತರರಿದ್ದರು. ಈ ವೇಳೆ ಕ್ಯಾನ್ ಫಿಲ್ಮ್ ಫೆಸ್ಟಿವಲ್ ವಿಜೇತ ಡಾ.ಚಿದಾನಂದ ಎಸ್.ನಾಯ್ಕ್, ಚಾಮಚೆಲುವೆ ನಾಟಕದ ಕರ್ತೃ ಡಾ.ಸುಜಾತ ಅಕ್ಕಿ ಅವರನ್ನು ಸನ್ಮಾನಿಸಲಾಯಿತು.

ಹಸೆಮಣೆ ಏರಬೇಕಿದ್ದ ಪೊಲೀಸ್ ಕಾನ್‌ಸ್ಟೇಬಲ್ ಹತ್ಯೆ

ಹಾಸನ, ನ.5– ಹಸೆಮಣೆ ಏರಬೇಕಿದ್ದ ಪೊಲೀಸ್ ಕಾನ್‌ಸ್ಟೇಬಲ್‌ನನ್ನು ತಾಲೂಕಿನ ದುದ್ದ ರೈಲ್ವೆ ಬ್ರಿಡ್ಜ್ ಬಳಿ ಮಾರಕಾಸ್ತ್ರಗಳಿಂದ ಹೊಡೆದು ಹತ್ಯೆ ಮಾಡಲಾಗಿದೆ ಎಂದು ಎಸ್‌ಪಿ ಮೊಹಮ್ಮದ್ ಸುಜೀತಾ ತಿಳಿಸಿದರು.



ಬೆಂಗಳೂರಿನಲ್ಲಿ ಕೆಎಸ್‌ಐಎಸ್‌ಎಫ್‌ನಲ್ಲಿ ಪೊಲೀಸ್ ಕಾನ್‌ಸ್ಟೇಬಲ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಹರೀಶ(33) ಹತ್ಯೆಗೀಡಾದವನಾಗಿದ್ದು, ಈತನಿಗೆ ಗಂಡಸಿ ಹೋಬಳಿಯ ಯುವತಿಯೊಂದಿಗೆ ನ 11 ರಂದು ನಗರದ ಕಲ್ಯಾಣ ಮಂಟಪದಲ್ಲಿ ವಿವಾಹ ನಡೆಯಬೇಕಿತ್ತು. ಈ ಹಿನ್ನೆಲೆಯಲ್ಲಿ ಹಾಸನದ ಸಂಬಂಧಿಕರು ಮತ್ತು ಸ್ನೇಹಿತರಿಗೆ ಲಗ್ನಪತ್ರಿಕೆ ನೀಡಿ ನ.4 ರಂದು ರಾತ್ರಿ ಬುಲೆಟ್ ಬೈಕ್‌ನಲ್ಲಿ ಸ್ವಗ್ರಾಮ ಬಾಗೇಶಪುರಕ್ಕೆ ತೆರಳುತ್ತಿದ್ದ ವೇಳೆ ದುದ್ದ–ಅರಸೀಕೆರೆ ರಸ್ತೆ ರೈಲ್ವೆ ಬ್ರಿಡ್ಜ್ ಬಳಿ ರಾತ್ರಿ 9.30 ರಿಂದ 10.20 ರ ನಡುವೆ ದುಷ್ಕರ್ಮಿಗಳು ಕಣ್ಣಿಗೆ ಕಾರದಪುಡಿ ಎರಚಿ ಆಯುಧದಿಂದ ತಲೆ ಹಿಂದಕ್ಕೆ ಹೊಡೆದು ಕೊಲೆ ಮಾಡಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಅನೈತಿಕ ಸಂಬಂಧ ಹತ್ಯೆಯಾದ ಹರೀಶ ನಗರದ ಬಿ.ಕಾಟೀಹಳ್ಳಿಯಲ್ಲಿ ಇರುವಾಗ ತನ್ನ ಅಕ್ಕ ಪುಷ್ಪ ಎಂಬುವರ ಮನೆ ಪಕ್ಕದಲ್ಲೇ ವಾಸವಿದ್ದ ಸೈನಿಕ ಹುಣಸಹಳ್ಳಿ ಹರೀಶ್ ಪತ್ನಿಯೊಂದಿಗೆ ಅನೈತಿಕ ಸಂಬಂಧ ಹೊಂದಿದ್ದ ಈ ಕಾರಣದಿಂದ ಮೃತ ಹರೀಶ ಮತ್ತು ಸೈನಿಕ ಹರೀಶ್ ನಡುವೆ ವೈಷಮ್ಯವಿತ್ತು ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ ಎಂದು ವಿವರಿಸಿದರು. ಈ ವೈಷಮ್ಯದಿಂದಲೇ ಸೈನಿಕ ಹರೀಶ ತನ್ನ ಸ್ನೇಹಿತರೊಂದಿಗೆ ಸೇರಿ ಕೊಲೆ ಮಾಡಿರಬಹುದು ಎಂದು ಮೃತನ ಚಿಕ್ಕಪ್ಪನ ಮಗ ಮಂಜುನಾಥ ದುದ್ದ ಪೊಲೀಸರಿಗೆ ದೂರು ನೀಡಿದ್ದಾರೆ ಎಂದು ತಿಳಿಸಿದರು.

ನೃತ್ಯ ಕಲೆ ಜನಜೀವನದ ಒಂದು ಭಾಗ

ಚಿಂತಕ ನಾ.ದಿವಾಕರ್ ಅಭಿಮತ

ಮೈಸೂರು, ನ.5(ಎಸ್‌ಬಿಡಿ)– ನೃತ್ಯ ಕಲೆ ಜನಜೀವನದ ಒಂದು ಭಾಗವಾಗಿದೆ ಎಂದು ಚಿಂತಕ ನಾ.ದಿವಾಕರ್ ಅಭಿಪ್ರಾಯಿಸಿದರು.

ಮೈಸೂರಿನ ದೇಸಿರಂಗ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಆಯೋಜಿಸಿರುವ ನೃತ್ಯ ತರಬೇತಿ ಶಿಬಿರಕ್ಕೆ ಕಲಾಮಂದಿರ ಆವರಣದ ಚಿಂತನ ಚಾವಡಿಯಲ್ಲಿ ಕಂಸಾಳೆ ನುಡಿಸುವ ಮೂಲಕ ಮಂಗಳವಾರ ಚಾಲನೆ ನೀಡಿ ಮಾತನಾಡಿದ ಅವರು, ಪುರಾಣ, ಇತಿಹಾಸ ಮಾತ್ರವಲ್ಲ ಪ್ರಸ್ತುತದಲ್ಲೂ ನೃತ್ಯ ಕಲೆಯು ಜನಜೀವನದ ಒಂದು ಭಾಗವಾಗಿದೆ. ಜಾನಪದದಿಂದ ಪಾಶ್ಚಾತ್ಯದವರೆಗೆ ವಿವಿಧ ಪ್ರಾಕಾರಗಳಲ್ಲಿ ನೃತ್ಯ ಹಾಸುಹೊಕ್ಕಾಗಿದೆ ಎಂದರು.

ನೃತ್ಯ ಸಮಾಜವನ್ನು ಸಮ್ಮೋಹನಗೊಳಿಸುವ ವಿಶೇಷ ಕಲೆ. ಹಾವ, ಭಾವ, ಭಂಗಿಯ ಮೂಲಕ ಜನರನ್ನು ಆಕರ್ಷಿಸುವ ಕಲೆ. ಟಿವಿ ರಿಯಾಲಿಟಿ ಶೋಗಳಲ್ಲಿ ಪ್ರದರ್ಶನ ನೀಡಿ ಚಪ್ಪಾಳೆ ಗಿಟ್ಟಿಸುವುದು ಹಾಗೂ ಹೆಚ್ಚು ಎಸ್‌ಎಂಎಸ್‌ನೊಂದಿಗೆ ಪ್ರಶಸ್ತಿ ಪಡೆಯಲಷ್ಟೇ ನೃತ್ಯವನ್ನು ಅಭ್ಯಾಸ ಮಾಡುವುದಲ್ಲ. ಸಮಾಜದೊಡನೆ ಬೆರೆಯುವುದಕ್ಕೆ ನೃತ್ಯ ತುಂಬಾ ಸಹಕಾರಿಯಾಗುತ್ತದೆ. ಆದ್ದರಿಂದ ಯಾವುದೇ ಬಗೆಯ ನೃತ್ಯವಾದರೂ ಅತ್ಯಂತ ಶ್ರದ್ಧೆಯಿಂದ ಕಲಿಯಬೇಕು ಎಂದು ಶಿಬಿರಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ಮಣ್ಣಿನ ಕಲಾ ಪರಂಪರೆಯನ್ನು ಉಳಿಸಿಕೊಳ್ಳುವ ಹೊಣೆಗಾರಿಕೆ ಯುವ ಸಮುದಾಯದ ಮೇಲಿದೆ. ನೃತ್ಯ ಕಲಿಯುವವರು ಲಾಸ್ಯ ರಂಜನ ಪುಸ್ತಕ ಓದಿ ತಿಳಿದುಕೊಳ್ಳಬೇಕು. ಭರತನಾಟ್ಯದ ಬಗ್ಗೆ ಮಾಹಿತಿ ಇರಬೇಕು. ಒಂದೊಂದು ಭಂಗಿಗೂ ಅರ್ಥವಿರುತ್ತದೆ. ಈ ಕಾರಣದಿಂದಲೇ ನಾನು ನಾಟ್ಯ ವಿಮರ್ಶೆ ಮಾಡುವುದಿಲ್ಲ. ಪ್ರಾಚೀನ ಕಾಲದಲ್ಲಿ ದೇವಾಲಯಗಳಲ್ಲಿ ಪ್ರದರ್ಶಿಸಲಾಗುತ್ತಿದ್ದ 'ಸಾದಿರ ಆಟಂ' 1932ರಲ್ಲಿ 'ಭರತನಾಟ್ಯ' ಎಂಬ ಹೆಸರು ಪಡೆಯಿತು. ಭರತಮುನಿಯ ನಾಟ್ಯಶಾಸ್ತ್ರದಲ್ಲಿ ನೃತ್ಯ ಕಲೆ ಬಗ್ಗೆ ವಿವರಣೆ ಇರುವುದರಿಂದ ಸಾದರ ಆಟಂಗೆ ಭರತನಾಟ್ಯ ಎಂದು ಕೃಷ್ಣ ಅಯ್ಯರ್ ಹಾಗೂ ರುಕ್ಮಿಣಿ ದೇವಿ ಅವರು ಮರುನಾಮಕರಣ ಮಾಡಿದರು. ಈ ಕಲೆ ದೇವಾಲಯಕ್ಕೆ ಸೀಮಿತವಾಗದೆ ಸಾರ್ವಜನಿಕಗೊಳ್ಳಬೇಕೆಂಬ ಉದ್ದೇಶದಿಂದ ಭರತನಾಟ್ಯ ಹೆಸರಿನಲ್ಲಿ ಪ್ರಚುರಪಡಿಸಿದರು ಎಂದು ನಾ.ದಿವಾಕರ್ ತಿಳಿಸಿದರು.



ಮೈಸೂರಿನ ದೇಸಿರಂಗ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಆಯೋಜಿಸಿರುವ ನೃತ್ಯ ತರಬೇತಿ ಶಿಬಿರಕ್ಕೆ ಚಿಂತಕ ನಾ.ದಿವಾಕರ್ ಚಾಲನೆ ನೀಡಿ, ಮಾತನಾಡಿದರು.

ಜಾನಪದ ತಳಹದಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, ಎಲ್ಲಾ ಸಾಹಿತ್ಯ, ಕಲೆ, ಸಂಸ್ಕೃತಿಗೂ ಜಾನಪದವೇ ತಳಹದಿಯಾಗಿದೆ. ನಮ್ಮನ್ನು ನಾವು ಅನುಕೂಲಕ್ಕೆ ತಕ್ಕಂತೆ ಬಳಸಿಕೊಳ್ಳುತ್ತಿದ್ದೇವೆ. ನಿಲ್ಲುವುದು, ನಡೆಯುವುದು, ಕೂರುವುದು, ಉಸಿರಾಡುವುದೂ ಸರಿಯಾದ ಕ್ರಮದಲ್ಲಿಲ್ಲ. ದೃಷ್ಟಿಯ ಚಲನೆ ವಿಭಿನ್ನವಾಗಿದ್ದು 32 ರೀತಿಯಲ್ಲಿ ಕಣ್ಣು ಹೊರಳಿಸಲು ಸಾಧ್ಯವಿದೆಯಂತೆ. ಆದರೆ ಅದು ಎಲ್ಲರಿಂದಲೂ ಸಾಧ್ಯವಿಲ್ಲ. ಹಾಗಾಗಿ ಯಾವುದೇ ಕಲೆಯ ಅಭ್ಯಾಸಕ್ಕೆ ಸಹನೆ ಬಹಳ ಮುಖ್ಯ. ಹೊಗಳಿಕೆಯನ್ನು ತಲೆಗೆ ಹಚ್ಚಿಕೊಳ್ಳದೆ ಸಾಧಿಸುವುದು ಇನ್ನೂ ಸಾಕಷ್ಟಿದೆ ಎಂಬ ಸತ್ಯ ಹೃದಯದಲ್ಲಿ ಸದಾ ಜಾಗೃತವಾಗಿರಬೇಕು. ನಿಮ್ಮ ಬದುಕಿನ ತಳಹದಿ ಗಟ್ಟಿಯಾಗಿರಬೇಕು. ಆಗ ಮಾತ್ರ ಎಲ್ಲವನ್ನೂ ಸರಳವಾಗಿ ಗ್ರಹಿಸಲು ಸಾಧ್ಯ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ರಂಗಕರ್ಮಿ ನಾಗೇಂದ್ರ, ಸಂಸ್ಥೆಯ ಕಾರ್ಯದರ್ಶಿ ಕೃಷ್ಣ ಜನಮನ, ಖಜಾಂಚಿ ಬಿ.ಎಸ್.ದಿನಮಣಿ ಮತ್ತಿತರರು ಉಪಸ್ಥಿತರಿದ್ದರು.

ಹಳೆಗುಂಡ್ಲ ಚನ್ನಯ್ಯನ ಕೆರೆ ತುಂಬಿಸುವಂತೆ ಒತ್ತಾಯಿಸಿ

ಇಂದಿನಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ



ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಟಿ.ಆರ್.ವಿದ್ಯಾಸಾಗರ್ ಮಾತನಾಡಿದರು.

ನಂಜನಗೂಡು, ನ.5– ಕಬಿನಿ ನದಿಯಿಂದ ನೀರೆತ್ತುವ ಯೋಜನೆ ಜಾರಿಗೊಳಿಸಿ ತಾಲೂಕಿನ ಹೆಡತಲೆ ಗ್ರಾಮಕ್ಕೆ ಹೊಂದಿಕೊಂಡಿರುವ ಹಳೆಗುಂಡ್ಲ ಚೆನ್ನಯ್ಯನ ಕೆರೆ ತುಂಬಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘದಿಂದ ನ6 ರಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರೈತ ಸಂಘದ ಜಿಲ್ಲಾಧ್ಯಕ್ಷ ಟಿ.ಆರ್.ವಿದ್ಯಾಸಾಗರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಲ್ಲಾ ಕೆರೆಗಳನ್ನು ತುಂಬಿಸುವ ಮೂಲಕ ರೈತರಿಗೆ ವರದಾನವಾಗಬೇಕಿದ್ದ ಸರ್ಕಾರ ಸಾವಿರಾರು ಟಿಎಂಸಿ ನೀರನ್ನು ತಮಿಳುನಾಡಿಗೆ ಹರಿಸುವ ಮೂಲಕ ದ್ರೋಹ ಎಸಗಿದೆ. ನಮ್ಮ ಭಾಗದ ಕಪಿಲಾ ನದಿ ನೀರು ತಮಿಳುನಾಡಿನ ನೀರಿನ ಸಾಲ ತೀರಿಸುವ ಅಣೆಕಟ್ಟೆಗಳು ಎಂದು ಸರ್ಕಾರ ಭಾವಿಸಿದಂತಿದೆ. ಇದು ಕಪಿಲಾ ಕೊಳ್ಳದ ರೈತರ ಬಗ್ಗೆ ಸರ್ಕಾರಕ್ಕೆ ಇರುವ ಕಾಳಜಿಯನ್ನು ಎತ್ತಿ ತೋರುತ್ತದೆ ಎಂದು ಆರೋಪಿಸಿದರು.

ತಾಲೂಕಿನ ಕೌಲಂದೆ ಹೋಬಳಿ ಮಳೆ ಬಾರದ ಬರಗಾಡು ಪ್ರದೇಶ ಎಂದು ಪ್ರಖ್ಯಾತಿ ಪಡೆದಿದೆ. ಆದ್ದರಿಂದ ಜನ ಜಾನುವಾರುಗಳಿಗೆ ನೀರು ಒದಗಿಸಲು ಹಾಗೂ ಅಂತ ರ್ಜಲ ಪ್ರಮಾಣ ಹೆಚ್ಚಿಸುವ ಸಲುವಾಗಿ ಕಬಿನಿಯಿಂದ ನೀರೆತ್ತುವ ಯೋಜನೆ ಅನುಷ್ಠಾನಗೊಳಿಸಿ ತಾಲೂಕಿನ ಹೆಡತಲೆ ಗ್ರಾಮಕ್ಕೆ ಹೊಂದಿಕೊಂಡಂತಿರುವ 19 ಎಕರೆ ವಿಶಾಲ ಪ್ರದೇಶದ ಹಳೆಗುಂಡ್ಲ ಚನ್ನಯ್ಯನ ಕೆರೆ ತುಂಬಿಸುವಂತೆ ಒತ್ತಾಯಿಸಿ ಅನಿರ್ದಿಷ್ಟಾವಧಿ ಪ್ರತಿಭಟನೆ ಹಮ್ಮಿಕೊಂಡಿದ್ದು, ಅಕ್ಕಪಕ್ಕ ಗ್ರಾಮಗಳ ಗ್ರಾಮಸ್ಥರು, ವಿವಿಧ ಸಂಘಟನೆ ಮುಖಂಡರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಇಮ್ಮಾವು ರಘು, ರೈತ ಸಂಘದ ತಾಲೂಕು ಅಧ್ಯಕ್ಷ ಸತೀಶ್ ರಾವ್, ಶಿವಣ್ಣ, ದೇವರಾಜು, ಮಂಜು, ಹೆಡತಲೆ, ಹೆಮ್ಮರಗಾಲ ಗ್ರಾಮಸ್ಥರು ಹಾಜರಿದ್ದರು.

2028ಕ್ಕೆ ವಿಜಯೇಂದ್ರ ರಾಜ್ಯದ ಮುಖ್ಯಮಂತ್ರಿಯಾಗಲಿ

● ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಹಾರೈಕೆ ● ಹುಟ್ಟುಹಬ್ಬ ಅಂಗವಾಗಿ ಗೋ ಪೂಜೆ, ಮೇವು ವಿತರಣೆ





ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹುಟ್ಟುಹಬ್ಬದ ಅಂಗವಾಗಿ ಮೈಸೂರು ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಗೋಮಾತೆ ದತ್ತು ಪಡೆದರು. ಇದೇ ವೇಳೆ ವಿಜಯೇಂದ್ರ ಅವರ ಹೆಸರಿನಲ್ಲಿ ಸಸಿಗಳನ್ನು ನೆಡಲಾಯಿತು.

ತಿ.ನರಸೀಪುರ, ನ.5– ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಅವರು ಯುವ ಶಕ್ತಿಯಾಗಿ ಹೊರಹೊಮ್ಮಿ 2028ಕ್ಕೆ ರಾಜ್ಯದ ಮುಖ್ಯಮಂತ್ರಿಯಾಗಲಿ ಎಂದು ಮೈಸೂರು ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಹಾರೈಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಹುಟ್ಟುಹಬ್ಬದ ಪ್ರಯುಕ್ತ ತಾಲೂಕಿನ ಕುರುಬೂರು ಸಮೀಪದ ಕರ್ನಾಟಕ ಪ್ರಾಣಿ ದಯಾ ಪಿಂಜಾರ ಪೋಲ್‌ನಲ್ಲಿ ಗೋ ಪೂಜೆ, ಹಸುಗಳಿಗೆ ಮೇವು ವಿತರಣೆ ಮತ್ತು ಸಸಿ ನೆಟ್ಟು ಸಿಹಿ ಹಂಚಿ ಮಾತನಾಡಿದ ಅವರು, ಸರಳತೆಯ ಸಾಹುಕಾರ ಬಿ.ವೈ.ವಿಜಯೇಂದ್ರ ಅವರ ಅಪೇಕ್ಷೆಯಂತೆ ಪರಿಸರ ಸಂರಕ್ಷಣೆ, ಗೋವುಗಳ ರಕ್ಷಣೆ ಮಾಡುವ ಸಂಕಲ್ಪದೊಂದಿಗೆ ವರುಣ ಕ್ಷೇತ್ರದಲ್ಲಿ ಕಾರ್ಯಕರ್ತರೊಂದಿಗೆ ಮಾದರಿಯಾಗಿ ಅವರ ಹುಟ್ಟುಹಬ್ಬ ಆಚರಿಸಿದ್ದೇವೆ ಎಂದರು.

ವಿಜಯೇಂದ್ರ ಅವರು ತಮ್ಮ ತಂದೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪನವರಂತೆ ರಾಜ್ಯದ ಜನತೆಯ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಸಿಎಂ ಆಗಿ ಜನರ ಸೇವೆ ಮಾಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದರು.

> ವರುಣ ಕ್ಷೇತ್ರ ಬಿ.ವೈ.ವಿಜಯೇಂದ್ರ ಅವರಿಗೆ ರಾಜಕೀಯವಾಗಿ ಶಕ್ತಿ ಹಾಗೂ ಸ್ಥಿರತೆ ತಂದುಕೊಟ್ಟಿದೆ. ಮುಂದಿನ ಬಾರಿ ವರುಣ ಕ್ಷೇತ್ರದಲ್ಲಿ ನಿಂತು ಮುಖ್ಯಮಂತ್ರಿ ಆಗಿ ಹೊರ ಹೊಮ್ಮುತ್ತಾರೆ. ವರುಣ ಜನತೆಯು ಸಹ ವಿಜಯೇಂದ್ರ ಅವರ ಸರಳ ವ್ಯಕ್ತಿತ್ವಕ್ಕೆ ಸದಾ ಕೈ ಜೋಡಿಸುತ್ತಾರೆ. ಯುವ ಸಮೂಹ ಅವರ ಬೆನ್ನೆಲುಬಾಗಿ ನಿಂತಿರುವುದು ಅವರ ಸರಳತೆಗೆ ಸಾಕ್ಷಿ.
>
> - ಎಲ್.ಆರ್.ಮಹದೇವಸ್ವಾಮಿ, ಮೈಸೂರು ಜಿಲ್ಲಾ ಗ್ರಾಮಾಂತರ ಅಧ್ಯಕ್ಷ.

ಜಿಪಂ ಮಾಜಿ ಸದಸ್ಯ ಚಿಕ್ಕರಂಗನಾಯಕ ಮಾತನಾಡಿ, ಯುವಕರ ಕಣ್ಮಣಿ ವಿಜಯೇಂದ್ರ ಅವರು ಹುಟ್ಟುಹಬ್ಬವನ್ನು ಸರಳವಾಗಿ ಆಚರಿಸಬೇಕು. ಆಡಂಬರದಿಂದ ಕೂಡಿರಬಾರದು ಎಂದು ಕರೆ ನೀಡಿದ ಹಿನ್ನೆಲೆಯಲ್ಲಿ ಇಲ್ಲಿನ ಪಿಂಜರಾ ಪೋಲ್ ಆಯ್ಕೆ ಮಾಡಿಕೊಂಡು ಹಸುಗಳಿಗೆ ಮೇವು ನೀಡುವ ಮೂಲಕ ಸರಳವಾಗಿ ಆಚರಿಸುತ್ತಿದ್ದೇವೆ. ಬಿಜೆಪಿ ರಾಜ್ಯಾಧ್ಯಕ್ಷರಾಗಿ ರಾಜ್ಯದ ಅಭಿವೃದ್ಧಿಗಾಗಿ ಕಾಂಗ್ರೆಸ್ ಸರ್ಕಾರದ ದುರಾಡಳಿತ ಹಾಗೂ ಭ್ರಷ್ಟಾಚಾರವನ್ನು ಬಯಲಿಗೆಳೆದು ವಿಶ್ರಮಿಸದೆ ಹೋರಾಡುತ್ತಿರುವ ವಿಜಯೇಂದ್ರ ಅವರಿಗೆ ನಾವೆಲ್ಲರೂ ಶಕ್ತಿ ತುಂಬಿ ಅವರ ಬೆನ್ನಿಗೆ ನಿಂತು ಈ ರಾಜ್ಯದ ಮುಖ್ಯಮಂತ್ರಿಗಳನ್ನಾಗಿ ಮಾಡಲು ಪಣ ತೊಡೋಣ ಎಂದರು.

ಟಿಎಪಿಸಿಎಂಎಸ್ ಜಿಲ್ಲಾ ಉಪಾಧ್ಯಕ್ಷ ಕೆ.ವಾಸುದೇವ್ ಮಾತನಾಡಿ, ಬಿ.ವೈ.ವಿಜಯೇಂದ್ರ ಅವರ ಹುಟ್ಟುಹಬ್ಬವನ್ನು ಗ್ರಾಮೀಣ ಭಾಗದಲ್ಲಿ ಆಚರಿಸಬೇಕೆಂದು ತೀರ್ಮಾನಿಸಿ ಪಿಂಜರಾಪೋಲ್‌ನಲ್ಲಿ ಆಚರಿಸುತ್ತಿದ್ದೇವೆ. 2028ರ ವಿಧಾನಸಭಾ ಚುನಾವಣೆಯಲ್ಲಿ ಮುಖ್ಯಮಂತ್ರಿಗಳಾಗಿ ವಿಜಯೇಂದ್ರ ಅವರು ಅಧಿಕಾರದ ಗದ್ದುಗೆ ಏರಲಿದ್ದಾರೆ ಎಂದರು.

ಇದೇ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹುಟ್ಟುಹಬ್ಬದ ಅಂಗವಾಗಿ ಮೈಸೂರು ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಗೋಮಾತೆಯನ್ನು ದತ್ತು ಪಡೆದರು.

ಕಾರ್ಯಕ್ರಮದಲ್ಲಿ ವರುಣ ಕ್ಷೇತ್ರದ ಪ್ರಧಾನ ಕಾರ್ಯದರ್ಶಿ ಆಲಗೂಡು ವೆಂಕಟರಮಣಶೆಟ್ಟಿ, ಜಿಪಂ ಮಾಜಿ ಸದಸ್ಯ ಗುರುಸ್ವಾಮಿ, ವರುಣ ಕ್ಷೇತ್ರ ಸಂಚಾಲಕ ನಗರ್ಲೆ ಮಧು, ಗ್ರಾಪಂ ಮಾಜಿ ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿ ಮಹೇಶ್, ವರುಣ ಮಧು, ನಿರಂಜನ್, ರಕ್ಷಿತ್ ನಾಯಕ್, ಕೃಷ್ಣ, ಕೆಂಪಯ್ಯನಹುಂಡಿ ಕುಮಾರ, ಪಿಂಜಾರ ಪೋಲ್ ಅಧ್ಯಕ್ಷ ಸುಭಾಷ್ ಚೌಧರಿ, ರಾಜು, ಕಿಶೋರ್ ಸಿಂಗ್, ರೂಪ ರಾಮ್ ಮತ್ತಿತರರಿದ್ದರು.

ನೂತನ ಅಂಗಡವಾಡಿ ಕಟ್ಟಡ ಉದ್ಘಾಟನೆ



ಅಂಗನವಾಡಿ ಕಟ್ಟಡವನ್ನು ಶಾಸಕ ಅನಿಲ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ನ.5– ಪಟ್ಟಣದ 10ನೇ ವಾರ್ಡ್ ಕಾಳಿದಾಸ ರಸ್ತೆಯಲ್ಲಿ 17 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಅಂಗಡವಾಡಿ ಕಟ್ಟಡವನ್ನು ಶಾಸಕ ಅನಿಲ್ ಉದ್ಘಾಟಿಸಿದರು.

ನಂತರ ಮಾತನಾಡಿದ ಶಾಸಕರು, ಈ ಅಂಗನವಾಡಿಗೆ 17ಕ್ಕೂ ಹೆಚ್ಚು ಮಕ್ಕಳು ಬರುತ್ತಿದ್ದು, ಒಂದು ಸುಸಜ್ಜಿತ ಕಟ್ಟಡ ನಿರ್ಮಿಸಲಾಗಿದೆ. ಈ ಭಾಗದ ಪುರಸಭಾ ಸದಸ್ಯರು ಹಾಗೂ ಮುಖಂಡರು ಅಂಗನವಾಡಿಗೆ ಕಾಂಪೌಂಡ್ ಹಾಗೂ ರಸ್ತೆ ನಿರ್ಮಿಸಿಕೊಡುವಂತೆ ಬೇಡಿಕೆ ಇಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಅಂಗನವಾಡಿಗೆ ಕಾಂಪೌಂಡ್ ಸೇರಿದಂತೆ ಎಲ್ಲಾ ರೀತಿಯ ಮೂಲಸೌಕರ್ಯ ಕಲ್ಪಿಸಲಾಗುವುದು ಎಂದರು.

ಪುರಸಭಾ ಸದಸ್ಯ ಮಿಲ್ ನಾಗರಾಜು ಮಾತನಾಡಿ, ನಮ್ಮ ವಾರ್ಡ್‌ನಲ್ಲಿ ಸುಸಜ್ಜಿತವಾದ ನೂತನ ಕಟ್ಟಡ ನಿರ್ಮಾಣವಾಗಿದ್ದು, ಈ ಭಾಗದಲ್ಲಿ ಇನ್ನೂ ಹಲವು ಅಭಿವೃದ್ಧಿ ಕಾರ್ಯಗಳು ಆಗಬೇಕಿದೆ. ಈ ಹಿನ್ನೆಲೆಯಲ್ಲಿ ಶಾಸಕರಿಗೆ ಮನವಿ ಮಾಡಿದ್ದೇವೆ. ಶಾಸಕರು ನಮ್ಮ ಮನವಿಗೆ ಸ್ಪಂದಿಸುವ ಭರವಸೆ ನೀಡಿದ್ದಾರೆ ಎಂದರು.

ಸಿಡಿಪಿಓ ದೀಪ ಮಾತನಾಡಿದರು. ಈ ವೇಳೆ ಪುರಸಭಾ ಸದಸ್ಯರಾದ ಮಧು, ಕುಲುಮೆ ರಾಜು, ಪುರಸಭಾ ಮುಖ್ಯಾಧಿಕಾರಿ ಸುರೇಶ್, ಎಇಇ ಬೋರಯ್ಯ, ಮುಖಂಡರಾದ ಕೃಷ್ಣನಾಯಕ, ಸೋಮನಾಯಕ, ದ್ಯಾವನಾಯಕ, ಬಿಲ್ಲನಾಯಕ, ಜವರನಾಯಕ, ಅಂಗನವಾಡಿ ಕಾರ್ಯಕರ್ತೆ ಲೀಲಾವತಿ, ಹಿರಿಯ ಮೇಲ್ವಿಚಾರಕಿ ರೇಖಾ, ರಂಜಿತಾ, ಇಂದುಶ್ರೀ, ಶಿವಪ್ಪ, ರಾಕೇಶ್ ಸೇರಿದಂತೆ ಇನ್ನಿತರರಿದ್ದರು.

ಬೆಟ್ಟದಪುರದಲ್ಲಿ ವಾಕ್, ಶ್ರವಣ, ಕಣ್ಣಿನ ತಪಾಸಣಾ ಶಿಬಿರ



ಬೆಟ್ಟದಪುರದಲ್ಲಿ ಉಚಿತ ವಾಕ್, ಶ್ರವಣ ಮತ್ತು ಕಣ್ಣಿನ ತಪಾಸಣಾ ಶಿಬಿರ ನಡೆಯಿತು.

ಬೆಟ್ಟದಪುರ, ನ.5– ಪ್ರತಿಯೊಬ್ಬರೂ ಉಚಿತ ವಾಕ್, ಶ್ರವಣದೋಷ ಮತ್ತು ಕಣ್ಣಿನ ತಪಾಸಣಾ ಶಿಬಿರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮಾಜಿ ಶಾಸಕ ಎಸ್.ಸಿ. ಬಸವರಾಜು ತಿಳಿಸಿದರು.

ಗ್ರಾಮದಲ್ಲಿ ಸಮಾಜ ಸೇವಕ ಜಿ.ಎನ್.ಸುನೀಲ್ ಕುಮಾರ್ ಅವರು ಏರ್ಪಡಿಸಿದ್ದ ಉಚಿತ ವಾಕ್, ಶ್ರವಣದೋಷ ಮತ್ತು ಕಣ್ಣಿನ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂಘ ಸಂಸ್ಥೆಗಳು ಹಾಗೂ ಸಮಾಜ ಸೇವಕರು ಇಂತಹ ಕಾರ್ಯಕ್ರಮಗಳನ್ನು ಮತ್ತಷ್ಟು ಹಮ್ಮಿಕೊಳ್ಳುವ ಮೂಲಕ ಗ್ರಾಮೀಣ ಭಾಗದ ಜನರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ತಿಳಿಸಿದರು.

ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಬಿಪಿ, ಶುಗರ್ ತಪಾಸಣೆಗಾಗಿ ಹೆಚ್ಚಿನ ಸಾರ್ವಜನಿಕರು ದೂರದ ನಗರಗಳಿಗೆ ತೆರಳಿ ಹಣ ಕಳೆದುಕೊಳ್ಳುತ್ತಿದ್ದಾರೆ. ಹೀಗಾಗಿ ಸ್ಥಳೀಯ ಮಟ್ಟದಲ್ಲಿ ಇಂತಹ ಶಿಬಿರಗಳು ಆಗಾಗ್ಗೆ ನಡೆದರೆ ಗ್ರಾಮೀಣ ಜನರ ಆರೋಗ್ಯದ ಕಾಳಜಿ ವಹಿಸಿದಂತಾಗುತ್ತದೆ ಎಂದರು.

ಬಿಜೆಪಿ ಮುಖಂಡರಾದ ವಿಕ್ರಮ್ ರಾಜ್, ಆರ್.ಟಿ.ಸತೀಶ್ ಮಾತನಾಡಿ, ಸಮಾಜ ಸೇವೆ ಎಲ್ಲರೂ ಮಾಡುವುದಿಲ್ಲ. ಸುನೀಲ್ ಕುಮಾರ್ ಅವರು ಕಳೆದ 3 ವರ್ಷಗಳಿಂದ 4 ಕ್ಯಾಂಪ್ ಗಳನ್ನು ನಡೆಸಿ ನೂರಾರು ಜನರಿಗೆ ನೆರವಾಗಿದ್ದಾರೆ ಎಂದರು.

ಸಮಾಜ ಸೇವಕ ಸುನೀಲ್ ಕುಮಾರ್ ಮಾತನಾಡಿ, ಮುಂದಿನ ದಿನಗಳಲ್ಲಿ ದೊಡ್ಡ ಕಾಯಿಲೆಗಳಿಗೆ ಉಚಿತವಾಗಿ ಚಿಕಿತ್ಸೆ ಕೊಡಿಸುವ ಉದ್ದೇಶ ಹೊಂದಲಾಗಿದ್ದು, ಬೆಂಗಳೂರಿನ ಪ್ರತಿಷ್ಠಿತ ಖಾಸಗಿ ಆಸ್ಪತ್ರೆಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಶಂಕರ್ ಕಣ್ಣಿನ ಆಸ್ಪತ್ರೆ ಹಾಗೂ ಮೈಸೂರಿನ ಮಾನಸ ಗಂಗೋತ್ರಿ ವಾಕ್ ಮತ್ತು ಶ್ರವಣ ಸಂಸ್ಥೆ ತಪಾಸಣೆ ಕೈಗೊಳ್ಳಲಾಯಿತು. 60ಕ್ಕೂ ಹೆಚ್ಚು ಮಂದಿ ತಪಾಸಣೆಗೆ ಒಳಪಟ್ಟರು.

ಈ ವೇಳೆ ಮುಖಂಡರಾದ ಶಿವಶಂಕರ್, ಮೈಸೂರು ವಾಕ್ ಮತ್ತು ಶ್ರವಣ ಸಂಸ್ಥೆ ವೈದ್ಯರು ಹಾಗೂ ಸಿಬ್ಬಂದಿ, ಬೆಂಗಳೂರು ಶಂಕರ್ ಕಣ್ಣಿನ ಆಸ್ಪತ್ರೆ ವೈದ್ಯರು ಮತ್ತು ಸಿಬ್ಬಂದಿ ಇನ್ನಿತರರಿದ್ದರು.

ಕಾಳೇನಹಳ್ಳಿ ಆದರ್ಶ ಶಾಲೆಯಲ್ಲಿ ಪ್ರತಿಭಾ ಕಾರಂಜಿ

ವಿದ್ಯಾರ್ಥಿಗಳು ಸರ್ಕಾರದ ಸೌಲಭ್ಯ ಸದುಪಯೋಗಪಡಿಸಿಕೊಳ್ಳಿ: ಶಾಸಕ ಡಿ.ರವಿಶಂಕರ್



ಪ್ರತಿಭಾ ಕಾರಂಜಿ ಮತ್ತು ಕಲೋತ್ಸವವನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಕೆ.ಆರ್.ನಗರ, ನ.5– ರಾಜ್ಯ ಸರ್ಕಾರ ಶೈಕ್ಷಣಿಕ ಪ್ರಗತಿಗೆ ಹೆಚ್ಚು ಆದ್ಯತೆ ನೀಡಿ ಹತ್ತು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದು ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ತಾಲೂಕಿನ ಕಾಳೇನಹಳ್ಳಿ ಆದರ್ಶ ಶಾಲೆಯಲ್ಲಿ ಮಂಗಳವಾರ ನಡೆದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಿ ಇದರೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆ ಅನಾವರಣ ಮಾಡಿ ಅದಕ್ಕೆ ಪೋಷಣೆ ನೀಡಿ. ಅವರು ಗ್ರಾಮದಿಂದ ರಾಷ್ಟ್ರ ಮಟ್ಟದ ವರೆಗೂ ಸ್ಪರ್ಧಿಸಿ ಉತ್ತಮ ಸಾಧನೆ ಮಾಡಲು ಪ್ರತಿಭಾ ಕಾರಂಜಿ ಅತ್ಯುತ್ತಮ ವೇದಿಕೆಯಾಗಿದ್ದು, ಸೋಲು ಗೆಲುವನ್ನು ಲೆಕ್ಕಿಸದೆ ಭಾಗವಹಿಸಬೇಕು ಎಂದರು.

ಕ್ಷೇತ್ರದ ವ್ಯಾಪ್ತಿಯ ಶಾಲೆಗಳ ದುರಸ್ತಿಗೆ 3 ಕೋಟಿ ಅನುದಾನ ಮಂಜೂರಾಗಿದ್ದು, ಶೀಘ್ರ ಕಾಮಗಾರಿ ಆರಂಭವಾಗಲಿದೆ. ಜೊತೆಗೆ ಆದರ್ಶ ಶಾಲೆ ಒಳಾವರಣ ಸಮತಟ್ಟು ಕೆಲಸಕ್ಕೂ ಹಣ ನೀಡಲಿದ್ದು, ಬಿಇಓ ಅಗತ್ಯವಿರುವ ಎಲ್ಲಾ ಶಾಲೆಗಳ ದುರಸ್ತಿಯ ತುರ್ತು ಕೆಲಸವನ್ನು ಆದ್ಯತೆ ಮೇರೆಗೆ ನಿರ್ವಹಿಸಿ ನನಗೆ ವರದಿ ನೀಡಬೇಕು ಎಂದು ತಾಕೀತು ಮಾಡಿದರು.

ಕಳೆದ ಶೈಕ್ಷಣಿಕ ವರ್ಷದಲ್ಲಿ ಕ್ಷೇತ್ರ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ 4ನೇ ಸ್ಥಾನಗಳಿಸಿದ್ದು ಈ ಬಾರಿ ಜಿಲ್ಲೆಗೆ ಪ್ರಥಮ ಸ್ಥಾನಕ್ಕೇರಲು ಈಗಿನಿಂದಲೇ ಪೂರ್ವ ತಯಾರಿ ಕೈಗೊಂಡು ಪ್ರೌಢಶಾಲಾ ಶಿಕ್ಷಕರಿಗೆ ಅಗತ್ಯ ತರಬೇತಿ, ಮಾರ್ಗದರ್ಶನ ನೀಡಬೇಕು. ಈ ವಿಚಾರದಲ್ಲಿ ನಾನು ಎಲ್ಲಾ ಸಲಹೆ ಮತ್ತು ಸಹಕಾರ ನೀಡಿ ಶಿಕ್ಷಕರ ಬೆನ್ನೆಲುಬಾಗಿ ನಿಲ್ಲುತ್ತೇನೆಂದು ಭರವಸೆ ನೀಡಿದರು.

ಬಿಇಓ ಆರ್.ಕೃಷ್ಣಪ್ಪ, ಎಸ್‌ಡಿಎಂಸಿ ಅಧ್ಯಕ್ಷ ಕೆ.ಪಿ.ಜಗದೀಶ್, ಮುಖ್ಯ ಶಿಕ್ಷಕಿ ರುಕ್ಮಿಣಿ ಮಾತನಾಡಿದರು. ವಿದ್ಯಾರ್ಥಿಗಳು ಪ್ರದರ್ಶಿಸಿದ ವಿವಿಧ ವೇಷ ಭೂಷಣ ಮತ್ತು ಇತರ ಕ್ರಿಯಾತ್ಮಕ ಚಟುವಟಿಕೆಗಳು ಎಲ್ಲರ ಗಮನ ಸೆಳೆದವು.

ಎಸ್‌ಡಿಎಂಸಿ ಉಪಾಧ್ಯಕ್ಷೆ ಶೈಲಜಾ, ಸದಸ್ಯರಾದ ಡಿ.ಸಿ.ರವಿ, ಚಂದ್ರು, ಕವಿತಾ, ಶಿಲ್ಪಾ, ಕಲಾವತಿ, ಮಂಜುನಾಥ್, ಸಣ್ಣಪ್ಪ, ಬಿಆರ್‌ಸಿ ವೆಂಕಟೇಶ್, ಸಿಆರ್‌ಪಿ ಉದಯಕುಮಾರ್, ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು, ಸಿಡಿಪಿಓ ಸಿ.ಎಂ.ಅಣ್ಣಯ್ಯ, ಅಕ್ಷರ ದಾಸೋಹ ಅಧಿಕಾರಿ ಸ್ವಾಮಿಗೌಡ, ತಾಲೂಕು ಸರ್ಕಾರಿ ನೌಕರರ ಸಂಘದ ನಿರ್ದೇಶಕರಾದ ಬಿ.ಎಲ್.ಮಹದೇವ್, ಶಂಕರೇಗೌಡ, ಸಿ.ಈ.ಉಮೇಶ್, ಪೂರ್ಣಿಮ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ರಾಜಶೇಖರ, ಉಪಾಧ್ಯಕ್ಷ ಕೃಷ್ಣನಾಯಕ, ದೈಹಿಕ ಶಿಕ್ಷಣಾಧಿಕಾರಿ ಎಂ.ಪಿ.ಕುಮಾರ ಸ್ವಾಮಿ, ಶಿಕ್ಷಕ ಸೈಯದ್ ರಿಜ್ವಾನ್, ಜ್ಯೋತಿಕುಮಾರ್ ಮತ್ತಿತರರಿದ್ದರು.

ಕನ್ನಡಿಗರು ಎಲ್ಲಾ ಭಾಷೆ ಕಲಿತು ಕನ್ನಡ ಬೆಳೆಸಿ

ಪುರಸಭಾ ಸದಸ್ಯ ಎಲ್.ಮಂಜುನಾಥ್ ಕರೆ



ಪುರಸಭಾ ಸದಸ್ಯ ಎಲ್.ಮಂಜುನಾಥ್ ಮಾತನಾಡಿದರು.

ತಿ.ನರಸೀಪುರ, ನ.5– ಸಾಹಿತ್ಯ ಸೇರಿದಂತೆ ಶಿಕ್ಷಣ, ಕ್ರೀಡೆ ಹಾಗೂ ಚಿತ್ರರಂಗದಲ್ಲೂ ವಿಶಿಷ್ಟ ಸಾಧನೆ ಮಾಡುವ ಮೂಲಕ ನಾಡಿನ ಖ್ಯಾತನಾಮರು ಕನ್ನಡಕ್ಕೆ ಜಾಗತಿಕ ಮನ್ನಣೆ ತಂದುಕೊಟ್ಟಿದ್ದಾರೆ ಪುರಸಭಾ ಸದಸ್ಯ ಎಲ್.ಮಂಜುನಾಥ್ ತಿಳಿಸಿದರು.

ಪಟ್ಟಣದ ಎನ್‌ಕೆಎಫ್ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ನಡೆದ 69ನೇ ಕನ್ನಡ ರಾಜ್ಯೋತ್ಸವದಲ್ಲಿ ಮಾತನಾಡಿದ ಅವರು, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಆದಿಯಾಗಿ ಕ್ರೀಡಾಪಟುಗಳು ಹಾಗೂ ಚಿತ್ರನಟರು ಕನ್ನಡದಲ್ಲಿ ಸಾಧನೆಗೈದು ನಾಡಿನ ಖ್ಯಾತಿಯನ್ನು ಉತ್ತುಂಗಕ್ಕೆ ಕೊಂಡೊಯ್ದಿದ್ದಾರೆ ಎಂದರು.

ಆಲೂರು ವೆಂಕಟರಾಯರು 1905ರಲ್ಲಿ ಆರಂಭಿಸಿದ ಕನ್ನಡ ಏಕೀಕರಣ ಚಳವಳಿ ಸ್ವಾತಂತ್ರ್ಯ ನಂತರ 1954ರಲ್ಲಿ ಮೈಸೂರು ರಾಜ್ಯವಾಗಿ ಕನ್ನಡ ನಾಡು ಉದಯವಾಯಿತು. 1974ರಲ್ಲಿ ಸಿಎಂ ಆಗಿದ್ದ ದಿ.ದೇವರಾಜ ಅರಸು ಅವರು ರಾಜ್ಯಕ್ಕೆ ಕರ್ನಾಟಕವೆಂದು ಮರುನಾಮಕರಣ ಮಾಡಿದರು. ಸಾಹಿತ್ಯ ಕ್ಷೇತ್ರದಲ್ಲಿ ಕನ್ನಡದ ಮಹತ್ವ ಹಾಗೂ ನಾಡಿನ ಇತಿಹಾಸವೇ ರೋಚಕವಾದದ್ದು, ಕನ್ನಡಿಗರು ಎಲ್ಲಾ ಭಾಷೆ ಕಲಿತು ಕನ್ನಡವನ್ನು ಬೆಳೆಸಬೇಕು ಎಂದು ಕರೆ ನೀಡಿದರು.

ಪುರಸಭಾಧ್ಯಕ್ಷೆ ಬಿ.ವಸಂತ ಶ್ರೀಕಂಠ ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವದ ಶುಭ ಕೋರಿದರು. ಉಪಾಧ್ಯಕ್ಷೆ ರಾಜೇಶ್ವರಿ ರಾಘವೇಂದ್ರ, ಸದಸ್ಯ ಸಯೀದ್ ಅಹ್ಮದ್, ಮುಖ್ಯ ಶಿಕ್ಷಕಿ ಹೇಮ, ಸಹ ಶಿಕ್ಷಕರಾದ ಅಶ್ವಿನಿ, ಗೀತಾ, ಅನಿತಾ, ರಶ್ಮಿ, ಹಾಜಿರಾ, ಪಲ್ಲವಿ, ರಕ್ಷಿತಾ, ರೇಖಾ, ಶಿಲ್ಪ, ಬಿ.ಶೈಲಾ, ಶಿಲ್ಪಶ್ರೀ, ಲಾವಣ್ಯ, ಭಾನುಮತಿ, ಟ್ರಸ್ಟಿಗಳಾದ ಮೊಹಮ್ಮದ್ ಹುಸೇನ್, ಅಮ್ಜದ್ ಖಾನ್, ಮೊಹಮ್ಮದ್ ಸದಾಖತ್ ಹಾಗೂ ಶಾಲಾ ಮಕ್ಕಳು ಇದ್ದರು.

ತುಮಕೂರು ವಿವಿಗೆ ನಾಮ ನಿರ್ದೇಶನ



ನಗರ್ಲೆ, ನ.5– ನಂಜನಗೂಡು ತಾಲೂಕಿನ ಎಸ್. ಹೊಸಕೋಟೆ ಗ್ರಾಮದ ಹೆಚ್. ಎಸ್. ಅಶೋಕ ಅವರನ್ನು ತುಮಕೂರು ವಿಶ್ವ ವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಲಾಗಿದೆ.

ಅನ್ನದಾನಕ್ಕೆ ಚಾಲನೆ



ಬೆಟ್ಟದಪುರದಲ್ಲಿ ದೀಪಾವಳಿ ಹಬ್ಬದಂದು ದೀವಿಟಿಗೆ ಹಿಡಿಯುವ ಭಕ್ತರಿಗೆ ಆಯೋಜಿಸಿದ್ದ ಅನ್ನದಾನಕ್ಕೆ ಶ್ರೀಚನ್ನಬಸವ ದೇಶಿಕೇಂದ್ರ ಸ್ವಾಮೀಜಿ ಚಾಲನೆ ನೀಡಿದರು. ಈ ವೇಳೆ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಶಿವದೇವ್, ಗೌರವಾಧ್ಯಕ್ಷ ನಾಗಣ್ಣ, ಖಜಾಂಚಿ ರಾಜೇಂದ್ರ, ಕಾರ್ಯದರ್ಶಿ ಶಿವು, ಮುಖಂಡರಾದ ಶಿವಕುಮಾರಸ್ವಾಮಿ, ಮಹೇಶ್, ಅರಕಲಗೂಡು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಸುರೇಶ್, ಉದ್ಯಮಿ ಮಾದಪ್ಪ, ತೋಟಪ್ಪಶೆಟ್ಟಿ, ಸೋಮಶೇಖರ್, ಮಹದೇವಪ್ಪ ಸೇರಿದಂತೆ ಇನ್ನಿತರರಿದ್ದರು.

ನೇಮಕ



ನಂಜನಗೂಡು, ನ.5– ನಂಜನ ಗೂಡು ತಾಲೂಕಿನ ಬಿಜೆಪಿ ಗ್ರಾಮಾಂತರ ಮಂಡಲ ಯುವ ಮೋರ್ಚಾ ಅಧ್ಯಕ್ಷರಾಗಿ ಸಿದ್ದರಾಜು ಅವರನ್ನು ನೇಮಕಗೊಳಿಸಿ ತಾಲೂಕು ಬಿಜೆಪಿ ಅಧ್ಯಕ್ಷ ಕೆಂಡಗಣ್ಣಪ್ಪ ಆದೇಶ ಹೊರಡಿಸಿದ್ದಾರೆ.

ಗ್ರಾಪಂ ಉಪಾಧ್ಯಕ್ಷೆ ಪತಿ ಕೊಲೆ ಪ್ರಕರಣ

ಉಳಿದ ಆರೋಪಿಗಳ ಬಂಧನಕ್ಕೆ ಆಗ್ರಹಿಸಿ ಪ್ರತಿಭಟನೆ



ಉಳಿದ ಕೊಲೆ ಆರೋಪಿಗಳನ್ನು ಬಂಧಿಸುವಂತೆ ಉಪ್ಪಾರ ಸಮಾಜದಿಂದ ಪ್ರತಿಭಟನೆ ನಡೆಸಲಾಯಿತು.

ನಂಜನಗೂಡು, ನ.5– ತಾಲೂಕಿನ ದೇವರಸನಹಳ್ಳಿ ಗ್ರಾಪಂ ಉಪಾಧ್ಯಕ್ಷೆ ಸೌಭಾಗ್ಯ ಅವರ ಪತಿ ನಂಜುಂಡಸ್ವಾಮಿ ಅವರನ್ನು ಸಂಚು ಮಾಡಿ ಕೊಲೆ ಮಾಡಿದ ಉಳಿದ ಆರೋಪಿಗಳನ್ನು ಬಂಧಿಸುವಂತೆ ಒತ್ತಾಯಿಸಿ ನಗರದಲ್ಲಿ ಮಂಗಳವಾರ ತಾಲೂಕು ಉಪ್ಪಾರ ಸಮಾಜದಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ತಾಲೂಕು ಕಚೇರಿ ಎದುರು ಜಮಾಯಿಸಿದ ತಾಲೂಕು ಉಪ್ಪಾರ ಸಮಾಜದ ಸದಸ್ಯರು ಪ್ರತಿಭಟನೆ ನಡೆಸಿ ಆರೋಪಿಗಳನ್ನು ಬಂಧಿಸುವಂತೆ ಒತ್ತಾಯಿಸಿದರು. ಉಪ್ಪಾರ ಸಮಾಜದ ಮುಖಂಡ ಹೆಮ್ಮರಗಾಲ ಸೋಮಣ್ಣ ಮಾತನಾಡಿ, ಒಪ್ಪಂದದಂತೆ ಸೌಭಾಗ್ಯ ಅವರು ದೇವರಸನಹಳ್ಳಿ ಗ್ರಾಪಂ ಅಧ್ಯಕ್ಷೆಯಾಗುವುದನ್ನು ತಪ್ಪಿಸಲು ಪಟ್ಟಭದ್ರ ಹಿತಾಸಕ್ತಿಗಳು ಅವರ ಪತಿ ನಂಜುಂಡಸ್ವಾಮಿ ಅವರನ್ನು ಸಂಚು ನಡೆಸಿ ಅ.6ರಂದು ತಡರಾತ್ರಿ ದೇವರಸನಹಳ್ಳಿ ಸಮೀಪ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿ ಕೊಲೆ ಮಾಡಿದ್ದಾರೆ. ಅಧ್ಯಕ್ಷ ಸ್ಥಾನದ ವಿಚಾರವಾಗಿ ಮಾತನಾಡಲು ನಂಜುಂಡಸ್ವಾಮಿ ಅವರಿಗೆ ದೂರವಾಣಿ ಕರೆ ಮಾಡಿ ಡಾಬಾಗೆ ಕರೆಸಿಕೊಂಡಿದ್ದಾರೆ. ನಂತರ ಅವರು ಊಟ ಮುಗಿಸಿಕೊಂಡು ಮನೆಗೆ ವಾಪಸ್ ಹೋಗುತ್ತಿದ್ದ ವೇಳೆ ಅವರನ್ನು ಅಡ್ಡಗಟ್ಟಿ ಹಲ್ಲೆ ನಡೆಸಿ ಹತ್ಯೆ ಮಾಡಿದ್ದಾರೆ. ಪ್ರಕರಣ ಸಂಬಂಧ ಐವರನ್ನು ಪೊಲೀಸರು ಬಂಧಿಸಿದ್ದು, ಉಳಿದ ಇಬ್ಬರು ಆರೋಪಿಗಳನ್ನು ಬಂಧಿಸಿಲ್ಲ. ಹೀಗಾಗಿ ಅವರನ್ನೂ ಬಂಧಿಸಬೇಕು ಎಂದು ಒತ್ತಾಯಿಸಿದರು.

ಮುಖಂಡ ಹೆಚ್.ಎಸ್.ಮೂಗಶೆಟ್ಟಿ ಮಾತನಾಡಿ, ನಂಜುಂಡಸ್ವಾಮಿ ಅವರ ಮೇಲೆ ಹಲ್ಲೆ ನಡೆಸಿ ಕೊಲೆ ಮಾಡಿದ ನಂತರ ಘಟನೆಯನ್ನು ಅಪಘಾತವೆಂಬಂತೆ ಬಿಂಬಿಸಲು ಕೆಲವರು ಪ್ರಯತ್ನಿಸಿ, ಉಪಾಧ್ಯಕ್ಷೆ ಸೌಭಾಗ್ಯ ಅವರಿಂದ ಅಪಘಾತದಿಂದ ನಂಜುಂಡಸ್ವಾಮಿ ಸತ್ತಿರುವುದಾಗಿ ಪೊಲೀಸರಿಗೆ ಹೇಳಿಕೆ ನೀಡುವಂತೆ ಕೆಲವರು ಪ್ರಯತ್ನಿಸಿದ್ದರು. ಸಂಚಿನಲ್ಲಿ ಅವರೂ ಕೂಡ ಭಾಗಿಯಾಗಿದ್ದರು. ಆದ್ದರಿಂದ ಪ್ರಕರಣದಲ್ಲಿ ಸಂಚು ನಡೆಸಿದವರನ್ನೂ ಬಂಧಿಸಬೇಕು. ಪತಿ ಕಳೆದುಕೊಂಡಿರುವ ಸೌಭಾಗ್ಯಳಿಗೆ ಸರ್ಕಾರ ಆರ್ಥಿಕ ನೆರವು ನೀಡಬೇಕು ಎಂದರು.

ಪ್ರತಿಭಟನೆಯಲ್ಲಿ ದೇವರಸನಹಳ್ಳಿ ಗ್ರಾಪಂ ಉಪಾಧ್ಯಕ್ಷೆ ಸೌಭಾಗ್ಯ, ಜಿಪಂ ಮಾಜಿ ಸದಸ್ಯ ಕೆ.ಬಿ.ಸ್ವಾಮಿ, ಮುಖಂಡರಾದ ನಾಗರಾಜು, ತಾಪಂ ಮಾಜಿ ಸದಸ್ಯ ಶಿವಣ್ಣ, ಮಹದೇವಸ್ವಾಮಿ, ನಗರಸಭೆ ಸದಸ್ಯ ಸಿದ್ದರಾಜು, ಅಣ್ಣಯ್ಯಶೆಟ್ಟಿ, ಮಹದೇವು, ಜಿಪಂ ಮಾಜಿ ಸದಸ್ಯೆ ಲತಾ, ಮಹದೇವಸ್ವಾಮಿ, ಮುದ್ದು ಮಾದಶೆಟ್ಟಿ, ಎಪಿಎಂಸಿ ಮಾಜಿ ಅಧ್ಯಕ್ಷ ಮುದ್ದು ಮಾದಶೆಟ್ಟಿ ಎಂ.ರಾಜು, ಮಂಜು, ಶ್ರೀನಿವಾಸ್, ಗೋವಿಂದರಾಜು, ಚಿಕ್ಕಣ್ಣ, ಮಹೇಶ್, ಕಾಳಪ್ಪ, ಗಜೇಂದ್ರ, ಸಿದ್ದರಾಜು, ನಾಗರಾಜು ಸೇರಿದಂತೆ ಇತರರಿದ್ದರು.

ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ

ಹುಣಸೂರು, ನ.5– ಹುಣಸೂರು ನಗರಸಭಾ ವ್ಯಾಪ್ತಿಯಲ್ಲಿ ನ.14 ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಅರ್ಹರು ನಗರಸಭೆಯ ಆರೋಗ್ಯ ಶಾಖೆಯಲ್ಲಿ ಸಮೀಕ್ಷೆಗೆ ಸಂಬಂಧಿಸಿದ ಮಾಹಿತಿ ಮತ್ತು ವಿವರ ನೀಡುವಂತೆ ಪೌರಾಯುಕ್ತೆ ಮಾನಸ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿ.ದಾಸರಾಜು ನಿಧನ



ಸರಗೂರು, ನ.5– ಪಟ್ಟಣದ ಮಡಿವಾಳ ಸಮಾಜದ ಗಡಿ ಯಜಮಾನ ಬಿ.ದಾಸರಾಜು(72) ಸೋಮವಾರ ರಾತ್ರಿ ನಿಧನರಾದರು. ಮೃತರು ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ಮಂಗಳವಾರ ಪಟ್ಟಣದ ಸೋಮೇಶ್ವರ ದೇವಾಲಯದ ಕಪಿಲಾ ನದಿ ದಡದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವಾಲ್ಮೀಕಿ ರಸ್ತೆಯಲ್ಲಿ ಹೂಗುಚ್ಛ ಮಾರಾಟಗಾರರಿಗೆ ಶಾಶ್ವತ ಶೆಲ್ಟರ್

●15 ಲಕ್ಷ ರೂ. ವೆಚ್ಚದಲ್ಲಿ 10 ಶೆಲ್ಟರ್ ನಿರ್ಮಾಣ ●ಹೂಗುಚ್ಛ ಮಾರಾಟಗಾರರ ಮನವಿಗೆ ಶಾಸಕ ಕೆ.ಹರೀಶ್‌ಗೌಡ ಸ್ಪಂದನೆ ●30 ವರ್ಷದಿಂದ ಹೂಗುಚ್ಛ ಮಾರಾಟ ಮಾಡುತ್ತಿದ್ದ ವ್ಯಾಪಾರಿಗಳು ನಿರಾಳ



ವಾಲ್ಮೀಕಿ ರಸ್ತೆಯಲ್ಲಿ ಪ್ರಸ್ತುತ ಹೂಗುಚ್ಛ ಮಾರಾಟಗಾರರ ಮಳಿಗೆಗಳು.



ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿ ಹೂಗುಚ್ಛ ವ್ಯಾಪಾರಿಗಳಿಗಾಗಿ ನೂತನವಾಗಿ ನಿರ್ಮಿಸಿರುವ ಶೆಲ್ಟರ್

ಮೈಸೂರು,ನ.5(ಎಂಟಿವೈ)– ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿ ಅಲಂಕಾರಿಕ ಹೂಗುಚ್ಛ ಮಾರಾಟ ಮಾಡುತ್ತಿದ್ದ (ಫ್ಲವರ್ ಡೆಕೋರೇಟರ್ಸ್) ವ್ಯಾಪಾರಿಗಳಿಗೆ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಶಾಶ್ವತ ಶೆಲ್ಟರ್ ನಿರ್ಮಿಸಲಾಗಿದ್ದು, ಹೂಗುಚ್ಛ ಮಾರಾಟಗಾರರ ದಶಕಗಳ ಬೇಡಿಕೆ ಈಡೇರಿದೆ.

ಮೈಸೂರಲ್ಲಿ ಕಳೆದ 30 ವರ್ಷದಿಂದ ಹೂಗುಚ್ಛ ಹಾಗೂ ಅಲಂಕಾರಿಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದ 10 ವ್ಯಾಪಾರಿಗಳು ಮಳೆ, ಬಿಸಿಲಿನ ಸಮಸ್ಯೆ ಎದುರಿಸುತ್ತಿದ್ದರು. ಈ ಹಿನ್ನೆಲೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಅವರಿಗೆ ಶಾಶ್ವತ ಶೆಲ್ಟರ್ ನಿರ್ಮಿಸಿಕೊಡುವಂತೆ ಮನವಿ ಸಲ್ಲಿಸಿದ್ದರು. ಇದೀಗ ಶೆಲ್ಟರ್ ನಿರ್ಮಾಣವಾಗಿದ್ದು, ಶೀಘ್ರದಲ್ಲಿಯೇ ಹೂಗುಚ್ಛ ಮಾರಾಟಗಾರರು ಹೊಸ ಶೆಲ್ಟರ್‌ನಲ್ಲಿ ವ್ಯಾಪಾರ ಮುಂದುವರೆಸಲಿದ್ದಾರೆ.

ಪಾಲಿಕೆಯಿಂದ ಶೆಲ್ಟರ್ ನಿರ್ಮಾಣ: ಮೈಸೂರು ಮಹಾನಗರ ಪಾಲಿಕೆಯ ವಿಶೇಷ ಅನುದಾನದಲ್ಲಿ ಹೂಗುಚ್ಛ ವ್ಯಾಪಾರಿಗಳಿಗೆ ಶೆಲ್ಟರ್ ನಿರ್ಮಿಸಲಾಗುತ್ತಿದ್ದು, 15 ಲಕ್ಷ ರೂ. ವೆಚ್ಚದಲ್ಲಿ 15 ಅಡಿ ಅಗಲ, 100 ಅಡಿ ಉದ್ದದ ಶೆಲ್ಟರ್ ನಿರ್ಮಿಸಲಾಗಿದೆ. 10 ವ್ಯಾಪಾರಿಗಳಿಗೆ ತಲಾ 15x10 ಅಡಿ ಅಳತೆಯಂತೆ ವಿಂಗಡಣೆ ಮಾಡಲಾಗಿದೆ. ಇದರಿಂದ ಪ್ರತ್ಯೇಕವಾಗಿ ವ್ಯಾಪಾರಿಗಳು ಪೆಟ್ಟಿಗೆ ಅಂಗಡಿಗಳನ್ನಿಟ್ಟುಕೊಂಡು ಅಲಂಕಾರಿಕಾ ಹೂವಿನ ವ್ಯಾಪಾರ ಮಾಡಲಿದ್ದಾರೆ.

ಹೂವಿನ ಮಳಿಗೆಗಾಗಿ ನಿರ್ಮಿಸಿರುವ ಶೆಲ್ಟರ್ ಕೆಳಗೆ ಕಾಂಕ್ರಿಟ್‌ನಿಂದ ಫ್ಲಾಟ್ ಫಾರಂ ನಿರ್ಮಿಸಲಾಗಿದೆ. ಅದಲ್ಲದೆ, ಮಳಿಗೆ ಮುಂದೆ ಇಂಟರ್‌ಲಾಕ್ ವ್ಯವಸ್ಥೆಯುಳ್ಳ ಪಾದಚಾರಿ ಮಾರ್ಗ ಹಾಗೂ ಶೆಲ್ಟರ್‌ಗೆ ಅನುಗುಣವಾಗಿ ಅಲಂಕಾರಿಕ ಬೀದಿ ದೀಪದ ವ್ಯವಸ್ಥೆಯನ್ನೂ ಮಾಡಲಾಗಿದೆ. ಇದರಿಂದ ವ್ಯಾಪಾರಿಗಳು ಮಾತ್ರವಲ್ಲದೆ, ಗ್ರಾಹಕ ಸ್ನೇಹಿ ವ್ಯವಸ್ಥೆ ಕಲ್ಪಿಸಲಾಗಿದೆ. ಮಳೆ ಬಂದರೂ ಮಳಿಗೆಯಲ್ಲಿ ನೀರು ಸೋರುವುದಿಲ್ಲ. ಮಳೆ ನೀರು ಮಳಿಗೆ ಮುಂದೆ ನಿಂತುಕೊಂಡು ಕೆಸರಾಗುವುದಿಲ್ಲ. ಹೂ ಖರೀದಿ ವೇಳೆ ಮಳೆ ಬಂದರೂ ಗ್ರಾಹಕರು ಆಶ್ರಯ ಪಡೆಯಬಹುದಾಗಿದೆ.

ಭರವಸೆ ಈಡೇರಿಸಿದ್ದೇನೆ

ವಾಲ್ಮೀಕಿ ರಸ್ತೆಯಲ್ಲಿ ಹಲವು ವರ್ಷಗಳಿಂದ ಹೂಗುಚ್ಛ ವ್ಯಾಪಾರ ಮಾಡುತ್ತಿದ್ದ ವ್ಯಾಪಾರಿಗಳು ಮಳೆ, ಬಿಸಿಲಿನಿಂದ ಆಗುತ್ತಿರುವ ಸಮಸ್ಯೆ ಹಾಗೂ ನಷ್ಟದ ಬಗ್ಗೆ ನನ್ನ ಗಮನಕ್ಕೆ ತಂದಿದ್ದರು. ಅಲ್ಲದೆ, ಶೆಲ್ಟರ್ ನಿರ್ಮಿಸಿಕೊಟ್ಟು ಶಾಶ್ವತವಾಗಿ ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಅವರಿಗೆ ನೆರವು ನೀಡುವ ಭರವಸೆ ನೀಡಿದ್ದೆ. ಪಾಲಿಕೆಯ ವಿಶೇಷ ಅನುದಾನದಲ್ಲಿ ಶೆಲ್ಟರ್ ನಿರ್ಮಿಸಿಕೊಡಲಾಗಿದೆ. ಈ ವಾರದೊಳಗೆ ಹೊಸ ಶೆಲ್ಟರ್ ಉದ್ಘಾಟಿಸಲಾಗುತ್ತದೆ. 30 ವರ್ಷಗಳಿಂದ ವ್ಯಾಪಾರಿಗಳು ಎದುರಿಸುತ್ತಿದ್ದ ಸಮಸ್ಯೆಯನ್ನು ಬಗೆಹರಿಸಿದ ಸಂತೃಪ್ತಿ ನನ್ನದಾಗಿದೆ. - ಕೆ.ಹರೀಶ್‌ಗೌಡ, ಶಾಸಕರು

ಈ ನಿಟ್ಟಿನಲ್ಲಿ ಶೆಲ್ಟರ್ ಹೂಗುಚ್ಛ ವ್ಯಾಪಾರಿಗಳಿಗೆ ಸಂತಸವನ್ನುಂಟು ಮಾಡಿದೆ.

ಏಕರೂಪದ ಪೆಟ್ಟಿಗೆ ಅಂಗಡಿ: ಹೂಗುಚ್ಛ ವ್ಯಾಪಾರಿಗಳಿಗಾಗಿ ನಿರ್ಮಿಸಿರುವ ಶೆಲ್ಟರ್‌ಗಳಿಗೆ ಮೆಟಲ್ ಶೀಟ್ ಬಳಸಲಾಗಿದೆ. ನೋಡಲು ಅಂದವಾಗಿ ಕಾಣುವುದರಿಂದ ಅದಕ್ಕೆ ತಕ್ಕಂತೆ ಏಕರೂಪದ ಪೆಟ್ಟಿಗೆ ಅಂಗಡಿಗಳನ್ನು ಬಳಸುವಂತೆ ನೀಡಿರುವ ಸಲಹೆಯನ್ನು ವ್ಯಾಪಾರಿಗಳು ಸ್ವೀಕರಿಸಿದ್ದಾರೆ. 10x10 ಅಡಿ ಅಳತೆಯ ನೀಲಿಬಣ್ಣದ ಕಬ್ಬಿಣದ ಪೆಟ್ಟಿಗೆ ಅಂಗಡಿಯನ್ನು ಖರೀದಿಸಿದ್ದಾರೆ. ಪ್ರಸ್ತುತ ವ್ಯಾಪಾರ ಮಾಡಲು ಕೆಲವರು ಕಬ್ಬಿಣದ ಪೆಟ್ಟಿಗೆ ಅಂಗಡಿ, ಮತ್ತೆ ಕೆಲವರು ಮರದ ಪೆಟ್ಟಿಗೆ ಅಂಗಡಿ ಬಳಸುತ್ತಿದ್ದಾರೆ. ಇದರಿಂದ ಹೊಸ ಶೆಲ್ಟರ್‌ನಲ್ಲಿ ವ್ಯಾಪಾರ ಮುಂದುವರೆಸಲು ಏಕರೂಪದ ಪೆಟ್ಟಿಗೆ ಅಂಗಡಿಗಳನ್ನು ಬಳಸಲು ವ್ಯಾಪಾರಿಗಳು ಸಮ್ಮತಿಸಿದ್ದು, ತಲಾ 40 ಸಾವಿರ ರೂ ವೆಚ್ಚದಲ್ಲಿ ಒಂದೇ ವಿನ್ಯಾಸದ ಪೆಟ್ಟಿಗೆ ಅಂಗಡಿಗಳನ್ನು ಮಾಡಿಸಿದ್ದಾರೆ. ಇವು ಶೆಲ್ಟರ್‌ನಲ್ಲಿ ಸರದಿ ಸಾಲಿನಂತೆ ಜೋಡಿಸಲಾಗಿದ್ದು, ಹೂಗುಚ್ಛ ಮಾರಾಟದ ಶೆಲ್ಟರ್‌ಗೆ ಕಳೆ ಕಟ್ಟಿದೆ.

ಸಮಸ್ಯೆಯಾಗುತ್ತಿತ್ತು: ಈ ಕುರಿತು ಹೂಗುಚ್ಛ ವ್ಯಾಪಾರಿಯೊಬ್ಬರು 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಮೈಸೂರಲ್ಲಿ ಕಳೆದ 30 ವರ್ಷದಿಂದ ಹೂಗುಚ್ಛ ವ್ಯಾಪಾರ ಮಾಡಿಕೊಂಡು ಬಂದಿದ್ದೇವೆ. ಮೊದಲು ಮೆಟ್ರೋಪೋಲ್ ವೃತ್ತದ ಬಳಿ 6 ವರ್ಷ ವ್ಯಾಪಾರ ಮಾಡಿದ್ದೆವು. ಅಲ್ಲಿಂದ ವಾಲ್ಮೀಕಿ ರಸ್ತೆ ಬಳಿ ಹೊಸದಾಗಿ ನಿರ್ಮಿಸಿರುವ ಮಹಾರಾಣಿ ವಾಣಿಜ್ಯ ಕಾಲೇಜು ಮುಂಭಾಗ 17 ವರ್ಷ ವ್ಯಾಪಾರ ಮಾಡಿದ್ದೇವೆ. ಅಲ್ಲಿಂದ ಪ್ರಸ್ತುತ ವ್ಯಾಪಾರ ಮಾಡುತ್ತಿರುವ ಸ್ಥಳಕ್ಕೆ ಸ್ಥಳಾಂತರ ಮಾಡಲಾಯಿತು. ಇಲ್ಲಿ 7 ವರ್ಷದಿಂದ ವ್ಯಾಪಾರ ಮಾಡುತ್ತಿದ್ದೇವೆ. ಮಳೆ ಬಂದರೆ ಹೂವುಗಳ ಮೇಲೆ ಮಳೆ ನೀರು ಬಿದ್ದು ಹಾನಿಯಾಗುತ್ತಿತ್ತು. ಪೆಟ್ಟಿಗೆ ಅಂಗಡಿಯಲ್ಲಿ ನೀರು ಸೋರಿ ವ್ಯಾಪಾರಿಗಳಿಗೆ ನಷ್ಟವಾಗುತ್ತಿತ್ತು. ಬೇಸಿಗೆಯಲ್ಲಿ ಬಿಸಿಲಿನ ತಾಪಕ್ಕೆ ಹೂವು ಒಣಗುತ್ತಿದ್ದವು. ಈ ಹಿನ್ನೆಲೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಅವರಿಗೆ ಶೆಲ್ಟರ್ ನಿರ್ಮಿಸಿಕೊಡುವಂತೆ ಕೇಳಿಕೊಂಡಿದ್ದೆವು. ಇದೀಗ ಶೆಲ್ಟರ್ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ವ್ಯಾಪಾರಿಗಳಿಗೆ ಸಂತೋಷವಾಗಿದೆ ಎಂದರು.

ದೀಪಾವಳಿಯಂದು ಕೆಎಸ್‌ಆರ್‌ಟಿಸಿಗೆ ಬಂಪರ್: ಒಂದೇ ದಿನ ಬರೋಬ್ಬರಿ 5.59 ಕೋಟಿ ಆದಾಯ



ಬೆಂಗಳೂರು, ನ.5– ದೀಪಾವಳಿ ಹಬ್ಬದ ಹಿನ್ನೆಲೆ ಕೆಎಸ್‌ಆರ್‌ಟಿಸಿ ಬಂಪರ್ ಆದಾಯಗಳಿಸಿದೆ. ದೀಪಾವಳಿ ಹಬ್ಬದಿಂದ ಸಾಲು ಸಾಲು ರಜೆಗಳಿದ್ದ ಕಾರಣ ಊರಿನತ್ತ ತೆರಳಿದ್ದವರು ನ.3 ರಂದು ಭಾನುವಾರ ಮತ್ತೆ ಸಿಲಿಕಾನ್ ಸಿಟಿಗೆ ಮರಳಿದ್ದಾರೆ. ಇದರಿಂದಾಗಿ ಭಾನುವಾರ ಒಂದೇ ದಿನ ಆನ್‌ಲೈನ್‌ಲ್ಲಿ 85,462 ಸೀಟುಗಳನ್ನು ಬುಕಿಂಗ್ ಆಗಿದ್ದವು.

85,462 ಸೀಟುಗಳು ಬುಕ್ ಆಗಿದ್ದು, ಒಂದೇ ದಿನದಲ್ಲಿ ಬರೋಬ್ಬರಿ 5.59 ಕೋಟಿ ರೂ. ಆದಾಯವನ್ನು ಕೆಎಸ್‌ಆರ್‌ಟಿಸಿ ಗಳಿಸಿದೆ. ಇದಕ್ಕೂ ಮೊದಲು ಅಕ್ಟೋಬರ್ ಅಂತ್ಯದ ದಿನವೊಂದರಲ್ಲಿ 67,033 ಟಿಕೆಟ್ ಮಾರಾಟವಾಗಿದ್ದವು.

ಹಬ್ಬದ ನಿಮಿತ್ತ ಕೆಎಸ್‌ಆರ್‌ಟಿಸಿ ಜೊತೆಗೆ ಬಿಎಂಟಿಸಿಯು ಕಾರ್ಯನಿರ್ವಹಿಸಿದ್ದು, ಗಳಿಸಿರುವ ಆದಾಯಕ್ಕೆ ಸಾಥ್ ನೀಡಿದೆ.

ಹುತಾತ್ಮ ಯೋಧರ ತಾಯಿ, ಪತ್ನಿ ಸನ್ಮಾನಿಸಿ ರಾಜ್ಯೋತ್ಸವ ಆಚರಣೆ



ಮೈಸೂರಿನ ಪುರಭವನದಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ರಕ್ಷಣಾ ಸಮಿತಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಹುತಾತ್ಮ ಯೋಧರ ನೆನಪಿನ ಕಾರ್ಯಕ್ರಮದಲ್ಲಿ ಹುತಾತ್ಮ ಯೋಧರ ತಾಯಂದಿರು ಮತ್ತು ವೀರಪತ್ನಿಯರನ್ನು ಗೌರವಿಸಲಾಯಿತು.

ಮೈಸೂರು,ನ.5(ಎಂಟಿವೈ)– ಕನ್ನಡ ರಾಜ್ಯೋತ್ಸವದ ಅಂಗವಾಗಿ ಮೈಸೂರಲ್ಲಿ ಹುತಾತ್ಮ ಯೋಧರ ನೆನಪಿನಲ್ಲಿ ಅವರ ಹುತಾತ್ಮ ಯೋಧರ ತಾಯಂದಿರು ಮತ್ತು ಮಡದಿಯರನ್ನು ಗೌರವಿಸಲಾಯಿತು.

ಮೈಸೂರಿನ ಪುರಭವನದಲ್ಲಿ ಸಭಾಂಗಣದಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ರಕ್ಷಣಾ ಸಮಿತಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹುತಾತ್ಮ ಯೋಧ ಹೇಮಚಂದ್ರ ಅವರ ತಾಯಿ ಲಕ್ಷ್ಮೀ, ಎ.ಪಿ.ಪ್ರಕಾಶ್ ಅವರ ತಾಯಿ ಸರೋಜ, ಸಕ್ರಿಯ ನಾಯಕ್ ಅವರ ಪತ್ನಿ ಜ್ಯೋತಿ, ಸುಂದರ್ ಅವರ ತಾಯಿ ಮಹದೇವಿ, ಕಿರಣ್ ಕುಮಾರ್ ಅವರ ಪತ್ನಿ ಸರಳ, ರಮೇಶ ಕುಂದಪ್ಪ ಅವರ ಪತ್ನಿ ಲಕ್ಷ್ಮೀ ಪಾಟೀಲ್, ಮಹೇಶ್ ಅವರ ತಾಯಿ ರತ್ನಮ್ಮ, ನಾಯಕ್ ಶಿವಾನಂದ ಅವರ ಪತ್ನಿ ಸುವರ್ಣ, ಸುಧೀರ್ ಅವರ ತಾಯಿ ವಿಮಲ, ಜಿ.ಶರತ್ ಅವರ ತಾಯಿ ಬಾಲಮಣಿ, ಜಿ.ಡಿ.ಗುರು ಅವರ ಪತ್ನಿ ಕಲಾವತಿ ಮತ್ತು ಜಿ.ಡಿ.ಸತೀಶ ಅವರ ತಾಯಿ ಸಾವಿತ್ರಮ್ಮ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮವನ್ನು ಶಾಸಕ ಕೆ.ಹರೀಶ್‌ಗೌಡ ಉದ್ಘಾಟಿಸಿ ಮಾತನಾಡಿ, ದೇಶದಲ್ಲಿ ರೈತರು ಮತ್ತು ಯೋಧರು ಪ್ರಮುಖ ಪಾತ್ರವಹಿಸುತ್ತಾರೆ. ಈ ಇಬ್ಬರ ಸೇವೆಗೆ ಬೆಲೆ ಕಟ್ಟಲಾಗದು. ರೈತರು ಅನ್ನ ನೀಡಿದರೆ, ಯೋಧರು ರಕ್ಷಾ ಕವಚದಂತೆ ಕಾರ್ಯನಿರ್ವಹಿಸುತ್ತಾರೆ. ಯೋಧರ ಸೇವೆಗೆ ಬೆಲೆಕಟ್ಟಲು ಸಾಧ್ಯವೇ ಇಲ್ಲ. ಈ ಹಿನ್ನೆಲೆಯಲ್ಲಿ ದೇಶದ ರಕ್ಷಣೆಯಲ್ಲಿ ತೊಡಗಿರುವ ಯೋಧರು ಎಂದೆಂದಿಗೂ ಅವಿಸ್ಮರಣೀಯರಾಗಿದ್ದಾರೆ. ಅವರ ತ್ಯಾಗಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಕನ್ನಡ ರಾಜ್ಯೋತ್ಸವದ ಅಂಗವಾಗಿ ಹುತಾತ್ಮ ಯೋಧರ ತಾಯಿ ಹಾಗೂ ವೀರ ಪತ್ನಿಯರನ್ನು ಗೌರವಿಸುತ್ತಿರುವುದು ಶ್ಲಾಘನೀಯ. ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕನ್ನಡ ಭಾಷೆಯ ಸಂರಕ್ಷಣೆಗೆ ಹೆಚ್ಚು ಪ್ರಾಶಸ್ತ್ಯ ನೀಡುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್, ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ರಕ್ಷಣಾ ಸಮಿತಿ ರಾಜ್ಯಾಧ್ಯಕ್ಷೆ ಬಿ.ಪಿ.ಸುಶೀಲಾ, ಛಲವಾದಿ ಮಹಾಸಭಾದ ಅಧ್ಯಕ್ಷೆ ವಾಣಿ ಕೆ.ಶಿವರಾಮ್, ರೈತ ಪರ್ವದ ರಾಜ್ಯಾಧ್ಯಕ್ಷ ಅರುಣ್ ಕುಮಾರ್, ರಂಜನ್ ನಾಗೇಂದ್ರ, ಗುತ್ತಿಗೆದಾರ ಪವನ್ ಕುಮಾರ್, ಅಖಿಲ ಭಾರತ ಗಾಣಿಗ ಮಹಾಸಭಾ ರಾಜ್ಯಾಧ್ಯಕ್ಷ ವಿಜಯ ಕುಮಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕರಕುಶಲ ನಗರದಲ್ಲಿ ಶಾಸಕ ಕೆ. ಹರೀಶ್ ಗೌಡ ಪಾದಯಾತ್ರೆ

ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದನೆ



ಮೈಸೂರು ಮಹಾನಗರ ಪಾಲಿಕೆಯ ವಾರ್ಡ್ ನಂ 7ರಲ್ಲಿ ಶಾಸಕ ಕೆ.ಹರೀಶ್‌ಗೌಡ ಪಾದಯಾತ್ರೆ ನಡೆಸಿ ಅಹವಾಲು ಆಲಿಸಿದರು.

ಮೈಸೂರು,ನ.5(ಎಂಟಿವೈ)– ಮೈಸೂರು ಮಹಾನಗರ ಪಾಲಿಕೆಯ ವಾರ್ಡ್ ನ.7ರ ವ್ಯಾಪ್ತಿಯ ವಿವಿಧ ಬಡಾವಣೆಗಳಲ್ಲಿ ಶಾಸಕ ಕೆ.ಹರೀಶ್‌ಗೌಡ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಪಾದಯಾತ್ರೆ ನಡೆಸಿ, ಸ್ಥಳೀಯರಿಂದ ಅಹವಾಲು ಆಲಿಸಿದರು.

ಚಾಮರಾಜ ವಿಧಾನಸಭಾ ಕ್ಷೇತ್ರದ ಮೈಸೂರು ಮಹಾನಗರ ಪಾಲಿಕೆಯ 7ನೇ ವಾರ್ಡ್ ವ್ಯಾಪ್ತಿಯ ಕರಕುಶಲ ನಗರ, ಡಾ.ಅಂಬೇಡ್ಕರ್ ಜ್ಞಾನಲೋಕ ಬಡಾವಣೆ, ನರ್ಮ್ ವಸತಿ ಸಮುಚ್ಚಯದ ಬಡಾವಣೆಯಲ್ಲಿ ಮಂಗಳವಾರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಪಾದಯಾತ್ರೆ ನಡೆಸಿ, ಸ್ಥಳೀಯರು ಎದುರಿಸುತ್ತಿರುವ ನಾಗರಿಕ ಸಮಸ್ಯೆಗಳನ್ನು ಆಲಿಸಿದರು. ಅಲ್ಲದೆ, ಬಗೆಹರಿಸಬಹುದಾದ ಸಮಸ್ಯೆಗಳ ಇತ್ಯರ್ಥಕ್ಕೆ ಸ್ಥಳದಲ್ಲಿಯೇ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆ ವಶಕ್ಕೆ ನೀಡಲು ಕ್ರಮ ಕೈಗೊಳ್ಳಲು ಮನವಿ: ಅಹವಾಲು ಆಲಿಸಲು ಶಾಸಕ ಕೆ.ಹರೀಶ್‌ಗೌಡ ಕರಕುಶಲನಗರಕ್ಕೆ ಆಗಮಿಸುತ್ತಿದ್ದಂತೆಯೇ ಅಲ್ಲಿನ ನಿವಾಸಿಗಳು ಮನವಿ ಸಲ್ಲಿಸಿ, ಕಳೆದ 36 ವರ್ಷಗಳಿಂದ ಕರಕುಶಲನಗರ ಬಡಾವಣೆಯಲ್ಲಿ ವಾಸಿಸುತ್ತಿದ್ದು, ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದೇವೆ ಈ ಬಡಾವಣೆ ಇಂದಿಗೂ ಕರಕುಶಲ ಅಭಿವೃದ್ಧಿ ನಿಗಮದ ಸುಪರ್ದಿಯಲ್ಲಿದೆ. ಇದನ್ನು ಪಾಲಿಕೆ ವಶಕ್ಕೆ ಹಸ್ತಾಂತರಿಸಿ, ಸ್ಥಳೀಯರಿಗೆ ಮೂಲ ಸೌಲಭ್ಯ ಕಲ್ಪಿಸುವಂತೆ ಒತ್ತಾಯಿಸಿದರು.

ಕರಕುಶಲನಗರಕ್ಕೆ ಸೇರಿದ ಖಾಲಿ ನಿವೇಶನಗಳಿಂದಾಗಿ ಹಾವುಗಳ ಕಾಟ ಹೆಚ್ಚಾಗಿದೆ. ಕರಕುಶಲ ನಿಗಮದ ಬಹುಕಲಾ ಸಂಕೀರ್ಣಕ್ಕಾಗಿ ಮೀಸಲಿಟ್ಟಿರುವ 18.11 ಎಕರೆ ಜಾಗದಲ್ಲಿ 8 ಎಕರೆ ಜಾಗ ಖಾಲಿ ಇರುವುದನ್ನು ಗಮನಿಸಿ, ಸ್ಥಳದಲ್ಲಿಯೇ ಇದ್ದ ವ್ಯವಸ್ಥಾಪಕರಾದ ಸೇವಂತಿ ರವರಿಗೆ ಕೂಡಲೇ ನಿಗಮಕ್ಕೆ ಸೇರಿದ ಖಾಲಿ ಜಾಗವನ್ನು ಸ್ವಚ್ಛಗೊಳಿಸಿ, ತಂತಿ ಬೇಲಿ ನಿರ್ಮಿಸಿ, ಖಾಲಿ ಜಾಗವನ್ನು ಸಂರಕ್ಷಿಸಬೇಕು. ಕರಕುಶಲ ನಗರದ ನಿವಾಸಿಗಳು ತಾವು ನಿಗಮದಿಂದ ನೀಡಿದ ಮನೆಯಲ್ಲಿ ವಾಸವಿದ್ದು, ಅಗತ್ಯ ಮೂಲ ಸೌಲಭ್ಯವಿಲ್ಲ, ಖಾತೆ, ಕಂದಾಯ ಇತ್ಯಾದಿ ಕಟ್ಟಿಸಿಕೊಳ್ಳಲು ಯಾರೂ ಸ್ಪಂದಿಸುತ್ತಿಲ್ಲವೆಂದು ದೂರಿದರು.

ಇದಕ್ಕೆ ಸ್ಪಂದಿಸಿದ ಶಾಸಕ ಕೆ. ಹರೀಶ್ ಗೌಡ ಸ್ಥಳದಲ್ಲಿದ್ದ ಪಾಲಿಕೆ ಅಧಿಕಾರಿಗಳಿಗೆ ಕರಕುಶಲ ಅಭಿವೃದ್ಧಿ ನಿಗಮದಿಂದ ಸದರಿ ಬಡಾವಣೆಯನ್ನು ಪಾಲಿಕೆಗೆ ಹಸ್ತಾಂತರಿಸಿಕೊಂಡು ಅಗತ್ಯ ಮೂಲ ಸೌಲಭ್ಯ ಕಲ್ಪಿಸಿಕೊಡುವಂತೆ ಸೂಚಿಸಿದರು.

ಅಂಬೇಡ್ಕರ್ ಜ್ಞಾನಲೋಕದ ದೊಡ್ಡಮ್ಮ ತಾಯಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ, ಅಲ್ಲಿಂದ ಪಾದಯಾತ್ರೆಯನ್ನು ಆರಂಭಿಸಿದರು. ದೇವಸ್ಥಾನದ ಪಕ್ಕದಲ್ಲಿಯೇ ಇದ್ದ ಗುಡಿಸಲಿನಲ್ಲಿ ವಾಸಿಸುತ್ತಿದ್ದ ವೃದ್ಧ ಮಹಿಳೆ ಮನೆ ನಿರ್ಮಿಸಲು ಸಹಾಯ ಕೋರಿದರು. ಪಾಲಿಕೆಯ ವತಿಯಿಂದ ವಸತಿ ಯೋಜನೆಯ ಸಹಾಯಧನವನ್ನು ಸದರಿ ವೃದ್ಧ ಮಹಿಳೆಗೆ ಕಲ್ಪಿಸಿಕೊಡುವಂತೆ ಸ್ಥಳದಲ್ಲಿಯೇ ಇದ್ದ ಪಾಲಿಕೆಯ ಆಯುಕ್ತರಿಗೆ ತಿಳಿಸಿದರು.

ಸ್ಥಳೀಯರು ನೀರಿನ ಸಮಸ್ಯೆ ಇರುವುದಾಗಿ ದೂರಿದರು. ಹಬ್ಬದ ದಿನಗಳಲ್ಲಿಯು ನೀರು ಸರಿಯಾಗಿ ಬರುವುದಿಲ್ಲ. ಇನ್ನೂ ಕೆಲವೆಡೆ ರಸ್ತೆ ಸಮತಟ್ಟಿಲ್ಲದ ಕಾರಣ ನಲ್ಲಿಗಳಲ್ಲಿ ನೀರು ಬಾರದಿರುವ ಬಗ್ಗೆ ಹಾಗೂ ನೀರಿನ ಸಮಸ್ಯೆಯನ್ನು ಅತಿ ತುರ್ತಾಗಿ ಸರಿಪಡಿಸುವಂತೆ ಕೋರಿಕೊಂಡರು. ಈ ಬಗ್ಗೆ ಸ್ಥಳದಲ್ಲಿಯೇ ಇದ್ದ ವಾಣಿ ವಿಲಾಸ ನೀರು ಸರಬರಾಜು ಮಂಡಳಿಯ ಇಇ ಅಶ್ವಿನ್ ಹಾಗೂ ಎಇಇ ಮುಸ್ತಫಾರವರಿಗೆ ವಾರ್ಡ್‌ನಲ್ಲಿ ನೀರಿನ ಸಮಸ್ಯೆ ಆಗದಂತೆ ಅವಶ್ಯವಿರುವ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ ಕ್ರಮಕೈಗೊಳ್ಳುವಂತೆ ಹಾಗೂ ನೀರಿನ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು.

ರಸ್ತೆ ಡಾಂಬರೀಕರಣ, ಸ್ವಚ್ಛತೆ ಸರಿಯಿಲ್ಲ ಹಾಗೂ ವಿದ್ಯುತ್ ಕಂಬದಲ್ಲಿನ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸ್ವೀಕೃತವಾದ ದೂರುಗಳಿಗೆ ಸ್ಥಳದಲ್ಲಿಯೇ ಇದ್ದ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಶೀಘ್ರದಲ್ಲಿಯೇ ಸಮಸ್ಯೆಯನ್ನು ಬಗೆಹರಿಸುವಂತೆ ಶಾಸಕರು ಸೂಚಿಸಿದರು.

ಬಸ್ ಸೌಲಭ್ಯವಿಲ್ಲದೆ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ತುಂಬಾ ತೊಂದರೆ ಅನುಭವಿಸುತ್ತಿದ್ದಾರೆಂದು ಹಾಗೂ ಕೊರೊನಾ ಬಳಿಕ ಬಸ್ ಸೌಲಭ್ಯ ಕಡಿತ ಆಗಿರುವ ಬಗ್ಗೆ ಸಾರ್ವಜನಿಕರ ಅಳಲು ಆಲಿಸಿದ ಶಾಸಕ ಹರೀಶ್ ಗೌಡರು ಸ್ಥಳದಲ್ಲೇ ಸಾರಿಗೆ ಅಧಿಕಾರಿಗಳಿಗೆ ಶೀಘ್ರ ಬಸ್ ವ್ಯವಸ್ಥೆ ಕಲ್ಪಿಸುವಂತೆ ಹೇಳಿದರು.

ಅಂಬೇಡ್ಕರ್ ಜ್ಞಾನಲೋಕದ ಪಕ್ಕದಲ್ಲಿರುವ ಮುಸ್ಲಿಂ ಬಡಾವಣೆಗೆ ಭೇಟಿ ನೀಡಿ ಅಲ್ಪಸಂಖ್ಯಾತರ ಬಡಾವಣೆಯ ಮೂಲ ಸೌಕರ್ಯ ಅಭಿವೃದ್ಧಿಯಡಿ ಮಂಜೂರಾದ ಅನುದಾನದಲ್ಲಿ ನಿರ್ಮಿಸಿರುವ ಸಿಸಿ ರಸ್ತೆಗಳ ಪರಿಶೀಲಿಸಿದರು. ರಸ್ತೆ ಪಕ್ಕದಲ್ಲಿರುವ ಅವೈಜ್ಞಾನಿಕ ಟ್ರಾನ್ಸ್‌ಫಾರ್ಮರ್ ಸರಿಪಡಿಸಿ, ದೊಡ್ಡಮೋರಿ ಒಳಗೆ ಬೆಳೆದ ಗಿಡಗಳಿಂದ ಸೊಳ್ಳೆ ಕಾಟ ಸರಿಪಡಿಸುವಂತೆ ಸ್ಥಳೀಯರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಅಧ್ಯಕ್ಷ ಮಂಚೇಗೌಡನ ಕೊಪ್ಪಲು ರವಿ, ಪಾಲಿಕೆ ಮಾಜಿ ಸದಸ್ಯ ರಮೇಶ್ ಸೇರಿ ಅನೇಕರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಅಮರನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬಘೀರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೂಲ್ ಭುಲಯ್ಯ 3 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಬಘೀರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಬಘೀರ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೂಲ್ ಭುಲಯ್ಯ 3 (ಹಿಂ)	4 ಪ್ರದರ್ಶನಗಳು
ಲಿಡೋ	
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವೇಟೇಯನ್ (ತ)	4 ಪ್ರದರ್ಶನಗಳು
ಪ್ರಭಾ	
ಅಂಜದಗಂಡು (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್ ದೂ : 4240422/4241800

ಸ್ಕ್ರೀನ್ 1	ಲಕ್ಕಿ ಭಾಸ್ಕರ್ (ತೆ): ಬೆ.10.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಲಕ್ಕಿ ಭಾಸ್ಕರ್ (ಮ): ರಾ.9.55ಕ್ಕೆ.
ಸ್ಕ್ರೀನ್ 2	ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಬೆ.10.55ಕ್ಕೆ, ಬ್ಲಡಿ ಬೆಗ್ಗರ್ (ತ): ಮ.1.20ಕ್ಕೆ, ಬ್ರದರ್ (ತ): ಸಂ.4.20ಕ್ಕೆ, ಬಘೀರ (ಕ): ರಾ.7.05ಕ್ಕೆ, ಕ (ತೆ): ರಾ.10.10ಕ್ಕೆ.
ಸ್ಕ್ರೀನ್ 3	ಅಮರನ್ (ತ): ಬೆ.10.05ಕ್ಕೆ, ಮ.1.15ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಅನ್ನ (ಕ): ಸಂ.4.30ಕ್ಕೆ.
ಸ್ಕ್ರೀನ್ 4	ಬಘೀರ (ಕ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.20ಕ್ಕೆ.

ಐನಾಕ್ಸ್ ಮೂವೀಸ್ ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ ದೂ : 0821–2973519

ಸ್ಕ್ರೀನ್ 1	ವೆಟ್ಟೈಯನ್ (ತ): ಮ.1ಕ್ಕೆ, ಎಲ್ಲಿಗೆ ಪಯಣ ಯಾವುದೋ ದಾರಿ (ಕ): ಸಂ.4ಕ್ಕೆ, ಮಾರ್ಟಿನ್ (ಕ): ಸಂ.6.30ಕ್ಕೆ, ವೆಟ್ಟೈಯನ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ.
ಸ್ಕ್ರೀನ್ 3	ಯಲಾಕುನ್ನಿ (ಕ): ಮ.1.30ಕ್ಕೆ, ಒಬ್ಬಟ್ಟು (ಕ): ಸಂ.4.30ಕ್ಕೆ, ಉದಾಹರಣೆ (ಕ): ರಾ.7ಕ್ಕೆ, ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ರಾ.9.15ಕ್ಕೆ.
ಸ್ಕ್ರೀನ್ 4	ಮಾರ್ಟಿನ್ (ಕ): ಮ.1.10ಕ್ಕೆ, ಯಲಾಕುನ್ನಿ (ಕ): ಮ.3.55ಕ್ಕೆ, ವೆಟ್ಟೈಯನ್ (ತ): ಸಂ.6.30ಕ್ಕೆ, ಪಣಿ (ಮ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್ ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನೀರಿನ ಸಂಪ್‌ನಲ್ಲಿ ಗೃಹಿಣಿ ಶವ ಪತ್ತೆ

ಕೊಲೆ ಶಂಕೆ : ಪತಿ, ಅತ್ತೆ ಬಂಧನ



ಮೈಸೂರು, ನ.5(ಎಸ್‌ಬಿಡಿ)– ಮನೆಯ ಸಂಪ್‌ನಲ್ಲಿ ಗೃಹಿಣಿಯ ಮೃತದೇಹ ಪತ್ತೆಯಾಗಿರುವ ಘಟನೆ ಮೈಸೂರಿನ ಆಲನಹಳ್ಳಿಯಲ್ಲಿ ಮಂಗಳವಾರ ನಡೆದಿದ್ದು, ಹತ್ಯೆ ಆರೋಪದಡಿ ಆಕೆಯ ಪತಿ ಹಾಗೂ ಅತ್ತೆಯನ್ನು ಪೊಲೀಸರು ಬಂಧಿಸಿದ್ದಾರೆ.

ಆಲನಹಳ್ಳಿ ಆಶ್ರಯ ಬಡಾವಣೆ ನಿವಾಸಿ ಮಣಿ(ಬಸಮ್ಮಣ್ಣಿ–34) ಮೃತಪಟ್ಟಿದ್ದು, ಮಂಗಳವಾರ ಮಧ್ಯಾಹ್ನ 3 ಗಂಟೆ ವೇಳೆಯಲ್ಲಿ ಸಂಪ್‌ನಲ್ಲಿ ಶವ ಪತ್ತೆಯಾಗಿದೆ. ಮಣಿ ಸಹೋದರಿ ಪಾರ್ವತಮ್ಮ ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿ ಕೊಂಡು ಮಣಿ ಅವರ ಪತಿ ಚೌಡಪ್ಪ ಹಾಗೂ ಅತ್ತೆ ಗೌರಮ್ಮ ಅವರನ್ನು ಬಂಧಿಸಲಾಗಿದೆ ಎಂದು ಆಲನಹಳ್ಳಿ ಠಾಣೆ ಪೊಲೀಸರು ತಿಳಿಸಿದ್ದಾರೆ.

ಮಣಿ ಹಾಗೂ ಚೌಡಪ್ಪ ದಂಪತಿಗೆ ಇಬ್ಬರು ಪುಟ್ಟ ಮಕ್ಕಳಿದ್ದಾರೆ. ಕ್ಷುಲ್ಲಕ ಕಾರಣಕ್ಕೆ ದಂಪತಿ ನಡುವೆ ಜಗಳವಾಗುತ್ತಿತ್ತು ಎನ್ನಲಾಗಿದೆ. ಹಾಗೆಯೇ ಮಂಗಳವಾರ ಜಗಳವಾಗಿದ್ದು ಪತಿ ಹಾಗೂ ಅತ್ತೆ ಸೇರಿ ಕೊಂಡು ಮಣಿಯನ್ನು ಹತ್ಯೆ ಮಾಡಿ, ಶವವನ್ನು ಸಂಪ್‌ನೊಳಗೆ ಹಾಕಿ ಆತ್ಮಹತ್ಯೆ ಮಾಡಿ ಕೊಂಡಿರುವುದಾಗಿ ತಾವೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ಎಂದು ಅವರ ಸಂಬಂಧಿಕರು ಆರೋಪಿಸಿದ್ದಾರೆ.

ಮಣಿ ಮೃತದೇಹವನ್ನು ಮೈಸೂರು ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆ ಶವಾಗಾರದಲ್ಲಿಡಲಾಗಿದ್ದು, ಬುಧವಾರ ಬೆಳಗ್ಗೆ ವೈದ್ಯಕೀಯ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರತ್ಯೇಕ ಅಪಘಾತ: ಯುವಕ, ಆಟೋ ಚಾಲಕ ಸಾವು

ಮೈಸೂರು, ನ.5(ಎಸ್‌ಬಿಡಿ)– ಮೈಸೂರಿನಲ್ಲಿ ಸಂಭವಿಸಿದ ಪ್ರತ್ಯೇಕ ಅಪಘಾತದಲ್ಲಿ ಯುವಕ ಹಾಗೂ ಆಟೋ ಚಾಲಕ ಮೃತಪಟ್ಟಿದ್ದಾರೆ.

ಮೈಸೂರು ನಗರದ ಟಿಪ್ಪು ಟೌನ್ ಬಳಿ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಮೈಸೂರು ತಾಲೂಕು ಕುಮಾರಬೀಡು ಗ್ರಾಮದ ಬಸವರಾಜು ಪುತ್ರ ಹೇಮಂತ್ ಕುಮಾರ್(19) ಹಾಗೂ ಇಲವಾಲ–ಕೆಆರ್‌ಎಸ್ ರಸ್ತೆಯಲ್ಲಿ ಟಿಪ್ಪರ್ ಡಿಕ್ಕಿ ಹೊಡೆದು ಇಲವಾಲ ಗ್ರಾಮದ ನಿವಾಸಿ ರವಿಕುಮಾರ್(50) ಸಾವನ್ನಪ್ಪಿದ್ದಾರೆ.

ಕುಮಾರಬೀಡು ಗ್ರಾಮದ ಹೇಮಂತ್ ಕುಮಾರ್ ಕ್ರಿಕೆಟ್ ಪಂದ್ಯಾವಳಿಗೆಂದು ಸ್ನೇಹಿತರೊಂದಿಗೆ ನ.3ರಂದು ತನ್ವೀರ್‌ಸೇಠ್ ನಗರಕ್ಕೆ ಹೋಗಿದ್ದ. ಸಂಜೆ ಊರಿಗೆ ವಾಪಸ್ಸಾಗಲು ಸ್ನೇಹಿತರೊಂದಿಗೆ ಟಿಪ್ಪು ಟೌನ್ ಬಳಿ ನಿಂತಿದ್ದಾಗ ವೇಗವಾಗಿ ಬಂದ ಹೀರೋ ಹೋಂಡಾ ಸ್ಪ್ಲೆಂಡರ್ ಪ್ಲಸ್(ಕೆಎ–09, ಇವೈ–8722) ಬೈಕ್ ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ತೀವ್ರವಾಗಿ ಗಾಯಗೊಂಡ ಹೇಮಂತ್ ಮೃತಪಟ್ಟಿದ್ದು, ಸ್ನೇಹಿತರಿಬ್ಬರು ಗಾಯಗೊಂಡಿದ್ದಾರೆ. ಈ ಸಂಬಂಧ ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಇಲವಾಲದ ರವಿಕುಮಾರ್(50) ತಮ್ಮ ಪ್ಯಾಸೆಂಜರ್ ಆಟೋ (ಕೆಎ–09, ಡಿ–3109)ದಲ್ಲಿ ನ.2ರಂದು ರಾತ್ರಿ 11.30ರ ಸಮಯದಲ್ಲಿ ಕೆಆರ್‌ಎಸ್ ರಸ್ತೆಯ ಬ್ರಹ್ಮಾನಂದಸಾಗರ ರಸ್ತೆಯ ಬಳಿ ಹೋಗುತ್ತಿದ್ದಾಗ ಎದುರಿನಿಂದ ವೇಗವಾಗಿ ಬಂದ ಟಿಪ್ಪರ್(ಕೆಎ–45, 8057) ಡಿಕ್ಕಿ ಹೊಡೆದಿದೆ ಡಿಕ್ಕಿಯ ರಭಸಕ್ಕೆ ಆಟೋ ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು ಚಾಲಕ ರವಿಕುಮಾರ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಈ ಸಂಬಂಧ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು